ಸಂಪುಟ: 04 ಸಂಚಿಕೆ: 113 ಪುಟಗಳು: 08 ಶನಿವಾರ 06 ಜುಲೈ 2024 www.udayavahini.in epaper.udayavahini.in Udayavahini news Udayavahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

**ಮುಂಜಾನೆ ಮಾತು**
ನೀನು ಯೋಚನೆ ಮಾಡದೆ ಹೇಳುವ ಒಂದೊಂದು ಮಾತು, ನಿನ್ನನ್ನು ಒಂದೊಂದು ನಿಮಿಷವೂ ಯೋಚನೆ ಮಾಡಿಸುತ್ತೆ.

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

## ಸಿಎಂ ಡೋಂಗಿ ಸಮಾಜವಾದಿ ತನಕ್ಕೆ ನಾಚಿಕೆ ಆಗಲಿ: ಮಾಧುಸ್ವಾಮಿ

• ಉದಯವಾಹಿನಿ, ಬೆಂಗಳೂರು

ಮುಡಾ ನಿವೇಶನ ಹಂಚಿಕೆ ತಪ್ಪಾದರೆ ತಮಗೆ 62 ಕೋಟಿ ರೂಪಾಯಿಯನ್ನು ಪರಿಹಾರವಾಗಿ ನೀಡಲಿ ಎಂದು ಸಿಎಂ ಸಿದ್ದರಾಮಯ್ಯ ಅವರ ಹೇಳಿಕೆಗೆ ಮಾಜಿ ಸಚಿವ ಜೆ.ಸಿ.ಮಾಧುಸ್ವಾಮಿ ಕಿಡಿಕಾರಿದ್ದಾರೆ. ಈ ಕುರಿತು ಟ್ವೀಟ್ ಮಾಡಿ, ರೀ ಸಿದ್ದರಾಮಯ್ಯನವರೇ ನಾಚಿಕೆ ಆಗಬೇಕು ನಿಮ್ಮ ಡೋಂಗಿ ಸಮಾಜವಾದಿ ತನಕ್ಕೆ ಎಂದು ಕುಟುಕಿದ್ದಾರೆ. ಈ ಹಿಂದೆ ಶಾಂತವೇರಿ ಗೋಪಾಲಗೌಡ ಅವರ ಕೊನೆಯ ದಿನಗಳನ್ನು ಆಸ್ಪತ್ರೆಯಲ್ಲಿ ಕಳೆಯುತ್ತಿರುವಾಗ ಅಂದಿನ ಮುಖ್ಯಮಂತ್ರಿಗಳೇ ಖುದ್ದು ಅವರಿಗೆ ಬೆಂಗಳೂರಲ್ಲಿ ಒಂದು ನಿವೇಶನ ಇರಲಿ ಎಂದು ಬರೆದಿದ್ದು, ರಾಜ್ಯದ ಕಟ್ಟಕಡೆಯ ವ್ಯಕ್ತಿಗೂ ಸೂರು ಸಿಗೋವರೆಗೂ ನನಗೆ ಬೇಡ ಎಂದಿದ್ದರೂ ಎಂದು ಸ್ಮರಿಸಿ ಸಿಎಂಗೆ ಟಾಂಗ್ ನೀಡಿದ್ದಾರೆ.

## ಯಾಕಪ್ಪಾ ಮಣ್ಣಿನ ಮೇಲೆ ಆಸೆ? ಸಿದ್ದು ವಿರುದ್ಧ ಹಳ್ಳಿಹಕ್ಕಿ ಕಿಡಿ

• ಉದಯವಾಹಿನಿ, ಮೈಸೂರು

ಯಾಕೆ ಮಣ್ಣಿಗೋಸ್ಕರ ಆಸೆ ಪಡ್ತಾ ಇದ್ದೀರಾ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ವಿಧಾನ ಪರಿಷತ್ ಸದಸ್ಯ ಹೆಚ್. ವಿಶ್ವನಾಥ್ ಟೀಕಿಸಿದರು. ಮುಡಾ ಹಗರಣವನ್ನು ಉಲ್ಲೇಖಿಸಿ ಮಾತನಾಡಿ, ಈ ಪ್ರಕರಣವನ್ನು ಸಿಬಿಐ ತನಿಖೆಗೆ ನೀಡಬೇಕು ಎಂದು ಆಗ್ರಹಿಸಿದ ವಿಶ್ವನಾಥ್, ಕೆಸರೆ ಜಾಗ ದಲಿತನ ಭೂಮಿ. ಜವರ ಜಮೀನಿನ ಮೂಲ ಮಾಲೀಕಕರಾಗಿದ್ದಾರೆ. ಸಿಎಂ ಸಿದ್ದರಾಮಯ್ಯ ತಮಗೆ ಬಂದಿರುವ ಜಾಗವನ್ನ ಸರ್ಕಾರಕ್ಕೆ ವಾಪಾಸ್ ಕೊಡಲಿ ಎಂದು ಅವರು ಒತ್ತಾಯಿಸಿದರು.

## ಸಿಎಂ, ಡಿಸಿಎಂ ಸ್ಥಾನಕ್ಕಿಂತ 2ಎ ಮೀಸಲಾತಿ ಮುಖ್ಯ: ಶ್ರೀಗಳು

• ಉದಯವಾಹಿನಿ, ಬೆಳಗಾವಿ

ರಾಜ್ಯದಲ್ಲಿ ಸಿಎಂ ಸ್ಥಾನ ಬದಲಾವಣೆ ವಿಚಾರದ ಬೆನ್ನಲ್ಲೇ ಪಂಚಮಸಾಲಿ ಪೀಠದ ಬಸವಜಯ ಮೃತ್ಯುಂಜಯಶ್ರೀಗಳು ಪ್ರತಿಕ್ರಿಯಿಸಿದ್ದು, ಎಂ, ಡಿಸಿಎಂ ಹಾಗು ಸಚಿವ ಸ್ಥಾನಕ್ಕಿಂತ ನಮಗೆ ಮೀಸಲಾತಿಯೇ ಮುಖ್ಯ. ನಮಗೆ 2ಎ ಮೀಸಲಾತಿ ಕೊಟ್ಟು ಸರ್ಕಾರ ಪುಣ್ಯ ಕಟ್ಟಿಕೊಳ್ಳಲಿ ಎಂದು ಆಗ್ರಹಿಸಿದ್ದಾರೆ. ಬೆಳಗಾವಿಯಲ್ಲಿ ಮಾತನಾಡಿದ ಅವರು, ಸ್ವಾಮೀಜಿಗಳಾಗಿ ನಾವು ರಿಕ್ವೆಸ್ಟ್ ಮಾಡೋದು ಬೇಡ. ಅವರೇನಾದರೂ ನಮ್ಮನ್ನು ಕೇಳಿದ್ರೆ ಲಿಂಗಾಯತ ಪಂಚಮಸಾಲಿ ಸಮಾಜಕ್ಕೆ 2ಎ ಮೀಸಲಾತಿ ನೀಡುವಂತೆ ಕೇಳಬಹುದು ಶ್ರೀಗಳು ಹೇಳಿದರು.

## ಇನ್ಮುಂದೆ 'ಕೌನ್ಸೆಲಿಂಗ್' ಮೂಲಕವೇ ಸಬ್ ರಿಜಿಸ್ಟ್ರಾರ್‌ಗಳ ವರ್ಗಾವಣೆ

• ಉದಯವಾಹಿನಿ, ಬೆಂಗಳೂರು

ಇನ್ಮುಂದೆ ಕೌನ್ಸೆಲಿಂಗ್ ಮೂಲಕವೇ ಸಬ್ ರಿಜಿಸ್ಟ್ರಾರ್‌ಗಳ ವರ್ಗಾವಣೆ ಮಾಡಲು ರಾಜ್ಯ ಸರ್ಕಾರ ನಿರ್ಧರಿಸಿದೆ. ನೋಂದಣಿ ಮತ್ತು ಮುದ್ರಾಂಕ ಇಲಾಖೆಯ ವರ್ಗಾವಣೆ ಪ್ರಕ್ರಿಯೆಯಲ್ಲಿ ಪಾರದರ್ಶಕತೆಯನ್ನು ತರುವ ಉದ್ದೇಶದಿಂದ ಸಬ್ರಿಜಿಸ್ಟ್ರಾರ್‌ಗಳ ವರ್ಗಾವಣೆಗೆ ಕೌನ್ಸೆಲಿಂಗ್ ಪದ್ಧತಿ ಅಳವಡಿಕೆ ಮಾಡಲು ನನ್ನ ಅಧ್ಯಕ್ಷತೆಯಲ್ಲಿ ನಡೆದ ಸಚಿವ ಸಂಪುಟ ಸಭೆಯಲ್ಲಿ ನಿರ್ಣಯ ಕೈಗೊಳ್ಳಲಾಗಿದೆ ಎಂದು ಸಿಎಂ ಸಿದ್ದರಾಮಯ್ಯ ತಿಳಿಸಿದ್ದಾರೆ. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಈಚೆಗೆ ಹಿರಿಯ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ಸೇರಿ ವಿವಿಧ ಹುದ್ದೆಗಳ ವರ್ಗಾವಣೆಗೆ ಕೌನ್ಸೆಲಿಂಗ್ ಪದ್ಧತಿ ಜಾರಿಗೊಳಿಸಲಾಗಿದೆ. ಈಗ ನೋಂದಣಿ, ಮುದ್ರಾಂಕ ಇಲಾಖೆ ಯಲ್ಲೂ ವರ್ಗಾವಣೆಗೆ ಕೌನ್ಸೆಲಿಂಗ್ ಪದ್ಧತಿ ಪರಿಚಯಿಸಲು ನಿರ್ಧರಿಸಿದೆ.

## ಸಬ್ಸಿಡಿ ಹಣಕ್ಕೂ ಕನ್ನ ಹಾಕಿದ ಸರ್ಕಾರ; ಬಿಜೆಪಿ ಆಕ್ರೋಶ

• ಉದಯವಾಹಿನಿ, ಬೆಂಗಳೂರು

ರಾಜ್ಯದ ರೈತರಿಗೆ ಸಿಎಂ ಸಿದ್ದರಾಮಯ್ಯ ಸರ್ಕಾರ ಕುಣಿಕೆ ಹಾಕಿದೆ ಎಂದು ರಾಜ್ಯ ಬಿಜೆಪಿ ಕಿಡಿಕಾರಿದೆ. ಕಿಸಾನ್ ಸಮ್ಮಾನ್ ನಿಧಿ ಕಡಿತ, ಅಕ್ರಮ-ಸಕ್ರಮ ಯೋಜನೆ ರದ್ದು, ಬಿತ್ತನೆ ಬೀಜ ರಸಗೊಬ್ಬರ ಬೆಲೆ ಏರಿಕೆ, ರೈತ ವಿದ್ಯಾನಿಧಿ ರದ್ದು, ಹನಿ ನೀರಾವರಿ ಸಬ್ಸಿಡಿ ಕಡಿತ, ಹಾಲು ಉತ್ಪಾದಕರಿಗೆ ಸಬ್ಸಿಡಿ ದೋಖಾ ಮಾಡಿರುವ ರಾಜ್ಯ ಸರ್ಕಾರ ಅನ್ನದಾತನಿಗೆ ಅನ್ಯಾಯ ಮಾಡಿದೆ.
ನಾಡಿನ ರೈತ ಸಮುದಾಯಕ್ಕೆ ಅತಿ ಹೆಚ್ಚು ಅನ್ಯಾಯವೆಸಗಿದ ಸರ್ಕಾರವೆಂದರೆ ಅದು ಸಿಎಂ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ. ಸಿದ್ದರಾಯ್ಯನವರ ರೈತ ವಿರೋಧಿ ನೀತಿಯಿಂದ ಈಗಾಗಲೇ 1000 ಕ್ಕೂ ಹೆಚ್ಚು ರೈತರು ಆತ್ಮಹತ್ಯೆಗೆ ಶರಣಾಗಿದ್ದಾರೆ. ಈಗ ಬಿತ್ತನೆ ಬೀಜ ರಸಗೊಬ್ಬರಗಳ ಬೆಲೆಯೇರಿಕೆ ಜೊತೆ ರೈತರ ಪಾಲಿನ ಸಬ್ಸಿಡಿ ಹಣಕ್ಕೂ ಕನ್ನ ಹಾಕಿದೆ ರೈತ ಹಂತಕ ಕಾಂಗ್ರೆಸ್ ಸರ್ಕಾರ ಎಂದು ಆಕ್ರೋಶ ವ್ಯಕ್ತಪಡಿಸಿದೆ.

## ವರ್ಗಾವಣೆಗೆ ಶಿಫಾರಸು ತರಬೇಡಿ : ಕಮಿಷನರ್ ದಯಾನಂದ ಎಚ್ಚರಿಕೆ

• ಉದಯವಾಹಿನಿ, ಬೆಂಗಳೂರು



ವರ್ಗಾವಣೆಗೆ ಯಾವುದೇ ಶಿಫಾರಸು, ಒತ್ತಡ ತರಬೇಡಿ ಎಂದು ನಗರ ಪೊಲೀಸ್ ಆಯುಕ್ತರಾದ ಬಿ.ದಯಾನಂದ ಅವರು ಸಿಬ್ಬಂದಿಗಳಿಗೆ ಎಚ್ಚರಿಕೆ ನೀಡಿದ್ದಾರೆ. ಆಡುಗೋಡಿಯ ಸಿಎಆರ್ ಮೈದಾನದಲ್ಲಿ ಹಮಿಕೊಂಡಿದ್ದ ಮಾಸಿಕ ಕವಾಯಿತಿನಲ್ಲಿ ವಂದನೆ ಸ್ವೀಕರಿಸಿ ಅವರು ಮಾತನಾಡಿದರು. ಬಡ್ತಿಯಾಗಲಿ, ವರ್ಗಾವಣೆಯಾಗಲಿ ಪಾರದರ್ಶಕವಾಗಿರಲಿದೆ, ಏಕರೂಪದಲ್ಲಿ ಕೌನ್ಸಿಲಿಂಗ್ ಮೂಲಕ ನಡೆಯಲಿದೆ. ಯಾವುದೇ ಆಮಿಷಗಳಿಗೆ ಒಳಗಾಗಬೇಡಿ, ವರ್ಗಾವಣೆಯ ಪಟ್ಟಿ ರೆಡಿಯಾಗುತ್ತಿದೆ. ನಮ ಇಲಾಖೆಯಲ್ಲದೆ ಬೇರೆ ಬೇರೆ ಇಲಾಖೆಗಳಲ್ಲೂ ವರ್ಗಾವಣೆ ಪ್ರಕ್ರಿಯೆ ನಡೆಯುತ್ತಿದೆ ಎಂದು ಅವರು ಹೇಳಿದರು. ಈಗಾಗಲೇ ಎಎಸ್‌ಐ ಮಟ್ಟದ ಅಧಿಕಾರಿಗಳಿಗೆ ಪಿಎಸ್‌ಐ ಬಡ್ತಿ ನೀಡಲಾಗಿದೆ. ಇದೀಗ ಹೆಡ್ ಕಾನ್ಸ್ಟೇಬಲ್ಲಿಂದ ಎಎಸ್‌ಐ ಹಾಗೂ ಕಾನ್ಸ್ಟೇಬಲ್ಲಿಂದ ಹೆಡ್ ಕಾನ್ಸ್ಟೇಬಲ್ಗೆ ಬಡ್ತಿ ನೀಡುವ ಪ್ರಕ್ರಿಯೆ ನಡೆಯುತ್ತಿದೆ ಎಂದರು. ನಗರದ ಪೊಲೀಸರ ಕಾರ್ಯತತ್ಪರತೆ ಹಾಗೂ ವೃತ್ತಿ ಕೌಶಲ್ಯವನ್ನು ಪ್ರಶಂಸಿಸಿದ ಆಯುಕ್ತರು, ಇತ್ತೀಚಿನ ಕೆಲವು ಪ್ರಕರಣಗಳ ತನಿಖೆಯಿಂದಾಗಿ ಪೊಲೀಸರ ವೃತ್ತಿ ಕೌಶಲ್ಯವನ್ನು ಎಲ್ಲಾ ಕಡೆ ಶ್ಲಾಘಿಸಲಾಗುತ್ತಿದೆ. ಇದು ಅಭಿನಂದನಾರ್ಹ ಅಂಶ. ನಗರದ ಎಲ್ಲಾ ಅಧಿಕಾರಿಗಳು ಹಾಗೂ ಸಿಬ್ಬಂದಿಗಳಿಗೆ ಮನ್ನಣೆ ದೊರೆಯುತ್ತಿದೆ. ಇದೊಂದು ಟೀಂ ವರ್ಕ್ ಕೆಲಸಕ್ಕೆ ಸಾಕ್ಷಿ ಎಂದು ಭಾವಿಸಿದ್ದೇನೆ ಎಂದರು. ಇದೇ ರೀತಿ ವೃತ್ತಿಪರತೆ, ಕರ್ತವ್ಯ ತತ್ಪರತೆ, ಸಮಯ ಪ್ರಜ್ಞೆ, ಎಲ್ಲಾ ವಿಷಯಗಳನ್ನು ನಾವು ಪಾಲನೆ ಮಾಡಬೇಕಾಗಿದೆ ಎಂದು ಅವರು ಒತ್ತಿ ಹೇಳಿದರು.

**ಯಾವುದೇ ಆಮಿಷಗಳಿಗೆ ಒಳಗಾಗಬೇಡಿ**



# ಮುಡಾ ಹಗರಣ ಎಚ್‌ಡಿಕೆ ತಿರುಗುಬಾಣ

- ಮಾಜಿ, ಹಾಲಿ ಸಿಎಂ ಕದನ ಜೋರು, ಸಿಎಂ ಕುರ್ಚಿಗೆ ಕಣ್ಣಿಟ್ಟವರಿಂದಲೇ ಮುಡಾ ಹಗರಣ ಬಯಲು
- ಸಿಎಂ ಸ್ಥಾನದ ಆಕಾಂಕ್ಷಿಗಳಿಂದ ಮೂಡಾ ಹಗರಣ ಬಯಲು : ಹೆಚ್‌ಡಿಕೆ ಸ್ಫೋಟಕ ಹೇಳಿಕೆ
- ಮುಡಾದಲ್ಲಿ ಯಾವ ಹಗರಣವೂ ನಡೆದಿಲ್ಲ : ಬೈರತಿ ಸುರೇಶ್

• ಉದಯವಾಹಿನಿ, ಬೆಂಗಳೂರು

ಮುಖ್ಯಮಂತ್ರಿ ಸ್ಥಾನದ ಮೇಲೆ ಕಣ್ಣಿಟ್ಟವರಿಂದಲೇ ಮುಡಾ ಹಗರಣ ಬಯಲಾಗಿದೆ ಎಂದು ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಸ್ಫೋಟಕ ಹೇಳಿಕೆ ನೀಡಿದ್ದಾರೆ. ಇಷ್ಟು ದಿನ ಹೊರಗೆ ಬಾರದ ಹಗರಣ ಈಗ ಬಂದಿದ್ದು ಯಾಕೆ..? ಇದರ ಹಿಂದೆ ಸಿಎಂ ಖುರ್ಚಿ ಮೇಲೆ ಟವಲ್ ಹಾಕಿರುವವರ ಪಾತ್ರ ಇದೆ. ಬಿಜೆಪಿಯವರು ಹೋರಾಟ ಮಾಡುತ್ತಿದ್ದಾರೆ. ಆದ್ರೆ ಹಗರಣ ಆಚೆ ಬರಲು ಕಾಂಗ್ರೆಸ್‌ನವರೇ ಒಳಗೊಳಗೆ ಕುಮ್ಮಕ್ಕು ಕೊಡುತ್ತಿದ್ದಾರೆ. ಸಿಡಿ ಫ್ಯಾಕ್ಟರಿ ಕ್ಲೋಸ್ ಆಗಿದೆ. ಈಗ ಮುಡಾ ವಿಚಾರ ಶುರುವಾಗಿದೆ. ಈ ಬಗ್ಗೆ ನನಗೆ ಮಾಹಿತಿ ಇದೆ. ಸಿಎಂ ಪತ್ನಿಗೆ ಆ ಜಾಗ ಹೇಗೆ ಬಂತು ಅಂತಲೂ ನನಗೆ ಗೊತ್ತಿದೆ. 62 ಕೋಟಿ ರೂ. ಪರಿಹಾರ ಕೇಳುವ ಸಿಎಂ ಭೂಮಿ ಕಳೆದುಕೊಂಡು ಬೀದಿಯಲ್ಲಿ ನಿಂತಿರುವ ರೈತರಿಗೂ ಪರಿಹಾರ ಕೊಡಿಸಲಿ ಎಂದು ಸವಾಲು ಹಾಕಿದ್ದಾರೆ.

ಸಿಎಂ ಪತ್ನಿಗೆ 14 ಸೈಟ್ ಹಂಚಿಕೆ ವಿಚಾರವಾಗಿ ಮಾತನಾಡಿ, ಕಾನೂನು ಸಲಹೆಗಾರ ಈಗ ಎಂಎಲ್‌ಎ ಆಗಿದ್ದಾರೆ. ಅವರು ಸಿಎಂ ಪರ ಸುಧೀರ್ಘವಾಗಿ ಮಾತನಾಡಿದ್ದಾರೆ. 62 ಕೋಟಿ ರೂ ಪರಿಹಾರ ನೀಡಬೇಕು ಎಂದಿದ್ದಾರೆ. ಆದರೆ ಹಲವು ಅಭಿವೃದ್ಧಿ ಹೆಸರಿನಲ್ಲಿ ಭೂಸ್ವಾಧೀನವಾಗಿದೆ. ಆ ರೈತರು ಇನ್ನೂ ಕೂಡ ಬೀದಿಯಲ್ಲಿ ಅಲೆದಾಡುತ್ತಿದ್ದಾರೆ. ಅವರಿಗೆ ರೇಟ್ ಫಿಕ್ಸ್ ಮಾಡುವಾಗ ಹೇಗೆ ಮಾಡುತ್ತೀರಾ...? ರೈತರನ್ನ ಬೀದಿಗೆ ನಿಲ್ಲಿಸಿದ್ದೀರಿ ಇದು ಸರೀನಾ..? ನಿಮ್ಮ ಪತ್ನಿಯ ಹಣ ಕೇಳುತ್ತಾ ಇದ್ದೀರಲ್ಲಾ ಆ ದೇವರು ಮೆಚ್ಚುತ್ತಾನಾ..? ಎಂದು ಮೈಸೂರಿನಲ್ಲಿ ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಹೇಳಿಕೆ ನೀಡಿದ್ದಾರೆ. ಕೇಂದ್ರದ ಉಕ್ಕು ಮತ್ತು ಬೃಹತ್ ಕೈಗಾರಿಕೆ ಸಚಿವರಾದ ಬಳಿಕ ಮೈಸೂರಿಗೆ ಮೊದಲ ಬಾರಿಗೆ ಬಂದಿರುವ ಕುಮಾರಸ್ವಾಮಿ ಚಾಮುಂಡೇಶ್ವರಿ ದೇವಿ ದರ್ಶನ ಮಾಡಿ, ತಾಯಿಗೆ ವಿಶೇಷ ಪೂಜೆ ಸಲ್ಲಿಸಿದರು. ಶಾಸಕ ಜಿಡಿ.ಹರೀಶ್‌ಗೌಡ, ಮಾಜಿ ಶಾಸಕರಾದ ಸಾರಾ.ಮಹೇಶ್, ಸಿ.ಎಸ್.ಪುಟ್ಟರಾಜು, ಆರ್.ಅಶ್ವಿನ್ ಕುಮಾರ್, ಎಂಎಲ್‌ಸಿ ಮಂಜೇಗೌಡ ಸೇರಿ ಸ್ಥಳೀಯ ಮುಖಂಡರು ಸಾಥ್ ನೀಡಿದರು.


ಮಂಡ್ಯದಲ್ಲಿ ಜನತಾ ದರ್ಶನ ವಿಚಾರವಾಗಿ ಮಾತನಾಡಿ ,ಜನತಾ ದರ್ಶನ ವಿಚಾರದಲ್ಲಿ ರಾಜ್ಯ ಸರ್ಕಾರ ದ್ವೇಷದ ರಾಜಕಾರಣ ಮಾಡುತ್ತಿದೆ ಎಂದು ಆರೋಪಿಸಿದರು. ಜನತಾ ದರ್ಶನದ ಬಗ್ಗೆಯೇ ಸಚಿವ ಸಂಪುಟದ ಸಭೆ ಕರೆದು ಚರ್ಚೆ ಮಾಡಿದ್ದಾರೆ. ನೀವು ಅಧಿಕಾರಿಗಳನ್ನು ದೂರು ಇಡಬಹುದು. ಆದರೆ ಜನರನ್ನು ನನ್ನಿಂದ ದೂರ ಮಾಡಲು ಸಾಧ್ಯವಿಲ್ಲ. ಈ ಹಿಂದೆ ಬೆಂಗಳೂರು ಗ್ರಾಮಾಂತರ ಸಂಸದರು ಈ ರೀತಿ ಸಭೆ ಮಾಡಿದ್ದಾಗ ಏನು ಮಾಡುತ್ತಿದ್ದೀರಿ? ಚುನಾವಣೆಗೆ ಬಂದು ಜನಸ್ಪಂದನ ಕಾರ್ಯಕ್ರಮ ಮಾಡಿದಾಗ ಎಲ್ಲಿ ಹೋಗಿದ್ರಿ..? ಈಗ ಜನತಾ ದರ್ಶನ ತಪ್ಪಿಸಲು ಸರ್ಕಾರ ಮುಂದಾಗಿದೆ. ಯಾವುದೇ ಕಾರಣಕ್ಕೂ ಜನತಾ ದರ್ಶನ ನಿಲ್ಲಿಸಲು ಸಾಧ್ಯವಿಲ್ಲ ಎಂದರು.

1. ಸಿಎಂ ಖುರ್ಚಿ ಮೇಲೆ ಕಣ್ಣಿಟ್ಟವರಿಂದ ಮುಡಾ ಹಗರಣ ಬಯಲಾಗಿದೆ
2. ನಿಮ್ಮ ಪತ್ನಿಯ ಹಣ ಕೇಳುತ್ತಾ ಇದ್ದೀರಲ್ಲಾ ಆ ದೇವರು ಮೆಚ್ಚುತ್ತಾನಾ.. ?
3. ಹಗರಣ ಆಚೆ ಬರಲು ಕಾಂಗ್ರೆಸ್‌ನವರೇ ಒಳಗೆ ಕುಮ್ಮಕ್ಕು ಕೊಡುತ್ತಿದ್ದಾರೆ ಎಂದು ಹೇಳಿದ್ದಾರೆ.

### ವಿಪಕ್ಷ ನಾಯಕ ಆರ್. ಅಶೋಕ್ ಆರೋಪ



ಸಿಎಂ ಸಿದ್ದರಾಮಯ್ಯ ಅವರ ಪತ್ನಿಗೆ ಮಂಜೂರಾಗಿರುವ 35 ಕೋಟಿ ರೂ. ಮೌಲ್ಯದ 14 ನಿವೇಶನಗಳಿಗೆ ಸಂಬಂಧಪಟ್ಟ ಕಡತಗಳನ್ನು ತಿರುಚುವ ಉದ್ದೇಶದಿಂದ ನಗರಾಭಿವೃದ್ಧಿ ಸಚಿವರು ಕಡತಗಳನ್ನು ಬೆಂಗಳೂರಿಗೆ ತಂದಿದ್ದಾರೆ ಎಂದು ವಿಧಾನಸಭೆಯ ಪ್ರತಿಪಕ್ಷದ ನಾಯಕ ಅಶೋಕ್ ಗಂಭೀರ ಆರೋಪ ಮಾಡಿದ್ದಾರೆ. ಈ ಕುರಿತು ಟ್ವೀಟ್ ಮಾಡಿರುವ ಅವರು, ಪ್ರಕರಣವನ್ನು ಮುಚ್ಚಿ ಹಾಕುವ ಉದ್ದೇಶದಿಂದಲೇ ನಗರಾಭಿವೃದ್ಧಿ ಸಚಿವ ಭೈರತಿ ಕಡತಗಳನ್ನು ಬೆಂಗಳೂರಿಗೆ ತಂದಿರುವ ಗುಮಾನಿ ಇದೆ ಎಂದು ಶಂಕೆ ವ್ಯಕ್ತಪಡಿಸಿದ್ದಾರೆ. ಸರ್ಕಾರ ಈ ಕೂಡಲೇ ಸಂಬಂಧಪಟ್ಟ ಕಡತಗಳನ್ನು ಬಹಿರಂಗ ಮಾಡಿ ಸಾರ್ವಜನಿಕರ ಮುಂದಿಡಬೇಕು ಎಂದು ಸಿದ್ದರಾಮಯ್ಯ ಅವರನ್ನು ಅಶೋಕ್ ಒತ್ತಾಯಿಸಿದ್ದಾರೆ. ಕರ್ನಾಟಕದ ಇತಿಹಾಸದಲ್ಲೇ ಅತ್ಯಂತ ದೊಡ್ಡ ಹಗರಣವಾದ 4,000 ಕೋಟಿ ಮೌಲ್ಯದ ಮುಡಾ ಹಗರಣದಲ್ಲಿ ದಿನಕ್ಕೊಂದು ಕರ್ಮಕಾಂಡ ಬಯಲಾಗುತ್ತಿದೆ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ.



### ಯಾವ ಹಗರಣವೂ ಇಲ್ಲ

ಮೈಸೂರು ನಗರ ಅಭಿವೃದ್ಧಿ ಪ್ರಾಧಿಕಾರ-ಮುಡಾದಲ್ಲಿ ಯಾವ ಹಗರಣ ಇದೆ. ಅದರಲ್ಲಿ ಯಾವ ಹಗರಣವೂ ಇಲ್ಲ. ಮುಖ್ಯಮಂತ್ರಿ ಈಗಾಗಲೇ ಸ್ಪಷ್ಟನೆ ನೀಡಿದ್ದಾರೆ. ನಿವೇಶನವನ್ನೂ ರೈತರಿಗೆ, ಖಾಸಗಿಯವರಿಗೆ, ಏಜೆಂಟರಿಗೆ ನಿವೇಶನ ನೀಡಲಾಗಿದೆ ಎಂಬುದರ ಪರಿಶೀಲನೆ ನಡೆಯುತ್ತಿದೆ. ಹಗರಣ ಎಂದು ಸಾಬೀತು ಆದ ಮೇಲೆ ಮುಂದಿನ ಚರ್ಚೆ ಮಾಡಬಹುದು ಎಂದು ನಗರಾಭಿವೃದ್ಧಿ ಸಚಿವ ಬೈರತಿ ಸುರೇಶ್ ನುಡಿದರು.

### ರೈತರಿಗೆ ಪರಿಹಾರ ಕೊಡಲಿ

ಸೈಟ್ ವರ್ಗಾವಣೆ ಬಗ್ಗೆ ನನಗೆ ಮಾಹಿತಿ ಇದೆ. ಸಿಎಂ ಪತ್ನಿಗೆ ಆ ಜಾಗ ಹೇಗೆ ಬಂತು ಅಂತಲೂ ನನಗೆ ಗೊತ್ತಿದೆ. 62 ಕೋಟಿ ರೂ. ಪರಿಹಾರ ಕೇಳುವ ಸಿಎಂ ಭೂಮಿ ಕಳೆದುಕೊಂಡು ಬೀದಿಯಲ್ಲಿ ನಿಂತಿರುವ ರೈತರಿಗೂ ಪರಿಹಾರ ಕೊಡಿಸಲಿ ಎಂದು ಎಚ್‌ಡಿಕೆ ತಿಳಿಸಿದರು.

## ರಾಜ್ಯ ಉಸ್ತುವಾರಿಯಾಗಿ ಡಾ.ರಾಧಾಮೋಹನ್ ದಾಸ್ ನೇಮಕ

• ಉದಯವಾಹಿನಿ, ಬೆಂಗಳೂರು



ಬಿಜೆಪಿ ರಾಜ್ಯ ಉಸ್ತುವಾರಿಯಾಗಿ ಸಂಸದ ಡಾ.ರಾಧಾಮೋಹನ್‌ದಾಸ್ ಅಗರ್ವಾಲ್ ಮತ್ತು ಸಹ ಉಸ್ತುವಾರಿಯಾಗಿ ಸುಧಾಕರ್ ರೆಡ್ಡಿ ಅವರನ್ನು ರಾಷ್ಟ್ರೀಯ ಅಧ್ಯಕ್ಷರಾದ ಜೆ.ಪಿ.ನಡ್ಡಾ ಅವರು ನೇಮಿಸಿದ್ದನ್ನು ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ. ವಿಜಯೇಂದ್ರ ಅವರು ಸ್ವಾಗತಿಸಿದ್ದು, ಇಬ್ಬರನ್ನೂ ಅಭಿನಂದಿಸಿದ್ದಾರೆ.

ಡಾ.ರಾಧಾಮೋಹನ್‌ದಾಸ್ ಅವರು ಕರ್ನಾಟಕದ ಲೋಕಸಭಾ ಚುನಾವಣಾ ಉಸ್ತುವಾರಿಯಾಗಿ ಕೆಲಸ ಮಾಡಿದ್ದು, ಕಾರ್ಯಕರ್ತರಿಗೆ ಮತ್ತು ಮುಖಂಡರಿಗೆ ಸಮರ್ಥವಾಗಿ ಮಾರ್ಗದರ್ಶನ ನೀಡಿದ್ದಾರೆ. ಕಾಂಗ್ರೆಸ್ ಪಕ್ಷವು ರಾಜ್ಯದಲ್ಲಿ ಅಧಿಕಾರದಲ್ಲಿ ಇದ್ದರೂ, ಅವರ ಸಲಹೆ- ಮಾರ್ಗದರ್ಶನದೊಂದಿಗೆ ಪಕ್ಷವು 17 ಲೋಕಸಭಾ ಸ್ಥಾನಗಳಲ್ಲಿ ಗೆಲುವು ಸಾಧಿಸಿದೆ ಎಂದು ವಿವರಿಸಿದ್ದಾರೆ.

ಅಗರ್ವಾಲ್ ಮತ್ತು ಸುಧಾಕರ್ ರೆಡ್ಡಿ ಅವರ ಸಲಹೆ ಮತ್ತು ಮಾರ್ಗದರ್ಶನವು ಕರ್ನಾಟಕದಲ್ಲಿ ಪಕ್ಷದ ಸಂಘಟನೆಯಲ್ಲಿ ಧನಾತ್ಮಕ ಬದಲಾವಣೆಗಳಿಗೆ ಕಾರಣವಾಗಲಿದೆ ಮತ್ತು ಮುಂದಿನ ಉಪ ಚುನಾವಣೆಗಳು, ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಗೆಲುವನ್ನು ತಂದು ಕೊಡಲಿದೆ ಎಂದು ವಿಜಯೇಂದ್ರ ಅವರು ವಿಶ್ವಾಸ ವ್ಯಕ್ತಪಡಿಸಿದ್ದಾರೆ. ಈ ಸಂಬಂಧ ಮಾನ್ಯ ಜೆ.ಪಿ.ನಡ್ಡಾ ಅವರಿಗೆ ಧನ್ಯವಾದಗಳನ್ನು ಸಮರ್ಪಿಸುವುದಾಗಿ ತಿಳಿಸಿದ್ದಾರೆ.

## ನನ್ನ ಸೋಲಿಗೆ ನಾನೇ ಕಾರಣ: ಬಿ ಶ್ರೀರಾಮುಲು

• ಉದಯವಾಹಿನಿ, ಬೆಂಗಳೂರು



ಈ ಬಾರಿ ಲೋಕಸಭೆ ಚುನಾವಣೆಯಲ್ಲಿ ರಾಜ್ಯದಲ್ಲಿ ಬಿಜೆಪಿ 17 ಸ್ಥಾನಗಳನ್ನು ಪಡೆದುಕೊಂಡಿದ್ದು, ಕಾಂಗ್ರೆಸ್ 9 ಸ್ಥಾನ ಪಡೆದುಕೊಂಡು ಜೆಡಿಎಸ್ ಮೂರರಲ್ಲಿ ಎರಡು ಸ್ಥಾನ ಪಡೆದುಕೊಂಡಿತು. ಈಗ ಬಳ್ಳಾರಿ ಲೋಕಸಭಾ ಕ್ಷೇತ್ರದ ಬಿಜೆಪಿಯ ಪರಾಜಿತ ಅಭ್ಯರ್ಥಿ ಬಿ ಶ್ರೀರಾಮುಲು ನನ್ನ ಸೋಲಿಗೆ ಬೇರೆ ಯಾರು ಕಾರಣ ಅಲ್ಲ ನಾನೇ ಕಾರಣ ಎಂದು ತಿಳಿಸಿದರು.

ಲೋಕಸಭೆ ಚುನಾವಣೆಯಲ್ಲಿ ನನ್ನ ಸೋಲಿಗೆ ಬೇರೆ ಯಾರು ಕಾರಣ ಅಲ್ಲ. ಬಳ್ಳಾರಿ ಲೋಕಸಭಾ ಕ್ಷೇತ್ರದಲ್ಲಿ ನನ್ನ ಸೋಲಿಗೆ ನಾನೇ ಕಾರಣನಾಗಿದ್ದೇನೆ ಎಂದು ಬೆಂಗಳೂರಿನಲ್ಲಿ ಪರಾಜಿತ ಬಿಜೆಪಿ ಅಭ್ಯರ್ಥಿ ಬಿ ಶ್ರೀರಾಮುಲು ಹೇಳಿಕೆ ನೀಡಿದರು. ನಿಮ್ಮ ಸೋಲಿಗೆ ಕಾರಣ ಏನು ಅಂತ ರಾಧಾ ಮೋಹನ್ದಾಸ್ ಕೇಳಿದಾಗ ಸೋಲಿಗೆ ವೈಯಕ್ತಿಕವಾಗಿ ನಾನೇ ಕಾರಣ ಅಂತ ಹೇಳಿದ್ದೇನೆ ಎಂದರು.

ಬಳ್ಳಾರಿ ಸೋಲಿನ ಹೊಣೆಯನ್ನು ನಾನೇ ಹೊತ್ತುಕೊಳ್ಳುತ್ತೇನೆ ಅಂದಿದ್ದೇನೆ. ಇನ್ನೂ ಸಂಡೂರು ವಿಧಾನಸಭೆ ಉಪಚುನಾವಣೆ ಟಿಕೆಟ್ ಕೇಳಿಲ್ಲ.

ಆದರೆ ಪಕ್ಷ ಯಾರಿಗೆ ಟಿಕೆಟ್ ಕೊಡುತ್ತದೆಯೋ ಅವರ ಪರವಾಗಿ ಕೆಲಸ ಮಾಡಿ ಗೆಲ್ಲಿಸುತ್ತೇನೆ ಎಂದು ಬೆಂಗಳೂರಿನಲ್ಲಿ ಪರಾಜಿತ ಬಿಜೆಪಿ ಅಭ್ಯರ್ಥಿ ಬಿ ಶ್ರೀರಾಮುಲು ತಿಳಿಸಿದರು.

# ಕೇಂದ್ರ ಪುರಸ್ಕೃತ ಯೋಜನೆಗಳ ಹಣ ಬಿಡುಗಡೆಗೆ ಮೂಗುದಾರ ಹಾಕಿದ 'ಗ್ಯಾರಂಟಿ' ಸರ್ಕಾರ

**ಎಚ್ಚೆತ್ತುಕೊಂಡಿರುವ ರಾಜ್ಯ ಸರ್ಕಾರ, ಬೊಕ್ಕಸದಿಂದ ಹಣ ಬಿಡುಗಡೆಗೆ ಕಟ್ಟುನಿಟ್ಟಿನ ಮಾರ್ಗ ಸೂಚಿಗಳನ್ನು ಜಾರಿ**


• ಉದಯವಾಹಿನಿ, ಬೆಂಗಳೂರು

ವಾಲೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅವ್ಯವಹಾರದ ಬಳಿಕ ಎಚ್ಚೆತ್ತುಕೊಂಡಿರುವ ರಾಜ್ಯ ಸರ್ಕಾರ, ಬೊಕ್ಕಸದಿಂದ ಹಣ ಬಿಡುಗಡೆಗೆ ಕಟ್ಟುನಿಟ್ಟಿನ ಮಾರ್ಗ ಸೂಚಿಗಳನ್ನು ಜಾರಿಗೊಳಿಸಿದೆ.ಜೊತೆಯಲ್ಲೇ ಕೇಂದ್ರ ಪುರಸ್ಕೃತ ಯೋಜನೆಗಳಿಗೂ ಹಣ ಬಿಡುಗಡೆಗೆ ಮುನ್ನ ರಾಜ್ಯ ಆರ್ಥಿಕ ಇಲಾಖೆಯ ಪೂರ್ವಾನುಮತಿ ಕಡ್ಡಾಯ ಎಂಬ ಸುತ್ತೋಲೆ ರವಾನಿಸಲಾಗಿದೆ. ಆರ್ಥಿಕ ಇಲಾಖೆಯ ಕಾರ್ಯದರ್ಶಿ ಡಾ.ಪಿ.ಸಿ.ಜಾಫರ್ ಅವರು 16 ಪುಟಗಳ ಸುತ್ತೋಲೆಯನ್ನು ಎಲ್ಲಾ ಇಲಾಖೆಗಳ ಮುಖ್ಯಸ್ಥರಿಗೆ, ನಿಗಮ ಮಂಡಳಿಗಳು, ಅರೆ ಸರ್ಕಾರಿ ಸಂಸ್ಥೆಗಳು, ವಿಶ್ವವಿದ್ಯಾನಿಲಯಗಳ ಪ್ರಮುಖರಿಗೆ ಕಳುಹಿಸಿದ್ದಾರೆ.

ಕೇಂದ್ರ ಪುರಸ್ಕೃತ ಯೋಜನೆಗಳಿಗೆ ಈ ಮೊದಲು ಪೂರ್ವ ನಿರ್ಧಾರಿತ ಅನುಮೋದನೆ ಆಧರಿತವಾಗಿ ಹಣ ಬಿಡುಗಡೆಯಾಗುತ್ತಿತ್ತು. ಅದಕ್ಕೆ ಕಡಿವಾಣ ಹಾಕಿರುವುದು ಚರ್ಚೆಗೆ ಗ್ರಾಸವಾಗಿದೆ. ಕೇಂದ್ರ ಸರ್ಕಾರದ ಕಿಸಾನ್ ಸಮಾನ್, ಫಸಲ್ ಭೀಮಾ ಸೇರಿದಂತೆ ಹಲವು ಯೋಜನೆಗಳಿಗೆ ಹಣ ಬಿಡುಗಡೆಗೂ ಮುನ್ನ ಆರ್ಥಿಕ ಇಲಾಖೆ ಅನುಮತಿ ಅಗತ್ಯ ಎಂದು ಆದೇಶಿಸಲಾಗಿದೆ.

**ಮಿತಿ ಮೀರಿದ ಕಾಂಗ್ರೇಸ್ ಒಳಜಗಳ**

ರಾಜ್ಯ ಸರ್ಕಾರದ ವಿವಿಧ ನಿಗಮಗಳು, ಕೆಆರ್ ಐಡಿಎಲ್‌ನಂತಹ ಸಂಸ್ಥೆಗಳು, ಗಂಗಕಲ್ಯಾಣ, ಸ್ವಾವಲಂಬನೆ ಯೋಜನೆಯಂತಹ ಕಾರ್ಯಕ್ರಮಗಳಿಗೆ ಹಣ ಬಿಡುಗಡೆ ಮಾಡುವ ಮುನ್ನ ಆರ್ಥಿಕ ಇಲಾಖೆಯ ಪೂರ್ವಾನುಮತಿ ಪಡೆಯುವಂತೆ ತಾಕೀತು ಮಾಡಲಾಗಿದೆ.



ಕೆಲವು ಯೋಜನೆಗಳಿಗೆ ಅದರಲ್ಲೂ 10 ಕೋಟಿಗಿಂತ ಕಡಿಮೆ ವೆಚ್ಚದ ಕಾರ್ಯಕ್ರಮಗಳಿಗೆ ಕರ್ನಾಟಕ ಪಾರದರ್ಶಕ ಅಧಿನಿಯಮ ಪಾಲನೆ ಮಾಡಿ ಹಣ ಬಿಡುಗಡೆಗೆ ಅವಕಾಶ ಕಲ್ಪಿಸಲಾಗಿದೆ.

ಷೇರು ಬಂಡವಾಳ ಹೂಡಿಕೆ ಮತ್ತು ಸಾಲ ಪಾವತಿ ವಿಚಾರಗಳಿಗೂ ನಿಯಂತ್ರಣ ಹೇರಲಾಗಿದೆ. ಸರ್ಕಾರದ ಬಹುನಿರೀಕ್ಷಿತ ಶಕ್ತಿ, ಯುವನಿಧಿ, ಅನ್ನಭಾಗ್ಯ, ಗೃಹ ಜ್ಯೋತಿ ಮತ್ತು ಗೃಹಲಕ್ಷ್ಮಿ ಯೋಜನೆಗಳಿಗೆ 52 ಸಾವಿರ ಕೋಟಿ ರೂ.ಗಳನ್ನು ಒದಗಿಸಲಾಗಿದೆ. ಇವುಗಳಡಿ ಹಣ ಬಿಡುಗಡೆ ಮಾಡುವಾಗ ಆರ್ಥಿಕ ಇಲಾಖೆಯಿಂದ ಕಡತದಲ್ಲಿ ಪೂರ್ವಾನುಮೋದನೆ ಪಡೆಯಬೇಕೆಂದು ಸೂಚಿಸಲಾಗಿದೆ. ಎಸ್‌ಸಿಎಸ್‌ಪಿ, ಟಿಎಸ್‌ಪಿ ಯೋಜನೆಯಡಿ ಹಣ ಬಿಡುಗಡೆಯಾಗುವ ಹಿಂದಿನ ಪಾವತಿಯಲ್ಲಿ ಶೇ.75ರಷ್ಟು ಬಳಕೆಯಾಗಿರುವುದನ್ನು ಖಾತ್ರಿಪಡಿಸಿಕೊಳ್ಳಬೇಕು, ಈ ವರ್ಷದ ಜುಲೈನಿಂದ ಸೆಪ್ಟೆಂಬರ್‌ವರೆಗೆ ಆಯವ್ಯಯ ಅಂದಾಜಿನ 12/1 ಭಾಗವನ್ನು ಪ್ರತಿ ತಿಂಗಳು ಬಿಡುಗಡೆ ಮಾಡಬೇಕು. ಬಂಡವಾಳ ವೆಚ್ಚದ ಹಣ ಬಿಡುಗಡೆ ಸಂದರ್ಭದಲ್ಲಿ ಸರ್ಕಾರ ಅನುಮೋದಿಸಿದ ಯೋಜನೆಗಳಿಗೆ ಮಾತ್ರ ಅವಕಾಶ ನೀಡಬೇಕು.

### ಆರ್ಥಿಕವಾಗಿ ಸಾಕಷ್ಟು ಹಿನ್ನಡೆ

ಆರ್ಥಿಕ ಇಲಾಖೆಯ ಅಂಕಿತ ಪತ್ರ ಇಲ್ಲದೆ ಆಯಾ ಇಲಾಖೆಗಳ ಬಿಲ್‌ಗಳನ್ನು ನೇರವಾಗಿ ಪಾವತಿಸತಕ್ಕದ್ದಲ್ಲ ಎಂದು ಸೂಚನೆ ನೀಡಲಾಗಿದೆ. ರಾಜ್ಯದಲ್ಲಿ ಪಂಚಖಾತ್ರಿ ಯೋಜನೆಗಳ ಜಾರಿಯ ಬಳಿಕ ಆರ್ಥಿಕವಾಗಿ ಸಾಕಷ್ಟು ಹಿನ್ನಡೆಯಾಗಿದೆ. ಸಂಪನೂಲ ಕೊರತೆ ಇದೆ ಎಂಬ ಆರೋಪಗಳನ್ನು ವಿರೋಧ ಪಕ್ಷಗಳು ಪದೇ ಪದೇ ಮಾಡುತ್ತಲೇ ಇವೆ. ಇದಕ್ಕೆ ಪೂರಕ ಎಂಬಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಅಧೀನದಲ್ಲಿರುವ ಆರ್ಥಿಕ ಇಲಾಖೆಯು ಪ್ರತಿಯೊಂದು ವಹಿವಾಟಿನ ಮೇಲೂ ನಿಗಾ ಇಡುವ ಆದೇಶ ಹೊರಡಿಸಿರುವುದು ಗಮನ ಸೆಳೆದಿದೆ.

### ಬೇಕಾಬಿಟ್ಟಿ ಹಣ ಬಿಡುಗಡೆ

ಮತ್ತೊಂದೆಡೆ 14 ಬಜೆಟ್‌ಗಳನ್ನು ಮಂಡಿಸಿ ಅನುಭವಿಯಾಗಿರುವ ಸಿದ್ದರಾಮಯ್ಯನವರು, ಹಣಕಾಸು ವ್ಯವಸ್ಥೆಯಲ್ಲಿ ಶಿಸ್ತು ತರಲು ಈ ರೀತಿಯ ಕ್ರಮಗಳನ್ನು ಕೈಗೊಂಡಿರುವುದು ಸ್ವಾಗತಾರ್ಹ. ಬೇಕಾಬಿಟ್ಟಿ ಹಣ ಬಿಡುಗಡೆಯಾಗಿ ದುರ್ಬಳಕೆಯಾಗುವುದು ತಪ್ಪುತ್ತದೆ. ಜನರ ತೆರಿಗೆ ಹಣದ ರಕ್ಷಣೆ ಸರ್ಕಾರದ ಹೊಣೆ ಎಂಬ ಸಮರ್ಥನೆಗಳು ಕೇಳಿಬರುತ್ತಿದೆ.

**ಈ ದಿನದ ದರ** ಪೆಟ್ರೋಲ್: 102.86 ₹/L | ಡೀಸೆಲ್ : 88.94 ₹/L | ಬಂಗಾರ: ₹7,309/Gram24ct ₹6,700/Gram22ct | ಬೆಳ್ಳಿ: ₹93.20/Gram



## ಸಿದ್ಧಸೂಕ್ತಿ

**ಡಾ ಆರೂಢಭಾರತೀ ಸ್ವಾಮೀಜಿ**
**ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ ರಾಮೋಹಳ್ಳಿ**

## ಭ್ರಾಂತಿಯಿಂದವೆ ಕಾಣಿಪುದು ನೋಡು

ನಿಜಗುಣರ ಪರಮಾನುಭವ ಬೋಧೆಯ ಮಾತು. ಹೇಗೆ ಸ್ಥೂಲ ದೇಹವು ಭ್ರಾಂತಿಯಿಂದ ತೋರುವುದು ಎಂದು ಹೇಳಲಾಗಿದೆಯೋ ಹಾಗೆಯೇ ಸೂಕ್ಷ್ಮ ದೇಹವೂ ಭ್ರಾಂತಿಯಿಂದ ತೋರುವುದಾಗಿದೆ. ಪಂಚ ಜ್ಞಾನೇಂದ್ರಿಯಗಳು ಪಂಚ ಕರ್ಮೇಂದ್ರಿಯಗಳು ಪಂಚ ಪ್ರಾಣಗಳು ಮನಸ್ಸು ಹಾಗೂ ಬುದ್ಧಿ ಈ ಹದಿನೇಳು ತತ್ತ್ವಗಳಿಂದ ಒಡಗೂಡಿದ್ದು, ಸ್ವಪ್ನಾವಸ್ಥೆಗೆ ಆಶ್ರಯವಾದ ದೇಹ ಸೂಕ್ಷ್ಮ ದೇಹ. ಭ್ರಾಂತಿಯಿಂದ ತೋರುವ ದೇಹ ನಾನೆನ್ನುವುದು ಭ್ರಮೆ. ವಾಸ್ತವದಲ್ಲಿ ಜೀವನು ದೇಹಾತೀತ ದೇಹಭಿನ್ನ ನಿರ್ದೇಹಿ.

## ಇನ್ನುಮುಂದೆ ಎಲ್ಲೆಂದರಲ್ಲಿ ಕಸ ಬಿಸಾಡಿದರೆ ಬೀಳುತ್ತೆ ಭಾರೀ ದಂಡ!

• ಉದಯವಾಹಿನಿ, ಬೆಂಗಳೂರು

ಬೆಂಗಳೂರಿನ ಜನರಿಗೆ ಮತ್ತೊಂದು ಬಿಗ್ ಶಾಕ್ ಎದುರಾಗಿದ್ದು ಎಲ್ಲೆಂದರಲ್ಲಿ ಕಸ ಬೀಸಾಡಿದರೆ ಬಿಬಿಎಂಪಿ 500 ರೂಪಾಯಿ ದಂಡ ವಿಧಿಸಿ ಕ್ರಮಕ್ಕೆ ಮುಂದಾಗಿದೆ, ಈ ಕುರಿತಂತೆ ಬಿಬಿಎಂಪಿ ಆಯುಕ್ತ ತುಷಾರ್ ಗಿರೀನಾಥ್ ಅಧಿಕಾರಿಗಳಿಗೆ ಖಡಕ್ ಸೂಚನೆ ನೀಡಿದ್ದಾರೆ. ಇಷ್ಟು ದಿನ 50 ರೂಪಾಯಿ ಇದ್ದ ದಂಡದ ಮೊತ್ತ 500ಕ್ಕೆ ಹೆಚ್ಚಿಸಲು ಇದೀಗ ಆಯುಕ್ತರು ಸೂಚನೆ ನೀಡಿದ್ದಾರೆ. ನಗರದ 7 ಜೋನ್ ಗಳಲ್ಲಿ ಡೆಂಗಿ ಪ್ರಕರಣಗಳು ಹೆಚ್ಚಾಗಿದೆ ಕಳೆದ 24 ಗಂಟೆಗಳಲ್ಲಿ ಬೆಂಗಳೂರ ನಗರದಲ್ಲಿ 153 ಡೆಂಗಿ ಪ್ರಕರಣಗಳು ಪತ್ತೆಯಾಗಿವೆ.ಹಾಗಾಗಿ ಬೆಂಗಳೂರಿನಲ್ಲಿ ಸದ್ಯ 547ಕ್ಕೆ ಪ್ರಕರಣಗಳು ಏರಿಕೆ ಕಂಡಿವೆ. ಹಾಗಾಗಿ ಎಲ್ಲೆಂದರಲ್ಲಿ ಕಸ ಬಿಸಾಡಿದರೆ 500 ರೂಪಾಯಿ ದಂಡ ವಿಧಿಸುವಂತೆ ಆಯುಕ್ತ ತುಷಾರ ಗಿರಿನಾಥ ಅಧಿಕಾರಿಗಳಿಗೆ ಖಡಕ್ ಸೂಚನೆ ನೀಡಿದ್ದಾರೆ.

## ಎಲೆಕ್ಟ್ರಿಕ್ ಬೈಕ್ ಟ್ಯಾಕ್ಸಿಯನ್ನು ಓಡಿಸುವಂತಿಲ್ಲ ರಾಜ್ಯ ಸರ್ಕಾರ ಖಡಕ್ ಆದೇಶ

• ಉದಯವಾಹಿನಿ, ಬೆಂಗಳೂರು

ಖಾಸಗಿ ಸಾರಿಗೆ ಸಂಘಟನೆಗಳು ನಿನ್ನೆ ತಮ್ಮ ವಿವಿಧ ಬೇಡಿಕೆ ಈಡೇರಿಸುವಂತೆ ಆಗ್ರಹಿಸಿ ಬೆಂಗಳೂರಿನ ಶಾಂತಿನಗರದಲ್ಲಿರುವ ಆರ್‌ಟಿಓ ಕಚೇರಿಗೆ ಮುತ್ತಿಗೆ ಹಾಕಿದ್ದವು. ಇದರ ಬೆನ್ನಲ್ಲೆ ಇಂದಿನಿಂದ ಎಲೆಕ್ಟ್ರಿಕ್ ಬೈಕ್ ಟ್ಯಾಕ್ಸಿಯನ್ನ ಓಡಿಸುವಂತಿಲ್ಲ. ಖಾಸಗಿ ಸಾರಿಗೆ ಸಂಘಟನೆಗಳ ಮನವಿ ಬೆನ್ನಲ್ಲೇ ಸಾರಿಗೆ ಇಲಾಖೆ ಅಧಿಕಾರಿಗಳು ಅನಧಿಕೃತ ಎಲೆಕ್ಟ್ರಿಕ್ ಬೈಕ್ ಟ್ಯಾಕ್ಸಿ ವಿರುದ್ಧ ಕ್ರಮಕ್ಕೆ ಮುಂದಾಗಿದೆ ಎಂದು ತಿಳಿದುಬಂದಿದೆ. ಹೌದು ಖಾಸಗಿ ಸಾರಿಗೆ ಸಂಘಟನೆಗಳ ಮನವಿಗೆ ಇದೀಗ ಸಾರಿಗೆ ಇಲಾಖೆ ಸ್ಪಂದಿಸಿದ್ದು, ಇಂದು ಸಾರಿಗೆ ಅಧಿಕಾರಿಗಳು ಎಲೆಕ್ಟ್ರಿಕ್ ಬೈಕ್ ಟ್ಯಾಕ್ಸಿ ಸೀಜ್ ಮಾಡಲು ನಿಂತಿದ್ದು, 11 ತಂಡವನ್ನು ರಚಿಸಿ ಆರ್‌ಟಿಓಅಧಿಕಾರಿಗಳ ನೇತೃತ್ವದಲ್ಲಿ ಅನಧಿಕೃತ ಎಲೆಕ್ಟ್ರಿಕ್ ಬೈಕ್ ಟ್ಯಾಕ್ಸಿ ಸೀಜ್ ಕಾರ್ಯಾಚರಣೆ ನಡೆಸಲಾಗುತ್ತಿದೆ. ಸಾರಿಗೆ ಇಲಾಖೆ ಸೂಚನೆ ಇದ್ದರೂ ಕೂಡ ಡೋಂಟ್ ಕೇರ್ ಎನ್ನದೆ ಚಾಲಕರು ಅನಧಿಕೃತವಾಗಿ ಎಲೆಕ್ಟ್ರಿಕ್ ಬೈಕ್ ಟ್ಯಾಕ್ಸಿ ರಸ್ತೆಗಿಳಿಸುತ್ತಿದ್ದಾರೆ. ಆದ್ದರಿಂದ ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ನೇತೃತ್ವದಲ್ಲಿ ವಾಹನ ಪರಿಶೀಲನೆ ನಡೆಸಲಾಗುತ್ತಿದೆ ಎಂದು ತಿಳಿದುಬಂದಿದೆ.

## ನಾಗೇಂದ್ರರ ರೀತಿ ನಿಮ್ಮ ರಾಜೀನಾಮೆ ಯಾವಾಗ ಸಿದ್ದರಾಮಯ್ಯನವರೆ?

• ಉದಯವಾಹಿನಿ, ಬೆಂಗಳೂರು

ನಾಗೇಂದ್ರರ ರೀತಿ ನಿಮ್ಮ ರಾಜೀನಾಮೆ ಯಾವಾಗ ಸಿದ್ದರಾಮಯ್ಯನವರೇ ಅಂತ ರಾಜ್ಯ ಬಿಜೆಪಿ ಘಟನ ಟ್ವಿಟ್ ಮಾಡಿ ವ್ಯಂಗ್ಯ ಮಾಡಿದೆ. ಇದೇ ವೇಳೆ ಟ್ವಿಟ್‌ನಲ್ಲಿ ಆರ್ ಅಶೋಕ್ ಕರ್ನಾಟಕದ ಇತಿಹಾಸದಲ್ಲೇ ಅತ್ಯಂತ ದೊಡ್ಡ ಹಗರಣವಾದ ?4,000 ಕೋಟಿ ಮೌಲ್ಯದ ಮುಡಾ ಹಗರಣದಲ್ಲಿ ದಿನಕ್ಕೊಂದು ಕರ್ಮಕಾಂಡ ಬಯಲಾಗುತ್ತಿದೆ. ಮುಖ್ಯಮಂತ್ರಿ ಅವರ ಪತ್ನಿಗೆ ಮಂಜೂರಾಗಿರುವ 35 ಕೋಟಿ ರೂಪಾಯಿ ಮೌಲ್ಯದ 14 ನಿವೇಶನಗಳಿಗೆ ಸಂಬಂಧಪಟ್ಟ ಕಡತಗಳನ್ನ ತಿರುಚುವ ಉದ್ದೇಶದಿಂದ ನಗರಾಭಿವೃದ್ಧಿ ಸಚಿವ ಅವರು ಕಡತಗಳನ್ನು ಬೆಂಗಳೂರಿಗೆ ತಂದಿರುವ ಗುಮಾನಿ ಇದೆ.ಸರ್ಕಾರ ಈ ಕೂಡಲೇ ಸಂಬಂಧಪಟ್ಟ ಕಡತಗಳನ್ನ ಬಹಿರಂಗ ಮಾಡಿ ಸಾರ್ವಜನಿಕರ ಮುಂದಿಡಬೇಕು ಎಂದು ಸಿಎಂ ಅವರನ್ನ ಒತ್ತಾಯಿಸುತ್ತೇನೆ ಅಂತ ಹೇಳಿದ್ದಾರೆ.

## ಇನ್ಮುಂದೆ ರಾಜ್ಯದ ಎಲ್ಲಾ ಸರ್ಕಾರಿ ಕಛೇರಿಗಳಲ್ಲಿ ಬಯೋಮೆಟ್ರಿಕ್ ಹಾಜರಾತಿ ಕಡ್ಡಾಯ.!

• ಉದಯವಾಹಿನಿ, ಬೆಂಗಳೂರು

ರಾಜ್ಯದ ಎಲ್ಲಾ ಇಲಾಖೆಗಳ ಸರ್ಕಾರಿ ಕಛೇರಿ ಕಛೇರಿಗಳಲ್ಲಿ ಬಯೋಮೆಟ್ರಿಕ್ ಯಂತ್ರದ ದಾಖಲಿಸುತ್ತಿರುವ ಕುರಿತು ಮಾಹಿತಿ ಒದಗಿಸುವ ಬಗ್ಗೆ ಮಾಹಿತಿಯನ್ನು ನೀಡುವಂತೆ ಅಧೀನ ಅಧಿಕಾರಿಗಳಿಂದ ಮಾಹಿತಿಯನ್ನು ಕೇಳಿದೆ. ಅದರಂತೆ. ಹಲವು ಸುತ್ತೋಲೆಗಳ ಮೂಲಕ ರಾಜ್ಯ ಸರ್ಕಾರದ ಕಛೇರಿಗಳು ಸೇರಿದಂತೆ ಅಧೀನಕ್ಕೊಳಪಡುವ ಎಲ್ಲಾ ನಿಗಮ / ಮಂಡಳಿ / ಸ್ಥಳೀಯ ಸಂಸ್ಥೆಗಳಲ್ಲಿ ಅಧಿಕಾರಿ / ನೌಕರರ ದೈನಂದಿನ ಹಾಜರಾತಿಯನ್ನು ಬಯೋಮೆಟ್ರಿಕ್ ಯಂತ್ರದ ಮೂಲಕ ದಾಖಲಿಸಲು ಬಯೋಮೆಟ್ರಿಕ್ ಹಾಜರಾತಿಯನ್ನು ಕಡ್ಡಾಯವಾಗಿ ಜಾರಿಗೊಳಿಸಲು ನಿರ್ದೇಶನಗಳನ್ನು ನೀಡಿರುತ್ತದೆ. ಅದಾಗ್ಯೂ ಹಲವಾರು ಕಛೇರಿಯನ್ನೊಳಗೊಂಡಂತೆ ಅಧೀನ ಸಂಸ್ಥೆಗಳಲ್ಲಿ ಪ್ರಸ್ತುತದವರೆಗೂ ಬಯೋಮೆಟ್ರಿಕ್ ಹಾಜರಾತಿ ವ್ಯವಸ್ಥೆಯನ್ನು ಜಾರಿಗೊಳಿಸದ ಬಗ್ಗೆ ಸಾರ್ವಜನಿಕರಿಂದ ದೂರುಗಳು ಸ್ವೀಕೃತವಾಗುತ್ತಿವೆ. ನಿಟ್ಟಿನಲ್ಲಿ ತಮ್ಮ ಇಲಾಖೆಯ ಅಧೀನಕ್ಕೊಳಪಡುವ ಸರ್ಕಾರಿ ಕಛೇರಿಗಳು ಸೇರಿದಂತೆ ಅಧೀನ ಸಂಸ್ಥೆ/ನಿಗಮ/ಮಂಡಳಿಗಳಲ್ಲಿ ಬಯೋಮೆಟ್ರಿಕ್ ಹಾಜರಾತಿಯನ್ನು ಅಳವಡಿಸಿರುವ ಬಗ್ಗೆ ದಿ. 06/07/2024ರೊಳಗಾಗಿ ಕಛೇರಿಗೆ ವರದಿ ಕಳುಹಿಸುವಂತೆ ತಿಳಿಸಿದೆ.

## ಡೆಂಘಿ ಟೆಸ್ಟಿಂಗ್ ದರ ಹೆಚ್ಚಿಸಿದರೆ ಆಸ್ಪತ್ರೆಗಳ ವಿರುದ್ಧ ಕಠಿಣ ಕ್ರಮ : ಸಚಿವ

• ಉದಯವಾಹಿನಿ, ಮಂಗಳೂರು

ರಾಜ್ಯದಲ್ಲಿ ದಿನದಿಂದ ದಿನಕ್ಕೆ ಡೇಂಗಿಯೂ ಪ್ರಕರಣಗಳ ಸಂಖ್ಯೆ ಹೆಚ್ಚಾಗುತ್ತಿದೆ ಹೀಗಾಗಿ ಪುಣ್ಯಚರಿಕಾ ಕ್ರಮವಾಗಿ ಆರೋಗ್ಯ ಇಲಾಖೆಯು ಎಲ್ಲಾ ಜಿಲ್ಲೆಗಳಲ್ಲಿ ಸೋಂಕು ಹರಡದಂತೆ ತಡೆಗಟ್ಟಲು ಕ್ರಮ ಕೈಗೊಂಡಿದೆ.

ಅಲ್ಲದೆ ಆಸ್ಪತ್ರೆಗಳಲ್ಲಿ ಡೆಂಗ್ಯೂ ಪರೀಕ್ಷೆಗೆ ಹೆಚ್ಚಿನ ದರ ವಿಧಿಸಿದರೆ ಅಂತಹ ಆಸ್ಪತ್ರೆಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವುದಾಗಿ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಎಚ್ಚರಿಸಿದ್ದಾರೆ. ಈ ಕುರಿತು ಮಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಡೆಂಘಿ ಟೆಸ್ಟಿಂಗ್ ದರ ಹೆಚ್ಚಿಸಿದರೆ ಆಸ್ಪತ್ರೆಗಳ ವಿರುದ್ಧ ಕ್ರಮ ಕೈಗೊಳ್ಳಲಾಗುತ್ತದೆ. ಮಂಗಳೂರಿನಲ್ಲಿ ಸಚಿವ ದಿನೇಶ್ ಗುಂಡೂರಾವ್ ಎಚ್ಚರಿಕೆ ನೀಡಿದ್ದು, ನಿಂತ ನೀರಿನಲ್ಲಿ ಸೊಳ್ಳೆ ಉತ್ಪತ್ತಿಯಾಗುತ್ತಿವೆ.ಅದನ್ನು ಮೊದಲು ನಿಯಂತ್ರಿಸಬೇಕು. ಜನರು ಗಂಭೀರವಾಗಿ ಇದನ್ನು ಪರಿಗಣಿಸಿಲ್ಲ. ಡೆಂಗಿ ಪ್ರಕರಣದಲ್ಲಿ ಸೂಕ್ತ ಚಿಕಿತ್ಸೆ ಕೊಡುವ ವ್ಯವಸ್ಥೆ ಆಗಿದೆ ಎಂದು ತಿಳಿಸಿದರು.

ಇನ್ನೂ ಕಳೆದ 24 ಗಂಟೆಯಲ್ಲಿ ಬೆಂಗಳೂರಿನಲ್ಲೇ 153 ಪ್ರಕರಣಗಳು ಪತ್ತೆಯಾಗಿದ್ದು ಒಟ್ಟು ಪ್ರಕರಣ ಸಂಖ್ಯೆ 547 ಕ್ಕೆ ಏರಿಕೆ ಕಂಡಿದೆ. ಇನ್ನು ಹಾಸನದಲ್ಲಿ ಕಳೆದ ನಾಲ್ಕು ದಿನಗಳಲ್ಲಿ ಆರು ಮಕ್ಕಳು ಡೇಂಗು ಸೋಂಕಿನಿಂದ ಸಾವನಪ್ಪಿದ್ದಾರೆ ಎಂದು ಮಾಹಿತಿ ಲಭ್ಯವಾಗಿದೆ.

# ವಿದ್ಯಾರ್ಥಿಗಳಿಗೆ ಸ್ಪರ್ಧಾತ್ಮಕ ತರಬೇತಿ ಭತ್ಯೆ ಹೆಚ್ಚಳ

## ಮಕ್ಕಳಿಗೆ ಉತ್ತಮ ಹಾಸ್ಟೆಲ್ ಕಟ್ಟಿಸುವ ಜೊತೆಗೆ ತಿಂಗಳಿಗೆ 15 ಸಾವಿರ ರೂಪಾಯಿ ಕೊಡಲಾಗುವುದು

• ಉದಯವಾಹಿನಿ, ಬೆಂಗಳೂರು

ರಾಜ್ಯದ ಎಸ್ಸಿ, ಎಸ್ಟಿ ಸಮುದಾಯದ ವಿದ್ಯಾರ್ಥಿಗಳಿಗೆ ಗುಡ್ ನ್ಯೂಸ್ ಎನ್ನುವಂತೆ, ಸರ್ಕಾರವು ಸ್ಪರ್ಧಾತ್ಮಕ ಪರೀಕ್ಷೆಗೆ ತರಬೇತಿಗೆ ನೀಡಲಾಗುತ್ತಿದ್ದಂತ ಭತ್ಯೆಯನ್ನು ಹೆಚ್ಚಳ ಮಾಡುವಂತ ನಿರ್ಧಾರವನ್ನು ಕೈಗೊಳ್ಳಲಾಗಿದೆ.

ಈ ಸಂಬಂಧ ಮಾಹಿತಿ ನೀಡಿರುವಂತ ಸಿಎಂ ಸಿದ್ದರಾಮಯ್ಯ ಅವರು,IAS, IRS ಸೇರಿ ಮತ್ತಿತರೆ ಸ್ಪರ್ಧಾತ್ಮಕ ಪರೀಕ್ಷೆ ಸಿದ್ಧತೆಗಳಿಗಾಗಿ ದೆಹಲಿಯಲ್ಲಿ ಅ/ಣ ಮಕ್ಕಳಿಗೆ ಉತ್ತಮ ಹಾಸ್ಟೆಲ್ ಕಟ್ಟಿಸುವ ಜೊತೆಗೆ ತಿಂಗಳಿಗೆ 15 ಸಾವಿರ ರೂಪಾಯಿ ಕೊಡಲಾಗುವುದು (ಸದ್ಯ 10 ಸಾವಿರ ಕೊಡಲಾಗುತ್ತಿದ್ದು 5 ಸಾವಿರ ಹೆಚ್ಚಿಸಲಾಗುವುದು. ಈ ಸಂಬಂಧ ತಕ್ಷಣ ಆದೇಶ ಹೊರಡಿಸಲಾಗುವುದು) ದೆಹಲಿ ಹಾಸ್ಟೆಲ್ ನಲ್ಲಿ ಹೈಟೆಕ್ ಲೈಬ್ರೆರಿ ಮಾಡಲಾ ಗುವುದು. ಅಲ್ಲಿ ಎಲ್ಲಾ ರೀತಿಯ ಪುಸ್ತಕಗಳು ಸಿಗುವ ವ್ಯವಸ್ಥೆ ಕಲ್ಪಿಸಲಾಗುವುದು ಘೋಷಣೆ ಮಾಡಿದ್ದಾರೆ.

ರಾಜ್ಯದ ಅಭಿವೃದ್ಧಿ ಆಯವ್ಯಯ


2024-25 ನೇ ಸಾಲಿಗೆ scsp/tsp ನಲ್ಲಿ ಲಭ್ಯ ಇರುವ ಹಣವನ್ನು ಖರ್ಚು ಮಾಡಲು action plan ಅನುಮೋದನೆ ಮಾಡಲಾಗಿದೆ. ರಾಜ್ಯದ ಅಭಿವೃದ್ಧಿ ಆಯವ್ಯಯ ಈ ಸಾಲಿನಲ್ಲಿ ಒಟ್ಟು 160000 ಕೋಟಿ. ಇದರಲ್ಲಿ scsp/tspಗೆ ಸುಮಾರು 39121.46 ಕೋಟಿ scsp/tspಅಡಿ 34 ಇಲಾಖೆಗಳಿಗೆ ಹಂಚಿಕೆ ಮಾಡಿರುವ ಹಣ action plan ನಲ್ಲಿದೆ.

ಹಿಂದಿನ ವರ್ಷ 97.81 ಕೋಟಿ ಉಳಿತಾಯವಾಗಿದೆ.

> ಈ ವರ್ಷದ action plan ಅನ್ನು ಈ ಸಭೆಯಲ್ಲಿ ಶಾಸಕರು/ಸಚಿವರು/ ಅಧಿಕಾರಿಗಳು ನೀಡಿದ ಸಲಹೆಗಳ ಸಮೇತ ಜಾರಿ ಆಗಬೇಕು ಎನ್ನುವ ಸೂಚನೆಯನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ನೀಡಿದರು.

ಈ ಹಣವೂ ಸೇರಿದೆ. ಕಳೆದ ವರ್ಷಕ್ಕಿಂತ ಈ ವರ್ಷ 3900 ಕೋಟಿ ಹೆಚ್ಚಾಗಿದೆ. 3900 ಕೋಟಿ ಹೆಚ್ಚುವರಿ ಹಣ ಈ ವರ್ಷ ನೀಡಿದ್ದೇವೆ.

ಈ ಹಣ ಇಲಾಖೆಗಳಿಗೆ ಹಂಚಿಕೆಯಾಗಿದ್ದು ಇದರ ಸದುಪಯೋಗ ಆಗಬೇಕು. ಸಮಾಜ ಕಲ್ಯಾಣ ಇಲಾಖೆ, ನಿಗಮಗಳು ಕಾಯ್ದೆಯ ಉದ್ದೇಶಕ್ಕೆ ಪೂರಕವಾಗಿ ಕೆಲಸ ಮಾಡಬೇಕು. ಶೇ100 ಸಾಧನೆ ಆಗಬೇಕು. ಇದರಲ್ಲಿ ನಿರ್ಲಕ್ಷ್ಯ ಮಾಡಿದವರ ಮೇಲೆ ಕ್ರಮ ಕೈಗೊಳ್ಳುವುದು ಅನಿವಾರ್ಯವಾಗುತ್ತದೆ. ಕಾಯ್ದೆಯಲ್ಲಿದ್ದ 7ಆ ರದ್ದು ಮಾಡಿದ ರೀತಿಯಲ್ಲೇ 7ಅ ಕೂಡ ರದ್ದು ಮಾಡಬೇಕು ಎನ್ನುವ ಶಾಸಕ ನರೇಂದ್ರಸ್ವಾಮಿ ಅವರು ಸಲಹೆ ನೀಡಿದ್ದಾರೆ. ಈ ಸಲಹೆಯ ಸಾಧಕ ಬಾದಕಗಳನ್ನು ಪರಿಶೀಲಿಸಲಾಗುವುದು ಎಂದರು. 10 ವರ್ಷದಲ್ಲಿ ಈ ಯೋಜನೆಯಿಂದ ಸಮುದಾಯದ ಮೇಲೆ ಬೀರಿರುವ ಪರಿಣಾಮ, ಸಮುದಾಯಕ್ಕೆ ಯೋಜನೆ ತಲುಪಿರುವ ಪ್ರಮಾಣದ ಬಗ್ಗೆ, ಹಾಗೂ ಅವರ ಆರ್ಥಿಕ ಸ್ಥಿತಿ ಪ್ರಗತಿ ಆಗಿರುವ ಬಗ್ಗೆ ಮೌಲ್ಯಮಾಪನ ಮಾಡಲಾಗುವುದು.



- ಖಾಲಿ ಇರುವ ಹೋಬಳಿಗಳಲ್ಲೂ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳು ಆರಂಭಿಸಲೇಬೇಕು.
- ಆಯಾ ಹೋಬಳಿಯ ವಿದ್ಯಾರ್ಥಿಗಳಿಗೆ ಶೇ75 ರಷ್ಟು ಸೀಟು, ಉಳಿದ ಶೇ25 ರಷ್ಟು ಸೀಟುಗಳನ್ನು ಇತರೆ ಪ್ರದೇಶದ ವಿದ್ಯಾರ್ಥಿಗಳಿಗೆ ವಸತಿ ಶಾಲೆಗಳಲ್ಲಿ ನೀಡಬೇಕು.
- ಸರ್ಕಾರಿ ಶಾಲೆಗಿಂತ ಕ್ರೈಸ್ ನಲ್ಲಿ ಓದಿರುವ ಬಡ ವಿದ್ಯಾರ್ಥಿನಿ ಕ್ರೈಸ್ ಶಾಲೆಯಲ್ಲಿ ಓದಿ ಮೊದಲ ರ್ಯಾಂಕ್ ಪಡೆದಿದ್ದಾರೆ. ಇದನ್ನು ಪ್ರೋತ್ಸಾಹಿಸುತ್ತಲೇ ಇತರೆ ನ್ಯೂನ್ಯತೆಗಳನ್ನು ಸರಿಪಡಿಸಲು ಅಧಿಕಾರಿಗಳು ಶ್ರಮಿಸಬೇಕು.
- ಬಜೆಟ್‌ನಲ್ಲಿ ನಾವು ಘೋಷಿಸಿರುವ ಎಲ್ಲಾ ಕಾರ್ಯಕ್ರಮಗಳನ್ನೂ ನೀವು ಜಾರಿ ಮಾಡಲೇಬೇಕು.
- ಹಿಂದಿನ ಬಿಜೆಪಿ ಸರ್ಕಾರ ಮೂರು ವರ್ಷ ಕ್ರೈಸ್ ಮಕ್ಕಳಿಗೆ ಬಾತ್ ರೂಮ್ ಕಿಟ್ ಕೊಡ್ಲೇ ಇಲ್ಲ. ಈಗ ನಾವು ಸರಿಯಾಗಿ ವಿತರಿಸುತ್ತಿದ್ದೇವೆ.
- ಆಶ್ರಮ ಶಾಲೆಗಳಲ್ಲಿ ರಾತ್ರಿ ವೇಳೆ ಮಕ್ಕಳನ್ನು ಮನೆಗೆ ಕರೆದುಕೊಂಡು ಹೋಗುತ್ತಾರೆ ಎನ್ನುವುದು ಕಂಡುಬಂದಿದೆ. ಇದಕ್ಕೆ ಅವಕಾಶ ಆಗಬಾರದು. ಮನೆಗೆ ಕರೆದೊಯ್ಯದಂತೆ ಪೋಷಕರಿಗೆ ಒಪ್ಪಿಸಬೇಕು.
- ಹಳ್ಳಿಗಾಡು, ಬಡ ಕುಟುಂಬಗಳಿಗೆ ಸರ್ಕಾರದಿಂದ ಬರುವ ಸವಲತ್ತುಗಳನ್ನು ಸರಿಯಾಗಿ ತಲುಪಿಸಬೇಕು. ಇದರಲ್ಲಿ ವಿಫಲರಾದವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು.
- ನಾವು ಕೊಟ್ಟ ಅನುದಾನ ಆಯಾ ಉದ್ದೇಶಗಳಿಗೇ ಬಳಕೆಯಾಗಬೇಕು.
- ಇದರಲ್ಲಿ ಯಾವುದೇ ರಾಜಿ ಇಲ್ಲದಂತೆ ಆಯಾ ಸಮುದಾಯಗಳಿಗೆ ಸವಲತ್ತು ತಲುಪಿಸಬೇಕು.
- ಹಾಸ್ಟೆಲ್‌ಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸದಿದ್ದರೆ ಅಧಿಕಾರಿಗಳನ್ನು ಸಸ್ಪೆಂಡ್ ಮಾಡಲಾಗುವುದು.

## ಉತ್ತಮ ಶಿಕ್ಷಣ ಪಡೆದು ಯಶಸ್ವಿ: ಎಂ.ಎಸ್ ರಾಮಯ್ಯ

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ

ಏಕಾಗ್ರತೆ ಹಾಗೂ ಸುರಕ್ಷಿತ ಕ್ರಮಗಳನ್ನು ಅನುಸರಿಸುವಂತೆ ಇನ್ಫೋಸಿಸ್ ಸೈಬರ್ ಸುರಕ್ಷಿತ ಜಿ ಆರ್ ಸಿ ಮುಖ್ಯಸ್ಥ ಡಾ. ಶ್ರೀರಾಮ್ ಕೊತ್ತಪಲ್ಲಿ ಅವರು ವಿದ್ಯಾರ್ಥಿಗಳಿಗೆ ತಿಳಿಸಿದರು.

ನಗರದ ಎಂ.ಎಸ್ ರಾಮಯ್ಯ ಕಲಾ, ವಿಜ್ಞಾನ ಮತ್ತು ವಾಣಿಜ್ಯ ಕಾಲೇಜಿನಲ್ಲಿ 2021-24ನೇ ಶೈಕ್ಷಣಿಕ ವರ್ಷದ ಪದವಿ ಪ್ರದಾನ ಸಮಾರಂಭದಲ್ಲಿ ಭಾಗಿಯಾಗಿ ಮಾತನಾಡಿದ ಅವರು.

ಮೊಬೈಲ್, ಸಾಮಾಜಿಕ ಜಾಲತಾಣವನ್ನು ಎಷ್ಟು ಬೇಕೋ ಅಷ್ಟು ಉಪಯೋಗಿಸುವುದು ಉತ್ತಮ, ವಿದ್ಯಾರ್ಥಿಗಳಿಗೆ ಶಿಕ್ಷಣವೇ ಆಸ್ತಿ, ಮುಂದಿನ ಭವಿಷ್ಯಕ್ಕಾಗಿ ಉತ್ತಮ ಶಿಕ್ಷಣ ಪಡೆದು ಯಶಸ್ವಿಯಾಗಿ ಎಂದು ಶುಭಹಾರೈಸಿದರು. ಕಾರ್ಯಕ್ರಮದ ಅಧ್ಯಕ್ಷತೆಯ ಭಾಷಣವನ್ನು ಬಿ.ಎಸ್.ರಾಮಪ್ರಸಾದ್ ಹಾಗೂ ಸ್ವಾಗತ ಭಾಷಣವನ್ನು ಕಾಲೇಜಿನ ಪ್ರಾಂಶುಪಾಲರಾದ ಡಾ. ವತ್ಸಲ ಜಿ ನೆರೆವೆರಿಸಿದರು. ಕಾರ್ಯಕ್ರಮದಲ್ಲಿ ಗೋಕುಲ ವಿದ್ಯಾಸಂಸ್ಥೆಯ ಮುಖ್ಯ ಹಣಕಾಸು ನಿರ್ವಹಣಾಧಿಕಾರಿ ಜಿ.ರಾಮಚಂದ್ರ, ಸೇರಿದಂತೆ ಕಾಲೇಜು ವಿದ್ಯಾರ್ಥಿಗಳು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

## ಅತ್ಯಾಚಾರ ಕೇಸ್: ಜಾಮೀನು ಅರ್ಜಿ ಮುಂದೂಡಿಕೆ

• ಉದಯವಾಹಿನಿ, ಬೆಂಗಳೂರು



ಜಾಮೀನು ನಿರೀಕ್ಷೆ ಪ್ರಜ್ವಲ್

ಅತ್ಯಾಚಾರ ಪ್ರಕರಣದಲ್ಲಿ ಹೊಳೆನರಸೀಪುರ ಠಾಣೆಯಲ್ಲಿ ದಾಖಲಾಗಿದ್ದಂತ ಪ್ರಕರಣ ಸಂಬಂಧ ಮಾಜಿ ಸಂಸದ ಪ್ರಜ್ವಲ್ ರೇವಣ್ಣ ಸಲ್ಲಿಸಿದ್ದಂತ ಜಾಮೀನು ಅರ್ಜಿಯನ್ನು ಹೈಕೋರ್ಟ್ 2 ವಾರಗಳ ಕಾಲ ಮುಂದೂಡಿದೆ.

ಈ ಮೂಲಕ ನಿರೀಕ್ಷಣಾ ಜಾಮೀನು ನಿರೀಕ್ಷೆಯಲ್ಲಿದ್ದಂತ ಪ್ರಜ್ವಲ್ ರೇವಣ್ಣಗೆ ಬಿಗ್ ಶಾಕ್ ನೀಡಲಾಗಿದೆ.

ಇಂದು ಹೈಕೋರ್ಟ್ ನಲ್ಲಿ ಹೊಳೆನರಸೀಪುರ ಪೊಲೀಸ್ ಠಾಣೆಯಲ್ಲಿ ದಾಖಲಾಗಿದ್ದಂತ ಮತ್ತೊಂದು ಅತ್ಯಾಚಾರ ಪ್ರಕರಣದಲ್ಲಿ ಜಾಮೀನು ಕೋರಿ ಸಲ್ಲಿಸಿದ್ದಂತ ಅರ್ಜಿಯನ್ನು ನ್ಯಾಯ ಮೂರ್ತಿ ಕೃಷ್ಣ ಎಸ್ ದೀಕ್ಷಿತ್ ಅವರನ್ನೊಳಗೊಂಡ ನ್ಯಾಯಪೀಠವು ವಿಚಾರಣೆ ನಡೆಸಿತು. ಈ ವೇಳೆ ಪ್ರಜ್ವಲ್ ರೇವಣ್ಣ ಪರ ವಕೀಲರು ಒಂದು ಪ್ರಕರಣದಲ್ಲಿ ಮಾತ್ರವೇ ಪ್ರಜ್ವಲ್ ರೇವಣ್ಣ ಅವರನ್ನು ಬಂಧಿಸಲಾಗಿದೆ.

ಉಳಿದ ಕೇಸ್‌ಗಳಲ್ಲಿ ಬಾಡಿ ವಾರೆಂಟ್ ಮೂಲಕ ಕಸ್ಟಡಿಗೆ ಪಡೆಯಲಾಗಿದೆ. ಹೀಗಾಗಿ ನಿರೀಕ್ಷಣಾ ಜಾಮೀನು ಅರ್ಜಿಯನ್ನು ಪರಿಗಣಿಸುವಂತೆ ಹೈಕೋರ್ಟ್ ನ್ಯಾಯಪೀಠಕ್ಕೆ ಮನವಿ ಮಾಡಿದರು.

ಈ ವಾದ ಆಲಿಸಿದಂತ ಹೈಕೋರ್ಟ್ ನ್ಯಾಯಮೂರ್ತಿ ಕೃಷ್ಣ ಎಸ್ ದೀಕ್ಷಿತ್ ಅವರು, ಜಾಮೀನು ಅರ್ಜಿಯ ಸಂಬಂಧ ಆಕ್ಷೇಪಣೆಗಳನ್ನು ಸಲ್ಲಿಸುವಂತೆ ಎಸ್‌ಐಟಿಗೆ ಸೂಚನೆ ನೀಡಿದರು. ಅಲ್ಲದೇ ತನಿಖೆ ನಡೆಯುತ್ತಿದೆ. ಶೀಘ್ರವೇ ವಿಚಾರಣೆ ಅಗತ್ಯವಿಲ್ಲ ಎಂಬುದಾಗಿ ಹೇಳುವ ಮೂಲಕ ನಿರೀಕ್ಷಣಾ ಜಾಮೀನು ಅರ್ಜಿಯನ್ನು 2 ವಾರಗಳ ಕಾಲ ಮುಂದೂಡಿದರು.

## ರೇಣುಕಾಸ್ವಾಮಿ ಕೊಲೆ ಕೇಸ್‌ಗೆ ಸ್ಫೋಟಕ ತಿರುವು

• ಉದಯವಾಹಿನಿ, ಬೆಂಗಳೂರು

ಹತ್ಯೆ ನಡೆದ ಸ್ಥಳದಲ್ಲಿ ನಿಗೂಢ

ರೇಣುಕಾ ಸ್ವಾಮಿ ಕೊಲೆ ಪ್ರಕರಣಕ್ಕೆ ಸಂಬಂಧಪಟ್ಟಂತೆ ಇದೀಗ ಹತ್ಯೆಯಾದ ಬಳಿಕ ಸ್ಥಳದಲ್ಲಿದ್ದ ನಿಗೂಢ ವ್ಯಕ್ತಿ ಇದೀಗ ಪತ್ತೆಯಾಗಿದ್ದಾನೆ.

ಪೊಲೀಸರು ನ್ಯಾಯಾಲಯಕ್ಕೆ ತಿಳಿಸಿದ್ದ ಕಾಣದ ವ್ಯಕ್ತಿ ಇದೀಗ ಪತ್ತೆಯಾಗಿದ್ದಾನೆ ಎನ್ನಲಾಗುತ್ತಿದೆ.ಪತ್ತೆಯಾದ ವ್ಯಕ್ತಿಯನ್ನು ಒಐಂ ರವಿ ಸುಬ್ರಮಣ್ಯ ಕಾರು ಚಾಲಕ ಕಾರ್ತಿಕ್ ಪುರೋಹಿತ ಎಂದು ತಿಳಿದುಬಂದಿದೆ.

ಪ್ರದೋಷ ಸೂಚನೆ ಮೇರೆಗೆ ಕಾರ್ತಿಕ್ ಪುರೋಹಿತ್ ಸ್ಪಾಟ್ ಗೆ ಬಂದಿದ್ದ ಕೊಲೆ ಸ್ಥಳದಿಂದ ಪ್ರದರ್ಶನನ್ನು ಕಾರ್ತಿಕ್ ಪುರೋಹಿತ್ ಕಾರಲ್ಲಿ ಕರೆದು ಸದ್ಯ ಅಪ್ಪು ಕಾರ್ತಿಕ್ರಿಯ ಪೊಲೀಸರು ನೋಟಿಸಿದ್ದಾರೆ ನೋಟಿಸ್ ನೀಡಿದ ನಂತರ ಕಾರ್ತಿಕ್ ಪರಾರಿಯಾಗಿದ್ದಾನೆ ಎಂಎಲ್‌ಎ ಬಳಿ ಕಾರ್ತಿಕ್ ಪರೋಹಿತ್ ಕೆಲಸ ಮಾಡುತ್ತಿದ್ದ ಎನ್ನಲಾಗಿದೆ.

ಎಂಎಲ್‌ಎ ರವಿ ಸುಬ್ರಮಣ್ಯ ಕಚೇರಿಯಲ್ಲಿ ಇದೀಗ ನಿಗೂಢ ವ್ಯಕ್ತಿ ಕಾರ್ತಿಕ್ ಪುರೋಹಿತ್ ಕೆಲಸ ಮಾಡುತ್ತಿದ್ದ ಎನ್ನಲಾಗಿದೆ.ಇದೀಗ ಪೊಲೀಸರು ಕಾರ್ತಿಕ್ ಪುರೋಹಿತಗೆ ವಿಚಾರಣೆಗೆ ಹಾಜರಾಗಲು ನೋಟಿಸ್ ನೀಡಿದ್ದು, ನೋಟಿಸ್ ಬಂದ ತಕ್ಷಣ ಕಾರ್ತಿಕ್ ಪುರೋಹಿತ್ ಪರಾರಿಯಾಗಿದ್ದಾನೆ ಎನ್ನಲಾಗಿದೆ. ಕಾರ್ತಿಕ್ ಗೆ ಆರೋಪಿ ದೀಪಕ್ ಅಮೌಂಟ್ ಆಫರ್ ಮಾಡಿದ್ದ ನಿಂಗೆ 10 ಲಕ್ಷ ಕೊಡುತ್ತೇವೆ. ನಿನ್ನ ತಾಯಿಗೆ 5 ಲಕ್ಷ ಕೊಡುತ್ತೇವೆ. ಕೇಸ್ನಲ್ಲಿ ಬೆಲ್ ಮಾಡಿಸುವ ಜವಾಬ್ದಾರಿ ನಮ್ಮದು. ತಿಂಗಳಿಗೆ 3000 ಸಂಬಳ ಕೊಡುತ್ತೇವೆ.ಶೆಡ್ ನಲ್ಲಿ ಕೆಲಸಕ್ಕೆ ಸೇರಿಸಿಕೊಳ್ಳುತ್ತೇವೆ ಎಂದು ಕಾರ್ತಿಕ್ ದೀಪಕ್ ಎಲ್ಲಾ ಮಾತಿಗೆ ಒಪ್ಪಿಕೊಂಡಿದ್ದ ಎನ್ನಲಾಗಿದೆ.



> ಆರೋಪಿ ದೀಪಕ್ ನನ್ನು ಉಳಿಸಲು ಪ್ರಭಾವಿಗಳಿಂದ ಒತ್ತಡ ಬಂದಿದ್ದು, ಪ್ರಭಾವಿ ಶಾಸಕರ ತಂಗಿ ಮಗಳ ಗಂಡ ಆಗಿರುವಂತಹ ದೀಪಕ್ ನನ್ನು ಉಳಿಸಲು ಶಾಸಕ ಪ್ರಯತ್ನ ಮಾಡುತ್ತಿದ್ದಾರೆ ಎನ್ನಲಾಗಿದೆ. ಮಾಜಿ ಸಚಿವ ಹಾಗೂ ಶಾಸಕನಿಂದ ಇನ್ನಿಲ್ಲದ ಪ್ರಯತ್ನ ನಡೆಯುತ್ತಿದೆ ಎನ್ನಲಾಗಿದೆ. ಪೊಲೀಸರ ಮೇಲೆ ಪ್ರಭಾವಿದ ಒತ್ತಡ ಹೇರುವ ಪ್ರಯತ್ನ ನಡೆಯುತ್ತಿದೆ ಕೊಲೆ ಕೇಸ್ನಲ್ಲಿ ದೀಪಕ್ 13ನೇ ಆರೋಪಿಯಾಗಿದ್ದಾನೆ.

## ಜಾಗತಿಕ ಭಾಷೆ ಬೆರೆಸಲು ಹೈಕೋರ್ಟ್ ಶಿಫಾರಸು

• ಉದಯವಾಹಿನಿ, ಬೆಂಗಳೂರು



ಸರ್ಕಾರಿ ವ್ಯವಹಾರಗಳಲ್ಲಿ ಒಂದು ಭಾಷೆಯನ್ನು ಮಾತ್ರ ಬಳಸಬೇಕೇ ಎಂಬ ಬಗ್ಗೆ ಸಾರ್ವತ್ರಿಕ ಸೂತ್ರ ಇರಲು ಸಾಧ್ಯವಿಲ್ಲ ಎಂದು ಕರ್ನಾಟಕ ಹೈಕೋರ್ಟ್ ಹೇಳಿದೆ. ಮುಖ್ಯ ನ್ಯಾಯಮೂರ್ತಿ ಎನ್.ವಿ .ಅಂಜಾರಿಯಾ ಮತ್ತು ನ್ಯಾಯ ಮೂರ್ತಿ ಕೆ.ವಿ.ಅರವಿಂದ್ ಅವರಿದ್ದ ವಿಭಾಗೀಯ ಪೀಠ ಈ ಅಭಿಪ್ರಾಯ ವ್ಯಕ್ತಪಡಿಸಿದೆ.

ಸರ್ಕಾರದ ಎಲ್ಲಾ ಪತ್ರ ವ್ಯವಹಾರಗಳಲ್ಲಿ ಎಲ್ಲಾ ಹಂತಗಳಲ್ಲಿ ಕನ್ನಡವನ್ನು ಬಳಸಬೇಕು ಎಂದು ನಿರ್ದೇಶನ ಕೋರಿ ಅರ್ಜಿಯೊಂದಿಗೆ ಅರ್ಜಿ ಸಲ್ಲಿಸಲಾಗಿತ್ತು.

ಬೀದರ್ ಜಿಲ್ಲೆಯ ಕಮಲಾಪುರದ ಸಾಮಾಜಿಕ ಕಾರ್ಯಕರ್ತ ಗುರುನಾಥ ವಡ್ಡೆ ಮಾತನಾಡಿ, ಗ್ರಾಮೀಣ ಪ್ರದೇಶದ ಜನರಿಗೆ ಕನ್ನಡ ಮಾತ್ರ ಅರ್ಥವಾಗುತ್ತದೆ. ಮತ್ತೊಂದೆಡೆ, ಸರ್ಕಾರಿ ವ್ಯವಹಾರಗಳು, ಪತ್ರವ್ಯವಹಾರಗಳು ಇತರ ಸಂವಹನಗಳಲ್ಲಿ ಕನ್ನಡವನ್ನು ವ್ಯಾಪಕವಾಗಿ ಬಳಸಲಾಗಿದೆ ಎಂದು ಸರ್ಕಾರಿ ವಕೀಲರು ಸಲ್ಲಿಸಿದರು. ಸರ್ಕಾರಿ ವ್ಯವಹಾರಗಳಲ್ಲಿ ಯಾವ ಭಾಷೆಯನ್ನು ಬಳಸಬೇಕು ಎಂಬುದು ಮೂಲಭೂತವಾಗಿ ನೀತಿ, ಅನುಕೂಲತೆ ಮತ್ತು ವಾಸ್ತವಿಕತೆಯ ವಿಷಯವಾಗಿದೆ. ರಾಜ್ಯದ ಸ್ಥಳೀಯ ಭಾಷೆಯಾದ ಕನ್ನಡವನ್ನು ಉತ್ತೇಜಿಸಬೇಕು ಮತ್ತು ಪ್ರಾಮುಖ್ಯತೆ ನೀಡಬೇಕಾಗಿದ್ದರೂ, ಕನ್ನಡವನ್ನು ಬಳಸುವಂತೆ ರಾಜ್ಯ ಸರ್ಕಾರ ಮತ್ತು ಅದರ ಅಧಿಕಾರಿಗಳಿಗೆ ಸಕಾರಾತ್ಮಕವಾಗಿ ನಿರ್ದೇಶಿಸುವ ಮೂಲಕ ಪ್ರಸ್ತುತ ಸಾರ್ವಜನಿಕ ಹಿತಾಸಕ್ತಿ ಅರ್ಜಿಯನ್ನು ಪರಿಗಣಿಸುವುದನ್ನು ಇದು ಸಮರ್ಥಿಸುವುದಿಲ್ಲ ಎಂದು ನ್ಯಾಯಪೀಠ ಹೇಳಿದೆ.

## ಕ.ಕ. ಭಾಗದ ಅತೃಪ್ತ ಜಾತಿಗಳನ್ನು ಓಲೈಸಲು ನಾಯಕರ ತಂಡ ರಚಿಸಿ

• ಉದಯವಾಹಿನಿ, ಬೆಂಗಳೂರು

ಕಲ್ಯಾಣ ಕರ್ನಾಟಕ ಭಾಗದಲ್ಲಿ ಪಕ್ಷವನ್ನು ಬಲಪಡಿಸಲು ಸೂಕ್ತ ಕ್ರಮಗಳನ್ನು ತೆಗೆದುಕೊಳ್ಳುವಂತೆ ಕೇಂದ್ರ ಸಚಿವ ನಿತಿನ್ ಗಡ್ಕರಿ ಅವರು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಸೇರಿದಂತೆ ಬಿಜೆಪಿ ನಾಯಕರಿಗೆ ಸೂಚಿಸಿದ್ದಾರೆ ಎಂದು ವರದಿಯಾಗಿದೆ.

ಕಲ್ಯಾಣ ಕರ್ನಾಟಕ ಪ್ರದೇಶದ ಅತೃಪ್ತ ಸಮುದಾಯಗಳೊಂದಿಗೆ ತೊಡಗಿಸಿಕೊಳ್ಳಲು ಜಾತಿ ಆಧಾರಿತ ನಾಯಕರ ತಂಡಗಳನ್ನು ರಚಿಸುವಂತೆ ಮತ್ತು ಸ್ಥಳೀಯ ಸಂಸ್ಥೆಗಳ ಚುನಾವಣೆಗೆ ಮುಂಚಿತವಾಗಿ ಅವರ ವಿಶ್ವಾಸವನ್ನು ಮರಳಿ ಪಡೆಯಲು ಈ ಸಮುದಾಯಗಳ ಸ್ಥಳೀಯ ನಾಯಕರೊಂದಿಗೆ ಒಟ್ಟಾಗಿ ಕೆಲಸ ಮಾಡುವಂತೆ ಗಡ್ಕರಿ ವಿಜಯೇಂದ್ರ ಅವರಿಗೆ ಸೂಚಿಸಿದ್ದಾರೆ ಎಂದು ಹಿರಿಯ ಅಧಿಕಾರಿಯೊಬ್ಬರು ತಿಳಿಸಿದರು.

ಬಿಜೆಪಿ ಈ ಪ್ರದೇಶದಲ್ಲಿ ಬಹುಸಂಖ್ಯಾತ ಸಮುದಾಯದ (ಲಿಂಗಾಯತ) ವಿಶ್ವಾಸವನ್ನು ಉಳಿಸಿಕೊಳ್ಳಬಹುದು, ಆದರೆ ಕೆಳಜಾತಿಗಳಾದ ಒಬಿಸಿಗಳು, ಸೂಕ್ಷ್ಮ ಒಬಿಸಿಗಳು ಮತ್ತು ದಲಿತರ ಹೆಚ್ಚಿನ ಭಾಗವನ್ನು ಸೆಳೆಯುವಲ್ಲಿ ವಿಫಲವಾಗಿದೆ ಎಂದು ವಿಜಯೇಂದ್ರ ಗಡ್ಕರಿ ಅವರಿಗೆ ತಿಳಿಸಿದ್ದಾರೆ ಎಂದು ವರದಿಯಾಗಿದೆ.

ಗ್ಯಾರಂಟಿ ಯೋಜನೆಗಳ ಅನುಷ್ಠಾನದಿಂದಾಗಿ ಮತ್ತು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಈ ಪ್ರದೇಶದವರಾಗಿರುವುದರಿಂದ ಈ ಸಮುದಾಯಗಳು ಕಾಂಗ್ರೆಸ್ ಅನ್ನು ಬೆಂಬಲಿಸಿದವು.



> ಸಭೆಯ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಕೋರ್ ಕಮಿಟಿ ಸದಸ್ಯ ಸಿ.ಟಿ.ರವಿ, ಬೆಲೆ ಏರಿಕೆ, ಮುಡಾ ಹಗರಣ, ವಾಲ್ಮೀಕಿ ಎಸ್ಟಿ ಅಭಿವೃದ್ಧಿ ಮಂಡಳಿ ಹಗರಣ ಮುಂತಾದ ವಿಷಯಗಳ ಬಗ್ಗೆ ಶಾಸಕಾಂಗದ ಒಳಗೆ ಮತ್ತು ಹೊರಗೆ ಆಡಳಿತಾರೂಢ ಕಾಂಗ್ರೆಸ್‌ವಿರುದ್ಧ ಹೋರಾಡಲು ಪಕ್ಷ ನಿರ್ಧರಿಸಿದೆ ಎಂದು ಹೇಳಿದರು.

# ಮತ್ತೆ 21 ಐಎಎಸ್ ಅಧಿಕಾರಿಗಳು ವರ್ಗಾವಣೆ!

## ಲೋಕಸಭೆ ಚುನಾವಣೆ ಮುಗಿಯುತ್ತಿದ್ದಂತೆ ಸಿದ್ದರಾಮಯ್ಯ ಸರ್ಕಾರ ಆಡಳಿತ ವರ್ಗದಲ್ಲಿ ಮೇಜರ್ ಸರ್ಜರಿ


• ಉದಯವಾಹಿನಿ, ಬೆಂಗಳೂರು

ಲೋಕಸಭೆ ಚುನಾವಣೆ ಮುಗಿದ ಬಳಿಕ ಕರ್ನಾಟಕ ಸರ್ಕಾರದ ಆಡಳಿತ ವರ್ಗದಲ್ಲಿ ಬಹಳ ದೊಡ್ಡ ಬದಲಾವಣೆ ನಡೆಯುತ್ತಿದೆ. ಸಿದ್ದರಾಮಯ್ಯ ಸರ್ಕಾರ 25 ಐಪಿಎಸ್ ಅಧಿಕಾರಿಗಳನ್ನು ವರ್ಗಾವಣೆ ಮಾಡಿ ಆದೇಶ ಹೊರಡಿಸಿತ್ತು. ಇದೀಗ, ಮತ್ತೆ ಕರ್ನಾಟಕ ಸರ್ಕಾರ 21 ಐಎಎಸ್ ಅಧಿಕಾರಿಗಳನ್ನು ವರ್ಗಾವಣೆ ಮಾಡಿ ಆದೇಶ ಹೊರಡಿಸಿದೆ.

ಲೋಕಸಭೆ ಚುನಾವಣೆ ಮುಗಿಯುತ್ತಿದ್ದಂತೆ ಸಿದ್ದರಾಮಯ್ಯ ಸರ್ಕಾರ ಆಡಳಿತ ವರ್ಗದಲ್ಲಿ ಮೇಜರ್‌ರೂ.ಸರ್ಜರಿ ಮಾಡುತ್ತಿದ್ದು, ಕರ್ನಾಟಕ ಸರ್ಕಾರ 21 ಐಎಎಸ್ ಅಧಿಕಾರಿಗಳನ್ನು ವರ್ಗಾವಣೆ ಮಾಡಿ ಆದೇಶ ಹೊರಡಿಸಿದೆ. ಮುಡಾ ಹಗರಣ ಬಯಲು ಮಾಡಿದ ಮೈಸೂರು ಜಿಲಾಧಿಕಾರಿ ಕೆವಿ ರಾಜೇಂದ್ರ ಅವರನ್ನು ವರ್ಗಾವಣೆ ಮಾಡಲಾಗಿದೆ.

ವರ್ಗಾವಣೆ ಮಾಡಿ ಆದೇಶ

ಕೆವಿ ರಾಜೇಂದ್ರ, ಸೇರಿದಂತೆ 21 ಐಎಎಸ್ (ಖಂಖ) ಅಧಿಕಾರಿಗಳನ್ನು ವರ್ಗಾವಣೆ ಮಾಡಿ ಸರ್ಕಾರ ಆದೇಶ ಹೊರಡಿಸಿದೆ. ಮೈಸೂರು ಜಿಲ್ಲಾಧಿಕಾರಿ ಕೆ.ವಿ.ರಾಜೇಂದ್ರ ಅವರನ್ನು ಪ್ರವಾಸೋದ್ಯಮ ನಿರ್ದೇಶಕರಾಗಿ ಬೆಂಗಳೂರಿಗೆ ವರ್ಗಾವಣೆ ಮಾಡಲಾಗಿದೆ. ಮೈಸೂರು ಜಿಲ್ಲಾಧಿಕಾರಿಯಾಗಿ ಲಕ್ಷ್ಮೀಕಾಂತ್‌ರೂ.ರೆಡ್ಡಿ ಅವರನ್ನು ನೇಮಕ ಮಾಡಲಾಗಿದೆ. ಇನ್ನು, ನೂತನ ಜಾಗಗಳಿಗೆ ಕೂಡಲೇ ರಿಪೋರ್ಟ್ ಮಾಡಿಕೊಳ್ಳುವಂತೆ ರಾಜ್ಯ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ ಸಹಾಯಕ ಕಾರ್ಯದರ್ಶಿ ಯುಕೇಶ್ ಕುಮಾರ್ ಎಸ್. ನಿರ್ದೇಶಿಸಿದ್ದಾರೆ.





### ವರ್ಗಾವಣೆಯಾದ ಅಧಿಕಾರಿಗಳು

- ಡಾ ರಾಮ್ ಪ್ರಸಾತ್ ಮನೋಹರ್ ವಿ.: ನಗರಾಭಿವೃದ್ಧಿ ಇಲಾಖೆ ಹೆಚ್ಚುವರಿ ಕಾರ್ಯದರ್ಶಿ, ಅಧ್ಯಕ್ಷರು, ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ, ಬೆಂಗಳೂರು.
- ನಿತೇಶ್ ಪಾಟೀಲ್: ನಿರ್ದೇಶಕರು ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಉದ್ಯಮಗಳು ಇಲಾಖೆ, ಬೆಂಗಳೂರು.
- ಡಾ. ಅರುಂಧತಿ ಚಂದ್ರಶೇಖರ್: ಆಯುಕ್ತೆ ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು
- ಜ್ಯೋತಿ ಕೆ: ಆಯುಕ್ತೆ ಜವಳಿ ಅಭಿವೃದ್ಧಿ ಮತ್ತು ಕೈಮಗ್ಗ ಮತ್ತು ಜವಳಿ ಇಲಾಖೆ ನಿರ್ದೇಶಕರು, ಬೆಂಗಳೂರು.
- ಶ್ರೀಧರ ಸಿಎನ್: ನಿರ್ದೇಶಕರು, ಸಾಮಾಜಿಕ ಲೆಕ್ಕ ಪರಿಶೋಧನೆ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
- ರಾಮ್ ಪ್ರಸಾತ್ ಮನೋಹರ್: ವ್ಯವಸ್ಥಾಪಕರು ನಿರ್ದೇಶಕರು, ಕರ್ನಾಟಕ ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮ, ಬೆಂಗಳೂರು.
- ಚಂದ್ರಶೇಖರ ನಾಯಕ ಎಲ್: ಆಯುಕ್ತರು ವಾಣಿಜ್ಯ ತೆರಿಗೆಗಳ ಹೆಚ್ಚುವರಿ (ಜಾರಿ), ಬೆಂಗಳೂರು.
- ವಿಜಯಮಹಾಂತೇಶ ಬಿ ದಾನಮ್ಮನವರ್: ಉಪ ಆಯುಕ್ತ, ಹಾವೇರಿ ಜಿಲ್ಲೆ
- ಗೋವಿಂದ ರೆಡ್ಡಿ: ಉಪ ಆಯುಕ್ತ, ಬೀದರ್
- ರಘುನಂದನ್ ಮೂರ್ತಿ: ಆಯುಕ್ತರು ಖಜಾನೆಗಳು ಮತ್ತು ಲೆಕ್ಕಪತ್ರ ಇಲಾಖೆ, ಬೆಂಗಳೂರು.
- ಡಾ. ಗಂಗಾಧರಸ್ವಾಮಿ ಜಿ ಎಂ: ಉಪ ಆಯುಕ್ತ , ದಾವಣಗೆರೆ ಜಿಲ್ಲೆ
- ನಿತೀಶ್ ಕೆ: ಉಪ ಆಯುಕ್ತ, ರಾಯಚೂರು ಜಿಲ್ಲೆ
- ಮೊಹಮ್ಮದ್ ರೋಶನ್: ಉಪ ಆಯುಕ್ತ, ಬೆಳಗಾವಿ ಜಿಲ್ಲೆ
- ಶಿಲ್ಪಾ ಶರ್ಮಾ: ಉಪ ಆಯುಕ್ತೆ, ಬೀದರ್ ಜಿಲ್ಲೆ
- ಡಾ ದಿಲೀಶ್ ಸಸಿ: ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಸಿಟಿಜನ್ ಸೇವೆಗಳ ಎಲೆಕ್ಟ್ರಾನಿಕ್ ವಿತರಣೆ (ಇಆಅಖ), ಸಿಬ್ಬಂದಿ ಇಲಾಖೆ ಮತ್ತು ಆಡಳಿತಾತ್ಮಕ ಸುಧಾರಣೆಗಳು (ಇ-ಆಡಳಿತ) ಕೇಂದ್ರ, ಬೆಂಗಳೂರು.
- ಲೋಖಂಡೆ ಸ್ನೇಹಲ್ ಸುಧಾಕರ್: ನಿರ್ದೇಶಕ, ಕರ್ನಾಟಕ ವಿದ್ಯುತ್ ವ್ಯವಸ್ಥಾಪಕ ಕಾರ್ಖಾನೆ ಲಿಮಿಟೆಡ್
- ಶ್ರೀರೂಪ: ಆಯುಕ್ತೆ, ಪಶುಪಾಲನಾ ಪಶುವೈದ್ಯಕೀಯ ಸೇವಾ ಇಲಾಖೆ, ಬೆಂಗಳೂರು, ನಿರ್ದೇಶರು ಕರ್ನಾಟಕ ರಾಜ್ಯ ರೇಷ್ಮೆ ಕೃಷಿ ಸಂಶೋಧನೆ ಅಭಿವೃದ್ಧಿ ಸಂಸ್ಥೆ
- ಗಿಟ್ಟೆ ಮಾಧವ್ ವಿಠ್ಠಲ್ ರಾವ್: ಪ್ರಧಾನ ವ್ಯವಸ್ಥಾಪಕರು, (ಪುನರ್ವಸತಿ, ಪುನರ್ವಸತಿ), ಬಾಗಲಕೋಟೆ.
- ಹೇಮಂತ್ ಎನ್: ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಶಿವಮೊಗ್ಗ ನೊಂಗ್ಜೈ ಮೊಹಮ್ಮದ್ ಅಲಿ ಅಕ್ರಮ್ ಶಾ: ಮುಖ್ಯ ಕಾರ್ಯನಿರ್ವಾಹಕ, ವಿಜಯನಗರ ಜಿಲ್ಲೆ ಜಿಲ್ಲಾ ಪಂಚಾಯತ್ ಇಲಾಖೆ.

# ಬೆಲೆ ಏರಿಕೆ ಬಿಸಿ, ಹಾಲು ಉತ್ಪಾದಕರಿಗೆ ರೂ.2 ಕಡಿತದ ಬರೆ

## ಸಹಕಾರ ಹಾಲು ಒಕ್ಕೂಟ (ಕೋಚಿಮುಲ್) ಆದೇಶ, ಉಳಿದ ಒಕ್ಕೂಟಗಳಿಗೆ ಹೋಲಿಸಿದರೆ ನಮ್ಮಲ್ಲೇ ರೈತರಿಗೆ ಸಿಗುವ ದರ ಹೆಚ್ಚು

• ಉದಯವಾಹಿನಿ, ಕೋಲಾರ

ರೈತರಿಂದ ಖರೀದಿಸುವ ಹಾಲಿನ ದರವನ್ನು ಲೀಟರ್‌ಗೆ ರೂ.2 ಕಡಿತಗೊಳಿಸಿ ಕೋಲಾರ-ಚಿಕ್ಕಬಳ್ಳಾಪುರ ಜಿಲ್ಲಾ ಸಹಕಾರ ಹಾಲು ಒಕ್ಕೂಟ (ಕೋಚಿಮುಲ್) ಆದೇಶ ಹೊರಡಿಸಿದೆ.

ಈ ಆದೇಶ ಶುಕ್ರವಾರ (ಜುಲೈ 5) ಬೆಳಗ್ಗೆಯಿಂದಲೇ ಜಾರಿಗೆ ಬರಲಿದ್ದು, ಕೋಲಾರ-ಚಿಕ್ಕಬಳ್ಳಾಪುರ ಜಿಲ್ಲೆಗಳ ಹೈನುಗಾರರಿಗೆ ಆರ್ಥಿಕ ಹೊಡೆತ ಬೀಳಲಿದೆ.

ಇದುವರೆಗೆ ಹಾಲು ಉತ್ಪಾದಕರಿಗೆ ಲೀಟರ್ ಹಾಲಿಗೆ ರೂ.33.40 ಹಾಗೂ ಸಂಘಗಳಿಗೆ ರೂ.35.85 ಸಿಗುತಿತ್ತು. ಲೀಟರ್‌ಗೆ ?2 ಕಡಿಮೆ ಆಗಿರುವುದರಿಂದ ಇನ್ನು ಮುಂದೆ ರೈತರಿಗೆ ರೂ.31.40 ಹಾಗೂ ಸಂಘಗಳಿಗೆ ರೂ. 33.85 ಸಿಗಲಿದೆ. ಗುರುವಾರ (ಜುಲೈ4) ನಡೆದ ಕೋಚಿಮುಲ್ ಆಡಳಿತ ಮಂಡಳಿ ಸಭೆಯಲ್ಲಿ ಈ ನಿರ್ಧಾರ ಕೈಗೊಳ್ಳಲಾಗಿದೆ. ಒಕ್ಕೂಟದ ಹಾಲು ಶೇಖರಣೆ ಹಾಗೂ ಆರ್ಥಿಕ ಪರಿಸ್ಥಿತಿ ಕುರಿತು ಚರ್ಚಿಸಿ ರೂ.2 ಕಡಿತಗೊಳಿಸಲಾಗಿದೆ. ಮಳೆಗಾಲದಲ್ಲಿ ಹಾಲಿನ ಉತ್ಪಾದನೆ ಹೆಚ್ಚಾಗಿರುವ ಕಾರಣ ದರ ಕಡಿಮೆ ಮಾಡುವುದು ಸಹಜ ಎಂದು ಕೋಚಿಮುಲ್ ಅಧಿಕಾರಿಗಳು ಸಮರ್ಥಿಸಿಕೊಂಡಿದ್ದಾರೆ. ಹಾಲಿನ ಪುಡಿ ದರ ಕಡಿಮೆಯಾಗಿದ್ದು, ಖರೀದಿಸುವವರೂ ಇಲ್ಲ. ಹೀಗಾಗಿ,



ಉದಯವಾಹಿನಿ ಚಿತ್ರ

**ಕೋಚಿಮುಲ್ ಆಡಳಿತ ಮಂಡಳಿ ಸಭೆ**

ಹಾಲು ತಮ್ಮಲ್ಲೇ ಉಳಿಯುತ್ತಿದೆ ಎಂದಿದ್ದಾರೆ.

ಜುಲೈ 5ರಿಂದಲೇ ಪರಿಷ್ಕೃತ ದರ ಜಾರಿಗೆ ಬರಲಿದೆ. ಈ ವಿಚಾರವನ್ನು ಹಾಲು ಉತ್ಪಾದಕರಿಗೆ ಮನವರಿಕೆ ಮಾಡಬೇಕು. ಹಾಲು ಶೇಖರಣೆ ಮತ್ತು ಗುಣಮಟ್ಟ ಹೆಚ್ಚಿಸಲು ಕ್ರಮ ವಹಿಸಬೇಕು' ಎಂದು ಒಕ್ಕೂಟದ ವ್ಯವಸ್ಥಾಪಕ ನಿರ್ದೇಶಕ ಗೋಪಾಲಮೂರ್ತಿ ಹೊರಡಿಸಿರುವ ಸುತ್ತೋಲೆ ಲಭ್ಯವಾಗಿದೆ. ಮತ್ತೆ ಹಾಲಿನ ದರ ಕಡಿತಗೊಳಿಸಿರುವುದಕ್ಕೆ ಜಿಲ್ಲೆಯ ಹೈನುಗಾರರು, ರೈತ ಮುಖಂಡರು ಆಕ್ರೋಶ ವ್ಯಕ್ತಪಡಿಸಿದ್ದಾರೆ. ರೈತರಿಂದ ಖರೀದಿಸುವ ಹಾಲಿನ ದರದಲ್ಲಿ ಲೀಟರ್‌ಗೆ ರೂ.2 ಕಡಿತ ಮಾಡಿರುವ ಆದೇಶವನ್ನು ಕೂಡಲೇ ವಾಪಸ್ ಪಡೆದು ಒಕ್ಕೂಟದಲ್ಲಿ ನಡೆಯುತ್ತಿರುವ ದುಂದುವೆಚ್ಚಗಳಿಗೆ ಕಡಿವಾಣ ಹಾಕಬೇಕೆಂದು ಒತ್ತಾಯಿಸಿದ್ದಾರೆ. ಜಿಲ್ಲೆಯ ಹೆಚ್ಚಿನ ರೈತರಿಗೆ ಹೈನುಗಾರಿಕೆಯೇ ಜೀವಾಳ. ಇದನ್ನೇ ನಂಬಿಕೊಂಡು ಲಕ್ಷಾಂತರ ಕುಟುಂಬಗಳು ಬದುಕಿವೆ. ಏಕಾಏಕಿ ರೂ.2 ಕಡಿಮೆ ಮಾಡಿರುವ ಒಕ್ಕೂಟ ಈಗ ರೈತರಿಗೆ ಬರೆ ಎಳೆದಿದೆ. ಹಿಂಡಿ, ಬೂಸಾ ಸೇರಿದಂತೆ ಪಶು ಆಹಾರ ಬೆಲೆ ಮಾತ್ರ ಕಡಿಮೆ ಆಗಿಲ್ಲ. ಮೊದಲೇ ಸಂಕಷ್ಟಕ್ಕೆ ಸಿಲುಕಿರುವ ರೈತರಿಗೆ ಬೆಲೆ ಇಳಿಕೆಯಿಂದ ತೊಂದರೆ ಆಗಿದೆ. ಹೈನುಗಾರಿಕೆಗೆ ಹಿನ್ನಡೆಯಾಗಲಿದೆ. ರೂ.5 ಪ್ರೋತ್ಸಾಹಧನವೂ ಸರಿಯಾಗಿ ಸಿಗುತ್ತಿಲ್ಲ' ಎಂದು ಕೋಲಾರ ತಾಲ್ಲೂಕಿನ ತೊಟ್ಲಿ ಗ್ರಾಮದ ಟಿ.ವಿ.ರಮೇಶ್ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಹೈನುಗಾರಿಕೆಯನ್ನೇ ನಂಬಿ ಜೀವನ ಸಾಗಿಸುತ್ತಿರುವವರಿಗೆ ಈ ನಿರ್ಧಾರದಿಂದ ಹೊಡೆತ ಬಿದ್ದಿದೆ ಎಂದು ಹಲವು ಹೈನುಗಾರರು ಅಲವತ್ತುಕೊಂಡಿದ್ದಾರೆ

**ಮಳೆಗಾಲದಲ್ಲಿ ಹಾಲಿನ ಸಂಗ್ರಹ ಪ್ರಮಾಣ ಹೆಚ್ಚಾದಾಗ ರೈತರಿಂದ ಖರೀದಿಸುವ ಹಾಲಿನ ದರ ಕಡಿತಗೊಳಿಸುವುದು, ಬೇಸಿಗೆಯಲ್ಲಿ ಹಾಲಿನ ಉತ್ಪಾದನೆ ಕಡಿಮೆಯಾದಾಗ ಹೆಚ್ಚು ದರ ನೀಡುವುದು ಸಹಜ. ಇನ್ನಿತರ ಒಕ್ಕೂಟಗಳಲ್ಲಿ ಈ ಹಿಂದೆಯೇ ಕಡಿತಗೊಳಿಸಿವೆ. ನಾವು ಈಗ ದರ ಕಡಿತಗೊಳಿಸಿದ್ದು, ಈ ಕಡಿತ ತಾತ್ಕಾಲಿಕ ಅಷ್ಟೆ. ಉತ್ತಮ ಕಾಲ ಕೂಡಿ ಬಂದರೆ ಮತ್ತೆ ಹೆಚ್ಚಿಸುತ್ತೇವೆ. ಉಳಿದ ಒಕ್ಕೂಟಗಳಿಗೆ ಹೋಲಿಸಿದರೆ ನಮ್ಮಲ್ಲೇ ರೈತರಿಗೆ ಸಿಗುವ ದರ ಹೆಚ್ಚು.**

**ಕಳೆದ ವರ್ಷಕ್ಕೆ ಹೋಲಿಸಿದರೆ ಸರಾಸರಿ ರೂ.5 ಹೆಚ್ಚಿಸಿದ್ದೇವೆ. ಹಾಲು ಸಂಗ್ರಹವಾಗುವ ಪ್ರಮಾಣ ನೋಡಿಕೊಂಡು ದರ ಹೆಚ್ಚಿಸಲು ಮುಂದಿನ ದಿನಗಳಲ್ಲಿ ಕ್ರಮ ವಹಿಸುತ್ತೇವೆ. ನಮ್ಮಲ್ಲಿ ಸದ್ಯ ನಿತ್ಯ 12.50 ಲಕ್ಷ ಲೀಟರ್ ಹಾಲು ಸಂಗ್ರಹವಾಗುತ್ತಿದೆ. 1.25 ಲಕ್ಷ ಕೆ.ಜಿ ಮೊಸರು ಸಿಗುತ್ತಿದೆ. ಹೆಚ್ಚು ಹಾಲು ಸಂಗ್ರಹ ಕಾರಣ ಹಾಲಿನ ಪೌಡರ್ ತಯಾರಿಸಲು ಬಳಕೆ ಮಾಡುತ್ತಿದ್ದೇವೆ. ಆದರೆ, ಮಾರುಕಟ್ಟೆಯಲ್ಲಿ ಪೌಡರ್ ದರ ಕಡಿಮೆ ಇದೆ. ಇದರಿಂದ ಒಕ್ಕೂಟಕ್ಕೆ ನಷ್ಟವಾಗುತ್ತದೆ. ಎಲ್ಲಾ ರ ಹಿತದೃಷ್ಟಿಯಿಂದ ದರ ಕಡಿತ ನಿರ್ಧಾರ ಕೈಗೊಳ್ಳಲಾಗಿದೆ**

**-ಗೋಪಾಲಮೂರ್ತಿ, ವ್ಯವಸ್ಥಾಪಕ ನಿರ್ದೇಶಕ, ಕೋಚಿಮುಲ್, ಕೋಲಾರ**

# ಪೊಲೀಸ್ ಪೇದೆ ಎ.ಎಸ್.ರವಿಕುಮಾರ್ ಅಮಾನತು

• ಉದಯವಾಹಿನಿ,ಬಂಗಾರಪೇಟೆ

ಬಂಗಾರಪೇಟೆ ಪೊಲೀಸ್ ಠಾಣೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಪೊಲೀಸ್ ಪೇದೆ ಎ.ಎಸ್. ರವಿಕುಮಾರ್, ಅವರನ್ನು ಕೆಜಿಎಫ್ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ.ಎಂ.ಶಾಂತರಾಜು ಅವರು ಅಮಾನತ್ತುಪಡಿಸಿ ಆದೇಶ ಹೊರಡಿಸಿದ್ದಾರೆ.

ಪಟ್ಟಣದ ಬಂಗಾರಪೇಟೆ ಪೊಲೀಸ್ ಠಾಣೆ ಯ ಕ್ರೈಂ ಬ್ರಾಂಚ್‌ನಲ್ಲಿ ಕಾಣೆಯಾದವರ ಪತ್ತೆಹಚ್ಚುವ ಕೆಲಸದಲ್ಲಿ ಕಾರ್ಯನಿರ್ವಹಿಸುತ್ತಿದ್ದ ಪೇದೆ ಎ.ಎಸ್.ರವಿಕುಮಾರ್, ಸಿ.ಪಿ.ಸಿ.64, ಅವರು ಸೇವೆಯಲ್ಲಿ ಅಶಿಸ್ತು, ನಿರ್ಲಕ್ಷ್ಯತೆ, ಬೇಜವಾಬ್ದಾರಿ , ದುರ್ನಡತೆಯನ್ನು ತೋರ್ಪಡಿಸಿರುವ ಬಗ್ಗೆ ಅಡಿಷನಲ್ ನ್ಯಾಯದೀಶ ಹಾಗೂ ಅಡಿಷನಲ್ ಮುಖ್ಯ ಮೆಟ್ರೋಪಾಲಿಟನ್ ಮ್ಯಾಜಿಸ್ಟ್ರೇಟ್ ಬೆಂಗಳೂರು ಸಿಟಿ, ಸಿ.ಸಿ. ಸಂಖ್ಯೆ: 757/2020ರಲ್ಲಿ ವಾರೆಂಟು ದಿನಾಂಕ: 25.06.2024 ದಸ್ತಗಿರಿ ವಾರೆಂಟು ರೀತ್ಯಾ ಎ.ಎಸ್. ರವಿಕುಮಾರ್, ಪಿ.ಸಿ.64, ಇವರನ್ನು ದಸ್ತಗಿರಿ ಮಾಡಿ ಇವರಿಗೆ 3ತಿಂಗಳ ಕಾಲ ಕಾರಾಗೃಹವಾಸ ಶಿಕ್ಷೆಯನ್ನು ವಿಧಿಸಿದ್ದು, ಪೇದೆ ಎ.ಎಸ್. ರವಿಕುಮಾರ್, ಇಲಾಖೆಯಿಂದ ಪೂರ್ವಾನುಮತಿ ಪಡೆಯದೆ ಖಾಸಗಿ ವ್ಯಕ್ತಿಗಳಿಂದ ಸಾಲದ ರೂಪದಲ್ಲಿ ಹಣವನ್ನು ಪಡೆದುಕೊಳ್ಳುವುದರ ಮೂಲಕ ಖಾಸಗಿ ಹಣಕಾಸಿನ ವ್ಯವಹಾರದಲ್ಲಿ ಭಾಗಿಯಾಗಿ ಮತ್ತು ಅವರು ನೀಡಿದ ಹಣವನ್ನು ಅವರಿಗೆ ವಾಪಸ್ಸು ಮಾಡದೆ ಇದ್ದುದ್ದರಿಂದ, ಇಲಾಖೆಯ ಘನತೆಗೆ ಧಕ್ಕೆಯಾಗುವಂತೆ ನಡೆದು ಕೊಂಡ ಇವರ ವಿರುದ್ಧ ಕರ್ನಾಟಕ ಸಿವಿಲ್ ಸೇವಾ (ನಡತೆ) ನಿಯಮಗಳು, 1966/2021ರ ನಿಯಮ 22ರನ್ವಯ ನಿಯಯದ ಪ್ರಾಧಿಕಾರದ ಪೂರ್ವ ಮಂಜೂರಾತಿಯನ್ನು ಪಡೆಯದೆ




**ಖಾಸಗಿ ವ್ಯಕ್ತಿಗಳಿಂದ ಹಣವನ್ನು ಪಡೆದು ನಡತೆ ನಿಯಮಗಳನ್ನು ಉಲ್ಲಂಘಿಸುವುದರ ಮೂಲಕ ದುರ್ನಡತೆಯನ್ನು ತೋರ್ಪಡಿಸಿರುವುದರಿಂದ, ಅವರ ವಿರುದ್ಧ ದಿನಾಂಕ: 25.06.2024 ರಿಂದ ಜಾರಿಗೆ ಬರುವಂತೆ ಸೇವೆಯಿಂದ ಅಮಾನತ್ತಿನಲ್ಲಿರಿಸಿ ಕೆಜಿಎಫ್ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ.ಎಂ. ಶಾಂತರಾಜು ಅವರು ಆದೇಶಿಸಿದ್ದಾರೆ.**

# ಜಿಲ್ಲೆ ಹೆಸರು ಬದಲಾವಣೆ ಮತ್ತೆ ಮುನ್ನೆಲೆಗೆ

• ಉದಯವಾಹಿನಿ, ರಾಮನಗರ

'ನಾವು ರಾಮನಗರದವರಲ್ಲ, ಬದಲಿಗೆ, ಬೆಂಗಳೂರು ಜಿಲ್ಲೆಯವರು. ಮುಂದೊಂದು ದಿನ ಕನಕಪುರವು ಬೆಂಗಳೂರು ವ್ಯಾಪ್ತಿಗೆ ಸೇರಲಿದೆ...'- ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಕಳೆದ ಅಕ್ಟೋಬರ್‌ನಲ್ಲಿ ಕನಕಪುರ ತಾಲ್ಲೂಕಿನ ಶಿವನಹಳ್ಳಿಯಲ್ಲಿ ನಡೆದಿದ್ದ ಕಾರ್ಯಕ್ರಮವೊಂದರ ಭಾಷಣದಲ್ಲಿ ಹೇಳಿದ್ದ ಮಾತಿದು.

ಈ ಹೇಳಿಕೆ ರಾಮನಗರ ಜಿಲ್ಲೆಯ ಅಸ್ತಿತ್ವ ಹಾಗೂ ನಂತರ ಮರುನಾಮಕರಣ ಕುರಿತ ಚರ್ಚೆಗೆ ಗ್ರಾಸವಾಗಿತ್ತು. ಪರ-ವಿರೋಧಕ್ಕೂ ಕಾರಣವಾಗಿದ್ದ ಆ ಚರ್ಚೆ, ಲೋಕಸಭಾ ಚುನಾವಣೆ ಸಮೀಪಿಸುತ್ತಿದ್ದಂತೆ ಕಾವು ಕಳೆದುಕೊಂಡಿತ್ತು. ಇದೀಗ ಚನ್ನಪಟ್ಟಣ ಉಪ ಚುನಾವಣೆ ಸಮೀಪಿಸುತ್ತಿರುವಾಗ ಎರಡು ದಿನಗಳ ಹಿಂದೆ (ಜೂನ್ 3) ಶಿವಕುಮಾರ್ ಮತ್ತೆ, 'ರಾಮನಗರ ಶೀಘ್ರ ಬೆಂಗಳೂರು ಜಿಲ್ಲೆಗೆ ಸೇರಲಿದೆ. ಜಿಲ್ಲೆಯ ಚನ್ನಪಟ್ಟಣ, ರಾಮನಗರ, ಮಾಗಡಿ ಹಾಗೂ ಕನಕಪುರ ಎಲ್ಲಾವೂ ಬೆಂಗಳೂರು ಜಿಲ್ಲೆಗೆ ಸೇರಲಿವೆ. ಇನ್ನೆರಡು ದಿನ ಕಾದು ನೋಡಿ, ಇದಕ್ಕೆಲ್ಲಾ ಉತ್ತರ ಸಿಗಲಿದೆ...' ಎಂದಿದ್ದಾರೆ. ಸರಿಯಾಗಿ 17 ವರ್ಷಗಳ ಹಿಂದೆ ಬೆಂಗಳೂರು ಗ್ರಾಮಾಂತರ ಜಿಲ್ಲೆಯಿಂದ ಬೇರ್ಪಡಿಸಿ ರಾಮನಗರ ಜಿಲ್ಲೆ ರಚಿಸಿದ್ದಕ್ಕೆ ಶಿವಕುಮಾರ್ ಆರಂಭದಿಂದಲೂ ವಿರೋಧ ವ್ಯಕ್ತಪಡಿಸುತ್ತಲೇ ಇದ್ದಾರೆ. ಇದಕ್ಕೆ, ಅವರ ರಾಜಕೀಯ ವಿರೋಧಿ ಜೆಡಿಎಸ್‌ನ ಎಚ್.ಡಿ. ಕುಮಾರಸ್ವಾಮಿ ಅವರು ಮುಖ್ಯಮಂತ್ರಿಯಾಗಿದ್ದಾಗ ಘೋಷಿಸಿದ್ದು ಒಂದು ಕಾರಣವಾದರೆ, ಜಿಲ್ಲೆಗಿದ್ದ ಬೆಂಗಳೂರು ಎಂಬ ಹೆಸರಿನ ಬ್ರ್ಯಾಂಡ್‌ನ ಕೊಂಡಿ ಕಳಚಿಕೊಂಡಿದ್ದು ಮತ್ತೊಂದು ಕಾರಣ.



# ಪರಂದಾಮಗೆ ಸೇರಿದ ಒಂದು ವರ್ಷದ ಹೋರಿ ಬರೋಬ್ಬರಿ 5 ಲಕ್ಷಕ್ಕೆ ಮಾರಾಟ

• ಉದಯವಾಹಿನಿ, ಬೇತಮಂಗಲ

ಕೇವಲ ಒಂದು ವರ್ಷದ ಹೋರಿ ಬರೋಬ್ಬರಿ 5.05 ಲಕ್ಷಕ್ಕೆ ಮಾರಾಟವಾಗುವ ಮೂಲಕ ಯುವ ರೈತ ಪರಂದಾಮಗೆ ಭರ್ಜರಿ ಲಾಭ ತಂದುಕೊಡುವ ಜೊತೆಗೆ ಸಂತಸ ತಂದಿದೆ. ಮುಖ್ಯವಾಗಿ ಹೇಳಬೇಕೆಂದರೆ ಆಂದ್ರ, ಪ್ರದೇಶ, ತಮಿಳು ನಾಡಿನ ಹೋರಿ ಓಡಿಸುವ ಪಂದ್ಯಗಳಲ್ಲಿ ಬಹುಮಾನ ಗಳಿಸಿ ಪ್ರಸಿದ್ಧಿ ಪಡೆದಿದೆ.

ಕೆಜಿಎಫ್ ತಾಲ್ಲೂಕಿನ ಕಂಗಾಡ್ಲಹಳ್ಳಿ ಗ್ರಾಮ ಪಂಚಾಯಿತಿಯ ಮೋತಕಪಲ್ಲಿ ಗ್ರಾಮದ ಯುವ ರೈತ ಪರಂದಾಮ ಅವರು ಸಾಕಾಣಿಕೆ ಮಾಡಿದ್ದ ಕೇವಲ ಒಂದು ವರ್ಷದ ಹೋರಿ ಬರೋಬ್ಬರಿ 5 ಲಕ್ಷ ಬೆಲೆಗೆ ತಮಿಳು ನಾಡಿನ ರೈತರೊಬ್ಬರಿಗೆ ಮಾರಾಟ ಮಾಡಲಾಗಿದೆ.



ಉದಯವಾಹಿನಿ ಚಿತ್ರ

**ರೈತ ಪರಂದಾಮಗೆ ಭರ್ಜರಿ ಲಾಭ**

ಒಂದು ವರ್ಷದ ಹೋರಿ ಈಗಾಗಲೇ ಆಂದ್ರ ಪ್ರದೇಶ ಎರಡು ಹೋರಿ ಓಡಿಸುವ ಪಂದ್ಯಗಳಲ್ಲಿ ಪಾಲ್ಗೊಂಡು ಒಂದು ಪಂದ್ಯದಲ್ಲಿ ಪ್ರಥಮ ಬಹುಮಾನವಾಗಿ 50 ಸಾವಿರ ನಗದು ಮತ್ತು ಎರಡನೇ ಪಂದ್ಯದಲ್ಲಿ ಎರಡನೇ ಬಹುಮಾನವಾಗಿ 20 ಗ್ರಾಂ ಚಿನ್ನವನ್ನು ಗಳಿಸುವ ಮೂಲಕ ಪ್ರಸಿದ್ಧಿ ಪಡೆದಿತ್ತು. ಎರಡು ಪಂದ್ಯಗಳಲ್ಲಿ ಹೋರಿಯ ವೇಗವನ್ನು ವೀಕ್ಷಣೆ ಮಾಡಿದ್ದ ತಮಿಳು ನಾಡಿನ ರೈತರೊಬ್ಬರು ಮೋತಕಪಲ್ಲಿ ಗ್ರಾಮಕ್ಕೆ ಭೇಟಿ ನೀಡಿ ಯುವ ರೈತ ಪರಂದಾಮ ಅವರಿಂದ ಹೋರಿಯನ್ನು ಉತ್ತಮ ಬೆಲೆಗೆ ಖರೀದಿಸಿದ್ದಾರೆ. ಇತ್ತೀಚಿನ ದಿನಗಳಲ್ಲಿ ಉದ್ಯೋಗ ಹರಿಸಿ ನಗರ ಪ್ರದೇಶಗಳ ಕಡೆಗೆ ತೆರಳುವ ಯುವಕರಿಗೆ ಯುವ ರೈತ ಪರಂದಾಮ ಅವರು ಜಾನುವಾರು ಸಾಕಾಣಿಕೆ ಹಾಗೂ ಕೃಷಿ ಚಟುವಟಿಕೆಯಿಂದ ಸಹ ಉತ್ತಮ ಆದಾಯ ಗಳಿಸಬಹುದು ಎಂದು ಸಾಬೀತು ಪಡಿಸುವ ಮೂಲಕ ಯುವಕರಿಗೆ ಆದರ್ಶವಾಗಿದ್ದಾರೆ.

ಯುವ ರೈತ ಪರಂದಾಮ ಅವರು 6 ತಿಂಗಳ ಹಿಂದೆ ಒಂದು ಜೊತೆ (2 ಹೋರಿ) ಕೇವಲ 35 ಸಾವಿರಕ್ಕೆ ಖರೀದಿಸಿದ್ದರು, ಈಗ ಒಂದು ಹೋರಿಯನ್ನು ಬರೋಬ್ಬರಿ 5 ಲಕ್ಷ ರೂಪಾಯಿಗೆ ಮಾರಾಟ ಮಾಡಲಾಗಿದೆ, ಇನ್ನು ಒಂದು ಹೋರಿಯನ್ನು ಉಳಿಸಿಕೊಂಡು ಸಾಕಾಣಿಕೆ ಮಾಡುತ್ತಿದ್ದಾರೆ. ಯುವ ರೈತ ಪರಂದಾಮ ಅವರ ಪರಿಶ್ರಮ ಮತ್ತು ಸಾಧನೆಗೆ ಗ್ರಾಮಸ್ಥರು ಹಾಗೂ ಸುತ್ತಮುತ್ತಲಿನ ಗ್ರಾಮಸ್ಥರು ಅಭಿನಂದಿಸಿದ್ದಾರೆ

**ಇದೇ ಸಂದರ್ಭದಲ್ಲಿ ಮೋತಕಪಲ್ಲಿ ಗ್ರಾಮದ ಯುವ ರೈತ ಪರಂದಾಮ ರವರು ಸುದ್ದಿಗಾರರೊಂದಿಗೆ ಮಾತನಾಡಿ ತಮ್ಮ ಹಿರಿಯರ ಕಾಲದಿಂದಲೂ ಜಾನುವಾರುಗಳನ್ನು ಸಾಕಾಣಿಕೆ ಮಾಡುವುದು ಸಂಪ್ರದಾಯವಾಗಿದೆ, ಇತ್ತೀಚೆಗೆ ಹೋರಿಗಳನ್ನು ಸಾಕಾಣಿಕೆ ಮಾಡಬೇಕೆಂಬ ಕನಸಿನಿಂದ ಎರಡು ಹೋರಿಗಳನ್ನು ತರಲಾಗಿತ್ತು, ಈಗ ಒಂದು ಹೋರಿಯನ್ನು 5 ಲಕ್ಷಕ್ಕೆ ಮಾರಾಟ ಮಾಡಲಾಗಿದೆ, ನನ್ನ ಸಾಧನೆ ಪರಿಶ್ರಮಕ್ಕೆ ಕುಟುಂಬಸ್ಥರ ಸಹಕಾರ ಹೆಚ್ಚು ಇರುವುದರಿಂದ ಸಾಧ್ಯವಾಗಿದೆ ಎಂದರು.**

# ಯೋಜನೆಗಳ ಅನುಷ್ಠಾನಕ್ಕೆ ಸಾಮಾಜಿಕ ಪರಿಶೋಧನೆ

## ಅತ್ಯಗತ್ಯ : ಉಪಕಾರ್ಯದರ್ಶಿ ನರಸಿಂಹಮೂರ್ತಿ

• ಉದಯವಾಹಿನಿ, ತುಮಕೂರು

ಯಾವುದೇ ಯೋಜನೆ ಪರಿಣಾಮಕಾರಿಯಾಗಿ ಅನುಷ್ಠಾನವಾಗಬೇಕಾದರೆ ಹಾಗೂ ಯೋಜನೆಯ ಸದುಪಯೋಗ ಜನರಿಗೆ ಪಾರದರ್ಶಕವಾಗಿ ತಲುಪಬೇಕಾದರೆ ಸಾಮಾಜಿಕ ಪರಿಶೋಧನೆ ಬಹಳ ಪ್ರಮುಖ ಪಾತ್ರ ವಹಿಸುತ್ತದೆ ಎಂದು ಜಿಲ್ಲಾ ಪಂಚಾಯತಿ ಉಪಕಾರ್ಯದರ್ಶಿ(ಅಭಿವೃದ್ಧಿ) ನರಸಿಂಹಮೂರ್ತಿ ತಿಳಿಸಿದರು.

ಜಿಲ್ಲಾ ಪಂಚಾಯತಿ ಸಭಾಂಗಣದಲ್ಲಿ ನಡೆದ ಸಾಮಾಜಿಕ ಪರಿಶೋಧನೆ ಗ್ರಾಮ ಸಭೆ/ಶಾಲಾ ಸಭೆಗಳ ಅಧ್ಯಕ್ಷತೆವಹಿಸುವ ನೋಡಲ್ ಅಧಿಕಾರಿಗಳಿಗಾಗಿ ಹಮ್ಮಿಕೊಂಡಿದ್ದ ಒಂದು ದಿನದ ತರಬೇತಿ ಕಾರ್ಯಾಗಾರವನ್ನುದ್ದೇಶಿಸಿ ಮಾತನಾಡಿದ ಅವರು, ಕೇಂದ್ರ ಮತ್ತು ರಾಜ್ಯ ಪುರಸ್ಕೃತ ಯೋಜನೆಗಳಾದ ಮಹಾತ್ಮಗಾಂಧಿ ನರೇಗಾ, 15ನೇ ಹಣಕಾಸು ಯೋಜನೆ, ಪ್ರಧಾನ ಮಂತ್ರಿ ಪೋಷಣ್ ಶಕ್ತಿ ಅಭಿಯಾನ ಮತ್ತು ಸಮಗ್ರ ಶಿಕ್ಷಣ ಕರ್ನಾಟಕ ಯೋಜನೆಗಳು ಪಾರದರ್ಶಕವಾಗಿ ಅನುಷ್ಠಾನವಾಗಬೇಕು. ಅನುಷ್ಠಾನದಲ್ಲಿ ಉತ್ತರದಾಯಿತ್ವ ಮತ್ತು ಪಾರರ್ಶಕತೆಯನ್ನು ಕಾಪಾಡಿಕೊಳ್ಳುವ ಸಲುವಾಗಿ ಸಾಮಾಜಿಕ ಪರಿಶೋಧನೆಯು ಕಡ್ಡಾಯವಾಗಿರುತ್ತದೆ ಎಂದರು. ಕಾರ್ಯಾಗಾರದಲ್ಲಿ ಮಹಾತ್ಮಾಗಾಂಧಿ ನರೇಗಾ ಯೋಜನೆ, ನೋಡಲ್ ಅಧಿಕಾರಿಗಳ ಕರ್ತವ್ಯ ಮತ್ತು ಜವಾಬ್ದಾರಿ ಕುರಿತು ಸಾಮಾಜಿಕ ಪರಿಶೋಧನೆ ಜಿಲ್ಲಾ ಕಾರ್ಯಕ್ರಮ ವ್ಯವಸ್ಥಾಪಕ ಕೆ. ಚಂದ್ರಣ್ಣ, 15 ಹಣಕಾಸು ಕುರಿತು ಗಜೇಂದ್ರ, ಪ್ರಧಾನ ಮಂತ್ರಿ ಪೋ?ಣ್ ಶಕ್ತಿ ನಿರ್ಮಾಣ ಕುರಿತು ಶಿಕ್ಷಣಾಧಿಕಾರಿ ಸುಧಾಕರ್, ಸಮಗ್ರ ಶಿಕ್ಷಣ ಕರ್ನಾಟಕ ಯೋಜನೆ ಕುರಿತು ಕ್ಷೇತ್ರ ಶಿಕ್ಷಣಾಧಿಕಾರಿ ಕಾಂತರಾಜು ವಿಷಯ ಮಂಡಿಸಿದರು.



ಉದಯವಾಹಿನಿ ಚಿತ್ರ

**ಜಿಲ್ಲೆಯ ಎಲ್ಲಾ ಗ್ರಾಮ ಪಂಚಾಯತಿಗಳು ಮತ್ತು ಆಯ್ದ 600 ಶಾಲೆಗಳಲ್ಲಿ ಸಾಮಾಜಿಕ ಪರಿಶೋಧನೆ ಕೈಗೊಳ್ಳುತ್ತಿದ್ದು, ಪರಿಶೋಧನೆಯಲ್ಲಿ ಕಡತ ಪರಿಶೀಲನೆ, ಕಾಮಗಾರಿ ಸ್ಥಳ ಪರಿಶೀಲನೆ, ಪ್ರಾಥಮಿಕ ಫಲಾನುಭವಿಗಳನ್ನು ಭೇಟಿ ಮಾಡಿ ಕುಂದುಕೊರತೆಗಳನ್ನು ಆಲಿಸಲಾಗುವುದು ಹಾಗೂ ಗ್ರಾಮ ಸಭೆಯಲ್ಲಿ ಸ್ಥಳೀಯ ಕುಂದುಕೊರತೆಗಳಿಗೆ ಸೂಕ್ತ ಪರಿಹಾರ ಕಂಡುಕೊಳ್ಳಲಾಗುವುದು ಎಂದರು.**

# ಜನರ ಸಮಸ್ಯೆ ಸ್ಥಳದಲ್ಲೇ ಬಗೆಹರಿಸಲು ಡಿ.ಸಿ ಸೂಚನೆ

• ಉದಯವಾಹಿನಿ, ಗೌರಿಬಿದನೂರು

ನಗರದ ಹೊರವಲಯದ ಮಿನಿವಿಧಾನ ಸೌಧದಲ್ಲಿ ಜನತಾ ದರ್ಶನ ಹಮ್ಮಿಕೊಳ್ಳಲಾಗಿತ್ತು. ಜಿಲ್ಲಾಧಿಕಾರಿ ಪಿ.ಎನ್.ರವೀಂದ್ರ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.ನಂತರ ಮಾತನಾಡಿ, ಜನರು ತಮ್ಮ ಅಹವಾಲು ಸ್ವೀಕರಿಸಿ ಸ್ಥಳದಲ್ಲೇ ಕೆಲವು ಸಮಸ್ಯೆ ಬಗೆಹರಿಸಲಾಗುವುದು.ಕೆಲವು ಸಮಸ್ಯೆ ಹಂತ ಹಂತವಾಗಿ ಬಗೆಹರಿಸುವುದಾಗಿ ತಿಳಿಸಿದರು. ವಾಡಿಕೆಗಿಂತ ಹೆಚ್ಚಿನ ಮಳೆಯಾಗುತ್ತಿದ್ದು ರೈತರು ಭೂಮಿ ಸಿದ್ಧತೆ ಮಾಡಿಕೊಂಡಿದ್ದಾರೆ. ಸರ್ಕಾರ ಕೂಡ ಬಿತ್ತನೆ ಬೀಜ, ರಸಗೊಬ್ಬರ ದಾಸ್ತಾನು ಮಾಡಿಕೊಂಡಿದೆ. ರೈತರು ಆತಂಕ ಪಡುವ ಅಗತ್ಯವಿಲ್ಲ. ಹಾಗೆಯೇ ಕಳೆದ ಬಾರಿ ಬೆಳೆ ನಷ್ಟವಾದ ರೈತರಿಗೆ ನೇರವಾಗಿ ಅವರ ಖಾತೆಗೆ ಹಣ ವರ್ಗಾವಣೆಯಾಗುತ್ತಿದೆ. ಸರ್ಕಾರಿ ಜಮೀನು ಭದ್ರತೆಗಾಗಿ ಪ್ರತ್ಯೇಕ ಆಯಪ್ ತಯಾರಿಸಿದ್ದು ಗಡಿಭಾಗ ಗುರುತಿಸಲಾಗುತ್ತಿದೆ. ರೈತರ ಖಾತೆಗಳಿಗೆ ಆಧಾರ್ ಲಿಂಕ್ ಮಾಡುತ್ತಿರುವುದು ಸಹ ಉತ್ತಮ ಪ್ರಗತಿಯಲ್ಲಿದೆ ಎಂದರು. ಈಗ ಎಲ್ಲೆಡೆ ಡೆಂಗಿ ಹರಡುತ್ತಿದೆ. ಪ್ರತಿ ಶುಕ್ರವಾರ ಸಂಬಂಧಪಟ್ಟ ಎಲ್ಲಾ ಅಧಿಕಾರಿಗಳು ಮನೆ ಮನೆಗೆ ತೆರಳಿ ನೀರು ನಿಲ್ಲದಂತೆ ಪರಿಶೀಲನೆ ಮಾಡಲಿದ್ದಾರೆ ಎಂದು ತಿಳಿಸಿದರು.

ಈ ಜನತಾ ದರ್ಶನಕ್ಕೆ ಬಂದಿದ್ದ 30ಕ್ಕೂ ಅರ್ಜಿಗಳನ್ನು ಅಧಿಕಾರಿಗಳ ಸಮ್ಮುಖದಲ್ಲೇ ವಿಲೇ ಮಾಡಲು ಜಿಲ್ಲಾಧಿಕಾರಿ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು.



ಉದಯವಾಹಿನಿ ಚಿತ್ರ

# ಅಣೆಕಟ್ಟು ವ್ಯಾಪ್ತಿಯಲ್ಲಿ ಟ್ರಯಲ್ ಬ್ಲಾಸ್ಟ್ ವಿರೋಧಿಸಿ ಪ್ರತಿಭಟನೆ

• ಉದಯವಾಹಿನಿ, ಮಂಡ್ಯ

ಸಾಕಷ್ಟು ವಿರೋಧದ ನಡುವೆ ಮಂಡ್ಯ ಜಿಲ್ಲೆ ಪಾಂಡವಪುರ ತಾಲ್ಲೂಕಿನ ವಿವಾದಿತ ಬೇಬಿ ಬೆಟ್ಟದಲ್ಲಿ ಟ್ರಯಲ್ ಬ್ಲಾಸ್ಟ್‌ಗೆ ಮಂಡ್ಯ ಜಿಲ್ಲಾಡಳಿತ ಸಕಲ ಸಿದ್ಧತೆ ಮಾಡಿಕೊಂಡಿದೆ. ಈಗಾಗಲೇ ಬೇಬಿಬೆಟ್ಟದಲ್ಲಿ ಐದು ಕಡೆಗಳಲ್ಲಿ ಕುಳಿಗಳನ್ನು ಕೊರೆದು ಇನ್ನು ಎರಡು ಮೂರು ದಿನಗಳಲ್ಲಿ ಪರಿಕ್ಷಾರ್ಥ ಸ್ಫೋಟ ಕೂಡ ನಡೆಯಲಿದೆ.ಇದಕ್ಕೆ ರೈತರು ಸಾಕಷ್ಟು ವಿರೋಧ ವ್ಯಕ್ತಪಡಿಸುತ್ತಿದ್ದಾರೆ.

ಇದರ ಮಧ್ಯ ಕೆ.ಆರ್.ಎಸ್ ಅಣೆಕಟ್ಟು ವ್ಯಾಪ್ತಿಯಲ್ಲಿ ಟ್ರಯಲ್ ಬ್ಲಾಸ್ಟ್ ವಿರೋಧಿಸಿ ಪ್ರತಿಭಟನೆ ನಡೆಸುತ್ತಿದ್ದಾರೆ. ಮಂಡ್ಯದ ಸಂಜಯ್ ವೃತ್ತದಲ್ಲಿ ವಿವಿಧ ಸಂಘಟನೆಗಳಿಂದ ಪ್ರತಿಭಟನೆ ನಡೆಸಿ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಹೌದು ರೈತ ಹೋರಾಟಗಾರ್ತಿ ಸುನಂದಾ ಜಯರಾಂ ನೇತೃತ್ವದಲ್ಲಿ ಪ್ರತಿಭಟನೆ. ಟ್ರಯಲ್ ಬ್ಲಾಸ್ಟ್ ನಡೆಸಲು ಮುಂದಾಗಿರುವ ಜಿಲ್ಲಾಡಳಿತದ ವಿರುದ್ಧ ಆಕ್ರೋಶ ಹೊರಹಕಿದ್ದಾರೆ. ಅಣೆಕಟ್ಟು ವ್ಯಾಪ್ತಿಯಲ್ಲಿ ಟ್ರಯಲ್ ಬ್ಲಾಸ್ಟ್ ನಡೆಸದಂತೆ ಆಗ್ರಹಿಸಿದ್ದಾರೆ. ರಾಜ್ಯ ಸರ್ಕಾರ ಜಿಲ್ಲಾ ಉಸ್ತುವಾರಿ ಸಚಿವರ ವಿರುದ್ಧ ಧಿಕ್ಕಾರ ಕೂಗಿ ಅಸಮಧಾನಟ್ರಯಲ್ ಬ್ಲಾಸ್ಟ್ ನಡೆಸಲು ಮುಂದಾಗಿರುವ ವಿಜ್ಞಾನಿಗಳಿಗೆ ಗೋ ಬ್ಯಾಕ್ ಕೂಗಿ ಆಕ್ರೋಶ ಹೊರಹಕಿದ್ದಾರೆ.

# ದೇವಾಲಯ ಸಮಿತಿಗೆ ಸಮುದಾಯ ಭವನದಲ್ಲೇ ವಸತಿ ಶಾಲೆ!

## ಪ್ರತ್ಯೇಕ ಕೊಠಡಿ ಇಲ್ಲದ ಕಾರಣ ಪರದೆ ಕಟ್ಟಿಕೊಂಡು ಬಟ್ಟೆಬರೆ ಬದಲಾಯಿಸಿಕೊಳ್ಳುವ ಪರಿಸ್ಥಿತಿ

• ಉದಯವಾಹಿನಿ, ಪಾಂಡವಪುರ

ಖಾಸಗಿ ದೇವಾಲಯ ಸಮಿತಿಗೆ ಸೇರಿದ ಸಮುದಾಯ ಭವನವೇ ಹೆಣ್ಣುಮಕ್ಕಳ ವಸತಿ ಶಾಲೆಯಾಗಿ ಮಾರ್ಪಟ್ಟಿದ್ದು, ಮೂಲ ಸೌಕರ್ಯಗಳಿಂದ ವಂಚಿತರಾದ ವಿದ್ಯಾರ್ಥಿನಿಯರ ಅಳಲು ಅಧಿಕಾರಿಗಳಿಗೆ ಕೇಳದಂತಾಗಿದೆ.

ಹೌದು, ತಾಲ್ಲೂಕಿನ ಮಹದೇಶ್ವರಪುರ ಗ್ರಾಮದ ಬಳಿ ಇರುವ ಸಮಾಜ ಕಲ್ಯಾಣ ಇಲಾಖೆಯ ಡಾ.ಬಿ.ಆರ್.

ಅಂಬೇಡ್ಕರ್ ಹೆಣ್ಣುಮಕ್ಕಳ ವಸತಿ ಶಾಲೆಯು ಕಳೆದ 8 ವರ್ಷಗಳಿಂದ ಮಹದೇಶ್ವರ ಸೇವಾ ಸಮಿತಿಗೆ ಸೇರಿದ ಸಮುದಾಯ ಭವನದ ಫಂಕ್ಷನ್ ಹಾಲ್ ಮತ್ತು ಊಟದ ಹಾಲ್‌ನಲ್ಲಿಯೇ ನಡೆಯುತ್ತಿದೆ. ಪಾಠ, ಊಟ, ವಸತಿಗೆ ಪ್ರತ್ಯೇಕ ಕೊಠಡಿಗಳಿಲ್ಲದೆ, ಹಾಲ್‌ನಲ್ಲಿಯೇ ಎಲ್ಲಾ ಚಟುವಟಿಕೆಗಳು ನಡೆಯಬೇಕಿದೆ.

ಪ್ರತ್ಯೇಕ ಕೊಠಡಿ ಇಲ್ಲದ ಕಾರಣ ಪರದೆ ಕಟ್ಟಿಕೊಂಡು ಬಟ್ಟೆಬರೆ ಬದಲಾಯಿಸಿಕೊಳ್ಳುವ ಪರಿಸ್ಥಿತಿ ಹೆಣ್ಣುಮಕ್ಕಳಿಗೆ ಕಿರಿಕಿರಿ ತಂದೊಡ್ಡಿದೆ. ಜೊತೆಗೆ ಗಾಳಿ ಬೆಳಕಿಲ್ಲದೆ ಉಸಿರುಗಟ್ಟುವ ವಾತಾವರಣದಲ್ಲಿಯೇ ಮಕ್ಕಳು ದಿನದೂಡುವಂತಾಗಿದೆ. 2017ರಲ್ಲಿ 50 ಮಂದಿ ಹೆಣ್ಣುಮಕ್ಕಳಿಂದ ಈ ವಸತಿ ಶಾಲೆ ಪ್ರಾರಂಭ ಗೊಂಡಿತು. 6ನೇ ತರಗತಿಯಿಂದ 10ನೇ ತರಗತಿಯವರೆಗೆ ನಡೆಯುತ್ತಿರುವ ಈ ವಸತಿ ಶಾಲೆಯಲ್ಲಿ ಒಟ್ಟು 250 ಹೆಣ್ಣುಮಕ್ಕಳಿಗೆ ಕೇವಲ 9 ಶೌಚಾಲಯ, 7 ಸ್ನಾನದ ಕೊಠಡಿಗಳಿವೆ. ವಸತಿ ಶಾಲೆಯ ಸುತ್ತಲೂ (ಸಮುದಾಯ ಭವನ) ಕಾಂಪೌಂಡ್ ಇಲ್ಲದ ಕಾರಣ ಹಾವುಗಳ ಕಾಟ ಹೆಚ್ಚಳವಾಗಿದೆ. ದುರಂತವೆಂದರೆ ಹೆಣ್ಣುಮಕ್ಕಳ ವಸತಿ ಶಾಲೆಗೆ ಕಾವಲುಗಾರನೇ ಇಲ್ಲ.

ಬಾಡಿಗೆ ಕರಾರು ಮಾಡಿಕೊಂಡಾಗ, ಸೇವಾ ಸಮಿತಿಯವರು ವಸತಿ ಶಾಲೆಗೆ ಮೂಲಸೌಲಭ್ಯಗಳನ್ನು ಒದಗಿಸಿಕೊಡುವುದಾಗಿ ಒಪ್ಪಿಕೊಂಡಿದ್ದರು. ಅದರಂತೆ ಒಂದಿಷ್ಟು ಸೌಲಭ್ಯಗಳನ್ನು ಒದಗಿಸಿ ಕೈತೊಳೆದುಕೊಂಡಿದ್ದಾರೆ. ಈ ಸಮುದಾಯ ಭವನಕ್ಕೆ ಸರ್ಕಾರದ ಕೆ.ಆರ್.ಡಿ.ಎಲ್ ವತಿಯಿಂದ ರೂ. 5 ಲಕ್ಷ ವೆಚ್ಚದಲ್ಲಿ ಶೌಚಾಲಯ ನಿರ್ಮಿಸಿಕೊಟ್ಟಿದೆ.

ಬೆಂಗಳೂರಿನ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ(ಕ್ರೈಸ್) ಸಲಹೆಗಾರ ಎಸ್. ತುಕರಾಮ್ ಅವರು, 'ಪಾಂಡವಪುರ ತಾಲ್ಲೂಕಿನ ಮಹದೇಶ್ವಪುರ ಡಾ.ಬಿ.ಆರ್. ಅಂಬೇಡ್ಕರ್ ಬಾಲಕಿಯರ ವಸತಿ ಶಾಲೆ ಸೇರಿದಂತೆ ಕೆಲವು ವಸತಿ ಶಾಲೆಗಳಲ್ಲಿ ಕನಿಷ್ಠ ಮೂಲಸೌಕರ್ಯಗಳಿಲ್ಲದೆ ಮಕ್ಕಳ ಕಲಿಕಾ ವಾತಾವರಣಕ್ಕೆ ತೊಂದರೆಯಾಗಿದೆ. ಆದ್ದರಿಂದ ತುರ್ತಾಗಿ ಸೂಕ್ತ ಸ್ಥಳಗಳಿಗೆ ಬದಲಾಯಿಸುವಂತೆ, ಅಗತ್ಯ ಸೌಲಭ್ಯ ಒದಗಿಸಬೇಕು' ಎಂದು ವರದಿ ನೀಡಿದ್ದರು.

ಇದರ ಆಧಾರದ ಮೇಲೆ ಮಂಡ್ಯ ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರು ವಿದ್ಯಾರ್ಥಿನಿಯರ ವಾಸ ಮತ್ತು ಕಲಿಕೆಗೆ ಯೋಗ್ಯವಾದಂತಹ ಉತ್ತಮ ಬಾಡಿಗೆ ಕಟ್ಟಡವನ್ನು ಗುರುತಿಸಿ ವಸತಿ ಶಾಲೆಗಳನ್ನು ಕೂಡಲೇ ಸ್ಥಳಾಂತರಿಸಬೇಕೆಂದು ಪ್ರಾಂಶುಪಾಲರಿಗೆ ಪತ್ರ ಬರೆದಿದ್ದರು. ಆದರೂ ಯಾವುದೇ ಪ್ರಯೋಜನವಾಗಿಲ್ಲ.



ಉದಯವಾಹಿನಿ ಚಿತ್ರ

**ಹೆಣ್ಣು ಮಕ್ಕಳಿಗೆ ಕಿರಿಕಿರಿ**

**ಹೊಸಕಟ್ಟಡಕ್ಕೆ ಮಂಜೂರಾಗದ ಅನುದಾನ' ಡಾ.ಬಿ.ಆರ್.ಅಂಬೇಡ್ಕರ್ ಹೆಣ್ಣಮಕ್ಕಳ ವಸತಿ ಶಾಲೆಯ ಕಟ್ಟಡ ನಿರ್ಮಾಣಕ್ಕಾಗಿ 19 ಜುಲೈ 2019ರಲ್ಲಿಯೇ ಮಹದೇಶ್ವರಪುರ ಗ್ರಾಮದ ಬಳಿಯೇ ಸರ್ಕಾರ ಐದು ಎಕರೆ ಜಾಗ ಮಂಜೂರು ಮಾಡಿದೆ. ಆದರೆ ಜಾಗ ಮಂಜೂರಾಗಿ ಐದು ವರ್ಷ ಕಳೆದರೂ ಹೊಸಕಟ್ಟಡ ನಿರ್ಮಾಣಕ್ಕಾಗಿ ಸರ್ಕಾರ ಹಣ ಮಂಜೂರು ಮಾಡಿಲ್ಲ. ಹೊಸ ಕಟ್ಟಡ ನಿರ್ಮಾಣ ಕೂಡ ನೆನೆಗುದಿಗೆ ಬಿದ್ದಿರುವುದಕ್ಕೆ ಕೆಲವು ಪ್ರಗತಿಪರರು ಆಕ್ರೋಶ ವ್ಯಕ್ತಪಡಿಸಿದ್ದಾರೆ.**

**ಬಾಡಿಗೆಗಾಗಿ ಪ್ರಭಾವಿಗಳಿಂದ ಒತ್ತಡ'**

**ವಸತಿ ಶಾಲೆಯನ್ನು ತಾತ್ಕಾಲಿಕವಾಗಿ ಸ್ಥಳಾಂತರಿಸಲು ಹೊಸ ಕಟ್ಟಡವನ್ನು ನೋಡಲಾಗಿದೆ. ಸಮಾಜ ಕಲ್ಯಾಣ ಇಲಾಖೆ ಉಪ ನಿರ್ದೇಶಕರು ವಸತಿ ಶಾಲೆಯ ಸ್ಥಳಾಂತರಕ್ಕೆ ಅನುಮತಿ ನೀಡಿದ್ದಾರೆ. ಆದರೆ ಮಹದೇಶ್ವರ ಸೇವಾ ಸಮಿತಿಯವರು ಪ್ರಭಾವಿ ವ್ಯಕ್ತಿಗಳ ಮೂಲಕ ಒತ್ತಡ ತಂದು ಸ್ಥಳಾಂತರಗೊಳ್ಳದಂತೆ ನೋಡಿಕೊಂಡಿದ್ದಾರೆ. ಏಕೆಂದರೆ ಪ್ರತಿ ತಿಂಗಳು ಬರುತ್ತಿರುವ ರೂ 55 ಸಾವಿರ ಬಾಡಿಗೆ ನಿಂತು ಹೋಗುತ್ತದೆ' ಎಂಬುದು ಪೋಷಕರ ಆರೋಪ.**

# ಮಿನಿ ನ್ಯೂಸ್

## ಕೃಷಿ ಮಾಹಿತಿಗಾಗಿ ಸಹಾಯವಾಣಿ ಕೇಂದ್ರ : ಜಿಲ್ಲಾಧಿಕಾರಿಗಳಿಂದ ಚಾಲನೆ

• ಉದಯವಾಹಿನಿ, ತುಮಕೂರು

ಬೆಳೆ ವಿಮೆ, ಬೆಳೆ ಸಮೀಕ್ಷೆ, ಪ್ರಧಾನ ಮಂತ್ರಿ ಕಿಸಾನ್ ಯೋಜನೆ, ಬೆಳೆ ವಿಮಾ ಪರಿಹಾರ ಸೇರಿದಂತೆ ಕೃಷಿ ಇಲಾಖೆಯ ವಿವಿಧ ಯೋ ಜನೆಗಳ ಬಗ್ಗೆ ರೈತರಿಗೆ ಮಾಹಿತಿ ನೀಡಲು ನಗರದ ಜಂಟಿ ಕೃಷಿ ನಿರ್ದೇಶಕರ ಕಚೇರಿಯಲ್ಲಿ ಸ್ಥಾಪಿಸಿರುವ ಸಹಾಯವಾಣಿ ಕೇಂದ್ರಕ್ಕೆ ಶುಕ್ರವಾರ ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಚಾಲನೆ ನೀಡಿದರು. ರೈತರು ಕೃಷಿ ಸಂಬಂಧಿತ ಕಾರ್ಯಕ್ರಮ/ ಯೋಜನೆಗಳ ಮಾಹಿತಿಯನ್ನು ಸಹಾಯವಾಣಿ ಸಂಖ್ಯೆ: 8884006306, 8884006308, 0816-2278474ಕ್ಕೆ ಕರೆ ಮಾಡಿ ಪಡೆಯಬಹುದಾಗಿದೆ. ಸಹಾಯವಾಣಿ ಯು ಬೆಳಿಗ್ಗೆ 10 ರಿಂದ ಸಂಜೆ 5 ಗಂಟೆಯವರೆಗೆ ಕಾರ್ಯನಿರ್ವಹಿಸಲಿದೆ. ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಶಿವಾನಂದ ಬಿ. ಕರಾಳೆ, ಕೃಷಿ ಇಲಾಖೆ ಜಂಟಿ ನಿರ್ದೇಶಕ ರಮೇಶ್, ಉಪ ನಿರ್ದೇಶಕ ಅಶೋಕ್ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.





ಉದಯವಾಹಿನಿ ಚಿತ್ರ

## ಕಾನಿಪ ಧ್ವನಿ ಕೋಲಾರ ಜಿಲ್ಲಾ ಅಸ್ಥಿತ್ವಕ್ಕೆ



ಉದಯವಾಹಿನಿ ಚಿತ್ರ

• ಉದಯವಾಹಿನಿ, ಬಂಗಾರಪೇಟೆ

ಸಭಾಭವನದಲ್ಲಿ ಕಾನಿಪ ಧ್ವನಿ ಸದಸ್ಯರೆಲ್ಲರೂ ಸಭೆ ಸೇರಿ ಇಲ್ಲಿಯವರೆಗೆ ಸಂಘಟನೆಯಲ್ಲಿ ನಡೆದ ಕೆಲ ಘಟನೆಗಳ ಸಾಧಕ ಭಾದಕ ಕುರಿತು ಚರ್ಚೆಯ ನಂತರ ಎಲ್ಲಾ ರ ಸಹಮತದೊಂದಿಗೆ ಪತ್ರಕರ್ತರ ಅಜಾತ ಶತೃ ಕೋಲಾರವಾಣಿ ದಿನಪತ್ರಿಕೆ ಹಾಗೂ ಕೋಲಾರ ವಾರ್ತೆ ವರದಿಗಾರರಾದ ವಿ.ಶಿವಾರೆಡ್ಡಿ ಯವರನ್ನು ಕೋಲಾರ ಜಿಲ್ಲಾಧ್ಯಕ್ಷರನ್ನಾಗಿ ಆಯ್ಕೆ ಮಾಡಿ ಆದೇಶ ಪತ್ರವನ್ನು ಕಾನಿಪ ಧ್ವನಿ ರಾಜ್ಯಾಧ್ಯಕ್ಷರಾದ ಬಂಗ್ಲೆ ಮಲ್ಲಿಕಾರ್ಜುನ ವಿತರಿಸಿದರು. ಇದೇ ಸಂದರ್ಭದಲ್ಲಿ ಕಾನಿಪ ಧ್ವನಿ ಕೆ.ಜಿ.ಎಫ್.ತಾಲ್ಲೂಕು ಅಧ್ಯಕ್ಷರನ್ನಾಗಿ ಕಸ್ಟಮ್ ಎಕ್ಸ್‌ಸೈಜ್ ಪತ್ರಿಕೆಯ ವಿ.ಸಂಪತ್ ಹಾಗೂ ಬಂಗಾರಪೇಟೆಯ ತಾಲ್ಲೂಕು ಅಧ್ಯಕ್ಷರನ್ನಾಗಿ ಶುಭನುಡಿ ಪತ್ರಿಕೆಯ ಎಂ.ಶಿವರಾಜ್ ರವರನ್ನು ಆಯ್ಕೆ ಮಾಡಲಾಯಿತು ಈ ಸಂದರ್ಭದಲ್ಲಿ ಮಾಲೂರು ತಾಲ್ಲೂಕು ಅಧ್ಯಕ್ಷರಾದ ಪಿ.ಎನ್.ದಾಸ್ ಉಪಸ್ಥಿತರಿದ್ದರು.

## ಎಚ್‌ಡಿಕೆ ಜನತಾ ದರ್ಶನ - ವಿವಿಧ ಜಿಲ್ಲೆಗಳಿಂದ ಜನರ ಆಗಮನ

• ಉದಯವಾಹಿನಿ, ಮಂಡ್ಯ

ಕೇಂದ್ರ ಉಕ್ಕು ಮತ್ತು ಬೃಹತ್ ಕೈಗಾರಿಕೆ ಸಚಿವ ಎಚ್.ಡಿ. ಕುಮಾರಸ್ವಾಮಿ ಇಂದು ನಗರದ ಡಾ.ಬಿ.ಆರ್.ಅಂಬೇಡ್ಕರ್ ಭವನದಲ್ಲಿ ಜನತಾದರ್ಶನ ಕಾರ್ಯಕ್ರಮ ನಡೆಸುತ್ತಿದ್ದಾರೆ. ಮೈಸೂರಿನ ಚಾಮುಂಡಿ ಬೆಟ್ಟಕ್ಕೆ ಭೇಟಿ ನೀಡಿ ತಾಯಿ ಚಾಮುಂಡೇಶ್ವರಿ ಆಶೀರ್ವಾದ ಪಡೆದ ಬಳಿಕ ಜನತಾದರ್ಶನದಲ್ಲಿ ಪಾಲ್ಗೊಂಡರು.ಬೆಳಗ್ಗೆ 10 ಗಂಟೆಗೆ ನಡೆಯಬೇಕಿದ್ದ ಕಾರ್ಯಕ್ರಮ ತಡವಾಗಿ ಪ್ರಾರಂಭಗೊಂಡಿದೆ.ಮಂಡ್ಯದ ಸಂಜಯ್ ಸರ್ಕಲ್ ನಲ್ಲಿ ನಡೆಯುತ್ತಿದ್ದ ರೈತರ ಪ್ರತಿಭಟನೆಯಲ್ಲಿ ಪಾಲ್ಗೊಂಡ ಎಚ್‌ಡಿಕೆ ಸರ್ಕಾರದಿಂದ ನೆರವು ಕೊಡಿಸುವ ಭರವಸೆ ನೀಡಿದರು. ಸಾರ್ವಜನಿಕರಲ್ಲಿ ಜನತಾದರ್ಶನದ ಮೇಲೆ ಸಾಕಷ್ಟು ನಿರೀಕ್ಷೆ ಇದ್ದು, ಎಚ್‌ಡಿಕೆ ಕೇಂದ್ರ ಸಚಿವರಾದ ಬಳಿಕ ಮೊದಲ ಬಾರಿಗೆ ಮಂಡ್ಯದಲ್ಲಿ ಜನತಾ ದರ್ಶನ ನಡೆಯುತ್ತಿದೆ. ಪ್ರಸ್ತುತ ಸಾರ್ವಜನಿಕರ ಕುಂದು ಕೊರತೆ ಎಚ್‌ಡಿಕೆ ಆಲಿಸುತ್ತಿದ್ದು, ಸಂಜೆಯವರೆಗೂ ಜನಸಾಮಾನ್ಯರ ಜತೆ ಇದ್ದು ಜನರ ಸಮಸ್ಯೆಗೆ ಪರಿಹಾರ ಸೂಚಿಸಲಿದ್ದಾರೆ.

## ಭಾಗಮಂಡಲ, ಶಾಂತಳ್ಳಿಯಲ್ಲಿ ಮಳೆ

• ಉದಯವಾಹಿನಿ, ಮಡಿಕೇರಿ

ಕೊಡಗು ಜಿಲ್ಲೆಯ ಬಹುತೇಕ ಹೋಬಳಿಗಳಲ್ಲಿ ಬುಧವಾರ ರಾತ್ರಿಯಿಂದ ಗುರುವಾರ ಬೆಳಿಗ್ಗೆಯವರೆಗೂ ಮಳೆ ಸುರಿದಿದೆ. ಭಾಗಮಂಡಲ, ಶಾಂತಳ್ಳಿ, ಮಡಿಕೇರಿಯಲ್ಲಿ ಬಿರುಸಾಗಿದ್ದರೆ, ಉಳಿದೆಡೆ ಸಾಧಾರಣವಾಗಿತ್ತು. ಬುಧವಾರ ಬೆಳಿಗ್ಗೆ 8 ಗಂಟೆಗೆ ಕೊನೆಗೊಂಡಂತೆ ಕಳೆದ 24 ಗಂಟೆಗಳ ಅವಧಿಯಲ್ಲಿ ಮಡಿಕೇರಿ ತಾಲ್ಲೂಕಿನ ಭಾಗಮಂಡಲ, ಸೋಮವಾರಪೇಟೆ ತಾಲ್ಲೂಕಿನ ಶಾಂತಳ್ಳಿ ಹೋಬಳಿ ವ್ಯಾಪ್ತಿಗಳಲ್ಲಿ ತಲಾ 10 ಸೆಂ.ಮೀ ಮಳೆಯಾಗಿದೆ. ಉಳಿದಂತೆ, ಪೊನ್ನಂಪೇಟೆ ತಾಲ್ಲೂಕಿನ ಹುದಿಕೇರಿ ಹೋಬಳಿಯಲ್ಲಿ 9, ಮಡಿಕೇರಿ ಹಾಗೂ ಸಂಪಾಜೆಯಲ್ಲಿ ತಲಾ 8, ನಾಪೋಕ್ಲು ಹಾಗೂ ಶ್ರೀಮಂಗಲದಲ್ಲಿ ತಲಾ 6 ಸೆಂ.ಮೀ ಮಳೆಯಾಗಿದೆ. ಮಳೆಯಿಂದ ವಿರಾಜಪೇಟೆ- ಕರಡ ರಸ್ತೆಗೆ ಕೆದಮುಳ್ಳೂರು ಸಮೀಪ ಸಾಕಷ್ಟು ಹಾನಿಯಾಗಿದೆ. ಕೆಲವೆಡೆ ಮಣ್ಣು ಕುಸಿದಿದ್ದು, ಮತ್ತೆ ಕೆಲವೆಡೆ ರಸ್ತೆ ಬಿರುಕು ಬಿಟ್ಟಿದೆ. ಮಡಿಕೇರಿ ಸಮೀಪದ ಅಬ್ಬಿ ಜಲಪಾತದಲ್ಲಿ ಜಲಧಾರೆಯು ಧುಮ್ಮಿಕ್ಕುತ್ತಿರುವ ದೃಶ್ಯ ಗುರುವಾರ ಕಂಡು ಬಂತು

## ಮುಡಾ ಹಗರಣ ಬೆನ್ನಲ್ಲೇ ವರ್ಗಾವಣೆ!

• ಉದಯವಾಹಿನಿ, ಮೈಸೂರು

ನಗರಾಭಿವೃದ್ಧಿ ಪ್ರಾಧಿಕಾರ(ಮುಡಾ)ದಿಂದ ನಿವೇಶನ ಹಂಚಿಕೆಯಲ್ಲಿ ನಡೆದಿದೆ ಎನ್ನಲಾದ ಬಹುಕೋಟಿ ಹಗರಣ ಹೊರಬರುತ್ತಿದ್ದಂತೆಯೆ ಜಿಲ್ಲಾಧಿಕಾರಿ ಡಾ.ಕೆ.ವಿ. ರಾಜೇಂದ್ರ ಅವರನ್ನು ಸರ್ಕಾರ ವರ್ಗಾವಣೆ ಮಾಡಿದೆ.ಅವರು 2022ರ ಅ.27ರಂದು ಜಿಲ್ಲಾಧಿಕಾರಿಯಾಗಿ ಅಧಿಕಾರ ವಹಿಸಿಕೊಂಡಿದ್ದರು. 2 ವರ್ಷಕ್ಕೂ ಮುನ್ನವೇ ಅವರನ್ನು ಹುದ್ದೆಯಿಂದ ದಿಢೀರ್ ವರ್ಗಾವಣೆ ಮಾಡಲಾಗಿದೆ. ಇದು ಚರ್ಚೆಗೆ ಗ್ರಾಸವಾಗಿದೆ. ಮುಡಾಕ್ಕೆ ಅಧ್ಯಕ್ಷರನ್ನು ನೇಮಿಸುವವರೆಗೆ ಅವರು ಆಡಳಿತಾಧಿಕಾರಿಯಾಗಿ ಕಾರ್ಯನಿರ್ವಹಿಸಿದ್ದರು. ಆಗ, 'ಪ್ರಾಧಿಕಾರದಲ್ಲಿ ಕಾನೂನು ಬಾಹಿರವಾಗಿ ಆಸ್ತಿಗಳನ್ನು ಹಂಚಿಕೆ ಮಾಡುತ್ತಿರುವ ಬಗ್ಗೆ ಆಯುಕ್ತರನ್ನು (ಆಗ ಜಿ.ಟಿ.ದಿನೇಶ್‌ಕುಮಾರ್ ಇದ್ದರು) ವಿಚಾರಣೆ ನಡೆಸಬೇಕು. ಅವರ ವಿರುದ್ಧ ಕೇಳಿಬಂದಿರುವ ಪ್ರತಿ ಆರೋಪಗಳನ್ನೂ ಪರಾಮರ್ಶಿಸಲು ಮತ್ತು ಉಂಟಾಗಿರುವ ನಷ್ಟದ ಸಂಬಂಧ ಕ್ರಮ ಕೈಗೊಳ್ಳಲು ಸರ್ಕಾರದ ಹಂತದಲ್ಲಿ ಉನ್ನತ ಮಟ್ಟದ ತನಿಖಾ ತಂಡವನ್ನು ರಚಿಸಬೇಕು. ತಪ್ಪಿತಸ್ಥರ ವಿರುದ್ಧ ಶಿಸ್ತುಕ್ರಮ ಜರುಗಿಸಬೇಕು ಎಂದು ಅಭಿಪ್ರಾಯಿಸಿದೆ' ಎಂದು ಸರ್ಕಾರಕ್ಕೆ ವರದಿ ಸಲ್ಲಿಸಿದ್ದರು.

ಅಂತರಾಳದಿಂದ.. EDITORIAL

# ಲೋಕಸಭಾ ಅಧಿವೇಶನ: ಸದನದಲ್ಲಿ ಕಾಣಿಸಿದ್ದು ಅಪನಂಬಿಕೆ, ವೈಷಮ್ಯ

ಹದಿನೆಂಟನೇ ಲೋಕಸಭೆಯ ಮೊದಲ ಅಧಿವೇಶನವು ಲವಲವಿಕೆಯಿಂದಲೇ ಆರಂಭವಾಯಿತು. ಆಡಳಿತ ಪಕ್ಷ ಮತ್ತು ವಿರೋಧ ಪಕ್ಷಗಳು ಹುರುಪಿನಿಂದಲೇ ಇದ್ದಂತೆ ತೋರಿಸಿಕೊಂಡವು. ಆದರೂ ಕೆಲವೊಮ್ಮೆ ಎರಡೂ ಕಡೆಯವರು ಅತಿರೇಕಕ್ಕೆ ಇಳಿದರೂ ನಡೆಯಿತು. ಎರಡೂ ಕಡೆಯವರು ನಡೆದುಕೊಂಡ ರೀತಿಯಲ್ಲಿ ಗಾಢ ವ್ಯತ್ಯಾಸವನ್ನೂ ಸಾಮ್ಯತೆಯನ್ನೂ ಗುರುತಿಸಬಹುದು. ತಮ್ಮ ಕುರಿತು, ತಮ್ಮ ಚಿಂತನೆಗಳು ಮತ್ತು ನೀತಿಗಳ ಕುರಿತು ಮಾತನಾಡುವುದಕ್ಕಿಂತ ಹೆಚ್ಚಾಗಿ ಇತರರ ಮೇಲೆ ದಾಳಿ ನಡೆಸುವುದಕ್ಕೇ ಹೆಚ್ಚು ಮಹತ್ವ ನೀಡಲಾಗಿದೆ. ಮಾತುಕತೆ, ಸಂವಾದ ನಡೆದೇ ಇಲ್ಲ. ಬದಲಿಗೆ ಕಾಣಿಸಿದ್ದು ಪರಸ್ಪರ ಅಪನಂಬಿಕೆ ಮತ್ತು ವೈಷಮ್ಯ. ಮುಂದಿನ ಅಧಿವೇಶನಕ್ಕೆ ಸಂಬಂಧಿಸಿ ಇದು ಒಳ್ಳೆಯ ಬೆಳವಣಿಗೆ ಅಲ್ಲ.


ಉದಯವಾಹಿನಿ ಚಿತ್ರ

**ಲೋಕಸಭೆ ಚುನಾವಣಾ ಪ್ರಚಾರದ ಸಂದರ್ಭದ ಕಹಿ ನೆನಪುಗಳನ್ನು ಎರಡೂ ಕಡೆಯ ಕೆಲವರು ಸದನಕ್ಕೆ ಹೊತ್ತು ತಂದದ್ದೂ ಹೌದು. ಈ ಅಧಿವೇಶನದ ಪ್ರಮುಖ ಕಾರ್ಯಕ್ರಮವೇ ರಾಷ್ಟ್ರಪತಿಯವರ ಭಾಷಣ ಮತ್ತು ಅದಕ್ಕೆ ವಂದನೆ ಸಲ್ಲಿಸುವ ನಿರ್ಣಯದ ಮೇಲಿನ ಚರ್ಚೆ. ರಾಜಕೀಯವಾಗಿ ತಿರುಗೇಟು ನೀಡಲು ಈ ಸಂದರ್ಭವನ್ನು ಆಡಳಿತ ಮತ್ತು ವಿರೋಧ ಪಕ್ಷಗಳು ಬಳಸಿಕೊಂಡಿವೆ.**

ಈ ಬಾರಿ ಲೋಕಸಭೆಯಲ್ಲಿ ಎದ್ದು ಕಂಡ ಅಂಶವೆಂದರೆ, ಹೆಚ್ಚು ಬಲಯುತವಾದ ಹಾಗೂ ಅದರ ಪರಿಣಾಮವಾಗಿ ಹೊಸ ಆತ್ಮವಿಶ್ವಾಸದಿಂದ ಬೀಗುತ್ತಿರುವ ವಿರೋಧ ಪಕ್ಷ. ಹೊಸದಾಗಿ ವಿರೋಧ ಪಕ್ಷದ ನಾಯಕ ಸ್ಥಾನ ವಹಿಸಿಕೊಂಡ ರಾಹುಲ್ ಗಾಂಧಿ ಅವರ ಮೊದಲ ಭಾಷಣವು ಅದರ ವ್ಯಾಪ್ತಿ ಮತ್ತು ಪ್ರಸ್ತಾಪಿಸಿದ ವಿಚಾರಗಳ ಕಾರಣಕ್ಕೆ ಮೆಚ್ಚುಗೆ ಪಡೆದಿದೆ. ಅವರು ಸರ್ಕಾರಕ್ಕೆ ಕೆಲವು ಗಂಭೀರ ಪ್ರಶ್ನೆಗಳನ್ನು ಕೇಳಿದ್ದಾರೆ. ಆಡಳಿತ ಪಕ್ಷವು ರಾಹುಲ್ ಅವರ ಮಾತನ್ನು ಆಲಿಸಿದ್ದು ವಿಶೇಷ. ಪ್ರಧಾನಿ ನರೇಂದ್ರ ಮೋದಿ ಅವರ ಉತ್ತರವು ಕಾಂಗ್ರೆಸ್‌ಮತ್ತು ಇತರ ವಿರೋಧ ಪಕ್ಷಗಳನ್ನೇ ಗುರಿಯಾಗಿಸಿಕೊಂಡಿತ್ತು. ಆದರೆ, ವಿರೋಧ ಪಕ್ಷಗಳು ಎತ್ತಿರುವ ಪ್ರಶ್ನೆಗಳಿಗೆ ಅವರು ಉತ್ತರ ನೀಡಲಿಲ್ಲ. ಪ್ರಧಾನಿಯು ರಾಹುಲ್ ಅವರ ವೈಯಕ್ತಿಕ ನಿಂದೆಗೆ ಮುಂದಾಗಿದ್ದು ದುರದೃಷ್ಟಕರ. ಪ್ರಧಾನಿಯ ಭಾಷಣಕ್ಕೆ ಪದೇ ಪದೇ ಅಡ್ಡಿಪಡಿಸಿದ ವಿರೋಧ ಪಕ್ಷಗಳ ನಡವಳಿಕೆ ಶೋಭೆ ತರುವಂತಹುದಲ್ಲ. ಸಂಸತ್ತಿನ ಬದಲಾಗಿರುವ ಸಮೀಕರಣಕ್ಕೆ ಮನ್ನಣೆ ನೀಡಲು ತಾವು ಸಿದ್ಧವಿಲ್ಲ ಎಂಬುದನ್ನು ಮೋದಿಯವರು ತಮ್ಮ ಮಾತು ಮತ್ತು ನಡವಳಿಕೆ ಮೂಲಕ ತೋರಿಸಿಕೊಟ್ಟರು. ಸಂಪೂರ್ಣ ಮತ್ತು ಪ್ರಶ್ನಾತೀತ ಅಧಿಕಾರ ತಮಗಿದೆ ಎಂಬ ಈ ಹಿಂದಿನ ಭಾವನೆಯನ್ನೇ ಈ ಬಾರಿಯೂ ಅವರು ತೋರ್ಪಡಿಸಿದರು. ಆದರೆ, ಸುದೀರ್ಘ ಮೌನದ ನಂತರ ಮಣಿಪುರದ ಕುರಿತು ಅವರು ಕೊನೆಗೂ ಮಾತನಾಡಬೇಕಾಯಿತು ಎಂಬುದು ಗಮನಿಸಬೇಕಾದ ಅಂಶ. ಹೊಸ ಸನ್ನಿವೇಶವು ಅವರ ಮೇಲೆ ಒತ್ತಡ ಹೇರಿದೆ ಎಂಬುದಾಗಿ ಇದನ್ನು ಭಾವಿಸಬಹುದು. ಪ್ರಜಾಸತ್ತಾತ್ಮಕವಾದ ಅತ್ಯುನ್ನತ ಮಟ್ಟದ ವಾಗ್ವಾದಕ್ಕೆ ಹೇಳಿಕೆಗಳನ್ನು ದಾಖಲಿಸುವುದಕ್ಕೆ, ನಿಲುವುಗಳನ್ನು ವ್ಯಕ್ತಪಡಿಸುವುದಕ್ಕೆ, ನೀತಿಗಳ ಪರಿಶೀಲನೆಗೆ, ನಿರ್ದಿಷ್ಟ ವಿಚಾರಗಳ ಟೀಕೆಗೆ ಇರುವ ವೇದಿಕೆ ಸಂಸತ್ತು. ಸದನ ಮತ್ತು ಸಭಾಧ್ಯಕ್ಷರು ನಿಷ್ಪಕ್ಷಪಾತವಾಗಿ ಇದ್ದರೆ ಮಾತ್ರ ಇದು ಸಾಧ್ಯ. ಲೋಕಸಭೆ ಸ್ಪೀಕರ್ ಓಂ ಬಿರ್ಲಾ ಮತ್ತು ರಾಜ್ಯಸಭೆಯ ಸಭಾಪತಿ ಜಗದೀಪ್ ಧನಕರ್ ಅವರು ಕಲಾಪವನ್ನು ನಡೆಸುವಾಗ ತಾವು ತಟಸ್ಥವಾಗಿರಬೇಕಾದ ಬಹುದೊಡ್ಡ ಹೊಣೆಗಾರಿಕೆ ತಮಗಿದೆ ಎಂಬುದನ್ನು ಸದಾ ನೆನಪಿನಲ್ಲಿ ಇರಿಸಿಕೊಳ್ಳಬೇಕು. ರಾಹುಲ್ ಅವರ ಭಾಷಣದ ಸ್ವಲ್ಪ ಭಾಗವನ್ನು ಕಡತದಿಂದ ತೆಗೆದುಹಾಕಿದ್ದು ಅನಗತ್ಯವಾಗಿತ್ತು ಮತ್ತು ಇದು ನ್ಯಾಯಯುತವಲ್ಲದ ನಡೆ. ತುರ್ತುಪರಿಸ್ಥಿತಿಯ ಕುರಿತು ನಿರ್ಣಯವೊಂದನ್ನು ಸ್ಪೀಕರ್ ಓದುವುದಕ್ಕೆ ಮುನ್ನ ವಿರೋಧ ಪಕ್ಷಗಳ ಜೊತೆ ಸಮಾಲೋಚನೆ ನಡೆಸಲಿಲ್ಲ. ಸಭಾಧ್ಯಕ್ಷ ಅಥವಾ ಸಭಾಪತಿಯು ಯಾವುದೇ ಒಂದು ಪಕ್ಷಕ್ಕೆ ಸೇರಿದವರಲ್ಲ, ಬದಲಿಗೆ ಇಡೀ ಸದನದ ಹೊಣೆಯನ್ನು ಹೊತ್ತವರು. ಹಾಗಾಗಿ, ಮಾತು. ನಿರ್ಧಾರ, ನಡವಳಿಕೆ ಮೂಲಕ ವಿರೋಧ ಪಕ್ಷಗಳ ವಿಶ್ವಾಸವನ್ನು ಅವರು ಸದಾ ಉಳಿಸಿಕೊಳ್ಳಬೇಕು.

## ಪ್ರಯಾಣಿಕರ ಕಿರಿಕಿರಿಗಳಿಗೆ ಮುಕ್ತಿಹಾಡಲು ಕೆಎಸ್‌ಆರ್‌ಟಿಸಿ ಬಿಗ್ ಪ್ಲಾನ್ : ಹೊಸ ವ್ಯವಸ್ಥೆ ಜಾರಿ

• ಉದಯವಾಹಿನಿ, ಬೆಂಗಳೂರು

ಟಿಕೆಟ್ ಕೊಡುವ ಸಂದರ್ಭದಲ್ಲಿ ಪ್ರಯಾಣಿಕರು ಮತ್ತು ಕಂಡಕ್ಟರ್‌ಗಳ ಮಧ್ಯೆ ಚಿಲ್ಲರೆಗಾಗಿ ಯಾವಾಗಲೂ ಜಗಳ ನಡೆಯುತ್ತಲೇ ಇರುತ್ತದೆ. ಈ ರೀತಿಯ ಕಿರಿಕಿರಿಗಳಿಗೆ ಮುಕ್ತಿಹಾಡಲು ಕೆಎಸ್‌ಆರ್‌ಟಿಸಿ ಮುಂದಾಗಿದೆ.

ಗೂಗಲ್ ಪೇ, ಫೋನ್ ಪೇ, ಪೇಟಿಎಂ ಮೂಲಕ ಹಣ ಪಾವತಿಸಲು ಪ್ರಯಾಣಿಕರಿಗೆ ಅವಕಾಶ ಕಲ್ಪಿಸುವ ಹೊಸ ವ್ಯವಸ್ಥೆ ಜಾರಿಗೆ ತರಲು ಕೆಎಸ್‌ಆರ್‌ಟಿಸಿ ಮುಂದಾಗಿದೆ.ಶೀಘ್ರದಲ್ಲೇ ಈ ವ್ಯವಸ್ಥೆ ಅನುಷ್ಠಾನಗೊಳ್ಳುವ ನಿರೀಕ್ಷೆ ಇದೆ. ಖಾಸಗಿ ಕಂಪೆನಿಯಿಂದ ಒಂದು ಮಷಿನ್‌ಗೆ ಪ್ರತಿ ತಿಂಗಳು 645 ರೂಪಾಯಿ ಬಾಡಿಗೆ ಆಧಾರದಲ್ಲಿ 10245 ಸಾವಿರ ಇಟಿಎಂ ಟಿಕೆಟ್ ಮಷಿನ್‌ಗಳ ಖರೀದಿಗೆ ಕೆಎಸ್‌ಆರ್‌ಟಿಸಿ ಮುಂದಾಗಿದೆ. ಇದರಿಂದ ಇನ್ಮುಂದೆ ಕೆಎಸ್‌ಆರ್‌ಟಿಸಿ ಬಸ್‌ನಲ್ಲಿ ಗೂಗಲ್ ಪೇ, ಫೋನ್ ಪೇ. ಪೇಟಿಎಂ ಮೂಲಕ ಹಣ ಪಾವತಿ ಮಾಡಿ ಟಿಕೆಟ್ ಪಡೆದು ಪ್ರಯಾಣಿಸಬಹುದಾಗಿದೆ. ಈ ನೂತನ ಮಷಿನ್‌ಗಳಲ್ಲಿ ಕ್ರೆಡಿಟ್ ಕಾರ್ಡ್, ಡೆಬಿಟ್ ಕಾರ್ಡ್‌ಗಳನ್ನು ಬಳಸಿಯೂ ಹಣ ಪಾವತಿ ಮಾಡಬಹುದು.

## ಮಹಾಭಾರತ
### ಸೌಪ್ತಿಕಪರ್ವ



• ಹಿಂದಿನ ಸಂಚಿಕೆಯಿಂದ

ಈ ಕ್ಷಣದಿಂದ ಸಂಜಯನ ದಿವ್ಯದೃಷ್ಟಿ ಹೊರಟುಹೋಯಿತೆಂದು ಹೇಳುವರು. ಉದಯಿಸಿದ ಇಂದಿನ ಸೂರ್ಯನು ಉಳಿದೆಲ್ಲ ದಿನಗಳಿಗಿಂತ ಅತ್ಯಂತ ಭಯಾನಕನಾಗಿದ್ದನು. ಪಾಂಡವರ ಪಾಳೆಯದಲ್ಲಿ ಅಶ್ವತ್ಥಾಮನ ಕಣ್ತಪ್ಪಿಸಿ ಉಳಿದಿದ್ದವನೆಂದರೆ ಧೃಷ್ಟದ್ಯುಮ್ನನ ಸಾರಥಿಯೊಬ್ಬನೇ. ಅವನು ಓಡಿಹೋಗಿ ಯುಧಿಷ್ಠಿರನಿಗೆ ರಾತ್ರಿ ನಡೆದುದೆಲ್ಲವನ್ನೂ ವರದಿ ಮಾಡಿದನು. ಆಘಾತದಿಂದ ಮೂರ್ಛೆಹೋದ ಯುಧಿಷ್ಠಿರನನ್ನು ಸಾತ್ಯಕಿಯು ಹಿಡಿದುಕೊಂಡನು. ಪಾಂಡವರೆಲ್ಲ ಗರಬಡಿದವರಂತಾಗಿದ್ದರು.

ಎಷ್ಟೋ ಹೊತ್ತಿನ ಮೇಲೆ, ಚೇತರಿಸಿಕೊಂಡ ಯುಧಿಷ್ಠಿರನು, ನಕುಲನಿಗೆ ದ್ರೌಪದಿಯನ್ನು ಕರೆತರುವಂತೆ ತಿಳಿಸಿದನು. ಅವನು ರಾಣೀವಾಸದ ಕಡೆ ಓಡಿದನು. ಸೋದರರೊಂದಿಗೆ ಪಾಳೆಯಕ್ಕೆ ನಡೆದ ಯುಧಿಷ್ಠಿರನು ಅಲ್ಲಿಯ ಭೀಕರ ದೃಶ್ಯವನ್ನು ನೋಡಿದನು.ಅವರೆಲ್ಲರೂ ಸತ್ತಿರುವರೆಂದು ನಂಬುವುದಕ್ಕೇ ಆಗಲಿಲ್ಲ. ತಮ್ಮನ್ನೆಲ್ಲ ಈ ಮಹಾಯುದ್ಧದ ಮೂಲಕ ದಾಟಿಸಿದ ಈ ಅಗ್ನಿಪುತ್ರನಾದ ಧೃಷ್ಟದ್ಯುಮ್ನನು ಊಹೆಗೂ ನಿಲುಕದ ಭೀಕರ ರೀತಿಯಲ್ಲಿ ಕೊಲೆ ಮಾಡಲ್ಪಟ್ಟಿರುವುದನ್ನು ನೋಡಿದನು. ದ್ರೌಪದಿಯ ಐವರು ಮಕ್ಕಳೂ ಅಶ್ವತ್ಥಾಮನ ಖಡ್ಗದಿಂದ ಕತ್ತರಿಸಲ್ಪಟ್ಟಿದ್ದರು. ಯುಧಾಮನ್ಯು, ಉತ್ತಮೌಜಸರನ್ನು ಕಂಡು ಅರ್ಜುನ ವಿಲವಿಲನೆ ಒದ್ದಾಡಿ ಹೋದನು. ಭೀಮ ಸಾತ್ಯಕಿ ಇಬ್ಬರೂ ಧೃಷ್ಟದ್ಯುಮ್ನನ ದೇಹದ ಬಳಿ ಕುಳಿತರು. ಯಾರೂ ಯಾರನ್ನೂ ಸಮಾಧಾನ ಮಾಡಲಾಗಲಿಲ್ಲ.

ನಕುಲದ ರಥ ಬರುವ ಶಬ್ದ ಕೇಳಿಸಿತು. ಅವನು ದ್ರೌಪದಿಯನ್ನು ಕೆಳಕ್ಕಿಳಿಸಿದನು. ಎರಡು ಹೆಜ್ಜೆಯಿಟ್ಟ ಅವಳು ಮಕ್ಕಳನ್ನು ನೋಡುತ್ತಲೇ ಭೂಮಿಯ ಮೇಲೆ ಬಿದ್ದುಬಿಟ್ಟಳು. ಅವಳ ದುಃಖ ಹೇಳತೀರದಾಗಿತ್ತು. ವಿಧಿಯನ್ನು ವಿಧವಿಧವಾಗಿ ಬೈದಳು. ತನ್ನ ಸೋದರರ, ಮಕ್ಕಳ ಶರೀರಗಳನ್ನು ಸುತ್ತಲೂ ಇಟ್ಟುಕೊಂಡು ರೋದಿಸುತ್ತಿರುವ ಅವಳನ್ನು ನೋಡುವುದೇ ಬಹು ಹೃದಯವೇಧಕವಾಗಿದ್ದಿತು. ತನ್ನದಾಗಿದ್ದ ಎಲ್ಲಾವನ್ನೂ ಅವಳು ಒಂದೇ ರಾತ್ರಿಯಲ್ಲಿ ಕಳೆದುಕೊಂಡಿದ್ದಳು. ಇಂಥಾದ್ದು ಈ ಹಿಂದೆ ಯಾರಿಗೂ, ಯಾವಾಗಲೂ ಸಂಭವಿಸಿರಲಿಲ್ಲ. ಇದ್ದಕ್ಕಿದ್ದಂತೆ ಅವಳು ಎದ್ದು ನಿಂತಳು. ಕಣ್ಣೊರೆಸಿಕೊಂಡಳು. ಕಣ್ಣುಗಳಿಂದ ಬೆಂಕಿಯುಗುಳುತ್ತ, ಅಶ್ವತ್ಥಾಮನನ್ನು ಕೊಲ್ಲುವವರೆಗೆ ನಾನು ಆಹಾರ ಸ್ವೀಕರಿಸುವುದಿಲ್ಲ; ಇಲ್ಲಿಯೇ ಪ್ರಾಣ ಬಿಡುತ್ತೇನೆ ಎಂದಳು. ಅಶ್ವತ್ಥಾಮ ಚಿರಂಜೀವಿ, ಅವರನ್ನು ಕೊಲ್ಲಲಾಗುವುದಿಲ್ಲ ಎಂದು ಎಲ್ಲಾರೂ ಅವಳಿಗೆ ತಿಳಿಹೇಳಲೆತ್ನಿಸಿದರು. ಆಗ ದ್ರೌಪದಿಯು, ''ನನ್ನ ಸಹೋದರರ ಹಾಗೂ ಮಕ್ಕಳ ಕೊಲೆಯ ಸೇಡನ್ನು ತೀರಿಸಿಕೊಳ್ಳಲೇಬೇಕು. ಅಶ್ವತ್ಥಾಮನ ತಲೆಯಲ್ಲಿ ಒಂದು ಮಣಿ ಇದೆ ಎಂಬುದು ನನಗೆ ಗೊತ್ತು. ಅದನ್ನು ನನಗೆ ತಂದುಕೊಡಿ. ಅದನ್ನು ಅವನಿಂದ ಕಿತ್ತುಕೊಳ್ಳುವುದು ಸಾವಿಗಿಂತ ಕಡಿಮೆಯೇನಲ್ಲ. ಭೀಮ, ನೀನೇ ಇದನ್ನು ನನ್ನ ಪ್ರೀತಿಗಾಗಿ ಮಾಡಬೇಕು ಎಂದಳು.

ಮುಂದುವರಿಯುವುದು...

# ಅದಿತಿಯ ದೈವೀಕ ನಾಟ್ಯ ಸೌಂದರ್ಯ



ಕಲಾ ಸಾಹಿತ್ಯ
ವೈ.ಕೆ. ಸಂಧ್ಯಾ ಶರ್ಮ
ಲೇಖಕರು
ರಂಗಕರ್ಮಿ ಹಾಗೂ ನೃತ್ಯ ನಾಟಕಗಳ ವಿಮರ್ಶಕರು

• ಉದಯವಾಹಿನಿ, ವಿಶೇಷ

ದೇವೀಕಳೆಯಿಂದ ರಾರಾಜಿಸುತ್ತಿದ್ದ ಪುಟ್ಟ ನೃತ್ಯಕಲಾವಿದೆ ಕು. ಅದಿತಿ ಗೋಪಾಲ್ ಅಂದು ಕೆ.ಇ.ಎ. ಪ್ರಭಾತ್ ರಂಗಮಂದಿರದ ವೇದಿಕೆಯಲ್ಲಿ ತನ್ಮಯತೆಯಿಂದ ನರ್ತಿಸಿದ ದೈವೀಕ ನಾಟ್ಯದ ಶೀರ್ಷಿಕೆ 'ನರ್ತಿಸು ಆದಿಶಕ್ತಿ'- ಅನ್ವರ್ಥಕವಾಗಿ ಸಾಕಾರಗೊಂಡಿತು.

'ಚಿತ್ರ ನಾಟ್ಯ ಫೌಂಡೇಶನ್ ನೃತ್ಯಸಂಸ್ಥೆಯ ಸೃಜನಶೀಲ ನೃತ್ಯ ಗುರು ವಿದುಷಿ ಎಲ್.ಜಿ. ಮೀರಾ ನುರಿತ ಗರಡಿಯಲ್ಲಿ ತರಬೇತಿಯನ್ನು ಪಡೆದ ಅದಿತಿ, ತನ್ನ ರಂಗಪ್ರವೇಶದ ಸ್ಮರಣೀಯ ಸಂದರ್ಭದಲ್ಲಿ ಅನೇಕ ದೇವೀ ಕೃತಿಗಳನ್ನು ಭಕ್ತಿಪರವಶತೆಯಿಂದ ಸುಮನೋಹರವಾಗಿ ನರ್ತಿಸಿದಳು.

ತಮ್ಮ ಶಿಷ್ಯೆ ಅದಿತಿಯ ವಯಸ್ಸು ಮತ್ತು ಮನೋಧರ್ಮವನ್ನು ಗಮನದಲ್ಲಿಟ್ಟುಕೊಂಡು ಗುರು ಮೀರಾ, ಅವಳಿಗೆ ತಕ್ಕುದಾದ ಭಕ್ತಿಪ್ರಧಾನ ಕೃತಿಗಳನ್ನೇ ಆಯ್ದುಕೊಂಡು ಸುಂದರ ಪ್ರದರ್ಶನಕ್ಕೆ ಅನುವು ಮಾಡಿದ್ದರು. ಶುಭಾರಂಭದಲ್ಲಿ ಪ್ರಾರ್ಥನಾರೂಪದ ಸಮರ್ಪಣೆಯಾಗಿ, ಆದಿಪೂಜಿತ ಗಣೇಶನನ್ನು 'ಪುಷ್ಪಾಂಜಲಿಯ ನೃತ್ತ ನಮನಗಳ ಮೂಲಕ ಆರಾಧಿಸಿ, ಅನಂತರ 'ನಟೇಶ ಕೌತ್ವಂ'- ಕೃತಿಯಲ್ಲಿ, ನಟರಾಜನ ವೈಶಿಷ್ಯ-ಮಹತ್ವವನ್ನು ನಾನಾ ಭಂಗಿಗಳಲ್ಲಿ ಅಭಿವ್ಯಕ್ತಿಸಿದಳು. ಮುಂದೆ- ಅದಿತಿ ನಗುಮೊಗದಿಂದ ಪ್ರಸ್ತುತಪಡಿಸಿದ 'ಸರಸ್ವತಿ ಅಲರಿಪು' ( ಖಂಡಜಾತಿ ) ಶಿರೋ ಭೇದ, ದೃಷ್ಟಿ-ಗ್ರೀವ ಭೇದಗಳಿಂದ ಕೂಡಿದ್ದು ನೃತ್ಯವ್ಯಾಕರಣದ ಬಹತೇಕ ಅಂಶಗಳನ್ನೂ ಒಳಗೊಂಡು ವೀಣಾಪಾಣಿ ಸರಸ್ವತಿಯ ವಿವಿಧ ಸುಂದರ ಭಂಗಿಗಳನ್ನು, ಹಸ್ತಮುದ್ರೆಗಳನ್ನು ತನ್ನ ಅಂಗಿಕಾಭಿನಯದಿಂದ ಒಪ್ಪವಾಗಿ ನಿರೂಪಿಸಿದಳು.

**ಸುಂದರ ಪ್ರದರ್ಶನಕ್ಕೆ ಅನುವು**

'ಜತಿಸ್ವರ'ದಲ್ಲಿ ಸರಳ ಜತಿಗಳೊಡನೆ ಕೋದ ಸ್ವರಗಳ ಸುಂದರ ಸಂಗಮವನ್ನು ಸಮರ್ಥವಾಗಿ ನಿರ್ವಹಿಸಿದ ಅದಿತಿ, ಮೀರಾ ಅವರ ನಿಖರ ನಟುವಾಂಗದ ತಾಳಕ್ಕೆ ಅನುಗುಣವಾಗಿ ಹೆಜ್ಜೆ ಗೂಡಿಸಿದಳು. ನಾಟ್ಯದಲ್ಲಿ ಅಭಿನಯ ಮೊದಲು ಕಾಣಿಸಿಕೊಳ್ಳುವ ಕೃತಿ 'ಶಬ್ದಂ'. ರಾಮಾಯಣದ ಕಥೆಯನ್ನು ಅಡಕವಾಗಿ ಹೇಳಲಾದ ತಮಿಳು 'ರಾಮಾಯಣ ಶಬ್ದಂ'ನಲ್ಲಿ ಶಿವಧನಸ್ಸು ಛೇದನಾ, ಸೀತಾ ಕಲ್ಯಾಣ, ಮಾಯಾಜಿಂಕೆಯ ಪ್ರಕರಣ ಮತ್ತು ಮುದ್ರೆಯುಂಗುರ ಪ್ರಸಂಗಗಳು ಸಂಚಾರಿ ಕಥಾನಕದಲ್ಲಿ ಅದಿತಿಯ ಅಭಿನಯ ನಾಟಕೀಯ ಆಯಾಮದಲ್ಲಿ ಅಭಿವ್ಯಕ್ತಿಗೊಂಡಿತು. ಭರತನಾಟ್ಯದ 'ಮಾರ್ಗಂ' ಸಂಪ್ರದಾಯದ ಪ್ರಸ್ತುತಿಯಲ್ಲಿ 'ವರ್ಣ' ಪ್ರಧಾನ ಘಟ್ಟ. ಅದಿತಿ ಅಂದು ಪ್ರಸ್ತುತಪಡಿಸಿದ್ದು ಭಕ್ತಿಪ್ರಧಾನವಾದ 'ಪದವರ್ಣ'. ಅಪರೂಪದ ಕೃತಿ 'ಕೋಳೂರು ಕೊಡಗೂಸು'. ಮೋಹನ ರಾಗ-ಆದಿತಾಳದಲ್ಲಿ ಈ ವರ್ಣವನ್ನು ವಿದುಷಿ ಮೀರಾ ತಾವೇ ರಚಿಸಿ, ನೃತ್ಯಸಂಯೋಜನೆ ಮಾಡಿದ್ದು ವಿಶೇಷವಾಗಿತ್ತು. ಕೋಳೂರಿನ ಪುಟ್ಟ ಶಿವಭಕ್ತೆ ತನ್ನ ಮುಗ್ಧಭಕ್ತಿಯನ್ನು ಸಾಬೀತು ಮಾಡುವ ಜನಪ್ರಿಯವಾದ ಕಥೆಯನ್ನು ಹೊಂದಿದೆ. ಪ್ರತಿದಿನ ತಾಯಿ ಶಿವನಿಗೆ ಹಾಲಿನ ನೈವೇದ್ಯ ಕೊಡುವ ಪದ್ಧತಿ ಕಂಡಿದ್ದ ಮಗು, ತಾನೂ ಶಿವನಿಗೆ ಹಾಲು ಎರೆಯುವ ಹಂಬಲದಿಂದ ಹಾಲನ್ನು ತೆಗೆದುಕೊಂಡು ಹೋಗಿ, ' ಬಾ ಬಾ ನಾಗಭೂಷಣನೇ' ಎಂದು ಶಿವನನ್ನು ಅಕ್ಕರೆಯಿಂದ ಕರೆಯುತ್ತ ಹಾಲು ಸ್ವೀಕರಿಸಲು ಬೇಡಿಕೊಂಡಾಗ ಶಿವಲಿಂಗ ಅಲುಗಾಡುವುದಿಲ್ಲ. ಶಿವ, ಸ್ಥಿರವಾಗಿದ್ದುದನ್ನು ಕಂಡು, ತಾನಿತ್ತ ಹಾಲು ಕುಡಿಯಲೇಬೇಕೆಂದು ಕೂಸು, ನಾನಾ ಬಗೆಯಲ್ಲಿ ಬೇಡಿಕೊಂಡು ಹಟಮಾಡಿ, ಲಿಂಗಕ್ಕೆ ತಲೆಯನ್ನು ಒಡೆದುಕೊಂಡಾಗ, ಆ ಪುಟ್ಟಬಾಲೆಯ ನಿರ್ಮಲ ಪ್ರೀತಿಗೆ ಕರಗಿಹೋದ ಶಿವ ಪ್ರತ್ಯಕ್ಷನಾಗಿ ಹಾಲು ಕುಡಿಯುವ ಸನ್ನಿವೇಶವನ್ನು ಮತ್ತು ಇಡೀ ಪ್ರಕರಣವನ್ನು ಅದಿತಿ ಸೊಗಸಾಗಿ ಕಂಡರಿಸಿದಳು. ಶಿವನನ್ನು ಕಾಣುವ ಸಂಭ್ರಮದ ಖುಷಿಯಿಂದ ರಂಗಾಕ್ರಮಣದಲ್ಲಿ ಕುಣಿಯುತ್ತ ನಲಿಯುತ್ತ ಮುದವಾದ ಅಭಿನಯ ತೋರಿದ ಅದಿತಿ ನೃತ್ತಗಳ ನಿರೂಪಣೆಯಲ್ಲೂ 'ಸೈ' ಎನಿಸಿಕೊಂಡಳು.



ಕೃಷ್ಣನ ಆಕರ್ಷಕ ವ್ಯಕ್ತಿತ್ವವನ್ನು ಸಾಕ್ಷೀಕರಿಸಿದ ಪದಂ- 'ಮಧುರ ಮಧುರ ವೇಣುಗೀತಂ. ಗಿರಿಧರ ಗೋಪಾಲನ ಸುಮಧುರ ಮನಸೆಳೆವ ಸೌಂದರ್ಯವನ್ನು ಅನಾವರಣಗೊಳಿಸಿತು.

ಗುರು ಮೀರಾ ರಚಿಸಿದ ಮೂಲಾಧಾರ ಆದಿಶಕ್ತಿ ಒಲಿದು ಬಾ'- ಭಕ್ತಿಗೀತೆಯನ್ನು ಅದಿತಿ ಭಕ್ತಿ ತಲ್ಲೀನತೆಯಿಂದ ಅರ್ಪಿಸಿದಳು. ಮುಂದೆ- ಮೈಸೂರು ಮಲ್ಲಿಗೆ ಖ್ಯಾತಿಯ ಕವಿ ಕೆ.ಎಸ್.ನ ವಿರಚಿತ ಸಿರಿಗನ್ನಡ ನಾಡಿನ ವೈಶಿಷ್ಟ್ಯ ಸಾರುವ 'ಪಡುವಣ ಕಡಲಿನ ನೀಲಿಯ ಬಣ್ಣ...'

ಭಾವನೃತ್ಯದ ಸೊಗಸನ್ನು ಬೀರಿದಳು. ಅಂತ್ಯದಲ್ಲಿ ಗುರು ಅಳವಡಿಸಿದ್ದ ಕಂಸಾಳೆ, ವೀರಗಾಸೆ ಮುಂತಾದ ಎಂಟು ಬಗೆಯ ಜಾನಪದ- ದೇಸೀ ನೃತ್ಯದ ಸೊಗಡನ್ನು ಪಸರಿಸಿತು. ಅಂತ್ಯದಲ್ಲಿ 'ತಿಲ್ಲಾನ' ಮತ್ತು 'ಮಂಗಳ'ದೊಂದಿಗೆ ಅದಿತಿಯ ನೃತ್ಯಪ್ರಸ್ತುತಿ ಅಂತ್ಯವಾಯಿತು. ಸಹಗಾಯನದೊಂದಿಗೆ ಸ್ಫುಟವಾಗಿ ನಟುವಾಂಗ ನಿರ್ವಹಿಸಿದ ಪ್ರಯೋಗಶೀಲೆ ವಿದುಷಿ. ಮೀರಾ ಅವರ ನೃತ್ಯ ಸಂಯೋಜನೆಗಳು ಸುಮನೋಹರವಾಗಿ ಕಣ್ಮನ ಸೆಳೆದದ್ದು ಗಮನಾರ್ಹವಾಗಿತ್ತು. ವಾದ್ಯಗೋಷ್ಠಿಯಲ್ಲಿ ಸಹಕರಿಸಿದವರು - ಗಾಯನ- ಸುಮಾ ವೆಂಕಟೇಶ್ , ಮೃದಂಗ- ಕಾರ್ತೀಕ್ ವೈಧಾತ್ರಿ, ವಯೊಲಿನ್-ಎಂ. ಚಿನ್ಮಯಿ, ಕೊಳಲು- ಕೆ.ಪಿ. ಪ್ರಣವ್ ಮತ್ತು ರಿದಂ ಪ್ಯಾಡ್ ಎಸ್. ಮಿಥುನ್ ಶಕ್ತಿ.

# ಭಾರತದ ಉಪ ಪ್ರಧಾನಿ, ಬಾಬು ಜಗಜೀವನರಾಮ್ 38ನೇ ವರ್ಷದ ಪುಣ್ಯಸ್ಮರಣೆ



ಕಲಾ ಸಾಹಿತ್ಯ
ಕೃಷ್ಣಪ್ಪ
ಲೇಖಕರು
ಪ್ರಗತಿ ಪರ ಚಿಂತಕ ಹಾಗೂ ವಿಮರ್ಶಕರು

• ಉದಯವಾಹಿನಿ, ವಿಶೇಷ

ಬಾಬು ಜಗಜೀವನ್ ರಾಮ್ ರವರು 1908 ಏಪ್ರಿಲ್ 5 ರಂದು ಬಿಹಾರಿನ ಅರಾದಲ್ಲಿ ಜನಿಸಿದರು. ತಂದೆ ಶೋಭಾ ರಾಮ್, ತಾಯಿ ವಾಸಂತಿ ದೇವಿ. ಚಿಕ್ಕ ವಯಸ್ಸಿನಲ್ಲಿ ತಂದೆಯನ್ನು ಕಳೆದುಕೊಂಡು ತಾಯಿಯ ಆಶ್ರಯದಲ್ಲಿ ಬೆಳೆದರು. ಜಗಜೀವನ್ ರಾಮರವರು ವಿಶೇಷ ಪರಿಶ್ರಮದಿಂದ ವ್ಯಾಸಂಗ ಮಾಡಿ ಉತ್ತಮ ಶ್ರೇಣಿಯಲ್ಲಿ ಪದವಿ ಶಿಕ್ಷಣವನ್ನು ಮುಗಿಸಿದರು. ಜಗಜೀವನರಾಮ್ ರವರು ಇಂದ್ರಾಣಿದೇವಿ ರವರೊಂದಿಗೆ ವಿವಾಹವಾಗಿ ಅವರಿಗೆ ಮೀರಾ ಕುಮಾರಿ ಮತ್ತು ಸುರೇಶ್ ಕುಮಾರ್ ಎಂಬ ಇಬ್ಬರು ಮಕ್ಕಳು.ಅದರಲ್ಲಿ ಶ್ರೀಮತಿ ಮೀರಾ ಕುಮಾರಿ ರವರು ಕೇಂದ್ರ ಮಂತ್ರಿ ಹಾಗೂ ಲೋಕಸಭಾ ಸ್ಪೀಕರ್ ಆಗಿದ್ದು ಒಂದು ವಿಶೇಷ. ಜಗಜೀವನ್ ರಾಮ್ ರವರಿಗೆ ಆ ವಯಸ್ಸಿನಲ್ಲಿಯೇ ಅಸ್ಪೃಶ್ಯತೆಯ ಬಿಸಿ ತಾಕಿತು. ಸವರ್ಣಿಯರು ಅಸ್ಪೃಶ್ಯರ ಬಗ್ಗೆ ತಳೆದಿದ್ದ ಭೇದಭಾವ, ತಾತ್ಸಾರ, ಅನ್ಯಾಯದ ವರ್ತನೆ ಇವರ ಮನಸ್ಸಿಗೆ ಅಪಾರ ನೋವನ್ನು ಉಂಟುಮಾಡುತ್ತಿತ್ತು.



ತರಗತಿಯಲ್ಲಿ ಕುಡಿಯುವ ನೀರಿನ ಮಡಿಕೆ ಲೋಟಗಳು, ಅಸ್ಪೃಶ್ಯ ಬಾಲಕರಿಗಾಗಿ ಪ್ರತ್ಯೇಕವಾಗಿ ಇಡುವ ವ್ಯವಸ್ಥೆ ಮಾಡಲಾಗಿತ್ತು. ಇಂತಹ ಅರ್ಥಹೀನ ಪದ್ಧತಿಗಳನ್ನು ದೂರಮಾಡಿ ಸಮಾಜದಲ್ಲಿ ದಲಿತರಿಗೂ ಸಮಾನತೆ,ಗೌರವ ದೊರೆಯುವಂತೆ ಮಾಡಲು ಹೋರಾಟ ನಡೆಸಬೇಕೆಂದು ಅವರು ನಿರ್ಧರಿಸಿದರು. ಸ್ವಾತಂತ್ರ್ಯ ಚಳುವಳಿಯಲ್ಲಿ ಸಕ್ರಿಯವಾಗಿ ಭಾಗವಹಿಸಿದರು. ಉಪ್ಪಿನ ಸತ್ಯಾಗ್ರಹ, ಸೈಮನ್ ಸಮಿತಿಯ ಬಹಿಷ್ಕಾರ ಮುಂತಾದ ಚಳುವಳಿಗಳಲ್ಲಿ ಭಾಗವಹಿಸಿದ ಪರಿಣಾಮವಾಗಿ ಇವರು ಅನೇಕ ಬಾರಿ ಸೆರೆಮನೆ ವಾಸವನ್ನು ಅನುಭವಿಸಬೇಕಾಯಿತು.

1933 ರಲ್ಲಿ ಗಾಂಧೀಜಿ ರವರು ಹರಿಜನ ಎಂಬ ವಾರ ಪತ್ರಿಕೆಯನ್ನು ಪ್ರಾರಂಭಿಸಿದರು. ಜಗಜೀವನರಾಮ್ ಅವರು ಹರಿಜನ ಸೇವಕ ಸಂಘದ ಕೆಲಸಗಳಿಗಾಗಿ ಬಿಹಾರ ಪ್ರಾಂತದ ಎಲ್ಲಾ ಜಿಲ್ಲೆಗಳಿಗೆ ಪ್ರವಾಸ ಮಾಡಿ ಸಂಘದ ಶಾಖೆಗಳನ್ನು ಸ್ಥಾಪಿಸಿದರು. ಜೊತೆಯಲ್ಲಿ ಕಾಂಗ್ರೆಸ್‌ಪಕ್ಷದ ಸದಸ್ಯರಾಗಿ ಪಕ್ಷದ ಪ್ರಚಾರವನ್ನು ನಡೆಸಿದರು. 1950 ನೇ ಜೂನ್ ತಿಂಗಳಲ್ಲಿ ಜಿನಿವಾ ನಗರದಲ್ಲಿ ನಡೆದ 33ನೇ ಅಂತರಾಷ್ಟ್ರೀಯ ಕೂಲಿಕಾರರ ಸಮ್ಮೇಳನದ ಅಧ್ಯಕ್ಷರಾಗಿ ಆಯ್ಕೆಯಾದ ಅವರು ಭಾರತದ ಗೌರವವನ್ನು ಹೆಚ್ಚಿಸಿದರು. 1947 ರಿಂದ 1952 ರವರೆಗೆ ಸರ್ಕಾರದ ಕೂಲಿಕಾರ ಮಂತ್ರಿಯಾಗಿದ್ದಾಗ ಕೂಲಿಕಾರರ ಸಮಸ್ಯೆಗಳ ಪರಿಹಾರಕ್ಕಾಗಿ ಅನೇಕ ಶಾಸನಗಳನ್ನು ರೂಪಿಸಿ ಅವುಗಳನ್ನು ಜಾರಿಗೆ ತಂದರು. 1952 ರಲ್ಲಿ ಸಂಪರ್ಕ ಖಾತೆಯ ಮಂತ್ರಿಯಾಗಿ ವಿಮಾನ ಮಾರ್ಗಗಳ ರಾಷ್ಟ್ರೀಕರಣ, ಹವಾಮಾನ ವೀಕ್ಷಣಾ ಕೇಂದ್ರಗಳ ಸ್ಥಾಪನೆ, ಅಂಚೆ ತಂತಿ ಮಾರ್ಗಗಳಲ್ಲಿ ಸುಧಾರಣೆಗಳನ್ನು ತಂದರು. 1971 ರಲ್ಲಿ ಜಗಜೀವನ್ ರಾಮ್ ಅವರು ರಕ್ಷಣಾ ಮಂತ್ರಿ ಆಗಿ ನೇಮಕಗೊಂಡರು. ಈ ಮಧ್ಯೆ ಕಾಂಗ್ರೆಸ್ ಇಬ್ಭಾಗವಾಗಿ ಲೋಕ ಸಭೆಯನ್ನು ವಿಸರ್ಜಿಸಲಾಯಿತು. 1971ರಲ್ಲಿ ಮಹಾ ಚುನಾವಣೆಗಳಲ್ಲಿ ಜಗಜೀವನ್ ರಾಮ್ ರವರ ನೇತೃತ್ವದ ಆಡಳಿತ ಕಾಂಗ್ರೆಸ್‌ಪಕ್ಷವು ಪ್ರಚಂಡ ಬಹುಮತಗಳಿಸಿ ಅಧಿಕಾರಕ್ಕೆ ಬಂದಿತು. ತುರ್ತು ಪರಿಸ್ಥಿತಿಯನ್ನ ವಿರೋಧಿಸಿ, ಕಾಂಗ್ರೆಸ್ ಪಕ್ಷದಿಂದ ಹೊರಬಂದು ಜೈ ಪ್ರಕಾಶ್ ನಾರಾಯಣ್ ಅವರ ನಾಯಕತ್ವದಲ್ಲಿ ರೂಪಿತವಾದ ಜನತಾ ಪಕ್ಷಕ್ಕೆ ಬೆಂಬಲ ನೀಡಿದರು. ಪ್ರಧಾನಿ ಮುರಾರ್ಜಿ ದೇಸಾಯಿರವರ ಸಚಿವ ಸಂಪುಟದಲ್ಲಿ ಉಪ ಪ್ರಧಾನಿಯಾಗಿದ್ದರು.


ಮುಂದೆ ದೇಶದಲ್ಲಿ ಘಟಿಸಿದ ರಾಜಕೀಯ ಸ್ಥಿತ್ಯಂತರಗಳಿಂದ ಬಾಬೂಜಿಯವರ ಅತ್ಯಂತ ದಿನಗಳು ಅಪಾರ ನೋವಿನಿಂದ ಹಾಗೂ ದಾರುಣತಿಯಿಂದ ಕೂಡಿದ್ದಿತು. ತೀವ್ರ ಅನಾರೋಗ್ಯಕ್ಕೆ ಗುರಿಯಾಗಿದ್ದ ಬಾಬು ಜಗಜೀವನ್ ರಾಮ್ ಅವರು 1986 ಜುಲೈ 6 ರಂದು ತಮ್ಮ 78 ನೇ ವಯಸ್ಸಿನಲ್ಲಿ ಹೃದಯಾಘಾತದಿಂದ ನಿಧನರಾದರು. ರಾಜಕೀಯ ನಾಯಕರಾಗಿ, ಶೋಷಿತವರ್ಗಗಳ ಆಶಾ ದೀಪವಾಗಿ,ಕೇಂದ್ರ ಸಚಿವರಾಗಿ ಜಗಜೀವನ್ ರಾಮ್ ಅವರು ನಡೆಸಿದ ಕಾರ್ಯಗಳು ಆದರ್ಶಪ್ರಾಯವಾಗಿವೆ. ಇಂದು ಅವರ 38 ನೇ ವರ್ಷದ ಪುಣ್ಯಸ್ಮರಣೆಯ ದಿನದಂದು ಭಾರತೀಯರಾದ ನಾವುಗಳು ಅವರನ್ನು ಸ್ಮರಿಸಿ, ನೆನೆಯುತ್ತಾ ಅವರ ಆತ್ಮಕ್ಕೆ ಶಾಂತಿ ಮತ್ತು ಸದ್ಗತಿ ದೊರಕಲೆಂದು ಆ ಭಗವಂತನಲ್ಲಿ ಪ್ರಾರ್ಥಿಸೋಣ.

# ಶಿಕ್ಷಣತಜ್ಞ, ಒಬ್ಬ ಶ್ರೇಷ್ಠ ರಾಜಕಾರಣಿ, ಶ್ಯಾಮ್ ಪ್ರಸಾದ್ ಮುಖರ್ಜಿ ರವರ 123ನೇ ವರ್ಷದ ಜನ್ಮಜಯಂತಿ

• ಉದಯವಾಹಿನಿ, ವಿಶೇಷ

ಶ್ಯಾಮ್ ಪ್ರಸಾದ್ ಮುಖರ್ಜಿರವರು 1901 ಜುಲೈ 6 ರಂದು ಕಲ್ಕತ್ತೆಯ ಭವಾಗಿಪುರದಲ್ಲಿ ಹುಟ್ಟಿದರು. ಇವರ ತಂದೆ ಪ್ರಸಿದ್ಧ ವಿದ್ವಾಂಸರಾಗಿದ್ದ ಸರ್ ಅಶುತೋಷ್ ಮುಖರ್ಜಿ. ಶ್ಯಾಮ್ ಪ್ರಸಾದ್ ಮುಖರ್ಜಿರವರು ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ತಮ್ಮೂರಿನಲ್ಲಿ ಮುಗಿಸಿ,ಕಲ್ಕತ್ತಾ ವಿಶ್ವವಿದ್ಯಾಲಯದಲ್ಲಿ ಎಂ. ಎ; ಹಾಗೂ ಎಲ್, ಎಲ್, ಬಿ; ಪದವಿಗಳನ್ನು ಪಡೆದು ಲಂಡನ್ ಗೆ ತೆರಳಿದರು. ಅಲ್ಲಿ ಅವರು ಬಾರ್- ಅಟ್ ಲಾ ಪರೀಕ್ಷೆ ಮುಗಿಸಿ ದರಲ್ಲದೇ ಇವರಿಗೆ ಗೌರವ ಡಿ-ಲೀಟ್ ಪದವಿಯು ಸಹ ಲಭ್ಯವಾಯಿತು.

ಭಾರತಕ್ಕೆ ಬಂದ ಮೇಲೆ ಕಲ್ಕತ್ತೆಯ ಉಚ್ಚನ್ಯಾಯಾಲಯದಲ್ಲಿ ವಕೀಲರಾಗಿ ಪ್ರಸಿದ್ಧಿ ಪಡೆದರು. ಜೊತೆಯಲ್ಲಿಯೇ ಸಾರ್ವಜನಿಕ ಕ್ಷೇತ್ರದಲ್ಲಿಯೂ ಪ್ರವೇಶಿಸಿದರು. 1929 ರಲ್ಲಿ ಕಾಂಗ್ರೆಸ್ ಅಭ್ಯರ್ಥಿಯಾಗಿ ಬಂಗಾಳ ಶಾಸನಸಭೆಗೆ ಚುನಾಯಿತರಾದರು. ಆದರೆ ತಮ್ಮದೇ ಆದ ಸಿದ್ಧಾಂತ ಆದರ್ಶಗಳಿಗೆ ಬದ್ಧರಾಗಿದ್ದ ಅವರು ಸರ್ಕಾರದೊಂದಿಗೆ ಹೊಂದಾಣಿಕೆಗೆ ಒಪ್ಪದೇ ಶಾಸನಸಭೆಯ ಸದಸ್ಯತ್ವಕ್ಕೆ ರಾಜೀನಾಮೆ ನೀಡಿದರು. 1931 ರಲ್ಲಿ ಸ್ವತಂತ್ರ ಅಭ್ಯರ್ಥಿಯಾಗಿ ಸ್ಪರ್ಧಿಸಿ ಗೆಲುವು ಸಾಧಿಸಿದರು. ಶಾಸನಸಭೆಗಳಲ್ಲಿ ಪ್ರತಿಭಾನ್ವಿತವಾಗ್ಮಿ ಎಂದು ಖ್ಯಾತರಾದರು. ಶ್ಯಾಮ್ ಪ್ರಸಾದರು 1934 ರಿಂದ 1938 ರವರೆಗೆ ಕಲ್ಕತ್ತಾ ವಿಶ್ವವಿದ್ಯಾಲಯದ ಉಪಕುಲಪತಿಗಳಾಗಿದ್ದರು ಮಹಾಬೋಧಿ ಸೊಸೈಟಿ ಮತ್ತು ಶ್ರೀ ರಾಮಕೃಷ್ಣ ಮಿಷನ್ ಈ ಸಂಸ್ಥೆಗಳ ನೆರವಿನಿಂದ ನೆರೆ ಸಂತ್ರಸ್ತರಿಗೆ ಸಹಾಯ ನೀಡಿದರು. ಹಿಂದೂ ಮಹಾಸಭೆಗೆ ಸೇರಿ ಅದರ ಪ್ರಮುಖ ನಾಯಕರಾದರು. 1944 ರಲ್ಲಿ ಹಿಂದೂ ಮಹಾಸಭಾ ಅಧ್ಯಕ್ಷರಾದರು. ಮುಂದೆ ರಾಯಲ್ ಏಷ್ಯಾಟಿಕ್ ಸೊಸೈಟಿಯ ಅಧ್ಯಕ್ಷರಾದರು. ಭಾರತ ಸ್ವಾತಂತ್ರ್ಯಗಳಿಸಿ ದಾಗ ಶಾಮಪ್ರಸಾದರು ಭಾರತದ ವಿಭಜನೆಯನ್ನು ತೀವ್ರವಾಗಿ ವಿರೋಧಿಸಿದರು. 1947 ರಲ್ಲಿ ನೆಹರು ಮಂತ್ರಿಮಂಡಲದಲ್ಲಿ ಕೈಗಾರಿಕೆ ಮತ್ತು ನಾಗರೀಕ ಪೂರೈಕೆ ಸಚಿವರಾದರು. ತಮ್ಮ ಅಧಿಕಾರವಧಿಯಲ್ಲಿ ದೇಶದ ಕೈಗಾರಿಕಾಭಿವೃದ್ಧಿಗೆ ಶ್ರಮಿಸಿದರು. ಇವರ ಕಾಲದಲ್ಲಿಯೇ ಬೆಂಗಳೂರಿನಲ್ಲಿ ವಿಮಾನ ತಯಾರಿಕಾ ಕಾರ್ಖಾನೆ, ಚಿತ್ತರಂಜನ್ ನಲ್ಲಿ ರೈಲ್ವೆಕೋಚ್ ನಿರ್ಮಾಣ ಕೇಂದ್ರ ಹಾಗೂ ಸಿಂದ್ರಿಯಲ್ಲಿ ಗೊಬ್ಬರ ಕಾರ್ಖಾನೆಗಳು ಸ್ಥಾಪಿತವಾದವು. 1950 ರಲ್ಲಿ ನೆಹರು- ಲಿಯಾಖತ್ ಒಪ್ಪಂದ ವಿಚಾರದಲ್ಲಿ ಭಿನ್ನಾಭಿಪ್ರಾಯ ವ್ಯಕ್ತಮಾಡಿದ್ದ ಇವರು ಮಂತ್ರಿ ಪದವಿಗೆ ರಾಜೀನಾಮೆ ನೀಡಿದರು. 1951 ರಲ್ಲಿ ಜನಸಂಘದ ಘಟಕಗಳನ್ನು ಒಗ್ಗೂಡಿಸಿ ಅಖಿಲ ಭಾರತೀಯ ಜನಸಂಘದ ಸ್ಥಾಪಕರಾಗಿ ಅದರ ಅಧ್ಯಕ್ಷರಾದರು. 1952 ರಲ್ಲಿ ನಡೆದ ಸಾರ್ವತ್ರಿಕ ಚುನಾವಣೆಯಲ್ಲಿ ಬಂಗಾಳದಿಂದ ಜನಸಂಘದ ಅಭ್ಯರ್ಥಿಯಾಗಿ, ಅಲ್ಲಿಂದ ಆಯ್ಕೆಯಾಗಿ ಸಂಸತ್ತಿಗೆ ಪ್ರವೇಶ ಪಡೆದರು. 1953 ರಲ್ಲಿ ಜಮ್ಮು ಪ್ರದೇಶವನ್ನು ಅಕ್ರಮವಾಗಿ ಪ್ರವೇಶಿಸಿದರೆಂಬ ಕಾರಣಕ್ಕಾಗಿ ಕಾಶ್ಮೀರ ಸರ್ಕಾರ ಅವರನ್ನು ಬಂಧಿಸಿ ಶ್ರೀನಗರದಲ್ಲಿ ಅವರನ್ನು ಸ್ಥಾನ ಬದ್ಧತೆಯಲ್ಲಿರಿಸಿತು. ಅನಾರೋಗ್ಯದಿಂದ ಬಳಲುತ್ತಿದ್ದ ಶ್ಯಾಮ್ ಪ್ರಸಾದ್ ಮುಖರ್ಜಿ ರವರು ಬಂಧನದಲ್ಲಿ ಇದ್ದಾಗಲೇ 1953 ಜೂನ್ 23 ರಂದು ನಿಧನರಾದರು. ಕೇವಲ ಆಗ ಅವರಿಗೆ 52 ವರ್ಷ ವಯಸ್ಸಾಗಿತ್ತು. ಇಂತಹ ಮಹಾ ದೇಶಭಕ್ತ, ಅಖಂಡ ಭಾರತದ ಏಕತೆಗೆ ಶ್ರಮಿಸಿದ ಧೀಮಂತ ನಾಯಕ, ಪ್ರತಿಭಾವಂತ ಸಂಸದೀಯ ಪಟು, ಬದುಕು-ಬರಹ ಮಾಲಿಕೆ, ಲೋಹ ಪುರುಷ, ನ್ಯಾಯವಾದಿ, ಶಿಕ್ಷಣತಜ್ಞ ರಾಗಿ ಜನಮನ್ನಣೆಯನ್ನು ಗಳಿಸಿದ್ದರು. ಅವರ 123 ನೇ ವರ್ಷದ ಜನ್ಮ ಜಯಂತಿಯನ್ನು ಆಚರಿಸುವುದು ಅರ್ಥವಿದೆ ಎಂದು ತಿಳಿದುಕೊಂಡು ಭಾರತೀಯರಾದ ನಾವುಗಳು ಅವರನ್ನು ಸ್ಮರಿಸಿ- ನೆನೆಯುತ್ತಾ, ಅವರ ಆತ್ಮಕ್ಕೆ ಶಾಂತಿ ಮತ್ತು ಸದ್ಗತಿ ದೊರಕಲೆಂದು ಆ ಭಗವಂತನಲ್ಲಿ ಪ್ರಾರ್ಥಿ ಸೋಣ.



# ಆಷಾಢ ಕೆಟ್ಟ ಮಾಸವೂ ಅಲ್ಲ, ಕೇಡು ತರುವುದೂ ಇಲ್ಲ

• ಉದಯವಾಹಿನಿ, ವಿಶೇಷ

ಕೆಲವರಿಗೆ ಆಷಾಢ ಎಂದರೆ ಅಳುಕು. ಶುಭಕಾರ್ಯ ಮಾಡಲು ಆತಂಕ. ಆದರೆ ನಾವು ಅಂದುಕೊಂಡಂತೆ ಆಷಾಢ ಕೆಟ್ಟ ಮಾಸವೂ ಅಲ್ಲ, ನಮಗೆ ಕೇಡು ತರುವುದೂ ಇಲ್ಲ. ಕೇವಲ ವೈಜ್ಞಾನಿಕ ಕಾರಣಕ್ಕಾಗಿ ಈ ತಿಂಗಳಲ್ಲಿ ಶುಭ ಕಾರ್ಯಗಳನ್ನು ನಿಷೇಧಿಸಲಾಗಿದೇ ಹೊರತು ಬೇರಾವ ದುಷ್ಟ ಹಿನ್ನೆಲೆಯೂ ಇಲ್ಲ.

ಆಷಾಢ ಮಾಸ, ಸಾಧಕರಿಗೆ ಸದಾ ಸೋಪಾನವಾಗಿದೆಯೇ ವಿನಃ ಅಮಂಗಲ ಮಾಸವಲ್ಲ. ವರ್ಷದ 12 ಮಾಸಗಳಂತೆಯೇ ಇದು ಸಹ ಒಂದು ಮಾಸ. ಹುಣ್ಣಿಮೆಯಂದು ಪೂರ್ವಾಷಾಢ ನಕ್ಷತ್ರದೊಂದಿಗೆ ಚಂದ್ರಗ್ರಹ ಸಂಯೋಗಗೊಳ್ಳುವುದರಿಂದ ಆಷಾಢ ಮಾಸ ಎನ್ನಲಾಗುತ್ತದೆ. ಅದರ ಹೊರತಾಗಿ ಈ ತಿಂಗಳು ಅಶುಭವೇನಲ್ಲ. ಆದರೆ ಜನಮಾನಸದಲ್ಲಿ ಈ ತಿಂಗಳು ಅಶುಭ ಮಾಸ ಎನ್ನುವ ವಿಚಾರ ಆಳವಾಗಿ ಬೇರೂರಿದೆ. ಕಾರಣವಿಷ್ಟೇ ಜನರ ಬಾಯಲ್ಲಿ ಒಳ್ಳೆಯ ವಿಚಾರ ಬೇಗ ಹರಡುವುದಿಲ್ಲ. ಆದರೆ ಕೆಟ್ಟ ವಿಚಾರ ಬೇಗ ಹರಡುತ್ತದೆ. ಹಾಗಾಗಿ ವೈಜ್ಞಾನಿಕ ಕಾರಣಕ್ಕೆ ಯಾರೋ ಪುಣ್ಯಾತ್ಮರು ಲೇಪಿಸಿದ ಕೆಟ್ಟ ಮಾಸ ಎಂಬ ಕಳಂಕ ಇಂದಿಗೂ ಚಾಲ್ತಿಯಲ್ಲಿದೆ. ಈ ಮಾಸದಲ್ಲಿ ಶುಭಕಾರ್ಯ ಮಾಡದಿರಲು ಹಲವಾರು ಕಾರಣಗಳಿವೆ. ಅವುಗಳ ಬಗ್ಗೆ ಒಂದಿಷ್ಟು ಧಾರ್ಮಿಕ ಹಾಗೂ ವೈಜ್ಞಾನಿಕ ಕಾರಣಗಳನ್ನು ಅರಿಯೋಣ. ಆಷಾಢಮಾಸ ಅಶುಭಮಾಸ ಎಂಬುದು ಜನರ ನಂಬಿಕೆ. ಆದರೆ ಈ ಮಾಸದಲ್ಲಿ ಕೆಲ ಕಾರಣಗಳಿಂದ ಶುಭಕಾರ್ಯ ಮಾಡಬಾರದು ಅಷ್ಟೇ. ಇದಕ್ಕಿರುವ ವೈಜ್ಞಾನಿಕ ಹಿನ್ನೆಲೆಯನ್ನು ತಿಳಿಯೋಣ. ಆದರೆ ಈ ಮಾಸ ಅಶುಭವಲ್ಲ ಎಂಬುದನ್ನು ಮತ್ತೊಮ್ಮೆ ನೆನಪಿಸುತ್ತಿದ್ದೇನೆ. ಅಶ್ವಿನ್ಯಾದಿ ನಕ್ಷತ್ರಗಳ ಪೈಕಿ, ಅಶ್ವಿನಿ, ಕೃತ್ತಿಕಾ, ಮೃಗಶಿರ, ಪುಷ್ಯ, ಮಘ, ಉತ್ತರ ಫಲ್ಗುಣಿ, ಚಿತ್ತಾ, ವಿಶಾಖ, ಜ್ಯೇಷ್ಠ, ಪೂರ್ವಾಷಾಢ, ಶ್ರವಣ, ಪೂರ್ವಭಾದ್ರಪದ, ಈ 12 ನಕ್ಷತ್ರಗಳಲ್ಲಿ ಪ್ರತಿ ತಿಂಗಳು ಹುಣ್ಣಿಮೆಯಂದು ಚಂದ್ರ ಗ್ರಹದ ಜತೆ ಒಂದೊಂದು ನಕ್ಷತ್ರ ಮಿಳಿತಗೊಳ್ಳುತ್ತವೆ. ಹಾಗಾಗಿ ಆ ತಿಂಗಳನ್ನು ಆಯಾ ನಕ್ಷತ್ರದ ಹೆಸರಲ್ಲಿ ಕರೆಯಲಾಗುತ್ತದೆ. ಉದಾಹರಣೆಗೆ, ಅಶ್ವಿನಿ ನಕ್ಷತ್ರದ ಜತೆ ಚಂದ್ರನಿದ್ದಾಗ ಆಶ್ವಯುಜ ಮಾಸ, ಕೃತ್ತಿಕಾ ಜತೆಯಿದ್ದಾಗ ಕಾರ್ತೀಕ ಮಾಸ, ಮೃಗಶಿರದ ಜತೆಯಿದ್ದಾಗ ಮಾರ್ಗಶಿರ ಮಾಸ, ಪುಷ್ಯದ ಜತೆಗಿದ್ದಾಗ ಪುಷ್ಯ ಮಾಸ, ಮಘ(ಮುಖ) ಜತೆಗಿದ್ದಾಗ ಮಾಘಮಾಸ, ಉತ್ತರಫಲ್ಗುನಿ ಜತೆಗಿದ್ದಾಗ ಫಾಲ್ಗುಣ ಮಾಸ, ಚಿತ್ತಾ ನಕ್ಷತ್ರದೊಂದಿಗಿದ್ದಾಗ ಚೈತ್ರಮಾಸ, ವಿಶಾಖದೊಂದಿಗಿದ್ದಾಗ ವೈಶಾಖ ಮಾಸ, ಜ್ಯೇಷ್ಠದೊಂದಿಗಿದ್ದಾಗ ಜ್ಯೇಷ್ಠ ಮಾಸ, ಪೂರ್ವಾಷಾಢದೊಂದಿಗೆ ಇದ್ದಾಗ ಆಷಾಢ ಮಾಸ, ಶ್ರವಣದೊಂದಿಗೆ ಇದ್ದಾಗ ಶ್ರಾವಣ ಮಾಸ, ಉತ್ತರ ಭಾದ್ರಪದದೊಂದಿಗೆ ಇದ್ದಾಗ ಭಾದ್ರಪದ ಮಾಸ ಎಂದು ಕರೆಯಲಾಗುತ್ತದೆ.


ಉದಯವಾಹಿನಿ ಚಿತ್ರ

**ಹುಣ್ಣಿಮೆಯಂದು ಪೂರ್ವಾಷಾಢ ನಕ್ಷತ್ರ**

ಈ ತಿಂಗಳ ಹುಣ್ಣಿಮೆಯಂದು ಚಂದ್ರ ಗ್ರಹದ ಜತೆ ಪೂರ್ವಾಷಾಢ ನಕ್ಷತ್ರ ಮಿಳಿತಗೊಳ್ಳುತ್ತದೆ. ಹಾಗಾಗಿ ಈ ಮಾಸವನ್ನು ಆಷಾಢ ಮಾಸ ಎಂದು ಕರೆಯಲಾಗುತ್ತದೆ. ಸಹಜವಾಗಿ ಈ ತಿಂಗಳು ಅಶುಭ ಎಂಬ ಮಾತು ವಾಡಿಕೆಯಲ್ಲಿದೆ. ಆದರೆ ಇದು ಅಶುಭ ಮಾಸ ಎಂಬುದು ಯಾವ ಶಾಸ್ತ್ರದಲ್ಲೂ ಉಲ್ಲೇಖವಿಲ್ಲ. ಈ ತಿಂಗಳಲ್ಲಿ ಮಾಡುವ ಶುಭಕರ ಕೆಲಸಗಳು ಫಲ ನೀಡುವುದಿಲ್ಲ ಎಂಬ ಮಾತು ಜನ ಜನಿತವಾಗಿದೆ. ಆದರೆ ಈ ತಿಂಗಳಲ್ಲಿ ಶುಭಕಾರ್ಯ ಮಾಡದಿರಲು ಸಾಮಾಜಿಕ ಕಳಕಳಿಯಿಂದ ಕೂಡಿದ ವೈಜ್ಞಾನಿಕ ಕಾರಣವಿದೆಯೇ ಹೊರತು ಧಾರ್ಮಿಕ ಕಾರಣವಿಲ್ಲ.

ಆಷಾಢ ಮಾಸದಲ್ಲಿ ಮದುವೆ, ಗೃಹಪ್ರವೇಶ, ಉಪನಯನ, ವಾಹನ ಖರೀದಿ, ಜಮೀನು ಖರೀದಿ, ಹೊಸದಾಗಿ ವ್ಯಾಪಾರ ಆರಂಭಿಸುವುದು ಮತ್ತಿತರ ಶುಭಕಾರ್ಯಗಳನ್ನು ಮಾಡುವಂತಿಲ್ಲ. ಇದಕ್ಕೆ ಮೂಲ ಕಾರಣ ದೇಶದ ಬೆನ್ನೆಲುಬಾದ ಕೃಷಿ ಚಟುವಟಿಕೆ ಹಾಗೂ ಜೋರು ಮಳೆ. ಮುಂಗಾರು ಮಳೆ ಆರಂಭಗೊಂಡ ನಂತರ ಗ್ರೀಷ್ಮ ಋತುವಿನಲ್ಲಿ ಅಬ್ಬರಿಸಲು ಆರಂಭಿಸುತ್ತದೆ. ಗುಡುಗು, ಮಿಂಚು, ಸಿಡಿಲು, ಬಿರುಗಾಳಿಯ ಆರ್ಭಟವೇ ಹೆಚ್ಚು. ಶತಮಾನಗಳ ಹಿಂದೆ ಆಷಾಢ ಮಾಸದಲ್ಲಿ ಸುರಿಯುತ್ತಿದ್ದ ಜೋರು ಮಳೆಯಿಂದ ಜನ ಮನೆಯಿಂದ ಈಚೆ ಬರಲು ಸಾಧ್ಯವಾಗುತ್ತಿರಲಿಲ್ಲ. ಮನೆಯಿಂದ ಹೊರಗೆ ಹೋಗುವುದೇ ಬಹಳ ದುಸ್ತರವಾಗುತ್ತಿತ್ತು. ಜತೆಗೆ ಈ ತಿಂಗಳಲ್ಲಿ ಗದ್ದೆಯಲ್ಲಿ ಭತ್ತ ನಾಟಿ ಮಾಡುವ ಕೆಲಸದ ಜತೆ, ಕೃಷಿ ಚಟುವಟಿಕೆ ನಡೆಯುತ್ತದೆ. ಎಲ್ಲಾರು ಸಾಮಾನ್ಯವಾಗಿ ಕೃಷಿ ಚಟುವಟಿಕೆಯಲ್ಲಿ ತೊಡಗಿಸಿಕೊಳ್ಳುವುದರಿಂದ ಇಷ್ಟ ಮಿತ್ರರು, ಬಂಧುಗಳು ಶುಭಕಾರ್ಯದಲ್ಲಿ ಸೇರಲಾಗುತ್ತಿರಲಿಲ್ಲ. ಕುಟುಂಬ ಸಮೇತ ಶುಭಕಾರ್ಯದಲ್ಲಿ ಭಾಗಿಯಾಗಲು ಹಿಂದೆ ಇಂದಿನಂತೆ ಆಧುನಿಕ ವಾಹನಗಳ ಸೌಲಭ್ಯವಿರಲಿಲ್ಲ.

ಸಿರಿವಂತರಾದರೆ ಕುದುರೆಗಾಡಿ ಪ್ರಯಾಣ, ಸಾಮಾನ್ಯರಾದರೆ ಎತ್ತಿನಗಾಡಿ ಪ್ರಯಾಣ, ಅದಿಲ್ಲದಿದ್ದರೆ ಕಾಲು ನಡಿಗೆ ಪ್ರಯಾಣವೇ ಮಾನವನಿಗೆ ಗತಿಯಾಗಿತ್ತು. ಜೋರು ಮಳೆಯಲ್ಲಿ ಹಳ?ಳಕೊಳ?ಳ ತುಂಬಿ ಹರಿಯುವಾಗ ಪ್ರಯಾಣ ಸುಲಭವಾಗಿರಲಿಲ್ಲ. ಬಂಧು ಬಳಗವಿಲ್ಲದೆ ಶುಭ ಕಾರ್ಯ ಅಸಾಧ?ಯ ಹಾಗಾಗಿ ಆಷಾಢ ಮಾಸದಲ್ಲಿ ಶುಭ ಕಾರ್ಯ ಮಾಡಲು ಅನಾನುಕೂಲ. ಈ ಕಾರಣಗಳಿಂದ ಶುಭಕಾರ್ಯ ಮಾಡುವುದನ್ನು ನಿಷೇಧಿಸಿದ್ದರು. ಇದರ ಹೊರತಾಗಿ ಯಾವುದೇ ಧಾರ್ಮಿಕ ಕಾರಣವಿಲ್ಲ. ಮತ್ತೊಂದು ಮಾತಿದೆ. ಹೊಸದಾಗಿ ಮದುವೆಯಾದ ಸೊಸೆ ಆಷಾಢಮಾಸದಲ್ಲಿ ಅತ್ತೆಯೊಂದಿಗೆ ಒಂದೇ ಮನೆಯಲ್ಲಿ ವಾಸಿಸಬಾರದು. ಇದು ಅಮಂಗಲ ಎಂಬ ಪ್ರತೀತಿ. ಆದರೆ ಇದು ಶುದ್ಧ ಸುಳ್ಳು. ಈ ತಿಂಗಳಲ್ಲಿ ಕೃಷಿ ಚಟುವಟಿಕೆಗೆ ಆದ್ಯತೆ. ಕೆಲಸ ಮಾಡಬೇಕಾದ ಹುಡುಗ, ಮನೆಗೆ ಹೊಸದಾಗಿ ಬಂದ ಹೆಂಡತಿಯ ಮುಖ ಸೌಂದರ್ಯ ನೋಡುತ್ತಾ, ಸೀರೆ ಸೆರಗು (ಈ ತಿಂಗಳಲ್ಲಿ ಮಳೆಯಿಂದ ಚಳಿ ಹೆಚ್ಚಾಗುವ ಕಾರಣ ಪರಸ್ಪರ ಆಕರ್ಷಣೆ) ಹಿಡಿದುಕೊಂಡು ಓಡಾಡಿದರೆ ಕೆಲಸ ಮಾಡಲಾಗುವುದಿಲ್ಲ. ಕೃಷಿ ಚಟುವಟಿಕೆ ಕುಂಟಿತಗೊಳ್ಳುತ್ತದೆ. ಅಲ್ಲದೇ ನವ ದಂಪತಿ ಒಟ್ಟಾಗಿದ್ದರೆ, ಈ ತಿಂಗಳಲ್ಲಿ ನವವಧು ಗರ್ಭಧರಿಸಿದರೆ ಚೈತ್ರ ಅಥವಾ ವೈಶಾಖಮಾಸದಲ್ಲಿ ಮಗು ಜನನವಾಗುತ್ತದೆ. ವೈಶಾಖ ಮಾಸದಲ್ಲಿ ಬಿಸಿಲ ಬೇಗೆ ಹೆಚ್ಚಾಗುವುದರಿಂದ ಮಗುವಿಗೆ ತ್ರಾಸವಾಗುತ್ತದೆ. ಈ ಎಲ್ಲಾ ಕಾರಣಗಳಿಂದ ಆಷಾಢಮಾಸದಲ್ಲಿ ನೆಂಟರಿಷ್ಟರು ಸೇರಿ ಆಚರಿಸುವ ಕಾರ್ಯಕ್ರಮಗಳಿಗೆ ಬಿಡುವು ನೀಡಲಾಗಿದೆ. ಬದಲಿಗೆ ಕೃಷಿ ಚಟುವಟಿಕೆಗೆ ಆದ್ಯತೆ ನೀಡಲಾಗಿದೆಯಷ್ಟೇ. ಈ ಮಾಸದಲ್ಲಿಯೇ ಪರಶಿವನು ತನ್ನ ಸತಿ ಪಾರ್ವತಿದೇವಿಗೆ ಗುಹೆಯಲ್ಲಿ ರಾಮಮಂತ್ರದ ಮಹಿಮೆ ಬೋಧಿಸಿದ. ಅನುಸೂಯಾ ದೇವಿ ಈ ತಿಂಗಳಲ್ಲಿ ಬರುವ ನಾಲ್ಕು ಸೋಮವಾರಗಳಂದು ರುದ್ರದೇವರ ಪೂಜೆ ಮಾಡಿದಳು. ವಿಶೇಷವಾಗಿ ಈ ತಿಂಗಳ ಶುಕ್ರವಾರಗಳಲ್ಲಿ ಲಕ್ಷ್ಮಿ ಪೂಜೆ ಮಾಡಲಾಗುತ್ತದೆ. ಹುಣ್ಣಿಮೆಯಂದು ಗುರುಪೂರ್ಣಿಮೆ, ಈ ದಿನ ಮಠಗಳಲ್ಲಿ ಯತಿಗಳು ಶ್ರೀವೇದವ್ಯಾಸ ದೇವರ ಪೂಜೆ ನಡೆಸಿ ಚಾತುರ್ಮಾಸ್ಯ ವ್ರತ ಆರಂಭಿಸುತ್ತಾರೆ. ಸುಮಂಗಲಿಯರು ದೀರ್ಘ ಸೌಮಾಂಗಲ್ಯ ಪ್ರಾಪ್ತಿಗಾಗಿ ಈ ತಿಂಗಳ ಅಮಾವಾಸ್ಯೆಯಂದು ಜ್ಯೋತಿರ್ಭೀಮೇಶ್ವರ ವ್ರತ ಆಚರಿಸುತ್ತಾರೆ. ಹಾಗಾಗಿ ಈ ಆಷಾಢಮಾಸವನ್ನು ನಿಷಿದ್ಧ ಮಾಸವೆಂದು ತಿರಸ್ಕರಿಸದೆ, ಆತ್ಮೋನ್ನತಿಗೆ ಮುಂದಾಗಬಹುದು. ವೈಜ್ಞಾನಿಕ ಕಾರಣಗಳಿಂದ ನಿಷಿದ್ಧವೇ ಹೊರತು ಧಾರ್ಮಿಕವಾಗಿ ನಿಷಿದ್ಧವಲ್ಲವೆಂಬುದನ್ನು ಮತ್ತೊಮ್ಮೆ ನೆನಪಿಸಿಕೊಂಡು ಶ್ರೀಹರಿಯ ಶ್ರೀಚರಣಗಳನ್ನು ಆಶ್ರಯಿಸೋಣ...

ಆಷಾಢಮಾಸಾಧಿಪತಿ ಶ್ರೀಮದ್ರಾಘವೇಂದ್ರತೀರ್ಥ ಗುರುವಾಂತರ್ಗತ ಭಾರತಿರಮಣ ಮುಖ್ಯಪ್ರಾಣಾಂತರ್ಗತ ಶ್ರೀವಾಮನ ದೇವರು ಎಲ್ಲಾರಿಗೂ ಒಳಿತನ್ನುಂಟು ಮಾಡಲಿ.

# ಮಾಲೇಕಲ್ ಚಿಕ್ಕ ತಿರುಪತಿ ದೇವಸ್ಥಾನದ ಅಭಿವೃದ್ಧಿ ಕಾರ್ಯ ನನೆಗುದಿಗೆ

## ಮಾಲೇಕಲ್ ತಿರುಪತಿ ದೇವಸ್ಥಾನವು ಸುಮಾರು 800 ವರ್ಷಗಳ ಇತಿಹಾಸವನ್ನು ಹೊಂದಿದ್ದು, ಮೂಲಸೌಕರ್ಯಗಳಿಂದ ವಂಚಿತ

• ಉದಯವಾಹಿನಿ ಅರಸೀಕೆರೆ

ರಾಜ್ಯದ ಚಿಕ್ಕ ತಿರುಪತಿ ಎಂದೇ ಹೆಸರುವಾಸಿ ಆಗಿರುವ ತಾಲ್ಲೂಕಿನ ಮಾಲೇಕಲ್ ತಿರುಪತಿ ರಾಜಗೋಪುರ, ಯಾತ್ರಿ ನಿವಾಸ್ ನಿರ್ಮಾಣವಾಗಿ 5 ವರ್ಷ ಕಳೆದರೂ ಉದ್ಘಾಟನೆಯಾಗದೇ ನನೆಗುದಿಗೆ ಬಿದ್ದಿದ್ದು, ಭಕ್ತರಲ್ಲಿ ಬೇಸರ ಮೂಡಿಸಿದೆ. ಕಳೆದ ವರ್ಷ ರಥೋತ್ಸವದ ವೇಳೆ ತೇರಿನ ಕಳಸ ಪೊಲೀಸ್ ಸಿಬ್ಬಂದಿ ಮೇಲೆ ಬಿದ್ದಿತ್ತು. ರಾಜಗೋಪುರ ನಿರ್ಮಾಣವಾದರೂ ಲೋಕಾರ್ಪಣೆ ಆಗದೇ ಇರುವುದು, ಗೋಪುರಕ್ಕೆ ಕಳಸಗಳು ಹಾಕದೇ ಇರುವುದು ಇದಕ್ಕೆ ಕಾರಣ. ತಿಮ್ಮಪ್ಪ ಸೂಚನೆ ನೀಡಿದ್ದಾನೆ ಎಂದು ಗ್ರಾಮಸ್ಥರು, ಭಕ್ತರು ಹೇಳುತ್ತಿದ್ದಾರೆ.

ಕ್ಷೇತ್ರಕ್ಕೆ ದೂರದಿಂದ ಯಾತ್ರಾರ್ಥಿಗಳು ಬಂದು ಉಳಿದುಕೊಳ್ಳಲು ಅನುಕೂಲ ಆಗುವಂತೆ ಪ್ರವಾಸೋದ್ಯಮ ಇಲಾಖೆಯಿಂದ ಕೋಟ್ಯಂತರ ರೂಪಾಯಿ ವೆಚ್ಚ ಮಾಡಿ, 5 ವರ್ಷಗಳ ಹಿಂದೆಯೇ ನಿರ್ಮಿಸಿರುವ ಯಾತ್ರಿ ನಿವಾಸ್ ಇಂದಿಗೂ ಉದ್ಘಾಟನೆ ಆಗದೇ ಯಾತ್ರಾರ್ಥಿಗಳಿಗೆ ಉಳಿದುಕೊಳ್ಳಲು ಚಿಂತೆ ಮಾಡುವಂತಾಗಿದೆ. ಸುಮಾರು 800 ವರ್ಷಗಳ ಇತಿಹಾಸವನ್ನು ಹೊಂದಿದ್ದು, ಲಕ್ಷಾಂತರ ಭಕ್ತ ಸಮೂಹ ಹೊಂದಿರುವ ಮಾಲೇಕಲ್ ತಿರುಪತಿ ದೇವಸ್ಥಾನವು ಕೆಲವು ಮೂಲಸೌಕರ್ಯಗಳಿಂದ ವಂಚಿತವಾಗಿದೆ.

> ದೇವಸ್ಥಾನ ಅಭಿವೃದ್ಧಿ ಸಮಿತಿ ಅಧ್ಯಕ್ಷ ಮಹಾ ರಥೋತ್ಸವದ ಒಳಗಾಗಿ ರಾಜಗೋಪುರ ಲೋಕಾರ್ಪಣೆ ಹಾಗೂ ದೇವಸ್ಥಾನದ ಅಭಿವೃದ್ಧಿ ಕಾರ್ಯಗಳ ಬಗ್ಗೆ ಸಚಿವರ ಜೊತೆ ಮಾತನಾಡಿ ಸೂಕ್ತ ದಿನಾಂಕ ನಿಗದಿಗೊಳಿಸಲಾಗುವುದು
> -ಕೆ.ಎಂ. ಶಿವಲಿಂಗೇಗೌಡ, ಶಾಸಕ

**ಕೋಟ್ಯಂತರ ರೂಪಾಯಿ ವೆಚ್ಚ**


ಉದಯವಾಹಿನಿ ಚಿತ್ರ

ಶ್ರೀಯವರ ಬ್ರಹ್ಮರಥ ಶಿಥಿಲವಾಗಿತ್ತು. 1995 ರಲ್ಲಿ ನೂತನ ರಥವನ್ನು ವಿಶೇಷ ಕೆತ್ತನೆಗಳೊಂದಿಗೆ ಸುಂದರವಾಗಿ ನಿರ್ಮಾಣ ಮಾಡಿ ರಥ ಲೋಕಾರ್ಪಣೆ ಮಾಡಲಾಯಿತು. ರಥದ ಸುರಕ್ಷತೆಗಾಗಿ ಪೂರ್ವಿಕರು ದೇವಾಲಯದ ಮುಂಭಾಗವೇ ರಥದ ಮನೆಯನ್ನು ನಿರ್ಮಿಸಿದ್ದರು. ಅಭಿವೃದ್ಧಿ ಮಾಡುವ ಉದ್ದೇಶದಿಂದ ಮುಂಭಾಗವನ್ನು ಸಂಪೂರ್ಣವಾಗಿ ಕಾಂಕ್ರೀಟ್ ಮಯ ಮಾಡಲಾಯಿತು. ಈ ವೇಳೆ ಇದ್ದ ರಥದ ಮನೆಯನ್ನು ತೆರವುಗೊಳಿಸಲಾಯಿತು.

ಇದೀಗ ರಥದ ಮನೆ ನಿರ್ಮಿಸಲು ಸಾಧ್ಯವಾಗದೇ ಮಳೆ, ಬಿಸಿಲು ಮಳೆಗೆ ಮೈಯೊಡ್ಡಿ ನಿಲ್ಲುವಂತಾಗಿದೆ. ನಂತರ ಸುಂದರ ಕೆತ್ತನೆಯ ಮೂರ್ತಿಗಳನ್ನು ಹೊಂದಿರುವ ರಥವು ಇದೀಗ ಪ್ಲಾಸ್ಟಿಕ್ ಹೊದಿಕೆಯಲ್ಲಿ ನಿಲ್ಲುವಂತಾಗಿದೆ ಎಂದು ಭಕ್ತರು ದೂರುತ್ತಿದ್ದಾರೆ.

ಜುಲೈ 18 ರಂದು ಮಹಾರಥೋತ್ಸವ ಜರುಗಲಿದೆ.

> ಚುನಾವಣಾ ಹಿನ್ನೆಲೆಯಲ್ಲಿ ರಾಜಗೋಪುರ ಲೋಕಾರ್ಪಣೆ ರಥದ ಮನೆ ಕಾಮಗಾರಿ ವಿಳಂಬವಾಗಿದೆ. ಶಾಸಕರ ಅಧ್ಯಕ್ಷತೆಯಲ್ಲಿ ಸದ್ಯದಲ್ಲೇ ತೀರ್ಮಾನ ತೆಗೆದುಕೊಳ್ಳಲಾಗುವುದು
> -ಅರುಣ್‌ಕುಮಾರ್, ದೇವಸ್ಥಾನದ ಸಮಿತಿಯ ಅಧ್ಯಕ್ಷ

ರಾಜಗೋಪುರ ಲೋಕಾರ್ಪಣೆಯನ್ನು ಹೆಚ್ಚು ವಿಜೃಂಭಣೆಯಿಂದ ಮಾಡಬೇಕೆಂಬ ಆಶಯ ಶಾಸಕರದಾಗಿದ್ದು, ಇದುವರೆಗೂ ಅದು ಸಾಧ್ಯವಾಗಿಲ್ಲ. ದೇವಾಲಯ ಸಮಿತಿ ಮತ್ತು ಭಕ್ತರು ಸರಳವಾಗಿಯೇ ರಾಜಗೋಪುರ ಕುಂಭಾಭಿಷೇಕವನ್ನು ಮಾಡೋಣ ವೆಂದರೆ ಯಾರೂ ಮುಂದಾಳತ್ವ ವಹಿಸುತ್ತಿಲ್ಲ. ಹೀಗಾಗಿ ಇದು ನನೆಗುದಿಗೆ ಬಿದ್ದಿದೆ. ರಾಜಗೋಪುರ ನಿರ್ಮಾಣವಾಗಿ 5 ವರ್ಷಗಳು ಕಳೆದರೂ ಲೋಕಾರ್ಪಣೆ ಆಗದೇ ಇರುವುದು ಸೂಕ್ತವಲ್ಲ ಎಂಬ ಅಭಿಪ್ರಾಯ ಧಾರ್ಮಿಕ ತಜ್ಞರಿಂದಲೂ ಈಗ ಕೇಳಿಬರುತ್ತಿದೆ. ರಾಜ್ಯದ ವಿವಿಧ ಜಿಲ್ಲೆ, ತಾಲ್ಲೂಕುಗಳಿಂದ ಬರುವ ಭಕ್ತಾದಿಗಳ ಪುಣ್ಯಕ್ಷೇತ್ರವಾಗಿರುವ ವೆಂಕಟೇಶ್ವರ ಸ್ವಾಮಿಯ ಮಹಾದ್ವಾರವು ನಗರದ ಹುಳಿಯಾರು ರಸ್ತೆಯ ಮುಂಭಾಗದಲ್ಲಿ ನಿರ್ಮಾಣ ಆಗಬೇಕೆಂಬ ಬಯಕೆ ಭಕ್ತರಲ್ಲಿದೆ.

ಶಾಸಕರು ಮಾಲೇಕಲ್ ತಿರುಪತಿ ದೇವಸ್ಥಾನದ ರಾಜಗೋಪುರ, ಯಾತ್ರಿ ನಿವಾಸ್ ಲೋಕಾರ್ಪಣೆ, ರಥದ ಮನೆ ನಿರ್ಮಾಣ ಸೇರಿದಂತೆ ಇನ್ನಿತರ ಅಭಿವೃದ್ಧಿ ಕಾಮಗಾರಿಗಳಿಗೆ ಶಾಸಕರು ಗಮನಹರಿಸಬೇಕು ಎಂಬುದು ಭಕ್ತರ ಒತ್ತಾಯ.

### ಭಕ್ತರಿಗೆ ಬೇಸರ

ದೇವಾಲಯದ ಸಮಿತಿ ಇದ್ದು, ಅಭಿವೃದ್ಧಿ ಸಮಿತಿಯೂ ಇದೆ. ಶಾಸಕರ ಅಧ್ಯಕ್ಷತೆಯಲ್ಲಿ ಸಂಪೂರ್ಣ ಸಹಕಾರದೊಂದಿಗೆ ರಾಜಗೋಪುರ, ಯಾತ್ರಿ ನಿವಾಸ ನಿರ್ಮಾಣಗೊಂಡಿರುವುದು ಸಂತೋಷದ ವಿಚಾರ. ಆದರೆ ಲೋಕಾರ್ಪಣೆ ಕಾರ್ಯಕ್ರಮ ವಿಳಂಬವಾಗಿರುವುದು ಭಕ್ತರಿಗೆ ಬೇಸರ ಉಂಟು ಮಾಡಿದೆ.

# ಸಿಲಿಂಡರ್ ಸೋರಿಕೆಗೆ ಜೀವತೆತ್ತ ತಾಯಿ: ಕುಟುಂಬದಲ್ಲಿ ಸೂತಕ


ಉದಯವಾಹಿನಿ ಚಿತ್ರ

• ಉದಯವಾಹಿನಿ ದಾವಣಗೆರೆ

ವೃದ್ಧ ದಂಪತಿ ನೆಲೆಸಿದ್ದ ನೆರೆಮನೆಯನ್ನು ಆವರಿಸಿದ ಅಡುಗೆ ಅನಿಲದ ಜಾಡು ಹಿಡಿದು ನೆರೆಗೆ ಧಾವಿಸಿದ ಕುಟುಂಬದಲ್ಲೀಗ ಸೂತಕ ಆವರಿಸಿದೆ. ಸಿಲಿಂಡರ್ ಸೋರಿಕೆ ಪತ್ತೆಗೆ ಮುಂದಾದಾಗ ಸಂಭವಿಸಿದ ಸ್ಫೋಟದಲ್ಲಿ ಗಾಯಗೊಂಡ ಒಂದೇ ಕುಟುಂಬದ ಮೂವರಲ್ಲಿ ತಾಯಿ ಮೃತಪಟ್ಟಿದ್ದು, ಸೊಸೆ-ಮಗ ಆಸ್ಪತ್ರೆಯ ಹಾಸಿಗೆಯಲ್ಲಿ ರೋದಿಸುತ್ತಿದ್ದಾರೆ.

ಇಲ್ಲಿನ ರಾಮನಗರದ ಎಸ್‌ಒಜಿ ಕಾಲೊನಿಯಲ್ಲಿ ಸಂಭವಿಸಿದ ಅಡುಗೆ ಅನಿಲ ದುರಂತ ಸ್ಥಳೀಯರಲ್ಲಿ ದಿಗಿಲು ಮೂಡಿಸಿದೆ. ಪಕ್ಕದ ಮನೆಯ ಸಿಲಿಂಡರ್ ಸೋರಿಕೆಯನ್ನು ಪರಿಶೀಲಿಸಲು ತೆರಳಿ ಜೀವ ಕಳೆದುಕೊಂಡ ಕುಟುಂಬದ ಸ್ಥಿತಿ ಕಂಡು ಮರುಗುತ್ತಿದ್ದಾರೆ. ದುರಂತದಿಂದ ಪಾರಾಗಿರುವ ಇಬ್ಬರು ಮೊಮ್ಮಕ್ಕಳ ಭವಿಷ್ಯವನ್ನು ನೆನೆದು ಕಣ್ಣೀರಾಗಿದ್ದಾರೆ. ಎಸ್‌ಒಜಿ ಕಾಲೊನಿಯ ಮಲ್ಲೇಶಪ್ಪ (64) ಹಾಗೂ ಲಲಿತಮ್ಮ (58) ದಂಪತಿಯ ಮನೆಯಲ್ಲಿ ಜುಲೈ 2ರಂದು ರಾತ್ರಿ ಸಂಭವಿಸಿದ ಸ್ಫೋಟದಲ್ಲಿ ಪಕ್ಕದ ಮನೆಯ ಪಾರ್ವತಮ್ಮ (50), ಮಗ ಪ್ರವೀಣ್ (35) ಹಾಗೂ ಸೊಸೆ ಸೌಭಾಗ್ಯ (33) ಗಾಯಗೊಂಡಿದ್ದರು. ಚಿಕಿತ್ಸೆಗೆ ಸ್ಪಂದಿಸದೇ ಪಾರ್ವತಮ್ಮ ಮೃತಪಟ್ಟಿದ್ದು, ಲಲಿತಮ್ಮ ಹಾಗೂ ಸೌಭಾಗ್ಯ ಸ್ಥಿತಿ ಗಂಭೀರವಾಗಿದೆ. ಮಲ್ಲೇಶಪ್ಪ ಮತ್ತು ಪ್ರವೀಣ್ ಚೇತರಿಸಿಕೊಳ್ಳುತ್ತಿದ್ದಾರೆ. ಪಾರ್ವತಮ್ಮ ಮೃತಪಟ್ಟ ಮಾಹಿತಿ ಪುತ್ರ, ಸೊಸೆ ಮತ್ತು ಕುಟುಂಬದಲ್ಲಿ ದಿಗ್ಭ್ರಮೆ ಮೂಡಿಸಿದೆ.

# 2 ವರ್ಷಗಳ ಹಿಂದೆ ಒಡೆದಿದ್ದ ಹುಣಸೆ ದೊಡ್ಡಕೆರೆಗೆ ದುರಸ್ತಿ ಭಾಗ್ಯ


ಉದಯವಾಹಿನಿ ಚಿತ್ರ

• ಉದಯವಾಹಿನಿ ಆಲೂರು

ಎರಡು ವರ್ಷಗಳ ಹಿಂದೆ ಬಿದ್ದ ಭಾರಿ ಮಳೆಯಿಂದ ಏರಿ ಒಡೆದಿದ್ದ ಪಾಳ್ಯ ಹೋಬಳಿ ಹುಣಸೆ ಗ್ರಾಮದ ದೊಡ್ಡಕೆರೆಯ ದುರಸ್ತಿ ಕಾಮಗಾರಿಗೆ ಈಗ ಕಾಲ ಕೂಡಿ ಬಂದಿದೆ. ತಾಳೂರು ಗ್ರಾಮ ಪಂಚಾಯಿತಿಯಿಂದ ನರೇಗಾ ಯೋಜನೆಯಲ್ಲಿ ಕಾಮಗಾರಿ ಆರಂಭಿಸಲಾಗಿದೆ.

2022 ರ ಜುಲೈ 13ರಂದು ಬಿದ್ದ ಭಾರಿ ಮಳೆಯಿಂದ ನೀರಿನ ಒತ್ತಡ ತಾಳಲಾರದೇ, ಮಧ್ಯರಾತ್ರಿ ಏರಿ ಮಧ್ಯಭಾಗಕ್ಕೆ ಒಡೆದು ಹೋಗಿತ್ತು. ಕೆರೆಯಲ್ಲಿದ್ದ ಸಂಪೂರ್ಣ ನೀರು ಗದ್ದೆಗಳ ಮೇಲೆ ಹರಿದು, ಬದುಗಳು ಒಡೆದು ಕೆರೆ ಆಶ್ರಯ ಪಡೆದಿದ್ದ ಸುಮಾರು 200 ಎಕರೆ ಗದ್ದೆ ಪ್ರದೇಶ ಹಾನಿಗೆ ಒಳಗಾಗಿತ್ತು. ಈ ಸಂದರ್ಭದಲ್ಲಿ ಕೆಲ ರೈತರು ಭತ್ತ ನಾಟಿ ಮಾಡಲು ಸಸಿ ಮಡಿ ಮಾಡಿದ್ದರು. ಕೆಲ ರೈತರು ಭೂಮಿ ಉಳುಮೆ ಮಾಡಿ ನಾಟಿ ಮಾಡಲು ಸಿದ್ಧತೆ ನಡೆಸಿದ್ದರು. ಬೆಳಗಾಗುವ ವೇಳೆಗೆ ಕೆರೆ ಒಡೆದು ಸುಮಾರು 200 ಕ್ಕೂ ಹೆಚ್ಚು ಕುಟುಂಬಗಳು ನಷ್ಟಕ್ಕೆ ಸಿಲುಕಿದವು. ಭತ್ತವಲ್ಲದೇ ಹತ್ತಾರು ಎಕರೆ ಪ್ರದೇಶದಲ್ಲಿ ಬೆಳೆದಿದ್ದ ಅಡಿಕೆ ಬೆಳೆಗೂ ಹಾನಿಯಾಗಿತ್ತು.

### ಸರ್ಕಾರ ಈವರೆಗೂ ಕನಿಷ್ಠ ಪರಿಹಾರ ನೀಡಿಲ್ಲ

**ಈ ಕೆರೆ ನೀರನ್ನು ಬಳಸಿಕೊಂಡು ಸುಮಾರು 150-200 ಎಕರೆ ಪ್ರದೇಶದಲ್ಲಿ ಭತ್ತ ಮತ್ತು ಅಡಿಕೆ ಕೃಷಿ ಮಾಡಲಾಗುತ್ತಿದೆ. ಎರಡು ವರ್ಷ ಏರಿ ದುರಸ್ತಿ ಮಾಡದೇ ಇದ್ದುದರಿಂದ ಮಳೆ ನೀರು ಹರಿದು ಪೋಲಾಗುತ್ತಿದ್ದು, ಬೆಳೆಗೆ ಉಪಯೋಗವಾಗದೇ ನಷ್ಟವಾಗುತ್ತಿತ್ತು. ಕೆರೆ ಅಚ್ಚುಕಟ್ಟಿನಲ್ಲಿದ್ದ ಬೆಳೆಗಾರರು ವಾರ್ಷಿಕ ಸುಮಾರು ಲಕ್ಷಾಂತರ ರೂಪಾಯಿ ನಷ್ಟ ಅನುಭವಿಸುತ್ತಿದ್ದರು. ಎರಡು ವರ್ಷಗಳಿಂದ ರೈತರು ಆರ್ಥಿಕ ನಷ್ಟ ಅನುಭವಿಸುತ್ತಿದ್ದರೂ, ಸರ್ಕಾರ ಈವರೆಗೂ ಕನಿಷ್ಠ ಪರಿಹಾರ ನೀಡಿಲ್ಲ ಎಂದು ರೈತರು ದೂರಿದ್ದಾರೆ.**

# ವಿದ್ಯುತ್ ಸಂಪರ್ಕಕ್ಕೆ ಕುತ್ತಾದ ಮಾನ್ಯತಾ ಅವಧಿ

• ಉದಯವಾಹಿನಿ ನರಸಿಂಹರಾಜಪುರ

ರೈತರ ಕೊಳವೆ ಬಾವಿಯ ವಿದ್ಯುತ್ ಸಂಪರ್ಕಕ್ಕೆ ನಿರಾಕ್ಷೇಪಣಾ ಪತ್ರ ಮತ್ತು ಕುಡಿಯುವ ನೀರಿನ ಸ್ಥಾವರದಿಂದ ಸ್ವಂತ ಭೂಮಿಯಲ್ಲಿರುವ ಸ್ಥಾವರಕ್ಕೆ ಇರುವ ಅಂತರ ದೃಢೀಕರಣ ಪತ್ರದ ಮಾನ್ಯತಾ ಅವಧಿಯು ಕೇವಲ 6 ತಿಂಗಳು ಎಂಬುದು ಕೃಷಿ ಪಂಪ್‌ಸೆಟ್‌ಗೆ ವಿದ್ಯುತ್ ಸಂಪರ್ಕ ಪಡೆಯಲು ಕುತ್ತಾಗಿ ಪರಿಣಮಿಸಿದೆ. ನಿರಾಕ್ಷೇಪಣಾ ಪತ್ರ ಮತ್ತು ಅಂತರ ದೃಢೀಕರಣ ಪತ್ರದ ಮಾನ್ಯತಾ ಅವಧಿ 6 ತಿಂಗಳು ಮಾತ್ರ ಎಂದು ಮೆಸ್ಕಾಂ ಅಧಿಕಾರಿಗಳು ಹೇಳುತ್ತಾರೆ. ಆದರೆ, ಪಂಪ್‌ಸೆಟ್‌ಗೆ ವಿದ್ಯುತ್ ಸಂಪರ್ಕಕ್ಕೆ ಅರ್ಜಿ ಸಲ್ಲಿಸಿ 6 ತಿಂಗಳಾದರೂ ಮೆಸ್ಕಾಂ ಇಲಾಖೆಯಲ್ಲಿ ಅದನ್ನು ವಿಲೇವಾರಿ ಮಾಡುವುದಿಲ್ಲ. ಹಾಗಾಗಿ 6 ತಿಂಗಳ ನಂತರ ಮತ್ತೆ ನಿರಾಕ್ಷೇಪಣಾ ಮತ್ತು ಅಂತರ ದೃಢೀಕರಣ ಪತ್ರ ತರುವಂತೆ ಮೆಸ್ಕಾಂನವರು ಸೂಚಿಸುತ್ತಾರೆ' ಎನ್ನುವುದು ರೈತರ ದೂರು.

ಹಿಂದಿನ ಚಿಕ್ಕಮಗಳೂರು ಜಿಲ್ಲಾಧಿಕಾರಿ 2019ರಲ್ಲಿ ಹೊರಡಿಸಿರುವ ಸುತ್ತೋಲೆ ಪ್ರಕಾರ, ರೈತರು ಕೊಳವೆಬಾವಿ ಪಂಪ್‌ಸೆಟ್‌ಗೆ ವಿದ್ಯುತ್ ಸಂಪರ್ಕ ಪಡೆಯಲು ಜಮೀನು, ನೀರಿನ ಹಕ್ಕು ಪತ್ರ, ಪಹಣಿ ಈ ಮೂರು ದಾಖಲೆಗಳಲ್ಲಿ ಯಾವುದಾದರೂ ಒಂದನ್ನು ಸಲ್ಲಿಸಿದರೆ ಸಾಕು. ಆದರೆ, ಈ ಸುತ್ತೋಲೆಯಲ್ಲಿ ಎಲ್ಲೂ ದೃಢೀಕರಣ ಪತ್ರದ ಮಾನ್ಯತಾ ಅವಧಿ 6 ತಿಂಗಳು ಎಂದು ಹೇಳಿಲ್ಲ.

### ಜಿಲ್ಲಾಧಿಕಾರಿಗೆ ಮೇಲ್ಮನವಿ

**ದೃಢೀಕರಣ ಪತ್ರದ ಮಾನ್ಯತಾ ಅವಧಿಯ ಬಗ್ಗೆ ಎಚ್.ಎಸ್. ಸುಧಾಕರ ಎಂಬುವರು ಮಾಹಿತಿ ಹಕ್ಕಿನಡಿ ಜಿಲ್ಲಾಧಿಕಾರಿಗೆ ಅರ್ಜಿ ಸಲ್ಲಿಸಿದಾಗ, 'ಇದು ನಮ್ಮ ವ್ಯಾಪ್ತಿಗೆ ಬರುವುದಿಲ್ಲ ಎಂಬ ಕಾರಣ ನಿಡಿ ಅದನ್ನು ಜಿಲ್ಲಾ ಪಂಚಾಯಿತಿ ಸಿಇಒಗೆ ವರ್ಗಾಯಿಸಿದ್ದರು. ಸಿಇಒ ಸಹ ಇದೇ ಕಾರಣ ನೀಡಿ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗಕ್ಕೆ ವರ್ಗಾಯಿಸಿದ್ದರು. ಈ ಇಲಾಖೆ ನಮ್ಮ ಇಲಾಖೆಯಲ್ಲಿ ಮಾಹಿತಿ ಇಲ್ಲ ಎಂದು ಹಿಂಬರಹ ನೀಡಿತು. ಸಮರ್ಪಕ ಮಾಹಿತಿ ಲಭಿಸದ ಕಾರಣ, ಸುಧಾಕರ ಮತ್ತೆ ಪ್ರಥಮ ಮೇಲ್ಮನವಿಯನ್ನು ಜಿಲ್ಲಾಧಿಕಾರಿಗೆ ಸಲ್ಲಿಸಿದ್ದಾರೆ.**

• ಉದಯವಾಹಿನಿ ಚಿತ್ರದುರ್ಗ

# ರೇಣುಕಾಸ್ವಾಮಿ ಕೊಲೆ ಪ್ರಕರಣವನ್ನು ನಿಷ್ಪಕ್ಷಪಾತ ತನಿಖೆಯಾಗಿ ತಪ್ಪಿತಸ್ಥರಿಗೆ ಶಿಕ್ಷೆಯಾಗಲಿ: ಬಿ.ಸಿ.ಪಾಟೀಲ್

ಚಿತ್ರದುರ್ಗ ಮೂಲದ ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ನಟ ದರ್ಶನ್ ಸೇರಿದ್ದಾರೆ. ಇನ್ನು ಈ ಸಂಬಂಧ ನಟ ದರ್ಶನ್ ಪರ-ವಿರೋಧ ಚರ್ಚೆಗಳು ಆಗುತ್ತಲೇ ಇವೆ. ಇದರ ನಡುವೆ ಇದೀಗ ಮಾಜಿ ಸಚಿವ ಹಾಗೂ ಚಿತ್ರರಂಗದಲ್ಲಿ ಕೌರವ ಅಂತಲೇ ಗುರುತಿಸಿಕೊಂಡಿದ್ದ ಬಿ.ಸಿ.ಪಾಟೀಲ್ ಅವರು ಪ್ರತಿಕ್ರಿಯಿಸಿದ್ದಾರೆ.

ಚಿತ್ರದುರ್ಗ ನಗರದ ಮೃತ ರೇಣುಕಾಸ್ವಾಮಿ ಕುಟುಂಬಕ್ಕೆ ಭೇಟಿ ನೀಡಿ, ಮೃತನ ಪೋಷಕರಿಗೆ ಸಾಂತ್ವನ ಹೇಳಿ ನಂತರ ಅವರು ಮಾತನಾಡಿದರು. ರೇಣುಕಾಸ್ವಾಮಿ ಕೊಲೆ ಪ್ರಕರಣವನ್ನು ನಿಷ್ಪಕ್ಷಪಾತ ತನಿಖೆಯಾಗಿ ತಪ್ಪಿತಸ್ಥರಿಗೆ ಶಿಕ್ಷೆಯಾಗಲಿ, ಮೃತ ಪತ್ನಿಗೆ ಉದ್ಯೋಗ ಕೊಡಬೇಕು ಎಂದು ಮಾಜಿ ಸಚಿವ ಬಿ.ಸಿ. ಪಾಟೀಲ್ ಹೇಳಿದ್ದಾರೆ.

ಪ್ರಕರಣದಲ್ಲಿ ಯಾರೇ ತಪ್ಪಿತಸ್ಥರಿದ್ದರೂ ಅಂತಹವರಿಗೆ ಶಿಕ್ಷೆಯಾಗಲಿ. ಇಲ್ಲಿ ಕಾನೂನಿಗಿಂತ ದೊಡ್ಡವರು ಯಾರೂ ಇಲ್ಲ. ಮಾಡ್ರನ್ ಜಗತ್ತಲ್ಲಿ ಟೆಕ್ನಾಲಜಿ ಹೆಚ್ಚಾದ ಮೇಲೆ ಸೈಬರ್ ಕ್ರೈಮ್ ಜಾಸ್ತಿಯಾಗಿದೆ. ಮೃತ ರೇಣುಕಾಸ್ವಾಮಿ ಮೇಲೆ ಸಣ್ಣ ದೂರು ಕೊಟ್ಟಿದ್ರೆ ವಿಚಾರಣೆ ನಡೆಸಬಹುದಿತ್ತು. ಆದರೆ ಕೊಲೆ ಮಾಡುವ ಹಂತಕ್ಕೆ ಇಳಿದಿರುವುದು ಸರಿಯಲ್ಲ. ನಟ ದರ್ಶನ್ ಪೊಲೀಸರಿಗೆ ಕರೆ ಮಾಡಿ ಹೇಳಿದ್ರೆ, ಎಲ್ಲಾ ಸಮಸ್ಯೆ ಬಗೆಹರಿಯುತ್ತಿತ್ತು ಎಂದು ತಿಳಿಸಿದರು.

ಇನ್ನು ಈ ಪ್ರಕರಣದ ಬಗ್ಗೆ ತನಿಖೆ ಮಾಡಲು ಪೊಲೀಸರು ಇದ್ದಾರೆ. ನಾವು ಯಾವುದು ಸುಳ್ಳು, ಯಾವುದು ನಿಜ ಅಂತಾ ಹೇಳುವುದಕ್ಕೆ ಆಗುವುದಿಲ್ಲ. ಆದರೆ, ದರ್ಶನ್ ಒಳ್ಳೆಯ ವ್ಯಕ್ತಿ, ಒಳ್ಳೆಯ ನಟ ಆಗಿದ್ದ. ಈಗ ಅವರ ಮೇಲೆ ಕೊಲೆ ಆರೋಪ ಬಂದಿದೆ. ಕೋರ್ಟ್‌ನಲ್ಲಿ ಕೇಸ್ ಎದುರಿಸುತ್ತಿದ್ದಾರೆ. ತನಿಖೆ ಆದ್ಮೇಲೆ ಸತ್ಯ ಏನೆಂದು ಗೊತ್ತಾಗುತ್ತದೆ ಎಂದರು.


ಉದಯವಾಹಿನಿ ಚಿತ್ರ

> ಚಿತ್ರರಂಗದಿಂದ ನಟ ದರ್ಶನ್ ಅವರನ್ನ ಬ್ಯಾನ್ ಮಾಡುವ ಬಗ್ಗೆ ಸುದ್ದಿಗಾರರ ಪ್ರಶ್ನೆಗೆ ಉತ್ತರಿಸಿದ ಮಾಜಿ ಸಚಿವರು, ಅವರನ್ನು ಚಿತ್ರರಂಗದಿಂದ ಬ್ಯಾನ್ ಮಾಡುವ ವಿಚಾರ ಚೇಂಬರ್‌ಗೆ ಬಿಟ್ಟ ವಿಚಾರ. ಫಿಲ್ಮ್ ಚೇಂಬರ್ ಅದರ ಬಗ್ಗೆ ತೀರ್ಮಾನ ಮಾಡುತ್ತದೆ ಎಂದು ಹೇಳಿದರು.
> -ಬಿ.ಸಿ.ಪಾಟೀಲ್

# ಬಂದ್ ಆಗದ ತಳಭಾಗದ ಗೇಟ್ ವ್ಯರ್ಥವಾಗುತ್ತಿದೆ ಭದ್ರಾ ಜಲಾಶಯದ ನೀರು


ಉದಯವಾಹಿನಿ ಚಿತ್ರ

• ಉದಯವಾಹಿನಿ ಶಿವಮೊಗ್ಗ

ಭದ್ರಾ ಜಲಾಶಯದ ತಳಭಾಗದಲ್ಲಿರುವ ಗೇಟ್ ಹಾಳಾಗಿದ್ದು ಅಪಾರ ಪ್ರಮಾಣದ ನೀರು ಪೋಲಾಗುತ್ತಿದೆ. ಜಲಾಶಯ ತುಂಬುವುದನ್ನೇ ಕಾತುರದಿಂದ ಕಾಯುತ್ತಿದ್ದ ರೈತರು ಕಂಗಾಲಾಗಿದ್ದಾರೆ. ಮಳೆಗಾಲಕ್ಕೂ ಮುನ್ನ ವಾರ್ಷಿಕ ನಿರ್ವಹಣೆ ಮಾಡಿಲ್ಲವೇ ಎಂಬ ಅನುಮಾನ ಕಾಡುತ್ತಿದೆ.

ವಾರದಿಂದ ನಿರಂತರವಾಗಿ ಮಳೆಯಾಗುತ್ತಿರುವ ಕಾರಣ ಜಲಾಶಯಕ್ಕೆ ಉತ್ತಮ ನೀರು ಬರುತ್ತಿದೆ. ಆದರೆ ಭದ್ರಾ ಜಲಾಶಯದ ತಳಭಾಗದಲ್ಲಿರುವ ಗೇಟ್ ಹಾಳಾಗಿದ್ದು ಮೂರ್ನಾಲ್ಕು ದಿನಗಳಿಂದ ಸಾವಿರಾರು ಕ್ಯೂಸೆಕ್ ನೀರು ಹೊರ ಹೋಗುತ್ತಿದೆ. ಮೂರು ದಿನಗಳಿಂದ 15 ಸಾವಿರ ಕ್ಯೂಸೆಕ್ಸ್‌ಗೂ ಅಧಿಕ ನೀರು ಬರುತ್ತಿದ್ದು ಬಹಳಷ್ಟು ನೀರು ವ್ಯರ್ಥವಾಗುತ್ತಿದೆ.

ಪ್ರಸ್ತುತ ಜಲಾಶಯದಲ್ಲಿ 129.6 ಅಡಿ ನೀರಿದ್ದು 16171 ಕ್ಯೂಸೆಕ್ಸ್ ಒಳಹರಿವು ಇದೆ. ಕಳೆದ ವರ್ಷ ಇದೆ ದಿನ 137.2 ಅಡಿ ನೀರಿತ್ತು. ಕಳೆದ ವರ್ಷ ಮುಂಗಾರು ವಿಫಲವಾದ ಕಾರಣ ಬೇಸಿಗೆ ಬೆಳೆಗೆ ಪಾಳಿ ಪದ್ಧತಿಯಲ್ಲಿ ನೀರು ಕೊಡಲಾಗಿತ್ತು. ಜೂನ್‌ನಲ್ಲಿ ವಾಡಿಕೆಯಷ್ಟು ಮಳೆಯಾಗಿಲ್ಲ. ಜುಲೈ ಆರಂಭ ಆಶಾದಾಯಕವಾಗಿದ್ದರೂ ಮುಂದೆ ಇದೇ ರೀತಿ ಮಳೆ ಬರುತ್ತದೆ ಎಂಬ ಭರವಸೆ ಇಲ್ಲ. ಇದ್ದ ನೀರನ್ನು ಉಳಿಸಿಕೊಳ್ಳುವ ಸಮಯದಲ್ಲಿ ಭದ್ರಾ ಅಚ್ಚುಕಟ್ಟು ಪ್ರಾಧಿಕಾರ ಎಡವಟ್ಟು ಮಾಡಿಕೊಂಡಿದೆ.

ಮುಂಗಾರು ಬೆಳೆಗೆ ಭದ್ರಾ ಜಲಾಶಯದಿಂದ ಯಾವಾಗ ನೀರು ಬಿಡಬಹುದು ಎಂಬ ಲೆಕ್ಕ ಹಾಕುತ್ತಿದ್ದ ರೈತರು ಜಲಾಶಯದಿಂದ ನೀರು ಪೋಲಾಗುತ್ತಿರುವುದು ಕಂಡು ಶಾಕ್ ಆಗಿದ್ದಾರೆ.

# ಆಕಾಂಕ್ಷಿಗಳ ಬಣ ಶಕ್ತಿ ಪ್ರದರ್ಶನ



ಉದಯವಾಹಿನಿ ಚಿತ್ರ

• ಉದಯವಾಹಿನಿ ಹಾವೇರಿ

ಶಿಗ್ಗಾವಿ- ಸವಣೂರು ವಿಧಾನಸಭಾ ಕ್ಷೇತ್ರದ ಉಪ ಚುನಾವಣೆ ಘೋಷಣೆಗೂ ಮುನ್ನವೇ ಟಿಕೆಟ್‌ಗಾಗಿ ಕಾಂಗ್ರೆಸ್ ಪಕ್ಷದಲ್ಲಿ ಪೈಪೋಟಿ ಶುರುವಾಗಿದೆ. ಶಿಗ್ಗಾವಿ ಪಟ್ಟಣದಲ್ಲಿ ಕಾಂಗ್ರೆಸ್ ಪಕ್ಷದ ಮುಖಂಡರ ಸಭೆ ಆಯೋಜಿಸಲಾಗಿದ್ದು, ವೀಕ್ಷಕರ ಎದುರೇ ಬಣ ಪ್ರದರ್ಶನ ಮಾಡಲು ಆಕಾಂಕ್ಷಿಗಳು ಸಜ್ಜಾಗಿದ್ದಾರೆ. ಪಟ್ಟಣದ ಹನುಂತಗೌಡ್ರ ಪಾಟೀಲ ಕಲ್ಯಾಣ ಭವನ ಒಳಗೆ ಪಕ್ಷದ ಪ್ರಮುಖ ವೇದಿಕೆ ಮಾಡಲಾಗಿದೆ. ಕಲ್ಯಾಣ ಭವನ ಮುಂಭಾಗದಲ್ಲಿ ಆಕಾಂಕ್ಷಿ ಅಜ್ಜಂಪೀರ ಖಾದ್ರಿ ಅವರ ಬೆಂಬಲಿಗರು ಪ್ರತ್ಯೇಕ ಪೆಂಡಾಲ್ ಹಾಕಿದ್ದಾರೆ. ಕಾಂಗ್ರೆಸ್ ಸಚಿವರಾದ ಈಶ್ವರ ಖಂಡ್ರೆ, ವಿನಯ ಕುಲಕರ್ಣಿ, ಸಂತೋಷ್ ಲಾಡ ಹಾಗೂ ಇತರೆ ಮುಖಂಡರು ಸಭೆಗೆ ಬರುತ್ತಿದ್ದಾರೆ. ಇದಕ್ಕೂ ಮುನ್ನವೇ ಟಿಕೆಟ್ ಆಕಾಂಕ್ಷಿಗಳ ಪ್ರತ್ಯೇಕ ಪೆಂಡಾಲ್ ನಿರ್ಮಿಸಿಕೊಂಡು ಬಲ ಪ್ರದರ್ಶನ ಮಾಡುತ್ತಿದ್ದಾರೆ. ಪಕ್ಷದ ವೇದಿಕೆಯಲ್ಲಿ ಕುಳಿತರೆ ಖಾದ್ರಿ ಅವರ ಬೆಂಬಲಿಗರು ಎಷ್ಟಿದ್ದಾರೆ ಎಂಬುದು ಗೊತ್ತಾಗುವುದಿಲ್ಲ. ಅದಕ್ಕೆ ಪ್ರತ್ಯೇಕ ಪೆಂಡಾಲ್ ಮಾಡಿದ್ದೇವೆ' ಎಂದು ಬೆಂಬಲಿಗರು ತಿಳಿಸಿದರು. ಇನ್ನೊಬ್ಬ ಆಕಾಂಕ್ಷಿ ಯಾಸೀರಖಾನ್ ಪಠಾಣ ಬೆಂಬಲಿಗರು ಪ್ರತ್ಯೇಕ ಜಾಗದಲ್ಲಿ ನಿಂತಿದ್ದಾರೆ.ಪಕ್ಷದ ಮುಖಂಡರ ಆಗಮನಕ್ಕಾಗಿ ರಸ್ತೆಯುದ್ದಕ್ಕೂ ಬ್ಯಾನರ್‌ಗಳನ್ನು ಪ್ರದರ್ಶಿಸಲಾಗಿದೆ.

# ಡೆಂಘಿ ಮರಣಮೃದಂಗ: 6 ಮಕ್ಕಳ ಸಾವು

• ಉದಯವಾಹಿನಿ ಹಾಸನ


ಉದಯವಾಹಿನಿ ಚಿತ್ರ

ರಾಜ್ಯದಲ್ಲಿ ದಿನದಿಂದ ದಿನಕ್ಕೆ ಮಳೆ ಹೆಚ್ಚುತ್ತಿದ್ದು ಅದರ ಜೊತೆಗೆ ಡೆಂಗು ಪ್ರಕರಣಗಳು ಕೂಡ ಹೆಚ್ಚುತ್ತಿವೆ. ಇದೀಗ ಹಾಸನದಲ್ಲಿ ಕಳೆದ ನಾಲ್ಕು ದಿನಗಳಲ್ಲೇ ಆರು ಮಕ್ಕಳು ಸಾವನ್ನಪ್ಪಿದ್ದಾರೆ ಎಂದು ಮಾಹಿತಿ ಲಭ್ಯವಾಗಿದೆ.

ಹೌದು ಹಾಸನ ಜಿಲ್ಲೆಯಲ್ಲಿ ಡೆಂಗ್ಯೂ ಸೋಕಿನಿಂದ ಮರಣ ಮೃದಂಗ ಬಾರಿಸುತ್ತಿದ್ದೂ, 4 ದಿನಗಳಲ್ಲಿ ಮಾರಕ ಡೆಂಗಿಗೆ 6 ಮಕ್ಕಳು ಸಾವನ್ನಪ್ಪಿದ್ದಾರೆ. ಹಾಸನ ಜಿಲ್ಲಾ ಆಸ್ಪತ್ರೆಯಲ್ಲಿ 5 ಹಾಗೂ ಮೈಸೂರಲ್ಲಿ 1 ಮಗು ಸಾವನ್ನಪ್ಪಿದೆ. ಜಿಲ್ಲಾಸ್ಪತ್ರೆಯಲ್ಲಿ ಚಿಕ್ಕಮಗಳೂರು ಮೂಲದ ಒಂದು ಮಗು ಸಾವನ್ನಪ್ಪಿದೆ ಎಂದು ಮಾಹಿತಿ ಲಭ್ಯವಾಗಿದೆ. ಬೆಂಗಳೂರಿನಲ್ಲಿರುವ ಹಾಸನ ಜಿಲ್ಲೆಯ ಮತ್ತೊಂದು ಮಗು ಇದೀಗ ಮೃತಪಟ್ಟಿದೆ. ಹಾಸನ ಜಿಲ್ಲೆಯ 3 ಹೊರ ಜಿಲ್ಲೆಯ 2 ಮಕ್ಕಳು ಸಾವನ್ನಪ್ಪಿದ್ದಾರೆ. ಹಾಸನ ಜಿಲ್ಲೆಯಲ್ಲಿ ಡೆಂಘಿ ಸೋಂಕಿನಿಂದ ಮರಣ ಮೃದಂಗ ಬಾರಿಸುತ್ತಿದೆ. ನಿನ್ನೆ ಹಾಸನದ ಸಮೃದ್ಧಿ ಎನ್ನುವ 8 ವರ್ಷದ ಮಗು ಜಿಲ್ಲಾ ಆಸ್ಪತ್ರೆಯಲ್ಲಿ ದಾಖಲಾಗಿತ್ತು ಇಂದು ಚಿಕಿತ್ಸೆ ಫಲಿಸದೇ ಸಾವನಪ್ಪಿದೆ.

**ಡೆಂಘಿ ಸೋಂಕಿನಿಂದ ಮರಣ ಮೃದಂಗ**

ಹಾಸನದಲ್ಲಿ ನಿರಂತರವಾಗಿ ಬಿಟ್ಟು ಬಿಟ್ಟು ಮಳೆ ಬರುತ್ತಿರುವುದರಿಂದ ನಿಂತ ನೀರಿನ ಮಳೆಯೆಯಿಂದ ಸೊಳ್ಳೆಗಳು ಹೆಚ್ಚಾಗಿ ಈ ಒಂದು ಡೆಂಗು ಸೋಂಕು ಹೆಚ್ಚಳವಾಗುತ್ತಿದೆ ಎಂದು ತಿಳಿದು ಬಂದಿದೆ. ಆರೋಗ್ಯ ಅಧಿಕಾರಿಗಳು ಎಷ್ಟೇ ಜಾಗೃತಿ ಮೂಡಿಸಿದರು ಕೂಡ ಜನರು ಎಚ್ಚೆತ್ತುಕೊಳ್ಳದೆ ಇರುವುದರಿಂದ ಇಂತಹ ಅನಾಹುತಕ್ಕೆ ಕಾರಣ ಎಂದು ಹೇಳಲಾಗುತ್ತಿದೆ.

# ಪರೀಕ್ಷಾರ್ಥ ನೀರು ಹರಿಸುವ ಪ್ರಕ್ರಿಯೆ ಆರಂಭ: ಚಿಗುರಿದ ಆಸೆ

## 2,130 ಕೋಟಿ ವೆಚ್ಚದ ಕಾಮಗಾರಿ 2018ರಲ್ಲಿ ಆರಂಭವಾಗಿತ್ತು, ಹೈದರಾಬಾದ್ ಮೂಲದ ಕಂಪನಿ ಗುತ್ತಿಗೆಯನ್ನು ಪಡೆದಿತ್ತು

• ಉದಯವಾಹಿನಿ ಮೊಳಕಾಲ್ಮುರು

ಬಹುನಿರೀಕ್ಷಿತ ತುಂಗಭದ್ರಾ ಹಿನ್ನೀರು ಕುಡಿಯುವ ಯೋಜನೆಯಡಿ ಪರೀಕಾರ್ಥ ನೀರು ಹರಿಸುವ ಕಾರ್ಯ 2 – 3 ದಿನಗಳಿಂದ ಆರಂಭ ಗೊಂಡಿದ್ದು ಜನರಲ್ಲಿ ತುಸು ಆಸೆ ಚಿಗುರೊಡೆದಿದೆ.


ಯಾವುದೇ ಶಾಶ್ವತ ನೀರಿನ ಮೂಲವನ್ನು ಹೊಂದದ ಕಾರಣ, ಸದಾ ತೀವ್ರ ಕುಡಿಯುವ ನೀರಿನ ಸಮಸ್ಯೆ ಈ ಭಾಗದ ಜನರನ್ನು ಕಾಡುತ್ತಿತ್ತು.

ಫ್ಲೋರೈಡ್ ಸಮಸ್ಯೆಯಿಂದ ಜನರು ಅನಾರೋಗ್ಯಕ್ಕೆ ತುತ್ತಾಗುತ್ತಿರುವ ಬಗ್ಗೆ ದೂರು ಬಂದ ಕಾರಣ 2013ರಲ್ಲಿ ತುಂಗಭದ್ರಾ ಹಿನ್ನೀರು ಬಳಸಿಕೊಂಡು ಶಾಶ್ವತ ಕುಡಿಯುವ ನೀರು ನೀಡುವ ಯೋಜನೆಗೆ ರಾಜ್ಯ ಸರ್ಕಾರ ಅನುಮತಿ ನೀಡಿತ್ತು.

ಹೊಸಪೇಟೆ ತಾಲ್ಲೂಕಿನ ಮರಿಯಮ್ಮನಹಳ್ಳಿ ಬಳಿಯ ಶಿವಪುರ (ಚಿಬಿರಿ) ಬಳಿಯಿಂದ ಹಿನ್ನೀರು ಎತ್ತಿ ನೀರು ಹರಿಸುವುದು ಯೋಜನೆಯ ಗುರಿ. 2,130 ಕೋಟಿ ವೆಚ್ಚದ ಈ ಕಾಮಗಾರಿ 2018ರಲ್ಲಿ ಆರಂಭವಾಗಿತು. ಹೈದರಾಬಾದ್ ಮೂಲದ ಕಂಪನಿ ಗುತ್ತಿಗೆಯನ್ನು ಪಡೆದಿತ್ತು. ಕಾಮಗಾರಿ ಆರಂಭದಲ್ಲಿ ವಿಳಂಬದ ಜತೆಗೆ ಕೋವಿಡ್ ಸಮಯದಲ್ಲಿ ಕಾರ್ಯ ಸ್ಥಗಿತವಾದ ಪರಿಣಾಮ 3 ವರ್ಷಗಳ ನಂತರ ಯೋಜನೆಯು ಪ್ರಾಯೋಗಿಕವಾಗಿ ನೀರು ಹರಿಸುವ ಹಂತಕ್ಕೆ ತಲುಪಿದೆ.

### ಪೈಪ್ ಪರೀಕ್ಷೆ ಪೂರ್ಣ

**3 ದಿನಗಳಲ್ಲಿ 40 ಕಿ.ಮೀ.ನಷ್ಟು ಮುಖ್ಯ ಪೈಪ್ ಪರೀಕ್ಷೆ ಪೂರ್ಣವಾಗಿದೆ. ಈ ಕಾರ್ಯಕ್ಕೆ ಅಂದಾಜು 20 ದಿನ ಹಿಡಿದಿದೆ. ಈಗ ಚಳ್ಳಕೆರೆ ತಾಲ್ಲೂಕು ವ್ಯಾಪ್ತಿಯಲ್ಲಿ ಪರೀಕ್ಷೆ ನಡೆಯುತ್ತಿದೆ. ಇದಾದ ನಂತರ ಗ್ರಾಮಗಳಿಗೆ ಅಳವಡಿಸಿರುವ ಉಪ ಪೈಪ್ ಪರೀಕ್ಷೆ ಮಾಡಲಾಗುವುದು. ನಂತರ ಇಲಾಖೆಗೆ ವ್ಯಾಪ್ತಿಗೆ ನೀಡುವ ಕಾರ್ಯಕ್ಕೆ 6 ತಿಂಗಳಿಗೂ ಹೆಚ್ಚಿನ ಸಮಯ ಬೇಕಾಗಬಹುದು' ಎಂದು ಅಧಿಕಾರಿಗಳು ತಿಳಿಸಿದರು.**


ಉದಯವಾಹಿನಿ ಚಿತ್ರ

> ಮುಖ್ಯ ಪೈಪ್ ಪರೀಕ್ಷೆ ನಂತರ ಗ್ರಾಮಗಳಲ್ಲಿ ನಿರ್ಮಿಸಿರುವ ಟ್ಯಾಂಕ್‌ಗಳಿಗೆ ನೀರು ಹರಿಸಲಾಗುವುದು. ನಂತರ ಮನೆಗಳಿಗೆ ನೀರು ತಲುಪಲಿದೆ. ಈ ಕಾರ್ಯಕ್ಕೆ 4 ತಿಂಗಳ ಸಮಯ ಬೇಕಾಗುವ ಅಂದಾಜಿದೆ.
> -ಕೆ.ಆರ್. ಪ್ರಕಾಶ್, ಇಒ ತಾ.ಪಂ

> ಯೋಜನೆ ಆರಂಭದಿಂದಲೂ ಗುತ್ತಿಗೆದಾರರ ಜತೆ ಸಂಪರ್ಕ ಇಟ್ಟುಕೊಂಡು ತೊಡಕುಗಳನ್ನು ನಿವಾರಿಸಲಾಗಿದೆ. ಎಲ್ಲಾ ನಿರೀಕ್ಷೆಯಂತೆ ಆದಲ್ಲಿ ಮುಂದಿನ ಡಿಸೆಂಬರ್ ಅಥವಾ ಜನವರಿಯಲ್ಲಿ ಜನತೆಗೆ ಕುಡಿಯುವ ನೀರು ದೊರೆಯುವ ನಿರೀಕ್ಷೆ ಹೊಂದಲಾಗಿದೆ
> -ಎನ್.ವೈ. ಗೋಪಾಲಕೃಷ್ಣ, ಶಾಸಕ

ವಿಜಯನಗರ ಜಿಲ್ಲೆಯ ಕೂಡ್ಲಿಗಿ, ಚಿತ್ರದುರ್ಗ ಜಿಲ್ಲೆಯ ಮೊಳಕಾಲ್ಮುರು, ಚಳ್ಳಕೆರೆ ತಾಲ್ಲೂಕು, ತುರುವನೂರು ಹೋಬಳಿ, ತುಮಕೂರು ಜಿಲ್ಲೆಯ ಪಾವಗಡ ತಾಲ್ಲೂಕಿನ ಎಲ್ಲಾ ಗ್ರಾಮಗಳಿಗೆ ಕುಡಿಯುವ ನೀರು ನೀಡುವುದು ಉದ್ದೇಶವಾಗಿದೆ. ಈಗಾಗಲೇ ಗ್ರಾಮಗಳಿಗೆ ಪೈಪ್ ಹಾಕುವ ಕಾರ್ಯ, ಓವರ್ ಹೆಡ್ ಟ್ಯಾಂಕ್ ನಿರ್ಮಾಣ ವಾಲ್ವ್, ನಿಪ್ಪಲ್ ಅಳವಡಿಕೆ ಕಾರ್ಯ ಪೂರ್ಣವಾಗಿದೆ. ಅರಣ್ಯ ಪ್ರದೇಶದಲ್ಲಿ ಮುಖ್ಯ ಪೈಪ್ ಹಾಕುವುದಕ್ಕೆ ಅರಣ್ಯ ಇಲಾಖೆ ಅನುಮತಿ ಸಿಗದಿರುವುದು ವಿಳಂಬಕ್ಕೆ ಕಾರಣವಾಗಿತ್ತು. ಈಗ ಎಲ್ಲಾ ಪೂರ್ಣವಾಗಿದ್ದು 2-3 ದಿನಗಳಿಂದ ಮುಖ್ಯ ಪೈಪುಗಳಲ್ಲಿ ನೀರು ಹರಿಯುವುದು ಮತ್ತು ಸೋರುವಿಕೆಯನ್ನು ಪರೀಕ್ಷೆ ಮಾಡಲಾಗುತ್ತಿದೆ' ಎಂದು ಕಂಪನಿ ಸಿಬ್ಬಂದಿ ತಿಳಿಸಿದರು.

ಶಿವಪುರದಿಂದ ಮರಿಯಮ್ಮನಹಳ್ಳಿ 30 ಕಿ.ಮೀ ದೂರವಿದೆ. ಅಲ್ಲಿಂದ ತುಮಕೂರ್ಲಹಳ್ಳಿ 44 ಕಿ.ಮೀ ಇದ್ದು, ಇಲ್ಲಿಂದ ಚಳ್ಳಕೆರೆ ಗಡಿಯ ಕೆಂಚಮ್ಮನಹಳ್ಳಿ ಅಂದಾಜು 100 ಕಿ.ಮೀ ಇದೆ. ಇಲ್ಲಿ ವಿಭಾಗ ಮಾಡಿ ಕಾಮಗಾರಿ ರೂಪಿಸಲಾಗಿದೆ.

ತುಮಕೂರ್ಲಹಳ್ಳಿ ತನಕ ನೀರಿನ ಹರಿವು ಪರೀಕ್ಷಿಸಲಾಗಿದೆ. ಕೆಂಚಮ್ಮನಹಳ್ಳಿ ಸಮೀಪದ ನಿಡಗಲ್ಲುವಿನಿಂದ 20 ಕಿ.ಮೀ ದೂರದ ಪಾವಗಡಕ್ಕೆ ನೀರೆತ್ತಿ ಪೂರೈಸಲಾಗುವುದು. ಪರೀಕ್ಷಾರ್ಥ ನೀರು ಹರಿಸುತ್ತಿರುವುದು ಪೈಪ್‌ಗಳ ಸ್ವಚ್ಛತೆ ಸಹ ಮಾಡಲಾಗುತ್ತಿದೆ. 1,100ಕ್ಕೂ ಹೆಚ್ಚು ಜನವಸತಿ ಪ್ರದೇಶಗಳಿಗೆ ಇದರಿಂದ ಕುಡಿಯುವ ನೀರು ಹರಿಯಲಿದೆ ಎಂದು ಸಿಬ್ಬಂದಿ ಹೇಳಿದರು.

# ಮಿನಿ ನ್ಯೂಸ್

## ಬೀದರ್‌ನ ನೂತನ ಜಿಲ್ಲಾಧಿಕಾರಿಯಾಗಿ ಅಧಿಕಾರ ವಹಿಸಿಕೊಂಡ ಶಿಲ್ಪಾ ಶರ್ಮಾ

• ಉದಯವಾಹಿನಿ ಬೀದರ್


ಉದಯವಾಹಿನಿ ಚಿತ್ರ

ಬೀದರ್ ಜಿಲ್ಲಾ ನೂತನ ಜಿಲ್ಲಾಧಿಕಾರಿಯಾಗಿ ಶಿಲ್ಪಾ ಶರ್ಮಾ ಅವರು ಶುಕ್ರವಾರ ಅಧಿಕಾರ ಸ್ವೀಕರಿಸಿದರು. ನಗರದ ಜಿಲ್ಲಾಧಿಕಾರಿ ಕಚೇರಿಯಲ್ಲಿ ಶುಕ್ರವಾರ ಮಧ್ಯಾಹ್ನ ಗೋವಿಂದ ರೆಡ್ಡಿ ಅವರು ಶಿಲ್ಪಾ ಶರ್ಮಾ ಅವರಿಗೆ ಅಧಿಕಾರ ಹಸ್ತಾಂತರಿಸಿ ಸ್ವಾಗತಿಸಿದರು. ರಾಜ್ಯ ಸರ್ಕಾರವು ಗೋವಿಂದ ರೆಡ್ಡಿ ಅವರನ್ನು ಗದಗ ಜಿಲ್ಲಾಧಿಕಾರಿಯಾಗಿ ವರ್ಗಾವಣೆಗೊಳಿಸಿದೆ. ಗೋವಿಂದ ರೆಡ್ಡಿ ಅವರು 2 ವರ್ಷ 5 ತಿಂಗಳು ಜಿಲ್ಲೆಯಲ್ಲಿ ಕೆಲಸ ನಿರ್ವಹಿಸಿದ್ದಾರೆ.

2015ನೇ ಬ್ಯಾಚಿನ ಐಎಎಸ್ ಅಧಿಕಾರಿ ಆಗಿರುವ ಶಿಲ್ಪಾ ಶರ್ಮಾ ಅವರು, ಬೆಂಗಳೂರಿನ ಕರ್ನಾಟಕ ವಿದ್ಯುತ್ ಕಾರ್ಖಾನೆ ಲಿಮಿಟೆಡ್‌ನಲ್ಲಿ ವ್ಯವಸ್ಥಾಪಕ ನಿರ್ದೇಶಕಿಯಾಗಿ ಕೆಲಸ ಮಾಡಿದ್ದಾರೆ.

ಶಿಲ್ಪಾ ಅವರ ಅಧಿಕಾರ ಸ್ವೀಕಾರದ ಸಂದರ್ಭದಲ್ಲಿ ಹೆಚ್ಚುವರಿ ಜಿಲ್ಲಾಧಿಕಾರಿ ಶಿವಕುಮಾರ ಶೀಲವಂತ, ಉಪವಿಭಾಗಾಧಿಕಾರಿ ಲವೀಶ್ ಒರ್ಡಿಯಾ ಸೇರಿದಂತೆ ಜಿಲ್ಲಾಮಟ್ಟದ ವಿವಿಧ ಇಲಾಖೆಯ ಅಧಿಕಾರಿಗಳು ಹಾಗೂ ಜಿಲ್ಲಾಧಿಕಾರಿ ಕಚೇರಿಯ ಅಧಿಕಾರಿ, ಸಿಬ್ಬಂದಿ ವರ್ಗ ಹಾಜರಿದ್ದರು. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಯಾಗಿದ್ದ ಚನ್ನಬಸವಣ್ಣ ಎಸ್.ಎಲ್. ಅವರನ್ನು ವರ್ಗಾವಣೆಗೊಳಿಸಿದ ಎರಡು ದಿನಗಳ ನಂತರ ಗೋವಿಂದ ರೆಡ್ಡಿ ಅವರನ್ನು ವರ್ಗ ಮಾಡಲಾಗಿದೆ.

## ಕದ್ರಾ ಜಲಾಶಯದಿಂದ 30 ಸಾವಿರ ಕ್ಯುಸೆಕ್ ನೀರು ಹೊರಕ್ಕೆ

• ಉದಯವಾಹಿನಿ ಕಾರವಾರ


ಉದಯವಾಹಿನಿ ಚಿತ್ರ

ತಾಲ್ಲೂಕಿನ ಕದ್ರಾ ಜಲಾಶಯದಲ್ಲಿ ನೀರಿನ ಮಟ್ಟ ಏರಿಕೆಯಾಗುತ್ತಿರುವ ಹಿನ್ನೆಲೆಯಲ್ಲಿ ಶುಕ್ರವಾರ ನಾಲ್ಕು ಕ್ರಸ್ಟ್ ಗೇಟ್‌ಗಳ ಮೂಲಕ 30 ಸಾವಿರ ಕ್ಯುಸೆಕ್ ನೀರನ್ನು ಹೊರಕ್ಕೆ ಬಿಡಲಾಯಿತು. 34.50 ಮೀಟರ್ ಗರಿಷ್ಠ ನೀರು ಸಂಗ್ರಹಣಾ ಸಾಮರ್ಥ್ಯದ ಅಣೆಕಟ್ಟೆಯಲ್ಲಿ ಸದ್ಯ 30.33 ಮೀ. ಎತ್ತರದವರೆಗೆ ನೀರು ಸಂಗ್ರಹವಾಗಿದೆ. ಜೊಯಿಡಾ, ಕೈಗಾ, ಯಲ್ಲಾಪುರ ಭಾಗದಲ್ಲಿ ನಿರಂತರ ಮಳೆಯಾಗುತ್ತಿರುವುದರಿಂದ ಜಲಾಶಯಕ್ಕೆ ಹೆಚ್ಚಿನ ಪ್ರಮಾಣದಲ್ಲಿ ನೀರು ಹರಿದು ಬರತೊಡಗಿದೆ.

ಜಲಾಶಯಕ್ಕೆ ನೀರಿನ ಒಳಹರಿವಿನ ಪ್ರಮಾಣ 19,676 ಕ್ಯುಸೆಕ್ ಇದ್ದು ನೀರಿನ ಮಟ್ಟ ಏರಿಕೆಯಾಗುತ್ತಿದೆ. ಪ್ರವಾಹ ಉಂಟಾಗುವುದನ್ನು ತಡೆಯುವ ನಿಟ್ಟಿನಲ್ಲಿ ಅಣೆಕಟ್ಟೆಯಲ್ಲಿ ಗರಿಷ್ಠ 31 ಮೀಟರ್ ಸಂಗ್ರಹಣಾ ಸಾಮರ್ಥ್ಯವನ್ನು ಜಿಲ್ಲಾಡಳಿತ ನಿಗದಿಪಡಿಸಿದ್ದು, ಈ ಹಿನ್ನೆಲೆಯಲ್ಲಿ ಮುನ್ನೆಚ್ಚರಿಕೆ ಕ್ರಮವಾಗಿ ನೀರು ಹೊರಕ್ಕೆ ಬಿಡಲಾಗುತ್ತಿದೆ. ಪ್ರತಿ ಗೇಟ್ ಮೂಲಕ ತಲಾ 7 ಸಾವಿರ ಕ್ಯುಸೆಕ್ ನೀರು ಹೊರಬಿಡಲಾಗುತ್ತಿದೆ' ಎಂದು ಕೆಪಿಸಿ ಹಿರಿಯ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

## ಹಿಡಕಲ್ ಜಲಾಶಯದಲ್ಲಿ ಒಂದೇ ದಿನ ಐದಡಿ ನೀರು ಏರಿಕೆ

• ಬೆಳಗಾವಿ


ಉದಯವಾಹಿನಿ ಚಿತ್ರ

ಮಹಾರಾಷ್ಟ್ರದ ಸಾವಂತವಾಡಿ ಹಾಗೂ ಅಂಬೋಲಿ ಅರಣ್ಯ ಪ್ರದೇಶದಲ್ಲಿ ಧಾರಾಕಾರ ಮಳೆ ಮುಂದುವರಿದಿದ್ದು, ಘಟಪ್ರಭಾ ನದಿಯ ಮೂಲಕ ಹಿಡಕಲ್ ಜಲಾಶಯಕ್ಕೆ ಅಪಾರ ಪ್ರಮಾಣದಲ್ಲಿ ನೀರು ಹರಿದು ಬರುತ್ತಿದೆ. ಕಳೆದ 24 ಗಂಟೆಗಳ ಅವಧಿಯಲ್ಲಿ ಜಲಾಶಯಕ್ಕೆ 20 ಸಾವಿರ ಕ್ಯೂಸೆಕ್ಸ್ ನೀರು ಹರಿದು ಬರುತ್ತಿದ್ದು ಒಂದೇ ದಿನ ಜಲಾಶಯದ ಮಟ್ಟದಲ್ಲಿ ಐದು ಅಡಿ ಏರಿಕೆಯಾಗಿದೆ. ಒಟ್ಟು 2175 ಅಡಿ ಸಾಮರ್ಥ್ಯದ ಜಲಾಶಯದಲ್ಲಿ ಈಗ 2122 ಅಡಿ ನೀರು ಸಂಗ್ರಹವಾಗಿದೆ. ಅದೇ ರೀತಿ ಬೆಳಗಾವಿ ಜಿಲ್ಲೆಯ ಖಾನಾಪುರ ತಾಲ್ಲೂಕಿನ ಕಣಕುಂಬಿ ಮತ್ತು ಜಾಂಬೋಟಿ ಅರಣ್ಯ ಪ್ರದೇಶದಲ್ಲಿ ಭಾರೀ ಮಳೆಯಾಗುತ್ತಿದೆ. ಇದರಿಂದ ಮಲಪ್ರಭಾ ನದಿಯ ಮೂಲಕ ಜಲಾಶಯಕ್ಕೆ 12 ಸಾವಿರ ಕ್ಯೂಸೆಕ್ಸ್ ನೀರು ಹರಿದು ಬರುತ್ತಿದ್ದು ಜಲಾಶಯದಲ್ಲಿ ಒಂದೇ ದಿನ ಮೂರು ಅಡಿಗಳಷ್ಟು ನೀರು ಸಂಗ್ರಹವಾಗಿದೆ. ಒಟ್ಟು 2079 ಅಡಿ ಸಾಮರ್ಥ್ಯದ ಜಲಾಶಯದಲ್ಲಿ ಈಗ 2043 ಅಡಿ ನೀರು ಸಂಗ್ರಹವಾಗಿದೆ.

## ಬಸ್‌ನಲ್ಲಿ ಬೆಂಕಿ ಅವಘಡ: ಟೈರ್ ಸ್ಫೋಟ

• ಉದಯವಾಹಿನಿ ಕಾರವಾರ

ಚಲಿಸುತ್ತಿದ್ದ ಬಸ್ ನಲ್ಲಿ ಬೆಂಕಿ ಕಾಣಿಸಿಕೊಂಡಿದ್ದು, ಏಕಾಏಕಿ ಟೈರ್ ಸ್ಫೋಟಗೊಂಡ ಘಟನೆ ಉತ್ತರ ಕನ್ನಡ ಜಿಲ್ಲೆಯ ಕುಮಟಾ ರಸ್ತೆಯಲ್ಲಿ ನಡೆದಿದೆ. ಧಾರಾಕಾರ ಮಳೆ ನಡುವೇ ಬಸ್ ನಲ್ಲಿ ಬೆಂಕಿ ಕಾಣಿಸಿಕೊಂಡಿದೆ. ಪ್ರಯಾಣಿಕರ ಗಮನಕ್ಕೆ ಬರುತ್ತಿದ್ದಂತೆ ಪ್ರಯಣಿಕರು ಕೂಗಿಕೊಂಡಿದ್ದಾರೆ. ತಕ್ಷಣ ಚಾಲಕ ಬಸ್ ನಿಲ್ಲಿಸಿ, ಪ್ರಯಾಣಿಕರನ್ನು ಕೆಳಗಿಳಿಸಿದ್ದಾರೆ. ಕೆಲವೇ ಕ್ಷಣಗಳಲ್ಲಿ ಬಸ್ ನ ಟೈರ್ ಸ್ಫೋಟಗೊಂಡಿದೆ. ಕ್ಷಣಾರ್ಧದಲ್ಲಿ ಭಾರಿ ಅನಾಹುತ ತಪ್ಪಿದೆ. 25 ಜನರಿದ್ದ ಬಸ್ ಮುರುಡೇಶ್ವರದಿಂದ ಅಥಣಿ ಕಡೆಗೆ ತೆರಳುತ್ತಿತ್ತು. ಬಸ್ ನ ಟೈರ್ ನಲ್ಲಿ ಬೆಂಕಿ ಕಾಣಿಸಿಕೊಂಡಿದೆ. ಪ್ರಯಾಣಿಕರು ಇದನ್ನು ಗಮನಿಸಿ ಕೂಗಿಕೊಂಡಿದ್ದಾರೆ ಬಸ್ ನಿಲ್ಲಿಸಿ ಪ್ರಯಾಣಿಕರನ್ನು ಇಳಿಸುತ್ತಿದ್ದಂತೆ ಟೈರ್ ಬ್ಲಾಸ್ಟ್ ಆಗಿ ಬೆಂಕಿ ಉರಿಯಲಾರಂಭಿಸಿದೆ. ಸ್ಥಳಕ್ಕೆ ದೌಡಾಯಿಸಿದ ಅಗ್ನಿಶಾಮಕ ಸಿಬ್ಬಂದಿ ಬೆಂಕಿ ನಂದಿಸಿದ್ದಾರೆ.

## ಸ್ವಾಮೀಜಿಯನ್ನು ಬೆದರಿಸಿ ದರೋಡೆ

• ಉದಯವಾಹಿನಿ ರಾಯಚೂರು

ತಡರಾತ್ರಿ ಭಕ್ತರ ಸೋಗಿನಲ್ಲಿ ಬಂದು ಮಠದಲ್ಲಿ ಲಕ್ಷಾಂತರ ಹಣ, ಚಿನಾಭರಣ ದೋಚಿದ ಘಟನೆ ರಾತ್ರಿ ನಡೆದಿದೆ. ಜಿಲ್ಲೆಯ ಲಿಂಗಸುಗೂರು ಪಟ್ಟಣದ ಚಿತ್ತರಗಿ ವಿಜಯ ಮಹಾಂತೇಶ್ವರ ಶಾಖಾ ಮಠದಲ್ಲಿ ಕಳ್ಳತನ ನಡದಿದೆ. ತಡರಾತ್ರಿ ಇಬ್ಬರು ಮಠಕ್ಕೆ ಬಂದಿದ್ದು, ನಾವು ಗುಲ್ಬರ್ಗದಿಂದ ಬಂದಿದ್ದು, ಮಠದ ಭಕ್ತರಾಗಿದ್ದೇವೆ ಎಂದು ಬಂದು ಮಠದ ಪೀಠಾಧಿಪತಿ ಸಿದ್ಧಲಿಂಗ ಸ್ವಾಮೀಜಿಯನ್ನು ಬೆದರಿಸಿ ಚಿನ್ನಾಭರಣ, ನಗದು ಹಣ ದೋಚಿದ್ದಾರೆ. 20 ಲಕ್ಷ ನಗದು ಹಣ, 80 ಗ್ರಾಂ ಚಿನ್ನಾಭರಣ, 7 ಕೆ.ಜಿ ಬೆಳ್ಳಿ ವಸ್ತುಗಳನ್ನು ದೋಚಿ ಪರಾರಿಯಾಗಿದ್ದಾರೆ.ಸುಮಾರು 35 ಲಕ್ಷ ರೂ. ಮೌಲ್ಯದ ವಸ್ತುಗಳನ್ನು ದೋಚಲಾಗಿದೆ. ರಾತ್ರಿ ಮಠದಲ್ಲಿ ಮಲಗಲು ಆಶ್ರಯ ಕೇಳಿಕೊಂಡು ಬಂದಿದ್ದರು. ಮಧ್ಯರಾತ್ರಿ ಸ್ವಾಮೀಜಿ ಕೋಣೆಯ ಬಾಗಿಲು ತೆಗೆಯಿಸಿ ಮಾರಕಾಸ್ತ್ರ ತೋರಿಸಿ ಬೆದರಿಸಿ ಸುಲಿಗೆ ಮಾಡಲಾಗಿದೆ ಎನ್ನಲಾಗಿದೆ. ಶುಕ್ರವಾರ ಬೆಳಗ್ಗೆ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಶಿವಕುಮಾರ ಸ್ಥಳಕ್ಕೆ ಭೇಟಿ ನೀಡಿ ವಿಚಾರಣೆ ನಡೆಸಿದ್ದಾರೆ. ಲಿಂಗಸೂಗೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಬೆಳಿಗ್ಗೆ | 09:00 ರಿಂದ 10:30 |
| ಗುಳಿಕ ಕಾಲ | ಬೆಳಿಗ್ಗೆ | 06:00 ರಿಂದ 07:30 |
| ಯಮಗಂಡ ಕಾಲ | ಮಧ್ಯಾಹ್ನ | 01:30 ರಿಂದ 03:00 |

**ಮೇಷ:** ಅಧ್ಯಯನಗಳನ್ನು ತಪ್ಪಿಸಿ ಹೊರಾಂಗಣ ಚಟುವಟಿಕೆಗಳಲ್ಲಿ ತೊಡಗಿಕೊಳ್ಳುವಿಕೆ ನಿಮ್ಮ ಪೋಷಕರಿಗೆ ಕೋಪ ಬರಿಸಬಹುದು. ನಿಮ್ಮ ಪೋಷಕರನ್ನು ಸಂತೋಷಗೊಳಿಸಲು ಎರಡನ್ನು ಸಂಭಾಳಿಸಬೇಕು.

**ವೃಷಭ:** ಕೆಲವು ಹಿನ್ನಡೆ ಎದುರಿಸುವ ಸಾಧ್ಯತೆಯಿದೆ. ದೃತಿಗೆಡಬೇಡಿ ಹಾಗೂ ನಿರೀಕ್ಷಿತ ಫಲಿತಾಂಶ ಪಡೆಯಲು ಕಠಿಣ ಪರಿಶ್ರಮವಡಿ. ಈ ಹಿನ್ನಡೆಗಳು ನಿಮ್ಮ ಯಶಸ್ಸಿನ ಸೋಪಾನಗಳಾಗಿರಲಿ.

**ಮಿಥುನ:** ನಿಮ್ಮ ಕುಟುಂಬಕ್ಕೆ ಸೂಕ್ತ ಸಮಯ ನೀಡಿ. ನೀವು ಅವರ ಸಲುವಾಗಿ ಕಾಳಜಿ ವಹಿಸುತ್ತೀರೆಂದು ಅವರಿಗೆ ಅರ್ಥವಾಗಲಿ. ಅವರೊಂದಿಗೆ ನಿಮ್ಮ ಗುಣಮಟ್ಟದ ಸಮಯ ಕಳೆಯಿರಿ.

**ಕರ್ಕಾಟಕ:** ನಿಮ್ಮ ಹಾಸ್ಯಪ್ರಜ್ಞೆ ಇನ್ನೊಬ್ಬರಿಗೆ ಸಂತೋಷವಸ್ತುಗಳನ್ನು ಹೊಂದುವುದರಲ್ಲದೇ ನಿಮ್ಮೊಳಗೇ ಇದೆಯೆಂದು ಅರ್ಥ ಮಾಡಿಸುವುದರಿಂದ ಅವರು ಸ್ವತಃ ಈ ಕೌಶಲ್ಯವನ್ನು ಹೊಂದಲು ಪ್ರೋತ್ಸಾಹಿಸಿದಂತಾಗುತ್ತದೆ.

**ಸಿಂಹ:** ಕೆಲವು ಪ್ರಮುಖ ಯೋಜನೆಗಳನ್ನು ಕಾರ್ಯಗತಗೊಳಿಸಲಾಗುತ್ತದೆ ಹಾಗೂ ಅವು ನಿಮಗೆ ಹೊಸ ಆರ್ಥಿಕ ಲಾಭ ತರುತ್ತವೆ. ಕುಟುಂಬದ ಸದಸ್ಯರು ನಿಮ್ಮ ಜೀವನದಲ್ಲಿ ಒಂದು ವಿಶೇಷಸ್ಥಾನವನ್ನು ಹೊಂದಿರುತ್ತಾರೆ.

**ಕನ್ಯಾ:** ಜೀವನದೆಡೆಗೆ ಉದಾರವಾದ ಮನೋಭಾವ ಹೊಂದಿ. ದೂರು ನೀಡುವುದು ಮತ್ತು ನಿಮ್ಮ ಜೀವನಮಟ್ಟದ ಬಗೆಗೆ ಅಸಮಾಧಾನ ಹೊಂದುವುದರಿಂದ ಯಾವುದೇ ಪ್ರಯೋಜನವಿಲ್ಲ.

**ತುಲಾ:** ಇಂದು ನೀವು ಇದನ್ನು ತಿಳಿಯುತ್ತೀರಿ. ಇಂದು, ಯಾರಿಗೂ ತಿಳಿಸದೆ, ನಿಮ್ಮ ಮನೆಯಲ್ಲಿ ದೂರದ ಸಂಬಂಧಿಯೊಬ್ಬರ ಪ್ರವೇಶವಿರಬಹುದು, ಅದು ನಿಮ್ಮ ಸಮಯವನ್ನು ಹಾಳು ಮಾಡುತ್ತದೆ.

**ವೃಶ್ಚಿಕ:** ಆರೋಗ್ಯವು ಇತರರೊಂದಿಗೆ ಸಂತೋಷವನ್ನು ಹಂಚಿಕೊಳ್ಳುವ ಮೂಲಕ ಅರಳುತ್ತದೆ. ನಿಮ್ಮ ಹಣವನ್ನು ಸಂಗ್ರಹಿಸಿದಾಗ ಮಾತ್ರ ಹಣ ನಿಮ್ಮ ಕೆಲಸಕ್ಕೆ ಬರುತ್ತದೆ. ಇದನ್ನು ನೀವು ಚೆನ್ನಾಗಿ ಅರ್ಥಮಾಡಿಕೊಳ್ಳಿ.

**ಧನಸ್ಸು:** ಉತ್ತಮ ಜೀವನಕ್ಕಾಗಿ ನಿಮ್ಮ ಆರೋಗ್ಯ ಮತ್ತು ಒಟ್ಟಾರೆ ವ್ಯಕ್ತಿತ್ವವನ್ನು ಸುಧಾರಿಸಲು ಪ್ರಯತ್ನಿಸಿ. ಯಾವುದೇ ಆಪ್ತ ಸಂಬಂಧಿಕರ ಬೆಂಬಲದಿಂದ ನೀವು ನಿಮ್ಮ ವ್ಯಾಪಾರದಲ್ಲಿ ಉತ್ತಮವಾಗಿ ಮಾಡಬಹುದು.

**ಮಕರ:** ಇಂದು ನಿಮ್ಮ ಕಚೇರಿಯ ಸಹೋದ್ಯೋಗಿ ನಿಮ್ಮ ಅಮೂಲ್ಯವಾದ ವಸ್ತುವನ್ನು ಕದಿಯಬಹುದು, ಆದ್ದರಿಂದ ಇಂದು ನೀವು ನಿಮ್ಮ ವಸ್ತುವನ್ನು ಎಚ್ಚರಿಕೆಯಿಂದ ಇಟ್ಟುಕೊಳ್ಳಬೇಕು.

**ಕುಂಭ:** ನಿಮ್ಮ ದೈಹಿಕ ಬಲವನ್ನು ನಿರ್ವಹಿಸಲು ನೀವು ಕ್ರೀಡೆಯಲ್ಲಿ ಸಮಯ ಕಳೆಯುವ ಸಾಧ್ಯತೆಗಳಿವೆ. ಸಹೋದರ-ಸಹೋದರಿಯರ ಸಹಾಯದಿಂದ ಇಂದು ನೀವು ಅರ್ಹ್ತಕವಾಗಿ ಲಾಭವನ್ನು ಪಡೆಯಬಹುದು.

**ಮೀನ:** ನಿಮ್ಮ ಅಧಿಕ ಚೈತನ್ಯವನ್ನು ಇಂದು ಚೆನ್ನಾಗಿ ಬಳಸಿಕೊಳ್ಳಲು ಪ್ರಯತ್ನಿಸಿ. ನಿಮ್ಮ ಅವಾಸ್ತವಿಕ ಯೋಜನೆ ಹಣದ ಕೊರತೆಗೆ ಕಾರಣವಾಗುತ್ತದೆ. ನೆರೆಮನೆಯವರ ಜೊತಗಿನ ಜಗಳ ನಿಮ್ಮ ಮನಸ್ಸು ಕೆಡಿಸುತ್ತದೆ.

# ಕೊಲ್ಲಿಬಚ್ಚಲು, ಕರಡಿಬೆಟ್ಟ ಅರಣ್ಯಪ್ರದೇಶ ಶಾಶ್ವತ ಕೈತಪ್ಪುವ ಭೀತಿ

## ಹೆದ್ದಾರಿಯಲ್ಲಿ ತಿರುವು ತಪ್ಪಿಸಿ ನೇರ ಸಂಚಾರಕ್ಕೆ ಅನುಕೂಲ ಮಾಡಿಕೊಡಲು ಇಲ್ಲಿ ಪಥ ಬದಲಿಸುವ ಕಾರ್ಯ ನಡೆದಿದೆ

• ಉದಯವಾಹಿನಿ ಶಿವಮೊಗ್ಗ

ಬೆಂಗಳೂರು-ಹೊನ್ನಾವರ ಸಂಪರ್ಕಿಸುವ ರಾಷ್ಟ್ರೀಯ ಹೆದ್ದಾರಿ- 206ರ ವಿಸ್ತರಣೆ ವೇಳೆ ಶಿವಮೊಗ್ಗ ತಾಲ್ಲೂಕಿನ ತುಪ್ಪೂರು ಬಳಿ ಅದರ ಪಥ ಬದಲಿಸಲು ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ (ಎನ್‌ಎಚ್‌ಎಐ) ಮುಂದಾಗಿದೆ. ಇದು ಸ್ಥಳೀಯರು ಹಾಗೂ ಜಿಲ್ಲೆಯ ಪರಿಸರಾಸಕ್ತರ ಆಕ್ರೋಶಕ್ಕೆ ಕಾರಣವಾಗಿದೆ. ಹೆದ್ದಾರಿಗೆ ಭೂಮಿ ಕಳೆದುಕೊಳ್ಳಲಿರುವ ರೈತರಲ್ಲೂ ಆತಂಕ ಮೂಡಿಸಿದೆ.

ಬಿ.ಎಚ್. ರಸ್ತೆಯನ್ನು ನಾಲ್ಕು ಪಥಕ್ಕೆ ವಿಸ್ತರಿಸಲು ಎನ್‌ಎಚ್‌ಎಐ ಕಾಮಗಾರಿ ಕೈಗೆತ್ತಿಕೊಂಡಿದೆ. ಅದರಡಿ ಸಾಗರ ತಾಲ್ಲೂಕಿನ ಗಿಳಾಲಗುಂಡಿಯಿಂದ ಶಿವಮೊಗ್ಗ ತಾಲ್ಲೂಕಿನ ಕೋಣೆ ಹೊಸೂರು ಮಧ್ಯೆ ಹಾಲಿ ಇರುವ ಹೆದ್ದಾರಿಯ ಬದಲು ಕೊಲ್ಲಿ ಬಚ್ಚಲು- ಕರಡಿ ಬೆಟ್ಟ ಅರಣ್ಯ ಪ್ರದೇಶದಲ್ಲಿ ಗುಡ್ಡ ಸೀಳಿ ಹೊಸದಾಗಿ ಹೆದ್ದಾರಿ ನಿರ್ಮಿಸಲು ಪ್ರಾಧಿಕಾರ ಯೋಜನೆ ರೂಪಿಸಿದೆ. ಹೆದ್ದಾರಿಯಲ್ಲಿ ತಿರುವು ತಪ್ಪಿಸಿ ನೇರ ಸಂಚಾರಕ್ಕೆ ಅನುಕೂಲ ಮಾಡಿಕೊಡಲು ಇಲ್ಲಿ ಪಥ ಬದಲಿಸುವ ಕಾರ್ಯ ನಡೆದಿದೆ ಎಂದು ತಿಳಿದುಬಂದಿದೆ. ಬದಲಾದ ಪಥದಲ್ಲಿ ಹೆದ್ದಾರಿ ನಿರ್ಮಾಣಕ್ಕೆ ಭೂಸ್ವಾಧೀನಪಡಿಸಿಕೊಳ್ಳಲು ಗಿಳಾಲುಗುಂಡಿ ಗ್ರಾಮಸ್ಥರಿಗೆ ವಿಶೇಷ ಭೂಸ್ವಾಧೀನಾಧಿಕಾರಿಯೂ ಆದ ಸಾಗರ ಉಪವಿಭಾಗಾಧಿಕಾರಿ ಈಚೆಗೆ ನೋಟಿಸ್ ಕೊಟ್ಟಿದ್ದಾರೆ. ಭೂಮಿ ಸ್ವಾಧೀನದ ವಿಚಾರದಲ್ಲಿ ಪರಿಹಾರ ನಿರ್ಧರಿಸಲು ಸೂಕ್ತ ದಾಖಲೆಗಳೊಂದಿಗೆ ಜುಲೈ 6ರಂದು ಸಾಗರದ ತಮ್ಮ ಕಚೇರಿಗೆ ಬರುವಂತೆ ನೋಟಿಸ್‌ನಲ್ಲಿ ಉಲ್ಲೇಖಿಸಿದ್ದಾರೆ. ಇದು ರೈತರಲ್ಲಿ ಆತಂಕ ಹೆಚ್ಚಿಸಿದೆ. ಇದರ ನಡುವೆ ರಸ್ತೆ ನಿರ್ಮಾಣಕ್ಕೆ ಭೂಮಿ ನೀಡುವಂತೆ ಹೆದ್ದಾರಿ ಪ್ರಾಧಿಕಾರ ಅರಣ್ಯ ಇಲಾಖೆಗೂ ಪ್ರಸ್ತಾವ ಸಲ್ಲಿಸಿದೆ. ಹೊಸ ರಸ್ತೆ ನಿರ್ಮಾಣದಿಂದ ತುಪ್ಪೂರು ಗ್ರಾಮ ಪಂಚಾಯಿತ್ತಿ ವ್ಯಾಪ್ತಿಯ ಕೊಲ್ಲಿ ಬಚ್ಚಲು ಕಣಿವೆ ಪ್ರದೇಶದ 500 ಎಕರೆಯಷ್ಟು ಅರಣ್ಯ ಸಂಪೂರ್ಣ ನಾಶವಾಗಲಿದೆ. ಇದರಿಂದ ಸಾವಿರಾರು ಮರಗಳ ಮಾರಣ ಹೋಮವಾಗಲಿದೆ' ಎಂದು ಪರಿಸರಾಸಕ್ತರು ಆತಂಕ ವ್ಯಕ್ತಪಡಿಸಿದ್ದಾರೆ.ಕೊಲ್ಲಿಬಚ್ಚಲು ಕಣಿವೆ ಪ್ರದೇಶದ ಕರಡಿ ಬೆಟ್ಟ ಆನೆ, ಹುಲಿ, ಕರಡಿ, ಚಿರತೆ, ಕಾಡೆಮ್ಮೆ ಸೇರಿದಂತೆ ಅಳಿವಿನಂಚಿನಲ್ಲಿರುವ ವನ್ಯ ಜೀವಿಗಳ ಆವಾಸ ಸ್ಥಾನ. ಇಲ್ಲಿ ಕಾಡು ನಾಶ ಮಾಡಿ ಹೊಸದಾಗಿ ರಾಷ್ಟ್ರೀಯ ಹೆದ್ದಾರಿ ನಿರ್ಮಾಣ ಮಾಡಿದರೆ ಅವುಗಳ ನೈಸರ್ಗಿಕ ನೆಲೆಗೆ ಧಕ್ಕೆಯಾಗಲಿದೆ ಎಂದು ವೃಕ್ಷ ಲಕ್ಷ ಆಂದೋಲನದ ಮುಖ್ಯಸ್ಥ ಶಿರಸಿಯ ಅನಂತ ಹೆಗಡೆ ಆಶೀಸರ ಹೇಳುತ್ತಾರೆ.

ರಸ್ತೆ ನಿರ್ಮಾಣಕ್ಕೆ ಕಣಿವೆಯ ಎತ್ತರದ ಗುಡ್ಡಗಳನ್ನು ಕತ್ತರಿಸುವ ದುಸ್ಸಾಹಸಬೇಡ. ಅಲ್ಲಿನ ಹಳ್ಳಗಳು ಹಾಗೂ ಅರಣ್ಯ ಪ್ರದೇಶ ಭೂ ಕುಸಿತದಿಂದ ನಿರ್ನಾಮವಾಗಲಿವೆ ಎಂದು ಆಶೀಸರ ಆತಂಕ ವ್ಯಕ್ತಪಡಿಸುತ್ತಾರೆ.ಬಿ.ಎಚ್. ರಸ್ತೆಯ ಪಥ ಬದಲಿಗೆ ವಿರೋಧ ವ್ಯಕ್ತಪಡಿಸಿ ಮಂಗಳವಾರ ಕೊಲ್ಲಿ ಬಚ್ಚಲು ಪ್ರದೇಶದಲ್ಲಿ ನಡೆದ ಸಭೆಯ ನೋಟ ಹೆದ್ದಾರಿಯ ಪಥ ಬದಲಿ ವಿರೋಧಿಸಿ ನಿರ್ಣಯ ಕೈಗೊಂಡಿತು.

**500 ಎಕರೆಯಷ್ಟು ಅರಣ್ಯ ಸಂಪೂರ್ಣ ನಾಶ**



ಉದಯವಾಹಿನಿ ಚಿತ್ರ

> ಗಿಳಾಲುಗುಂಡಿಯ ಅಮ್ಮನಕೆರೆ ಸಾವಿರಾರು ಎಕರೆ ಕೃಷಿ ಭೂಮಿಗೆ ನೀರುಣಿಸುತ್ತಿದೆ. ಕೊಲ್ಲಿ ಬಚ್ಚಲು ಕಣಿವೆಯೇ ಅದಕ್ಕೆ ಜಲಮೂಲ. ಕೆರೆಯನ್ನು ವಿಭಜಿಸಿ ಹೆದ್ದಾರಿ ನಿರ್ಮಿಸಿದರೆ ಜಲಮೂಲಕ್ಕೆ ಹಾನಿಯಾಗುತ್ತದೆ -ಗಿಳಾಲಗುಂಡಿಯ ರೂಪಾ

### ಸರ್ಕಾರಕ್ಕೆ ಒತ್ತಾಯಿಸಲು ಸಭೆ ನಿರ್ಣಯ

ರಾಷ್ಟ್ರೀಯ ಹೆದ್ದಾರಿಯ ಬದಲಿ ಪಥ ನಿರ್ಮಾಣಕ್ಕೆ ವಿರೋಧ ವ್ಯಕ್ತಪಡಿಸಿ ಸ್ಥಳೀಯರು ಅನಂತ ಹೆಗಡೆ ಆಶೀಸರ ಹಾಗೂ ಗಿಳಾಲಗುಂಡಿ ಗ್ರಾಮದ ಮುಖಂಡ ಚಂದ್ರಪ್ಪ ನೇತೃತ್ವ ಜುಲೈ 2ರಂದು ಕೊಲ್ಲಿಬಚ್ಚಲಿನಲ್ಲಿ ಸಭೆ ನಡೆಸಿದರು. ಕರಡಿ ಬೆಟ್ಟದ ಮೂಲಕ ಹೊಸ ರಸ್ತೆ ನಿರ್ಮಾಣ ಮಾಡುವ ಯೋಜನೆ ಕೈಬಿಟ್ಟು ಈಗಾಗಲೇ ಇರುವ ಗಿಳಾಲಗುಂಡಿ-ಕೋಣೆ ಹೊಸೂರು ರಸ್ತೆಯನ್ನೇ ಅಭಿವೃದ್ಧಿಪಡಿಸಬೇಕು ಎಂದು ಸರ್ಕಾರಕ್ಕೆ ಒತ್ತಾಯಿಸಲು ಸಭೆ ನಿರ್ಣಯ ಕೈಗೊಂಡಿತು.

> ಕರಡಿ ಬೆಟ್ಟದ ಮೂಲಕ ರಾಷ್ಟ್ರೀಯ ಹೆದ್ದಾರಿ ನಿರ್ಮಾಣಕ್ಕೆ ಅರಣ್ಯ ಇಲಾಖೆ ಅನುಮತಿ ನೀಡಬಾರದು ಎಂದು ಸಾಗರ ಡಿಸಿಎಫ್‌ಗೆ ಮನವಿ ಸಲ್ಲಿಸಿದ್ದೇವೆ -ಕೆ.ವೆಂಕಟೇಶ, ವೃಕ್ಷ ಲಕ್ಷ ಆಂದೋಲನದ ಸಂಚಾಲಕ

# ಜುಲೈ 09ರಂದು ಜಿಲ್ಲೆಗೆ 'ಕರ್ನಾಟಕ ಜ್ಯೋತಿ ರಥಯಾತ್ರೆ' ವಿಜೃಂಭಣೆಯ ಸ್ವಾಗತಕ್ಕೆ ಕ್ರಮ: ಟಿ. ವೆಂಕಟೇಶ್

• ಉದಯವಾಹಿನಿ ಚಿತ್ರದುರ್ಗ

ಕರ್ನಾಟಕ ಸಂಭ್ರಮ-50ರ ಅಂಗವಾಗಿ ಕರ್ನಾಟಕ ಜ್ಯೋತಿ ರಥಯಾತ್ರೆಯು ರಾಜ್ಯಾದ್ಯಂತ ಸಂಚರಿಸಲಿದ್ದು, ದಾವಣಗೆರೆ ಜಿಲ್ಲೆಯ ಚನ್ನಗಿರಿ ಮಾರ್ಗವಾಗಿ ಇದೇ ಜುಲೈ 09ರಂದು ಚಿತ್ರದುರ್ಗ ಜಿಲ್ಲೆಗೆ ಪ್ರವೇಶಿಸಲಿದೆ. ಕರ್ನಾಟಕ ಜ್ಯೋತಿ ರಥಯಾತ್ರೆಗೆ ಜಿಲ್ಲೆಯಲ್ಲಿ ವಿಜೃಂಭಣೆಯಿಂದ ಸ್ವಾಗತಿಸಲು ನಿರ್ಧರಿಸಲಾಗಿದೆ ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ತಿಳಿಸಿದ್ದಾರೆ. ಕರ್ನಾಟಕ ಸಂಭ್ರಮ-50ರ ಅಂಗವಾಗಿ ರಥಯಾತ್ರೆಯನ್ನು ಗೌರವದಿಂದ ಬರಮಾಡಿಕೊಳ್ಳುವ ಹಾಗೂ ಬೀಳ್ಕೊಡುಗೆ ಕಾರ್ಯಕ್ರಮ ಸಂಬಂಧ ಈಗಾಗಲೆ ಅಧಿಕಾರಿಗಳೊಂದಿಗೆ ಚರ್ಚಿಸಿ, ಸೂಕ್ತ ಕ್ರಮ ಕೈಗೊಳ್ಳಲು ಸೂಚನೆ ನೀಡಲಾಗಿದೆ.



ಚಿತ್ರದುರ್ಗ ಜಿಲ್ಲೆಯಲ್ಲಿ ಜ್ಯೋತಿ ರಥಯಾತ್ರೆಯು ಜುಲೈ 09 ರಂದು ಚನ್ನಗಿರಿಯಿಂದ ಹೊರಟು, ಬೆಳಿಗ್ಗೆ 09 ಗಂಟೆಗೆ ಹೊಳಲ್ಕೆರೆಗೆ ಆಗಮಿಸಲಿದೆ, ಇಲ್ಲಿ ರಥಯಾತ್ರೆಗೆ ವಿಜೃಂಭಣೆಯ ಸ್ವಾಗತ ಕೋರಲಾಗುವುದು, ವಿವಿಧ ಶಾಲಾ ಕಾಲೇಜುಗಳ ವಿದ್ಯಾರ್ಥಿಗಳು, ಅಧಿಕಾರಿಗಳು, ಸ್ಥಳೀಯ ಜನಪ್ರತಿನಿಧಿಗಳು ಪಾಲ್ಗೊಳ್ಳಲಿದ್ದಾರೆ, ಕಾರ್ಯಕ್ರಮವನ್ನು ಯಶಸ್ವಿಗೊಳಿಸಲು ಕನ್ನಡಪರ ಸಂಘ ಸಂಸ್ಥೆಗಳು ಕೂಡ ರಥಯಾತ್ರೆಯಲ್ಲಿ ಸ್ವಯಂ ಪ್ರೇರಣೆಯಿಂದ ಭಾಗವಹಿಸುವಂತಾಗಬೇಕು ಎಂದು ಜಿಲ್ಲಾಧಿಕಾರಿಗಳು ಮನವಿ ಮಾಡಿದ್ದಾರೆ. ರಥಯಾತ್ರೆಯು ತಾಲ್ಲೂಕು ಕೇಂದ್ರದಿಂದ ಬೆಳಿಗ್ಗೆ 9ಕ್ಕೆ ಪ್ರಾರಂಭಿಸಿ, ಮುಂದಿನ ತಾಲ್ಲೂಕು ತಲುಪುವ ಮಾರ್ಗಮಧ್ಯದಲ್ಲಿ ಬರುವ ಗ್ರಾಮಗಳಲ್ಲಿ ಸಂಚರಿಸುವ ಸಂದರ್ಭದಲ್ಲಿ ಸೂಕ್ತ ವ್ಯವಸ್ಥೆಗಳನ್ನು ಆಯಾ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಮತ್ತು ಆಯಾ ಗ್ರಾಮಗಳ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದ್ದು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಅಧಿಕಾರಿಗಳು, ರಥಯಾತ್ರೆ ಜಿಲ್ಲೆಯಲ್ಲಿ ಸಂಚರಿಸುವ ಸಂದರ್ಭದಲ್ಲಿ ಉಪಸ್ಥಿತರಿದ್ದು, ಕಾರ್ಯಕ್ರಮ ಯಶಸ್ವಿಗೆ ಅಗತ್ಯವಿರುವ ಎಲ್ಲಾ ಕ್ರಮ ಕೈಗೊಳ್ಳುವ'ಂತೆ ಸೂಚನೆ ನೀಡಲಾಗಿದೆ.

ಜ್ಯೋತಿ ರಥಯಾತ್ರೆ ಸಂಚರಿಸುವ ಮಾರ್ಗಗಳಲ್ಲಿ ಸಂಬಂಧಪಟ್ಟ ಠಾಣಾಧಿಕಾರಿಗಳು ಸೂಕ್ತ ಭದ್ರತೆಯನ್ನು ಒದಗಿಸುವಂತೆ ಪೊಲೀಸ್ ಇಲಾಖೆ ಸಂಚರಿಸುವ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ. ರಥವು ಜಿಲ್ಲೆಯಾದ್ಯಂತ ಸರಾಗವಾಗಿವ್ಯವಸ್ಥೆಗಳ ಮೇಲುಸ್ತುವಾರಿ ನೋಡಿಕೊಳ್ಳುವಂತೆ ಉಪವಿಭಾಗಾಧಿಕಾರಿಗಳು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಆಹಾರ ಇಲಾಖೆ ಸಹಾಯಕ ನಿರ್ದೇಶಕರು ಕ್ರಮವಹಿಸಲಿದ್ದಾರೆ.

ಜಿಲ್ಲೆಯ ಎಲ್ಲಾ ತಾಲ್ಲೂಕುಗಳ ತಹಶೀಲ್ದಾರ್‌ರು ಜನಪ್ರತಿನಿಧಿಗಳನ್ನು ಆಹ್ವಾನಿಸಿ ಹಾಗೂ ತಮ್ಮ ತಾಲ್ಲೂಕಿನ ಎಲ್ಲಾ ಇಲಾಖೆ ಅಧಿಕಾರಿಗಳು ಮತ್ತು ವಿವಿಧ ಕನ್ನಡಪರ ಸಂಘ-ಸಂಸ್ಥೆಗಳ ಪದಾಧಿಕಾರಿಗಳೊಂದಿಗೆ ''ಕರ್ನಾಟಕ ಸಂಭ್ರಮ5-50'' ರ ಅಂಗವಾಗಿ ಸಂಚರಿಸುತ್ತಿರುವ ಜ್ಯೋತಿ ರಥಯಾತ್ರೆಯನ್ನು ಸ್ವಾಗತಿಸಿಕೊಂಡು, ತಾಲ್ಲೂಕು ಕೇಂದ್ರದಿಂದ ಪ್ರಾರಂಭಿಸಿ, ಮುಂದಿನ ತಾಲ್ಲೂಕು ತಲುಪುವ ಮಾರ್ಗಮಧ್ಯದಲ್ಲಿ ಬರುವ ಗ್ರಾಮಗಳಲ್ಲಿ ರಥವು ಸಂಚರಿಸಲು ಎಲ್ಲಾ ಸೂಕ್ತ ವ್ಯವಸ್ಥೆಗಳನ್ನು ನಿರ್ವಹಿಸುವಂತೆ ಹಾಗೂ ರಥದೊಂದಿಗೆ ಬರುವ ಅಧಿಕಾರಿ, ಸಿಬ್ಬಂದಿಗಳ ವಸತಿ ಹಾಗೂ ಊಟೋಪಚಾರದ ವ್ಯವಸ್ಥೆ ಮಾಡಿ ಸೂಕ್ತ ಕ್ರಮಕ್ಕೈಗೊಳ್ಳುವಂತೆ ಸೂಚನೆ ನೀಡಲಾಗಿದೆ. ರಥವನ್ನು ಸ್ವಾಗತಿಸುವ ಹಾಗೂ ಬೀಳ್ಕೊಡುವ ಕಾರ್ಯಕ್ರಮದಲ್ಲಿ ಯಾವುದೇ ಲೋಪವಾಗದಂತೆ ತಮ್ಮಗೆ ವಹಿಸಿರುವ ಜವಾಬ್ದಾರಿಗಳನ್ನು ನಿರ್ವಹಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ತಿಳಿಸಿದ್ದಾರೆ.

### ಪೌರಾಯುಕ್ತರಿಗೆ ನಿರ್ದೇಶನ

ಜುಲೈ 10ರಂದು ಚಿತ್ರದುರ್ಗ ನಗರದ ಜಿಲ್ಲಾಧಿಕಾರಿಗಳ ಕಚೇರಿ ಮುಂಭಾಗದಲ್ಲಿ ಜ್ಯೋತಿ ರಥಯಾತ್ರೆಯನ್ನು ಸ್ವಾಗತಿಸುವ ಕಾರ್ಯಕ್ರಮಕ್ಕೆ ಕನ್ನಡ ಭಾವುಟಗಳು ಹಾಗೂ ಕೆಂಪು-ಹಳದಿ ಶಾಲುಗಳ ವ್ಯವಸ್ಥೆ ಮಾಡುವಂತೆ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶರು ಹಾಗೂ ನಗರಸಭೆ ಪೌರಾಯುಕ್ತರಿಗೆ ನಿರ್ದೇಶನ ನೀಡಲಾಗಿದೆ.

### ತಾಲ್ಲೂಕಿನಾದ್ಯಂತ ಸಂಚಾರ

ಜುಲೈ 9ರಂದು ಹೊಳಲ್ಕೆರೆ ತಾಲ್ಲೂಕಿಗೆ ಪ್ರವೇಶಿಸುವ ಕರ್ನಾಟಕ ಜ್ಯೋತಿ ರಥಯಾತ್ರೆಯು ಅಂದು ತಾಲ್ಲೂಕಿನಾದ್ಯಂತ ಸಂಚರಿಸಲಿದೆ. ಅದೇ ರೀತಿ ರಥಯಾತ್ರೆಯು ಜುಲೈ 10ರಂದು ಚಿತ್ರದುರ್ಗ, ಜುಲೈ 11ರಂದು ಮೊಳಕಾಲ್ಮುರು ವಿಧಾನಸಭಾ ಕ್ಷೇತ್ರದ ನಾಯಕನಹಟ್ಟಿ, ಜುಲೈ 12ರಂದು ಚಳ್ಳಕೆರೆ, ಜುಲೈ 13ರಂದು ಹಿರಿಯೂರು, ಜುಲೈ 14ರಂದು ಹೊಸದುರ್ಗ ತಾಲ್ಲೂಕಿನಲ್ಲಿ ಸಂಚರಿಸಲಿದೆ.

# ನಿರಂತರ ಹೋರಾಟಕ್ಕೆ ಕುಡಿವ ನೀರಿನ ಸಮಸ್ಯೆ ಇತ್ಯರ್ಥ

• ಉದಯವಾಹಿನಿ ಯಾದಗಿರಿ

ತಾಲ್ಲೂಕಿನ ಗುರುಮಠಕಲ್ ಮತಕ್ಷೇತ್ರದ ಹೊನಿಗೇರಾ ಗ್ರಾಮ ಪಂಚಾಯಿತಿ ವ್ಯಾಪ್ತಿಗೆ ಬರುವ ಸುತಾರ್ ಹೊಸಳ್ಳಿ ಗ್ರಾಮ ಗ್ರಾಮದಲ್ಲಿ ನೀರಿಗಾಗಿ ನಿತ್ಯ ಜಗಳವಾಡುವ ಪರಿಸ್ಥಿತಿ ಕುರಿತು ನಡೆಸಿದ ಹೋರಾಟಕ್ಕೆ ಜಿಲ್ಲೆಯ ಗ್ರಾಮಾಡಳಿತ ಸ್ಪಂದಿಸಿದ್ದು 6 ಕೊಳವೆ ಬಾವಿ ಕೊರೆಸಿ ಒಂದರಲ್ಲಿ ನೀರು ಬಂದು ಜನತೆಯ ಸಮಸ್ಯೆ ಪರಿಹಾರವಾಗಿದೆ ಎಂದು ಸಾಮಾಜಿಕ ಹೋರಾಟಗಾರ ಉಮೇಶ ಕೆ. ಮುದ್ನಾಳ ತಿಳಿಸಿದ್ದಾರೆ.

ಇತ್ತಿಚೆಗೆ ಗ್ರಾಮದ ಪ್ರಮುಖ ರಸ್ತೆಗಳಲ್ಲಿ ಹಲಗೆ ಮತ್ತು ಖಾಲಿ ಕೊಡಗಳನ್ನು ಹಿಡಿದು ಪ್ರತಿಭಟನೆ ಮುಖಾಂತರ ನೀರಿನ ಸಮಸ್ಯೆಯನ್ನು ಎತ್ತಿ ತೋರಿಸುವ ಪ್ರತಿಭಟನೆಯನ್ನು ಗ್ರಮದ ಮಹಿಳೆಯರು ರೈತರೊಂದಿಗೆ ವಿನೂತನವಾಗಿ ನೀರು ಕೊಡುವಂತೆ ಆಗ್ರಹಿಸಿ ನಡೆಸಲಾಗಿತ್ತು. ಇದಕ್ಕೆ ಸ್ಪಂದಿಸಿದ ಜಿಲ್ಲಾ ಪಂಚಾಯಿತಿ ಗ್ರಪಂ ನವರು ಐದು ಕೊಳವೆಬಾವಿ ಕೊರೆಸಿದರು ಅದರಲ್ಲಿ ಒಂದರಲ್ಲಿ ನೀರು ಹರಿದುಬಂದಿದ್ದು ಗ್ರಾಮದ ಜನತೆಗೆ ನೀರು ಲಭಿಸಿದೆ ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಶರಣಪ್ಪ ಹದನೂರ, ರವಿಕುಮಾರ, ರಫೀಕ್ ಪಟೇಲ್, ಬಾಬುಖಾನ್, ಶರಣಪ್ಪ, ಅಂಜಿನೇಯ, ಮಲ್ಲಪ್ಪ. ಸಾಬಣ್ಣ, ಮೈಮುದ ಅಸ್ಲಂ, ರಾಚೋಟಿ ಸಿದ್ದಪ್ಪ, ಮೆಹೆಬೂಬ ಹುಸೇನ್, ಸಾಬಣ್ಣ, ಶರಣಮ್ಮ, ದೇವಮ್ಮ, ಚೆನ್ನಬಸಪ್ಪ, ಮಲ್ಲಪ್ಪ, ಹುಸೇನ್ ಪಟೇಲ್, ಈರಪ್ಪ, ಕುಬೇರ, ಶಿವಪ್ಪ, ದೇವಿಂದ್ರಪ್ಪ, ಶಿವಶರಣಪ್ಪ, ಬನ್ನಪ್ಪ, ಮಲ್ಲಿಕಾರ್ಜುನ, ಮಹಾದೇವಮ್ಮ, ನಿಂಗಮ್ಮ, ಶಂಕರಮಮ್ಮ ಬಸಮ್ಮ , ಗಂಗಮ್ಮ ಸೇರಿ ಅನೇಕರಿದ್ದರು.



ಉದಯವಾಹಿನಿ ಚಿತ್ರ

> ಊರ ಹೊರವಲಯದಲ್ಲಿ ಇರುವ ಕೆರೆಯ ಶಿಥಿಲಗೊಂಡ ತೂಬಿನಿಂದ ನೀರು ನಿರಂತರ ಸೋರಿಕೆಯಾಗಿ ಅಂತರ್ಜಲ ಕುಸಿದಿದ್ದರಿಂದ ಬೇಸಿಗೆಯಲ್ಲಿ ನೀರಿನ ಸಮಸ್ಯೆ ಎದ್ದು ಕಾಣುತ್ತಿದೆ. ಇದಕ್ಕೆ ಸಣ್ಣ ನಿರಾವರಿ ಇಲಾಖೆ ಅಧಿಕಾರಿಗಳ ದಿವ್ಯ ನಿರ್ಲಕ್ಷ್ಯ ಕಾರಣ -ಉಮೇಶ ಕೆ. ಮುದ್ನಾಳ (ಸಾಮಾಜಿಕ ಹೋರಾಟಗಾರ ಯಾದಗಿರಿ)

# ಶಿಶುವಿನ ಮರ್ಮಾಂಗವನ್ನೇ ಕತ್ತರಿಸಿ ಸಾಯಿಸಿದ ವೈದ್ಯ

• ಉದಯವಾಹಿನಿ ದಾವಣಗೆರೆ

ಇತ್ತೀಚೆಗೆ ವೈದ್ಯರ ನಿರ್ಲಕ್ಷ್ಯಕ್ಕೆ ಬಲಿಯಾಗುವವರ ಸಂಖ್ಯೆ ಹೆಚ್ಚಾಗುತ್ತಿದೆ. ಸದ್ಯ ದಾವಣಗೆರೆ ಜಿಲ್ಲಾ ಚಿಗಟೇರಿ ಆಸತ್ರೆಯಲ್ಲಿ ವೈದ್ಯನ ಭಾರೀ ಯಡವಟ್ಟಿಗೆ ಹುಟ್ಟಿದಾಕ್ಷಣ ಮಗುವೊಂದು ಪ್ರಾಣವನ್ನೇ ಕಳೆದುಕೊಂಡಿದೆ. ವೈದ್ಯನೊಬ್ಬ ಹೆರಿಗೆ ಮಾಡುವಾಗ ಹೊಟ್ಟೆಯಲ್ಲಿದ್ದ ಮಗುವಿನ ಮರ್ಮಾಂಗವನ್ನೇ ಕೊಯ್ದಿದ್ದಾನೆ.

ದಾವಣಗೆರೆ ಕೊಂಡಜ್ಜಿ ರಸ್ತೆಯಲ್ಲಿರುವ ಅರ್ಜುನ್ ಎಂಬುವವರ ಪತ್ನಿ ಅಮೃತಾ ಹೆರಿಗೆಗೆ ಜಿಲ್ಲಾಸ್ಪತ್ರೆಗೆ ದಾಖಲಾಗಿದ್ದರು. ನಾರ್ಮಲ್ ಡೆಲಿವರಿ ಆಗದ ಹಿನ್ನೆಲೆಯಲ್ಲಿ ಸಿಸೇರಿಯನ್ ಮಾಡಲು ವೈದ್ಯರು ಮುಂದಾಗಿದ್ದರು. ಅದರಂತೆ ಕಳೆದ ಜೂನ್ 27ರಂದು ಅಮೃತಾಗೆ ಸಿಸೇರಿಯನ್ ಮಾಡಿ ಮಗು ತೆಗೆಯಲಾಗಿತ್ತು. ಆದರೆ ಸಿಸೇರಿಯನ್ ಮಾಡುವಾಗ ವೈದ್ಯ ನಿಜಾಮುದ್ದೀನ್ ಮಗು ತೆಗೆಯುವಾಗ ಮರ್ಮಾಂಗವನ್ನೇ ಕೊಯ್ದಿದ್ದಾರೆ. ನಂತರ ಮಗುವಿನ ಸ್ಥಿತಿ ಚಿಂತಾಜನಕವಾಗಿದ್ದರಿಂದ ಕೂಡಲೇ ಜಿಲ್ಲಾಸ್ಪತ್ರೆಯಿಂದ ಬಾಪೂಜಿ ಆಸ್ಪತ್ರೆಗೆ ಶಿಫ್ಟ್ ಮಾಡಲಾಗಿತ್ತು. ಆದರೆ ಚಿಕಿತ್ಸೆ ಫಲಕಾರಿಯಾಗದೆ ಮಗು ಶುಕ್ರವಾರ ಮೃತಪಟ್ಟಿದೆ. ಮಗುವಿನ ಸಾವಿಗೆ ವೈದ್ಯರು ಕಾರಣ ಎಂದು ಪೋಷಕರು ಆಕ್ರೋಶ ಹೊರಹಾಕಿದ್ದರು. ಜಿಲ್ಲಾಸ್ಪತ್ರೆ ಮುಂದೆ ಪ್ರತಿಭಟಿಸಿ, ಮಗುವಿನ ಸಾವಿಗೆ ಕಾರಣನಾದ ವೈದ್ಯನನ್ನು ಅಮಾನತು ಮಾಡುವಂತೆ ಒತ್ತಾಯಿಸಿದರು.




ಉದಯವಾಹಿನಿ ಚಿತ್ರ

# ಹೊಸ ಮೀನು ತಳಿಗಳ ಸಾಕಾಣಿಕಾ ತರಬೇತಿಗೆ ಅರ್ಜಿ ಆಹ್ವಾನ

• ಉದಯವಾಹಿನಿ ಶಿವಮೊಗ್ಗ

ಮೀನುಗಾರಿಕೆ ಇಲಾಖೆಯು ಜುಲೈ 23 ಮತ್ತು 24 ರಂದು 2 ದಿನಗಳ ಒಳನಾಡು ಮೀನುಕೃಷಿಯಲ್ಲಿ ಹೊಸ ಮೀನು ತಳಿಗಳ ಸಾಕಾಣಿಕೆ ಕುರಿತು ತರಬೇತಿ ಕಾರ್ಯಕ್ರಮವನ್ನು ಮೀನುಗಾರಿಕೆ ತರಬೇತಿ ಕೇಂದ್ರ, ಬಿ.ಆರ್.ಪ್ರಾಜೆಕ್ಟ್‌ನಲ್ಲಿ ಆಯೋಜಿಸಿದ್ದು, ಆಸಕ್ತರು ನೊಂದಾಯಿಸಿಕೊಳ್ಳುವಂತೆ ಮೀನುಗಾರಿಕೆ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ. ನೋಂದಣಿಗಾಗಿ ಸಂಪರ್ಕ ಸಂಖ್ಯೆ 8277200300 ನ್ನು ಸಂಪರ್ಕಿಸುವುದು.

# ವಿದ್ಯಾರ್ಥಿಯಿಂದ ಟಾಯ್ಲೆಟ್ ಸ್ವಚ್ಚಗೊಳಿಸಿದ ಶಿಕ್ಷಕ

• ಉದಯವಾಹಿನಿ ಉಡುಪಿ

ಕಳೆದ ವರ್ಷ ವಿದ್ಯಾರ್ಥಿಗಳ ಕೈಯಲ್ಲಿ ಸರ್ಕಾರಿ ಶಾಲೆಯ ಶೌಚಾಲಯಗಳನ್ನು ಸ್ವಚ್ಚಗೊಳಿಸಿದ ವಿಚಾರ ರಾಜ್ಯದಲ್ಲಿ ದೊಡ್ಡ ಸುದ್ದಿಯಾಗಿತ್ತು. ಇದೀಗ ಅಂತದ್ದೆ ಘಟನೆ ಉಡುಪಿಯಲ್ಲಿ ನಡೆದಿದ್ದು ಅನುದಾನಿತ ಶಾಲೆಯಲ್ಲಿ ವಿದ್ಯಾರ್ಥಿಯಿಂದ ದೈಹಿಕ ಶಿಕ್ಷಕನ ಭಾಷಾ ಶಾಲೆಯ ಸ್ವಚ್ಚಗೊಳಿಸಿರುವ ಅಮಾನವ ಘಟನೆ ಬೆಳಕಿಗೆ ಬಂದಿದೆ. ಹೌದು ರಾಜ್ಯದಲ್ಲಿ ಮತ್ತೊಂದು ಅಮಾನವೀಯ ಘಟನೆ ನಡೆದಿದ್ದು, ದೈಹಿಕ ಶಿಕ್ಷಣಕ್ಕನೊಬ್ಬ ವಿದ್ಯಾರ್ಥಿಯಿಂದ ಶೌಚಾಲಯವನ್ನು ಸ್ವಚ್ಚಗೊಳಿಸಿರುವ ಘಟನೆ ಉಡುಪಿ ಜಿಲ್ಲೆಯ ನಿಟ್ಟೂರು ತಾಲ್ಲೂಕಿನ ಅನುದಾನಿತ ಶಾಲೆಯಲ್ಲಿ ಈ ಒಂದು ಅಮಾನವೀಯ ಘಟನೆ ನಡೆದಿದೆ.

ದೈಹಿಕ ಶಿಕ್ಷಕನೊಬ್ಬ ವಿದ್ಯಾರ್ಥಿಯಿಂದ ಶೌಚಾಲಯ ಸ್ವಚ್ಚಗೊಳಿಸಿದ್ದಾನೆ. ಉಡುಪಿಯ ಶಾಲೆ ಒಂದರಲ್ಲಿ ಈ ಒಂದು ಘಟನೆ ನಡೆದಿದೆ. ನಿಟ್ಟೂರು ಅನುದಾನಿತ ಪ್ರಾಥಮಿಕ ಶಾಲೆಯಲ್ಲಿ ಈ ಅಮಾನವೀಯ ಘಟನೆ ನಡೆದಿದೆ. ಬಾಲಕನಿಂದ ಶೌಚಾಲಯ ಸ್ವಚ್ಚಗೊಳಿಸುತ್ತಿರುವ ದೃಶ್ಯ ಇದೀಗ ವೈರಲ್ ಆಗಿದೆ.

# ಆರ್ ಟಿಓ ಕಚೇರಿ ಸಿಬ್ಬಂದಿ ಮೇಲೆ ಹಲ್ಲೆ

• ಉದಯವಾಹಿನಿ ಬಳ್ಳಾರಿ



ಉದಯವಾಹಿನಿ ಚಿತ್ರ

ಚಾಲನಾ ಪರವಾನಿಗೆ ತಮ್ಮ ಕೈಗೆ ನೀಡದೆ ನೇರ ಗ್ರಾಹಕರಿಗೆ ನೀಡುತ್ತಿರುವ ಕಾರಣಕ್ಕೆ ಆರ್ ಟಿಓ ಕಚೇರಿ ಸಿಬ್ಬಂದಿ ಮೇಲೆ ಡ್ರೈವಿಂಗ್ ಸ್ಕೂಲ್ ಮಾಲೀಕರು ಹಲ್ಲೆ ನಡೆಸಿದ ಘಟನೆ ಬಳ್ಳಾರಿಯಲ್ಲಿ ನಡೆದಿದೆ. ಡ್ರೈವಿಂಗ್ ಸ್ಕೂಲ್ ಲಾಭಿ ಹಿನ್ನೆಲೆಯಲ್ಲಿ ಹಲ್ಲೆ ಮಾಡಲಾಗಿದ್ದು, FDA ನಾಗೇಶ ಗೌಡ ಎಂಬವರ ಮೇಲೆ ಏಳು ಜನರು ಕಚೇರಿಯಲ್ಲಿಯೇ ಹಲ್ಲೆ ನಡೆಸಿದ್ದಾರೆ.

ಡ್ರೈವಿಂಗ್ ಸ್ಕೂಲ್ ಮಾಲೀಕರಾದ ಕೆ. ಮೋಹನ್, ಅರುಣ್, ತಿಪ್ಪೇಸ್ವಾಮಿ ಅಜೀಜ್ ರೆಹಮತ್, ಅಮೀರ್ ರೆಹಮಾನ್ ಮನ್ಸೂರ್ ಮತ್ತು ಜಿಲಾನ್ ಗುಂಪಿನಿಂದ ಹಲ್ಲೆ ಮಾಡಲಾಗಿದೆ ಎಂದು ಆರೋಪಿಸಲಾಗಿದೆ. ಈ ಬಗ್ಗೆ ಕೌಲಬಜಾರ್ ಠಾಣೆಯಲ್ಲಿ ಕರ್ತವ್ಯಕ್ಕೆ ಅಡ್ಡಿ ಮತ್ತು ಹಲ್ಲೆ ಕುರಿತು ಪ್ರಕರಣ ದಾಖಲಾಗಿದೆ. ನಿಯಮಗಳ ಪ್ರಕಾರ ಡ್ರೈವಿಂಗ್ ಲೈಸೆನ್ಸ್ ಗ್ರಾಹಕರ ಮನೆಗೆ ಕಳುಹಿಸಬೇಕು. ಆದರೆ ಗ್ರಾಹಕರ ಕೈಗೆ ಲೈಸನ್ಸ್ ನೀಡಿದರೆ, ಡ್ರೈವಿಂಗ್ ಸ್ಕೂಲ್ ನವರಿಗೆ ಅದಾಯವಿರುವಿದಿಲ್ಲ. ಹೀಗಾಗಿ ಲೈಸೆನ್ಸ್ ತಮಗೆ ನೀಡುವಂತೆ ಡ್ರೈವಿಂಗ್ ಸ್ಕೂಲ್ ನವರು ವಾಗ್ವಾದ ಮಾಡಿದ್ದಾರೆ. ಮಾತಿಗೆ ಮಾತು ಬೆಳೆದು ಕಚೇರಿಯ ಎಲ್ಲಾ ಸಿಬ್ಬಂದಿ ಮುಂದೆಯೇ ಹಲ್ಲೆ ಮಾಡಲಾಗಿದೆ. ಹಲ್ಲೆ ಮತ್ತು ಗಲಾಟೆಯ ವಿಡಿಯೋ ಮೊಬೈಲ್ ನಲ್ಲಿ ಸೆರೆಯಾಗಿದೆ.

# ಬಾಲ ಕಾರ್ಮಿಕರನ್ನು ನೇಮಿಸಿಕೊಂಡರೆ 50,000 ದಂಡ, 2 ವರ್ಷ ಜೈಲು ಶಿಕ್ಷೆ

• ಉದಯವಾಹಿನಿ ಶಿವಮೊಗ್ಗ

2024-25ನೇ ಸಾಲಿನಲ್ಲಿ ಶಾಲೆಗಳು ಪ್ರಾರಂಭವಾದ ಹಿನ್ನೆಲೆಯಲ್ಲಿ ಶಿವಮೊಗ್ಗ ಜಿಲ್ಲೆಯ ನಗರ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ಅಂಗಡಿ ಮತ್ತು ವಾಣಿಜ್ಯ ಸಂಸ್ಥೆಗಳು ಹಾಗೂ ಇತರೆ ಉದ್ದಿಮೆಗಳಲ್ಲಿ 14 ವರ್ಷದೊಳಗಿನ ಮಕ್ಕಳನ್ನು ಕೆಲಸಕ್ಕೆ ನೇಮಕ ಮಾಡಿಕೊಳ್ಳುವುದು ಮತ್ತು 18 ವರ್ಷದೊಳಗಿನ ಕಿಶೋರಾವಸ್ಥೆ ಮಕ್ಕಳನ್ನು ಅಪಾಯಕಾರಿ ಉದ್ದಿಮೆಯಲ್ಲಿ ಕೆಲಸಕ್ಕೆ ನೇಮಿಸಿಕೊಳ್ಳುವುದು ಶಿಕ್ಷಾರ್ಹ ಅಪರಾದವಾಗಿದೆ. ಬಾಲ ಕಾರ್ಮಿಕ ಹಾಗೂ ಕಿಶೋರ ಕಾರ್ಮಿಕ (ನಿಯಂತ್ರಣ ಹಾಗೂ ನಿಷೇಧ) ಕಾಯ್ದೆ 1986 ಹಾಗೂ ತಿದ್ದುಪಡಿ ಕಾಯ್ದೆ 2016ರಡಿ ಮಾಲೀಕರ ಮೇಲೆ ಕಾನೂನು ಕ್ರಮ ಕೈಗೊಳ್ಳಲಾಗುವುದು ಮತ್ತು ನೇಮಿಸಿಕೊಂಡ ಮಾಲೀಕರುಗಳಿಗೆ ರೂ. 50,000/-ಗಳ ದಂಡ ಅಥವಾ ಎರಡು ವರ್ಷವರೆಗಿನ ಸೆರೆಮನೆ ವಾಸದ ಶಿಕ್ಷೆ ಮತ್ತು ಪೊಲೀಸ್ ಇಲಾಖೆಯಲ್ಲಿ ಪ್ರಕರಣ ದಾಖಲಿಸಲಾಗುವುದು ಎಂದು ಜಿಲ್ಲಾ ಕಾರ್ಮಿಕ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ. ಬಾಲಕಾರ್ಮಿಕ ಹಾಗೂ ಕಿಶೋರಾಕಾರ್ಮಿಕರು ಜಿಲ್ಲೆಯಲ್ಲಿ ಕಂಡು ಬಂದಲ್ಲಿ ಕಾರ್ಮಿಕ ಇಲಾಖೆ-ದೂ.ಸಂ.: 08182-248810, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಹಾಗೂ ಮಕ್ಕಳ ಸಹಾಯವಾಣಿ 1098 ನ್ನು ಸಂಪರ್ಕಿಸುವುದು.

# ರಾಜೀನಾಮೆ ಬಾಂಬ್ ಸಿಡಿಸಿದ ಜೆಡಿಎಸ್ ಶಾಸಕ ಶರಣಗೌಡ ಕಂದಕೂರ

• ಉದಯವಾಹಿನಿ ಯಾದಗಿರಿ

ಗುರುಮಠಕಲ್ ಕ್ಷೇತ್ರದಲ್ಲಿ ಪೊಲೀಸರ ಭ್ರಷ್ಟಾಚಾರ ಹೆಚ್ಚಾಗಿದ್ದು ಪೊಲೀಸರಿಂದ ಬಡವರಿಗೆ ನ್ಯಾಯ ಸಿಗುತ್ತಿಲ್ಲ ಎಂದು ಬಹಿರಂಗವಾಗಿಯೇ ಬೇಸರ ವ್ಯಕ್ತಪಡಿಸಿ ಡಿಸಿ, ಎಸ್ಪಿ ಸಮ್ಮುಖದಲ್ಲಿಯೇ ಶಾಸಕ ಶರಣ ಗೌಡ ಕಂದಕೂರ ರಾಜೀನಾಮೆ ಬಾಂಬ್ ಸಿಡಿಸಿದ್ದಾರೆ.



ಗುರುಮಠಕಲ್ ಪಟ್ಟಣದಲ್ಲಿ ನಡೆದ ತಾಲ್ಲೂಕು ಮಟ್ಟದ ಜನತಾದರ್ಶನದಲ್ಲಿ ಮಾತನಾಡಿದ ಅವರು, ನ್ಯಾಯ ಕೋರಿ ಠಾಣೆಗೆ ಬರುವ ಕ್ಷೇತ್ರದ ಸಾರ್ವಜನಿಕರಿಗೆ ನ್ಯಾಯ ಕೊಡದೆ ಪ್ರಭಾವಿಗಳ ಒತ್ತಡಕ್ಕೆ ಮಣಿದು ಪ್ರಕರಣ ದಾಖಲು ಮಾಡುವ ಪೊಲೀಸರ ನಡೆಯಿಂದ ಬೇಸರವಾಗಿದ್ದು, ಇದರಿಂದ ನಾನು ರಾಜೀನಾಮೆ ಕೊಡಲು ಸಿದ್ಧನಾಗಿರುವೆ ಎಂದು ಅವರು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಈ ಕುರಿತು ಎಸ್ಪಿ ಮತ್ತು ಡಿವೈಎಸ್ಪಿ ಅವರಿಗೆ ಡಿಸಿ ಸಮ್ಮುಖದಲ್ಲಿಯೇ ತರಾಟೆಗೆ ತೆಗೆದುಕೊಂಡ ಅವರು, ಪೊಲೀಸರು ಬಡವರಿಗೆ ನ್ಯಾಯ ಒದಗಿಸಬೇಕು, ಬಡವರಿಗೆ ಅನ್ಯಾಯವಾದರೆ ಕ್ರಮ ಜರುಗಿಸಬಾರದಾ? ಪೊಲೀಸ್ ಇಲಾಖೆ ಇರೋದು ದುಡ್ಡಿದ್ದವರು, ಶ್ರೀಮಂತರ ಹಾಗೂ ಪ್ರಭಾವಿಗಳ ರಕ್ಷಣೆಗಾ? ಎಂದು ಖಾರವಾಗಿ ಪ್ರಶ್ನಿಸಿದರು.

> ಪೊಲೀಸರಿಂದ ಇದೇ ರೀತಿಯಾಗಿ ಅನ್ಯಾಯ, ಭ್ರಷ್ಟಾಚಾರ ಮುಂದುವರೆದರೆ ನಾನು ಸೀದಾ ಯಾನಾಗುಂದಿ ಮಾಣಿಕಮ್ಮಳ ಹತ್ತಿರ ಹೋಗಿ ರಾಜೀನಾಮೆ ಕೊಡುತ್ತೇನೆ. ಪೊಲೀಸರು ಬಡವರ ಪರ, ಅನ್ಯಾಯ, ದೌರ್ಜನ್ಯಕ್ಕೊಳಗಾದವರ ಪರ ಕೆಲಸ ಮಾಡಬೇಕು. ಭ್ರಷ್ಟಾಚಾರಕ್ಕೆ ಕುಮ್ಮಕ್ಕು ಕೊಡಬಾರದು ಜನರಿಗಾಗಿ ಒಳ್ಳೆಯ ಕೆಲಸ ಮಾಡಿ. -ಶರಣಗೌಡ ಕಂದಕೂರ, ಶಾಸಕ

# ವಿಷಪೂರಿತ ಹೊಗೆ ಸೇವನೆ: 15 ಶಾಲಾ ವಿದ್ಯಾರ್ಥಿಗಳು ಆಸ್ಪತ್ರೆಗೆ ದಾಖಲು

• ಉದಯವಾಹಿನಿ ಕಾಸರಗೋಡು

ಆಸ್ಪತ್ರೆಯ ಜನರೇಟರ್ ನಿಂದ ಹೊರ ಬರುವ ಹೊಗೆ ಸೇವಿಸಿದ 15ಕ್ಕೂ ಹೆಚ್ಚು ಮಕ್ಕಳು ಅಸ್ವಸ್ಥಗೊಂಡ ಘಟನೆ ಕಾಸರಗೋಡಿನಲ್ಲಿ ನಡೆದಿದೆ. ಕರ್ನಾಟಕದ ಗಡಿಗೆ ಹೊಂದಿಕೊಂಡಿರುವ ಕೇರಳದ ಕಾಸರಗೋಡಿನಲ್ಲಿ ಈ ಘಟನೆ ಸಂಭವಿಸಿದ್ದು, ಶಾಲೆಯ ಸಮೀಪದ ಆಸ್ಪತ್ರೆಗೆ ಅಳವಡಿಸಲಾಗಿದ್ದ ಜನರೇಟರ್ ನಿಂದ ಹೊರಬರುತ್ತಿದ್ದ ಹೊಗೆ ಸೇವಿಸಿ ಹಲವಾರು ಮಕ್ಕಳು ಅಸ್ವಸ್ಥಗೊಂಡಿದ್ದು, ಆಸ್ಪತ್ರೆಗೆ ದಾಖಲಿಸಲಾಗಿದೆ.ಲಿಟ್ಲ್ ಫ್ಲವರ್ ಶಾಲೆಯ ವಿದ್ಯಾರ್ಥಿ ಗಳು ಅಸ್ವಸ್ಥಗೊಂಡಿದ್ದು, ಜಿಲ್ಲಾಧಿಕಾರಿ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಅಲ್ಲದೇ ಘಟನೆ ಬಗ್ಗೆ ತನಿಖೆ ನಡೆಸುವಂತೆ ಪೊಲೀಸರಿಗೆ ಸೂಚಿಸಿದ್ದಾರೆ.



ಉದಯವಾಹಿನಿ ಚಿತ್ರ

# ಕೆಡಿಪಿ ಸಭೆ: ಮಾಹಿತಿ ಇಲ್ಲದ ಅಧಿಕಾರಿಗಳಿಗೆ ಶಾಸಕರಿಂದ ತರಾಟೆ

## • ಸಾರ್ವಜನಿಕ ಆಸ್ಪತ್ರೆಯಲ್ಲಿ ಡಾಕ್ಟರ್‌ಗಳು ಇರುವುದೇ ಇಲ್ಲ, ಸರಿಯಾದ ಟೈಮಗೂ ಬಾರದೇ ತಡವಾಗಿ ಬಂದು ಸಹಿ

• ಉದಯವಾಹಿನಿ ಸಿಂಧನೂರು

ನಗರ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ಗಾಂಜಾ ಮಾರಾಟ. ಇಸ್ಪೀಟ್ ದಂಧೆ. ಕಿರಾಣಿ ಅಂಗಡಿಯಲ್ಲಿ. ಮದ್ಯೆ ಮಾರಾಟ ನಗರದ ಸುತ್ತ-ಮುತ್ತ ಇರುವ ಲೇಔಟ್‌ಗಳಲ್ಲಿ. ಕುಡುಕರ ಹಾವಳಿ ದಿನದಿನಕ್ಕೂ ಹೆಚ್ಚುತ್ತಿರುವುದನ್ನು ಅಲ್ಲಿ ಮಹಿಳೆಯರು ಸಾರ್ವಜನಿಕರು ಓಡಾಡುವ ಲೇ.ಜಾಗದಲ್ಲಿ ಮದ್ಯೆ ಸೇವನೆ ಮಾಡುವರ ಸಂಖ್ಯೆ ಜಾಸ್ತಿ ಆಗುತ್ತಿದ್ದು. ಇದನ್ನು ತಡೆಗಟ್ಟುವ ಪೊಲೀಸ್ ಇಲಾಖೆ ಏನು ಮಾಡುತ್ತಿದೆ ಎಂದು ಪೊಲೀಸ್ ಅಧಿಕಾರಿಯನ್ನು ತರಾಟೆಗೆ ತೆಗೆದುಕೊಂಡರು.

ನಗರದ ತಾಲ್ಲೂಕು ಪಂಚಾಯಿತ ಸಭಾಂಗಣದಲ್ಲಿ ತ್ರೈಮಾಸಿಕ ಸಭೆ ಶಾಸಕ ಹಂಪನಗೌಡ ಬಾದರ್ಲಿ ಅವರು ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಕೃಷಿ ಇಲಾಖೆಗೆ ಸಂಬಂಧಿಸಿದ ರೈತರಿಗೆ ರಸಗೊಬ್ಬರ ಬಿತ್ತನೆ ಬೀಜ ಹಾಗೂ ಭತ್ತದ ವಿವಿಧ ತಳಿ ಬೀಜಗಳಲ್ಲಿ ಬಹಳಷ್ಟು ಹಗರಣಗಳ ಜಾಸ್ತಿಯಾಗಿದ್ದು ಸ್ಕೀಮ್ ಗಳು ಉಪಯೋಗಗಳು ಏನು..? ಇದರಿಂದ ರೈತರಿಗೆ ಬಹಳಷ್ಟು ಹಾನಿಯಾಗಿದ್ದು. ಕಂಡು ಬಂದಿದ್ದು. ನೀವೇನು ಮಾಡುತ್ತಿದ್ದೀರಿ.? ಅದರ ಬಗ್ಗೆ ಗಮನ ಹರಿಸಿ ಎಂದು ಹೇಳಿದರು.

ಎಲ್. ಕೆ.ಜಿ ಯುಕಜಿ ಮಕ್ಕಳ ಸರ್ಕಾರಿ ಶಾಲೆಗಳ ನೋಂದಣಿ ಆಗ್ತವೆ ಎಂದು ಶಿಕ್ಷಣ ಇಲಾಖೆ ಅಧಿಕಾರಿಯನ್ನು ವಿಚಾರಿಸಿದರು.

ಶಾಲೆಯಲ್ಲಿ ಮಕ್ಕಳಿಗೆ ದೈಹಿಕವಾಗಿ ಆಟ ಆಡುವುದಕ್ಕೆ ಉಪಕರಣಗಳು ಬೇಕಾಗುತ್ತೆ. ಎಂದು ಹೇಳಿದರು.

ನಂತರ ಸಿಡಿಪಿಒ ಲಿಂಗನಗೌಡ ಅವರು ಎಲ್ ಕೆಜಿ. ಯುಕೆಜಿ. ಮಕ್ಕಳನ್ನು ಒಂದನೇ ತರಗತಿಯಿಂದಲೇ ಅಂಗನವಾಡಿ ಶಾಲೆಯಲ್ಲಿ ಪ್ರಾರಂಭಿಸಿದರು ಚೆನ್ನಾಗಿ ಇರುತ್ತದೆ ಸರ್ ತಮ್ಮ ಅನಿಸಿಕೆಗಳನ್ನು ತಿಳಿಸಿದರೆ.

ಈ ಸಂದರ್ಭದಲ್ಲಿ. ಪಿಕಾರ್ಡ್ ಬ್ಯಾಂಕ್ ಅಧ್ಯಕ್ಷರಾದ ದೊಡ್ಡ ಬಸವರಾಜ. ತಹಶೀಲ್ದಾರ್ ಅರುಣ್ ಕುಮಾರ್ ಎಚ್ ದೇಸಾಯಿ.ಇಒ ಚಂದ್ರಶೇಖರ ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು. ಪಿಡಿಓಗಳು ಹಾಗೂ ಸಿಬ್ಬಂದಿ ವರ್ಗ ಸೇರಿದಂತೆ ಇತರರು ಉಪಸ್ಥಿತರಿದ್ದರು.



ಉದಯವಾಹಿನಿ ಚಿತ್ರ

**ರೈತರಿಗೆ ಬಹಳಷ್ಟು ಹಾನಿ**

> ತಾಲ್ಲೂಕಿನಲ್ಲಿ ಜನಸಂಖ್ಯೆ ಆಧಾರದ ಮೇಲೆ ಪ್ರಾಥಮಿಕ ಆರೋಗ್ಯ ಕೇಂದ್ರಗಳ ಮಂಜೂರಾತಿಗೆ ಪಟ್ಟಿ ಕಳಿಸಬೇಕು. ಪಿ.ಎಚ್.ಸಿ. 13 ಕೇಂದ್ರಗಳು ತಾಲ್ಲೂಕಿನಲ್ಲಿವೇ ಇದರ ಬಗ್ಗೆ ಪ್ರಪೋಸಲ್ ಕಳಿಸಿದ ಕಾರಣಕ್ಕೆ ಮಂಜೂರಾತಿ ಆಗ್ತಿಲ್ಲ. ನಾನೇ ಸ್ವತಃ ಕ್ಯಾಬಿನೆಟ್ ದರ್ಜೆ ವರಿಗೆ ಹೋಗಿ ಪಟ್ಟಿ ವಾಪಸ್ ಬಂದಿದ್ದು 05 ಕೇಂದ್ರಗಳನ್ನು ಮಂಜೂರಾತಿ ಒತ್ತಡ ಹಾಕಿದ್ದೇನೆ -ಹಂಪನಗೌಡ ಬಾದರ್ಲಿ

### ಆರೋಗ್ಯ ಇಲಾಖೆ ಅಧಿಕಾರಿಳಿಗೆ ತರಾಟೆಗೆ

ಸಾರ್ವಜನಿಕ ಆಸ್ಪತ್ರೆಯಲ್ಲಿ ಡಾಕ್ಟರ್‌ಗಳು ಇರುವುದೇ ಇಲ್ಲ ಅಂತ ಸರಿಯಾದ ಟೈಮಗೂ ಬಾರದೇ ತಡವಾಗಿ ಬಂದ ಸಿಹಿ ಮಾಡಿ. ಕರ್ತವ್ಯ ನಿರ್ವಹಿಸದೇ 11.30 ವರಿ ತನಕ ಇದ್ದು.ತಮ್ಮ ಖಾಸಗಿ ಆಸ್ಪತ್ರೆಗೆ ಹೋಗಿ ಕರ್ತವ್ಯ ನಿರ್ವಹಿಸುತ್ತಿರುವುದು ಮತ್ತು ರೋಗಗಳು ತೋರಿಸೋದಕ್ಕೆ ಬಂದರೆ ಔಷಧಿಗಳನ್ನು ಹೊರಗಡೆ ಬರೆದು ಕಳುಹಿಸುತ್ತಿದ್ದಾರೆ.ಎಂದು ಸುದ್ದಿ ಹರಿದಾಡುತ್ತಿದ್ದು. ತಾಲ್ಲೂಕು ಆರೋಗ್ಯಾಧಿಕಾರಿಯಾಗಿ ಗೆ ಏನು ಮಾಡುತ್ತಿದ್ದಾರೆ ಎಂದು ಕೇಳಿದರೆ ಸುಖಾ ಸುಮ್ಮನೆ ಸುಳ್ಳುಗಳ ಹೇಳುತ್ತಾ ಹೊರಟಿದ್ದಾರೆ ಎಂದು. ಸಿಂಧನೂರು ತಾಲ್ಲೂಕಿನ ಆಸ್ಪತ್ರೆಯಲ್ಲಿ 84 ಹುದ್ದೆಗಳು ಇದ್ದು. 65 ಜನ ಕರ್ತವ್ಯ ನಿಭಾಯಿಸಿದ್ದಾರೆ 20 ಹುದ್ದೆಗಳ ಖಾಲಿ ಇದ್ದಿದ್ದು. ಆಸ್ಪತ್ರೆಯ ಸ್ವಚ್ಚತೆ ಕಾಪಾಡಿ ಆಸ್ಪತ್ರೆಗೆ ಬೇಕಾದ ಸಾಮಗ್ರಿಗಳು ಉಪಕರಣಗಳು ಮಂಜೂರಾತಿ ಬೇಕಾದ್ದು ಎಂದು ಡಿ ಎಚ್ ಓ ಮಾಹಿತಿ ಕೊಡಿ. ಎಂದು ತಾಲ್ಲೂಕು ಆರೋಗ್ಯ ಇಲಾಖೆ ಅಧಿಕಾರಿ ಡಾ. ಅಯ್ಯನಗೌಡ ಅವರನ್ನು ತರಾಟೆಗೆ ತೆಗೆದುಕೊಂಡರು., ಏನು ಮಾಹಿತಿ ಇಲ್ಲಿದೆ ಗೊತ್ತಿಲ್ಲ ಎಂಬಂತೆಯೇ ಗಪ್ಪನೆ ಇದ್ದರೆ ಹೇಗೆ ಎಂದು ಪ್ರಶ್ನೆಸಿದರು..? ಅತಿ ಹೆಚ್ಚು ರೋಗಿಗಳಿಗೆ ಸಿಂಧನೂರುನಲ್ಲಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದ ಇದರ ಬಗ್ಗೆ ಏನನ್ನಾದರೂ ನಿಮ್ಮಗೆ ಗೊತ್ತು ಎಂದರು.

ಉದಯ ವಾಹಿನಿ

ದೇಶ/ವಿದೇಶ

ಶನಿವಾರ
06 ಜುಲೈ 2024

07

# ಕೀರ್ ಸ್ಟಾರ್ಮರ್ ಆಯ್ಕೆಯಿಂದ ಭಾರತ-ಬ್ರಿಟನ್ ಸಂಬಂಧ ಏನಾಗಲಿದೆ?

## • ಬ್ರಿಟನ್‌ನ ನೂತನ ಪ್ರಧಾನಿಯಾಗಿ ಅಧಿಕಾರ ಸ್ವೀಕರಿಸಲಿರುವ ಲೇಬರ್ ಪಕ್ಷದ ಕೀರ್ ಸ್ಟಾರ್ಮರ್

**ಲಂಡನ್:** ಬ್ರಿಟನ್ ಸಾರ್ವತ್ರಿಕ ಚುನಾವಣೆಯಲ್ಲಿ ಕೀರ್ ಸ್ಟಾರ್ಮರ್ ಅವರ ನೇತೃತ್ವದ ಲೇಬರ್ ಪಕ್ಷದ ಭರ್ಜರಿ ಬಹುಮತದೊಂದಿಗೆ ಅಧಿಕಾರಕ್ಕೆ ಬಂದಿದೆ. ಎಡಪಂಥೀಯ ನಿಲುವುಳ್ಳ ಲೇಬರ್ ಪಕ್ಷವು, ಈವರೆಗೂ ಆಡಳಿತ ನಡೆಸುತ್ತಿದ್ದ ಕನ್ಸರ್ವೇಟಿವ್ ಪಕ್ಷದ ನಿಲುವುಗಳಿಗಿಂತ ವಿಭಿನ್ನ ನೀತಿಗಳನ್ನು ಹೊಂದಿದೆ. ಇದು ಭಾರತದ ಮೇಲೆಯೂ ಪರಿಣಾಮ ಬೀರುವ ಸಾಧ್ಯತೆ ಇದೆ.


ಕಳೆದ ಸುಮಾರು ಒಂದೂವರೆ ದಶಕದಿಂದ ಅಧಿಕಾರದಲ್ಲಿದ್ದ ಕನ್ಸರ್ವೇಟಿವ್ ಪಕ್ಷವು ಭಾರತದ ಜತೆ ಬ್ರಿಟನ್‌ನ ಸಂಬಂಧ ವೃದ್ಧಿಸುವತ್ತ ಪ್ರಯತ್ನ ನಡೆಸಿತ್ತು.

ಭಾರತದ ಮೂಲದ ರಿಷಿ ಸುನಕ್ ಪ್ರಧಾನಿಯಾದ ಬಳಿಕವಂತೂ ಈ ಸಂಬಂಧ ಗಟ್ಟಿಯಾಗಲಿದೆ ಎಂದು ಹೇಳಲಾಗಿತ್ತು. ಆದರೆ ಈಗ ಲೇಬರ್ ಪಕ್ಷದ ಧೋರಣೆಯೊಂದಿಗೆ ಭಾರತದ ವಿದೇಶಾಂಗ ನೀತಿ ಯಾವ ರೀತಿ ಹೊಂದಿಕೊಳ್ಳುತ್ತದೆ ಎನ್ನುವುದು ಕುತೂಹಲ ಮೂಡಿಸಿರುವ ಸಂಗತಿ. ಜಮ್ಮು ಕಾಶ್ಮೀರ ವಿಚಾರದಲ್ಲಿ ಭಾರತದ ಪ್ರತಿಪಾದನೆಗೆ ವಿರುದ್ಧವಾದ ನಿಲುವನ್ನು ಲೇಬರ್ ಪಕ್ಷ ಹೊಂದಿತ್ತು. ಕಾಶ್ಮೀರ ವಿಷಯದಲ್ಲಿನ ಅದರ ಧೋರಣೆ ಭಾರತದ ಆಕ್ರೋಶಕ್ಕೆ ಗುರಿಯಾಗಿತ್ತು.

ತನ್ನ ಮತ ಬ್ಯಾಂಕ್ ಹಿತಾಸಕ್ತಿಗಾಗಿ ನಡೆಸುತ್ತಿರುವ ಪ್ರಯತ್ನ ಇದು ಎಂದು ಭಾರತವು ನಿರ್ಣಯದ ವಿರುದ್ಧ

- ಯುನೈಟೆಡ್ ಕಿಂಗ್‌ಡಮ್‌ನ ಸಾರ್ವತ್ರಿಕ ಚುನಾವಣೆ ಫಲಿತಾಂಶದಲ್ಲಿ ಲೇಬರ್ ಪಕ್ಷಕ್ಕೆ ಭಾರಿ ಜಯ
- ಬ್ರಿಟನ್‌ನ ನೂತನ ಪ್ರಧಾನಿಯಾಗಿ ಅಧಿಕಾರ ಸ್ವೀಕರಿಸಲಿರುವ ಲೇಬರ್ ಪಕ್ಷದ ಕೀರ್ ಸ್ಟಾರ್ಮರ್
- ಕಾಶ್ಮೀರ ವಿಚಾರದ ಜತೆಗೆ ಭಾರತದ ಕುರಿತಾದ ಲೇಬರ್ ಪಾರ್ಟಿ ನಿಲುವುಗಳನ್ನು ಬದಲಿಸಿರುವ ನಾಯಕ

**ಭಾರತದ ಮೇಲೆಯೂ ಪರಿಣಾಮ**



ಹರಿಹಾಯ್ದಿತ್ತು. ಭಾರತದ ಯಾವುದೇ ಸಾಂವಿಧಾನಿಕ ಸಮಸ್ಯೆಗಳು ಭಾರತದ ಸಂಸತ್‌ಗೆ ಸಂಬಂಧಿಸಿದ ಸಂಗತಿ. ಕಾಶ್ಮೀರವು ಭಾರತ ಮತ್ತು ಪಾಕಿಸ್ತಾನಗಳು ಶಾಂತಯುತವಾಗಿ ಬಗೆಹರಿಸಿಕೊಳ್ಳಬೇಕಾದ ದ್ವಿಪಕ್ಷೀಯ ವಿಚಾರ ಎಂದು ಲೇಬರ್ ಫ್ರೆಂಡ್ಸ್ ಇನ್ ಇಂಡಿಯಾ ಜತೆಗಿನ ಸಭೆ ವೇಳೆ ಹೇಳಿದ್ದರು. ತಮ್ಮ ಚುನಾವಣಾ ಪ್ರಚಾರದಲ್ಲಿ ಸ್ಟಾರ್ಮರ್ ಅವರು ಭಾರತೀಯ ಸಮುದಾಯವನ್ನು ತಲುಪುವ ಪ್ರಯತ್ನ ನಡೆಸಿದ್ದರು. ಹಿಂದೂಫೋಬಿಯಾವನ್ನು ಖಂಡಿಸಿದ್ದರು ಮತ್ತು ದೀಪಾವಳಿ ಹಾಗೂ ಹೋಳಿಯಂತಹ ಸಾಂಸ್ಕೃತಿಕ ಉತ್ಸವಗಳನ್ನು ಆಚರಿಸಿದ್ದರು. ಪ್ರಣಾಳಿಕೆಯಲ್ಲಿಯೂ ಭಾರತದ ಸಂಬಂಧ ಲೇಬರ್ ಪಕ್ಷದ ಈ ನೀತಿ ಹೊಂದಾಣಿಕೆ ನಡೆಯು ಬ್ರಿಟಿಷ್- ಭಾರತೀಯ ಸಮು ದಾಯದ ನಡುವೆ ವಿಶ್ವಾಸವನ್ನು ಮರುಸ್ಥಾಪಿಸಿಕೊಳ್ಳುವುದು, ಭಾರತದ ಜತೆಗೆ ಗಟ್ಟಿಯಾದ ವ್ಯವಹಾರ ಸಂಬಂಧ ರೂಪಿಸುವ ಗುರಿ ಹೊಂದಿದೆ.

ಲೇಬರ್ ಪಕ್ಷದ ನೀತಿಗಳನ್ನು ಬದಲಿಸಿದ ಸ್ಟಾರ್ಮರ್, ಸ್ವಪಕ್ಷೀಯರಿಂದಲೇ ಟೀಕೆಗೆ ಗುರಿಯಾಗಿದ್ದರು. ಎಡಪಂಥೀಯ ಧೋರಣೆಯ ನಾಯಕರು, ಪಕ್ಷವನ್ನು ಸ್ಟಾರ್ಮರ್ ಅವರು ನಡುಪಂಥಕ್ಕೆ ಸಾಗಿಸುತ್ತಿದ್ದಾರೆ ಎಂದು ಆರೋಪಿಸಿದರು. 2010 ರಿಂದ ಅಧಿಕಾರ ವಂಚಿತವಾಗಿರುವ ಲೇಬರ್ ಪಕ್ಷವು 'ಪ್ರಗತಿಪರ ವಾಸ್ತವಿಕತೆ' ವಿದೇಶಾಂಗ ನೀತಿಯನ್ನು ರೂಪಿಸಿದೆ. ಹವಾಮಾನ ವೈಪರೀತ್ಯ ಮತ್ತು ಅಂತಾರಾಷ್ಟ್ರೀಯ ಭದ್ರತೆಯಂತಹ ಜಾಗತಿಕ ಸವಾಲುಗಳ ಕುರಿತಾಗಿ ಕಾರ್ಯಯೋಜಿತ ಹೆಜ್ಜೆ ಇರಿಸಲು ಒತ್ತು ನೀಡಿದೆ. ಭಾರತದ ಜತೆಗಿನ ಕಾರ್ಯತಂತ್ರ ಸಹಭಾಗಿತ್ವದ ಯೋಜನೆ, ವ್ಯಾಪಾರ ಒಪ್ಪಂದಗಳ ಮೇಲೆ ಗಮನ ತಂತ್ರಜ್ಞಾನ, ಭದ್ರತೆ, ಶಿಕ್ಷಣ ವಿಚಾರಗಳಲ್ಲಿನ ಸಹಕಾರಗಳನ್ನು ಸ್ಟಾರ್ಮರ್ ಅವರ ಪ್ರಣಾಳಿಕೆ ಒಳಗೊಂಡಿದೆ.

### ನೀತಿ ಬದಲಿಸಿದ ಸ್ಟಾರ್ಮರ್

2020ರಲ್ಲಿ ಲೇಬರ್ ಪಕ್ಷದ ನಾಯಕತ್ವ ವಹಿಸಿದ ಸ್ಟಾರ್ಮರ್, ಭಾರತದ ಜತೆಗಿನ ಸಂಬಂಧದ ಪ್ರಾಮುಖ್ಯತೆಯನ್ನು ಅರ್ಥಮಾಡಿಕೊಂಡರು. ತಮ್ಮ ಪಕ್ಷ ಈ ಹಿಂದೆ ಮಾಡಿದ ತಪ್ಪುಗಳನ್ನು ಸರಿಪಡಿಸುವ ಕಾರ್ಯಕ್ಕೆ ಕೈ ಹಾಕಿದರು. ಭಾರತದ ಜತೆಗಿನ ವ್ಯಾಪಾರ ಸಂಬಂಧಕ್ಕೆ ಒತ್ತು ನೀಡುವುದರೊಂದಿಗೆ ಹೊಸ ಕಾರ್ಯತಂತ್ರ ಪಾಲುದಾರಿಕೆಗೆ ಆದ್ಯತೆ ನೀಡುವ ಬದ್ಧತೆಯನ್ನು ಅವರ ಚುನಾವಣಾ ಪ್ರಣಾಳಿಕೆ ಒಳಗೊಂಡಿತ್ತು. ಭಾರತೀಯ ಸಮುದಾಯದ ಜತೆಗಿನ ಸಭೆಗಳಲ್ಲಿ ಹಾಗೂ ಸಾರ್ವಜನಿಕ ಭಾಷಣಗಳಲ್ಲಿ ಸ್ಟಾರ್ಮರ್ ಅವರು 'ಕಾಶ್ಮೀರವು ಒಂದು ಆಂತರಿಕ ವಿಚಾರ' ಮತ್ತು ಭಾರತ ಹಾಗೂ ಪಾಕಿಸ್ತಾನಗಳು ಅದನ್ನು ಬಗೆಹರಿಸಿಕೊಳ್ಳಲಿವೆ ಎನ್ನುವ ಮೂಲಕ ತಮ್ಮ ಪಕ್ಷದ ಹಿಂದಿನ ನಿಲುವನ್ನು ಬದಲಿಸಿರುವುದನ್ನು ಸ್ಪಷ್ಟಪಡಿಸಿದ್ದರು.

### ಕಾಶ್ಮೀರ ವಿಚಾರದಲ್ಲಿ ಲೇಬರ್ ನಿರ್ಣಯ ವಿವಾದ


2019ರ ಸೆಪ್ಟೆಂಬರ್‌ನಲ್ಲಿ ಜೆರೆಮಿ ಕಾರ್ಬಿನ್ ನಾಯಕತ್ವದಲ್ಲಿ ಲೇಬರ್ ಪಕ್ಷವು ಕಾಶ್ಮೀರದ ಕುರಿತು ನಿರ್ಣಯವೊಂದನ್ನು ಅಂಗೀಕರಿಸಿತ್ತು. ಕಾಶ್ಮೀರಕ್ಕೆ ಅಂತಾರಾಷ್ಟ್ರೀಯ ವೀಕ್ಷಕರು 'ಪ್ರವೇಶಿಸಲು' ಹಾಗೂ ಅಲ್ಲಿನ ಜನತೆಗೆ ಸ್ವಯಂ ನಿರ್ಧಾರದ ಹಕ್ಕನ್ನು ನೀಡಲು ಆಗ್ರಹಿಸುವ ನಿರ್ಣಯ ಇದಾಗಿತ್ತು. ಸಂಭಾವ್ಯ ಪರಮಾಣು ಸಂಘರ್ಷವನ್ನು ತಡೆಯಲು ಮತ್ತು ಶಾಂತಿ ಹಾಗೂ ಸಹಜತೆಯ ಮರುಸ್ಥಾಪನೆಗಾಗಿ ಮಧ್ಯಸ್ಥಿಕೆ ವಹಿಸಲು ಭಾರತ ಮತ್ತು ಪಾಕಿಸ್ತಾನದ ಹೈ ಕಮಿಷನರ್‌ಗಳನ್ನು ಭೇಟಿ ಮಾಡುವಂತೆ ಕಾರ್ಬಿನ್ ಅವರಿಗೆ ಪಕ್ಷ ಸಲಹೆ ನೀಡಿತ್ತು.

# ಪ್ರಮಾಣ ವಚನ ಕುರಿತು ಕೆಲವು ಮಹತ್ವದ ತಿದ್ದುಪಡಿ ಮಾಡಿದ ಸ್ಪೀಕರ್

**ನವದೆಹಲಿ:** ಮಹತ್ವದ ಬೆಳವಣಿಗೆಯೊಂದರಲ್ಲಿ ಲೋಕಸಭಾ ಸ್ಪೀಕರ್ ಓಂ ಬಿರ್ಲಾ ಅವರು ಸಂಸದರ ಪ್ರಮಾಣ ವಚನ ಸ್ವೀಕಾರ ಸಮಾರಂಭದ ನಿಯಮದಲ್ಲಿ ಕೆಲವು ತಿದ್ದುಪಡಿಗಳನ್ನು ಜಾರಿಗೆ ತಂದಿದ್ದು, ಇನ್ನು ಮುಂದೆ ಪ್ರಮಾಣ ವಚನ ಸ್ವೀಕರಿಸುವಾಗ ಸದಸ್ಯರು ಯಾವುದೇ ಘೋಷಣೆ ಕೂಗುವಂತಿಲ್ಲ ಎಂದು ಸೂಚಿಸಿದ್ದಾರೆ.

ಈ ಬಾರಿ ಸಂಸದರು ಪ್ರಮಾಣ ವಚನ ಸ್ವೀಕರಿಸುವಾಗ ಘೋಷಣೆ ಕೂಗಿದ್ದು ವಿವಾದದ ಕಿಡಿ ಹೊತ್ತಿಸಿದ ಹಿನ್ನೆಲೆಯಲ್ಲಿ ಸ್ಪೀಕರ್ ಅವರು ಈ ನಿರ್ಧಾರ ಕೈಗೊಂಡಿದ್ದಾರೆ. ಕಳೆದ ವಾರ ನಡೆದ ಸಂಸದರ ಪ್ರಮಾಣ ವಚನ ಸ್ವೀಕಾರ ಸಮಾರಂಭದಲ್ಲಿ ಕೆಲವರು ಜೈ ಸಂವಿಧಾನ ಎಂದು ಕೂಗಿದ್ದರೆ, ಹೈದರಾಬಾದ್ ಸಂಸದ, ಎಐಎಂಐಎಂ ಅಧ್ಯಕ್ಷ ಅಸಾದುದ್ದೀನ್ ಓವೈಸಿ ಜೈ ಪ್ಯಾಲೆಸ್ತೀನ್ ಎಂದು ಘೋಷಣೆ ಮೊಳಗಿಸಿದ್ದರು.

ಉತ್ತರಪ್ರದೇಶದ ಬರೇಲಿಯ ಬಿಜೆಪಿ ಸಂಸದ ಛತ್ರ ಪಾಲ್ ಸಿಂಗ್ ಗಂಗ್ವಾರ್ ಪ್ರಮಾಣ ವಚನದ ಕೊನೆಗೆ ಜೈ ಹಿಂದೂ ರಾಷ್ಟ್ರ ಎಂದು ಹೇಳಿದ್ದರು. ಬಳಿಕ ಈ ವಿಚಾರ ವಿವಾದ ಎಬ್ಬಿಸಿತ್ತು. ದೇಶಾದ್ಯಂತ



ಪರ-ವಿರೋಧ ಚರ್ಚೆ ನಡೆದಿದ್ದವು. ಇದರ ನಂತರ ಬಿರ್ಲಾ ಅವರು ಸದಸ್ಯರ ಪ್ರಮಾಣ ವಚನ ಸ್ವೀಕಾರ ಮತ್ತು ದೃಢೀಕರಣಕ್ಕಾಗಿ ನಿಯಮಗಳನ್ನು ರೂಪಿಸಲು ಸಮಿತಿಯನ್ನು ರಚಿಸಿದ್ದರು. ಸಮಿತಿಯ ಶಿಫಾರಸ್ಸಿನಂತೆ ಇದೀಗ ಲೋಕಸಭೆಯ ಕಾರ್ಯ ವಿಧಾನ ಮತ್ತು ನಡವಳಿಕೆಯ ನಿಯಮಗಳ 389ನೇ ನಿಯಮಕ್ಕೆ ತಿದ್ದುಪಡಿ ತರಲಾಗಿದೆ.

**ಹೊಸ ನಿಯಮದಲ್ಲಿ ಏನಿದೆ?:** ಹೊಸ ನಿಯಮದ ಪ್ರಕಾರ ಸಂಸದರು ಪ್ರಮಾಣ ವಚನ ಸ್ವೀಕರಿಸುವ ಮೊದಲು ಅಥವಾ ಬಳಿಕ ಯಾವುದೇ ಪದಗಳು ಅಥವಾ ಅಭಿವ್ಯಕ್ತಿಯನ್ನು ಬಳಸುವಂತಿಲ್ಲ. ಒಂದುವೇಳೆ ನಿಯಮ ಉಲ್ಲಂಘಿಸಿದರೆ ಸಂಸದರ ವಿರುದ್ಧ ಕ್ರಮ ತೆಗೆದುಕೊಳ್ಳಬಹುದಾಗಿದೆ ಎಂದು ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು 18ನೇ ಲೋಕಸಭೆಯ ಮೊದಲ ಅಧಿವೇಶನದ ಕೊನೆಯಲ್ಲಿ ಮಾಹಿತಿ ನೀಡಿದರು.

**ಏನಿದು ವಿವಾದ :** 18ನೇ ಲೋಕಸಭೆಯ ಸದಸ್ಯರಾಗಿ ಉರ್ದುವಿನಲ್ಲಿ ಪ್ರಮಾಣ ವಚನ ಸ್ವೀಕರಿಸಿದ ಬಳಿಕ ಅಸಾದುದ್ದೀನ್ ಓವೈಸಿ ಕೊನೆಗೆ, ಜೈ ಭೀಮ್, ಜೈ ಮೀಮ್, ಜೈ ತೆಲಂಗಾಣ, ಜೈ ಪ್ಯಾಲೆಸ್ತೀನ್ ಎಂದು ಘೋಷಣೆ ಕೂಗಿದ್ದರು. ಜೈ ಪ್ಯಾಲೆಸ್ತೀನ್ ಘೋಷಣೆಗೆ ಬಿಜೆಪಿ ತೀವ್ರ ವ್ಯಕ್ತಪಡಿಸಿದ ಹಿನ್ನಲೆಯಲ್ಲಿ ಪ್ರತಿಕ್ರಿಯಿಸಿದ ಓವೈಸಿ ತಮ್ಮ ನಡೆಯನ್ನು ಸಮರ್ಥಿಸಿಕೊಂಡಿದ್ದರು.

ಸದನದ ಹೊರಗೆ ಮಾಧ್ಯಮಗಳ ಜತೆ ಮಾತನಾಡಿದ್ದ ಅವರು, ಜೈ ಭೀಮ್, ಜೈ ಮೀಮ್, ಜೈ ತೆಲಂಗಾಣ, ಜೈ ಪ್ಯಾಲೆಸ್ತೀನ್ ಎಂದು ಹೇಳುವುದರಲ್ಲಿ ಯಾವುದೇ ತಪ್ಪಿಲ್ಲ ಎಂದಿದ್ದರು. ಇತರ ಸದಸ್ಯರು ಸಹ ವಿವಿಧ ರೀತಿಯ ಘೋಷಣೆ ಕೂಗುತ್ತಾರೆ. ಅದು ಹೇಗೆ ತಪ್ಪಾಗುತ್ತದೆ? ನಾನು ಏನು ಹೇಳಬೇಕೋ ಅದನ್ನು ಹೇಳಿದೆ. ಪ್ಯಾಲೆಸ್ತೀನ್ ಬಗ್ಗೆ ಮಹಾತ್ಮ ಗಾಂಧಿ ಹೇಳಿದ್ದನ್ನು ಓದಿ ಎಂದು ಓವೈಸಿ ಹೇಳಿದ್ದರು. ಬಳಿಕ ಇದು ವ್ಯಾಪಕ ವಿವಾದ ಹುಟ್ಟುಹಾಕಿತ್ತು.

# ಐಐಎಂ ಗಿಟ್ಟಿಸಿಕೊಂಡ ಬಡ ವಿದ್ಯಾರ್ಥಿ ಸುಮಂತ್

**ಲಖನೌ:** ಆಂಧ್ರಪ್ರದೇಶದ ನಂದಯಾಲ್‌ನ 22 ವರ್ಷದ ಎಂಜಿನಿಯರಿಂಗ್ ಪದವೀಧರ ಗಾನಮದ್ದುಲ ನಾಗ ಸುಮಂತ್ ಈ ವರ್ಷ ಐಐಎಂ ಲಕ್ನೋಗೆ ಸೇರುವ ಕನಸು ನನಸಾಗಿಸಿಕೊಂಡಿದ್ದಾರೆ. ಟ್ರಕ್ ಚಾಲಕ ಸುಬ್ಬರಾಯುಡು ಗಾನಮದ್ದುಲ ಮತ್ತು ಶಿಶುವಿಹಾರದ ಶಿಕ್ಷಕಿ ಜಿ ಆದಿ ಲಕ್ಷ್ಮಿ ಅವರ ಪುತ್ರನಾದ ಸುಮಂತ್ ಹಣಕಾಸಿನ ಸಮಸ್ಯೆಯ ನಡುವೆಯೂ ಅಡೆತಡೆಗಳನ್ನು ದಾಟಿ ಈ ಸಾಧನೆಗೆ ಪಾತ್ರರಾಗಿದ್ದಾರೆ



ಟ್ರಕ್ ಚಾಲಕರಾಗಿರುವ ತಂದೆಯ ಹೆಚ್ಚಿನ ಆದಾಯ ಜೀವನ ನೆಡಸಲು ಸಾಕಾಗುತ್ತಿದ್ದ ಸಮಯದಲ್ಲಿ ಕಷ್ಟಪಟ್ಟು ಓದಿ ಉನ್ನತ ಸಂಸ್ಥೆಯಲ್ಲಿ ಪ್ರವೇಶ ಪಡೆದಿದ್ದಾರೆ ಸುಮಂತ್. ಈ ಮೂಲಕ ಮನಸ್ಸು ಮಾಡಿದರೆ ಏನು ಬೇಕಾದರೂ ಸಾಧಿಸಬಹುದು ಎನ್ನುವುದನ್ನು ಇತರರಿಗೆ ತೋರಿಸಿಕೊಟ್ಟಿದ್ದಾರೆ

ಈ ಕುರಿತು ಪ್ರತಿಕ್ರಿಯೆ ನೀಡಿರುವ ಗಾನಮದ್ದುಲ ನಾಗ ಸುಮಂತ್, ನನ್ನ ತಂದೆಯ ಕಷ್ಟಗಳನ್ನು ನಾನು ನೋಡಿದ್ದೇನೆ, ಸುಗ್ಗಿಯ ಸಮಯದಲ್ಲಿ, ಅವರು ಭತ್ತ ಮತ್ತು ಹತ್ತಿಯ ಹೊರೆಗಳನ್ನು ಹೊತ್ತುಕೊಂಡು ದೂರದ ಪ್ರಯಾಣ ಮಾಡುವಾಗ ಅವರು ವಾರಗಟ್ಟಲೆ ದೂರವಿರುತ್ತಾರೆ ಇದ್ನು ನೋಡಿ ಜೀವನದಲ್ಲಿ ಸಾಧನೆ ಮಾಡುವ ಹಂಬಲವೇ ಈ ಯಶಸ್ಸಿಗೆ ಕಾರಣ ಎಂದಿದ್ದಾರೆ. ಸುಮಂತ್ ಪೂರ್ವ ವಿಶ್ವವಿದ್ಯಾಲಯ ಮತ್ತು ಇಂಜಿನಿಯರಿಂಗ್ ಕೋರ್ಸ್‌ಗಳಿಗೆ ವಿದ್ಯಾರ್ಥಿವೇತನವನ್ನು ಗಳಿಸಿ ಶೈಕ್ಷಣಿಕವಾಗಿ ಉತ್ತಮ ಸಾಧನೆ ಮಾಡಿದ್ದ ಹಿರಿಮೆಗೆ ಪಾತ್ರವಾಗಿದ್ದಾರೆ. 10 ನೇ ತರಗತಿಯಲ್ಲಿ 9.8 ಮತ್ತು 12 ನೇ ತರಗತಿಯ ರಾಜ್ಯ ಬೋರ್ಡ್ ಪರೀಕ್ಷೆಗಳಲ್ಲಿ 8.8 ಅಂಕಗಳನ್ನು ಗಳಿಸಿದ ನಂತರ ಅವರು ಶ್ರೀಕಾಕುಲಂನಿಂದ 8.8 ಯೊಂದಿಗೆ ಉತ್ತಮ ಶ್ರೇಣಿಯಲ್ಲಿ ಪಾಸಾಗಿದ್ದರು.

ಇದೀಗ ಲಕ್ನೋ ಐಐಎಂನಲ್ಲಿ ಪ್ರವೇಶ ಪಡೆಯುವ ಮೂಲಕ ಬಡ ಮಕ್ಕಳೂ ಕಠಿಣ ಪರಿಶ್ರಮವಿದ್ದರೆ ಕಬ್ಬಿಣದ ಕಡಲೆಯನ್ನು ಅರಗಿಸಿಕೊಳ್ಳಬಹುದು ಎನ್ನುವುದನ್ನು ಸಾಬೀತು ಮಾಡಿದ್ದಾರೆ. ಜೊತೆಗೆ ಇತೆರ ವಿದ್ಯಾರ್ಥಿಗಳಿಗೆ ಸ್ಪೂರ್ತಿಯಾಗಿದ್ದಾರೆ.

# ವಿಜಯೋತ್ಸವ -ಕಾಲ್ತುಳಿತ-ಹಲವರು ಗಾಯ

**ಮುಂಬೈ:** ಟಿ20 ವಿಶ್ವಕಪ್ ಗೆದ್ದ ಟೀಂ ಇಂಡಿಯಾದ ಭವ್ಯ ಮೆರವಣಿಗೆ ಸಂಜೆ ಮುಂಬೈನ ಅರಬ್ಬಿ ಸಮುದ್ರ ತೀರದಲ್ಲಿರುವ ಮರೈನ್ ಡ್ರೈವ್‌ನಲ್ಲಿ ಅದ್ದೂರಿಯಾಗಿ ನಡೆದಿದೆ. ತಮ್ಮ ನೆಚ್ಚಿನ ಕ್ರಿಕೆಟಿಗರನ್ನು ನೋಡಲು ಲಕ್ಷಾಂತರ ಅಭಿಮಾನಿಗಳು ಜಮಾಯಿಸಿದ್ದರು.

ಈ ವೇಳೆ ನಡೆದ ಕಾಲ್ತುಳಿತ ದಲ್ಲಿ ಹಲವರು ಗಾಯಗೊಂಡಿದ್ದಾರೆ. ಕೆಲವರು ಉಸಿರಾಟದ ತೊಂದರೆಯಿಂದ ಬಳಲುತ್ತಿದ್ದರು ಎಂದು ಮುಂಬೈ ಪೊಲೀಸರು ತಿಳಿಸಿದ್ದಾರೆ. ರೋಹಿತ್ ಶರ್ಮಾ ನೇತೃತ್ವದ ಭಾರತ ಕ್ರಿಕೆಟ್ ತಂಡವು ಮರೀನ್ ಡ್ರೈವ್‌ನಿಂದ ತೆರೆದ ಬಸ್‌ನ ಛಾವಣಿಯ ಮೇಲೆ ಭವ್ಯ ಮೆರವಣಿಗೆಯಲ್ಲಿ ಸಾಗಿತು. ಐತಿಹಾಸಿಕ ಕ್ಷಣವನ್ನು ಆಚರಿಸಲು ಲಕ್ಷಾಂತರ ಕ್ರಿಕೆಟ್ ಅಭಿಮಾನಿಗಳು ಸೇರಿದ್ದರು. ಮೆರವಣಿಗೆಯುದ್ದಕ್ಕೂ, ಆಟಗಾರರು ಟ್ರೋಫಿಯನ್ನು ಹಿಡಿದುಕೊಂಡಿದ್ದರು ಮತ್ತು ಬೆಂಬಲಕ್ಕಾಗಿ ಅಭಿಮಾನಿಗಳಿಗೆ ಧನ್ಯವಾದ ಅರ್ಪಿಸಿದ್ದಾರೆ. ಮರೈನ್ ಡ್ರೈವ್‌ನಲ್ಲಿ ಆರಂಭವಾದ ವಿಜ ಯೋತ್ಸವ ವಾಂಖೆಡೆ ಕ್ರೀಡಾಂಗಣದಲ್ಲಿ ಕೊನೆಗೊಂಡಿದೆ. ಇಡೀ ತಂಡವನ್ನು





**ಸರಿಯಾದ ಸಮಯಕ್ಕೆ ಮೆರವಣಿಗೆ ಆರಂಭವಾಗಲಿಲ್ಲ**

ಕ್ರೀಡಾಂಗಣದಲ್ಲಿ ಸನ್ಮಾನಿಸಲಾಯಿತು. ಭಾರತ ಕ್ರಿಕೆಟ್ ನಿಯಂತ್ರಣ ಮಂಡಳಿ (ಬಿಸಿಸಿಐ) ಅಧಿಕಾರಿಗಳು ವಿಶ್ವಕಪ್ ವಿಜೇತ ತಂಡಕ್ಕೆ 125 ಕೋಟಿ ರೂಪಾಯಿ ಚೆಕ್ ವಿತರಿಸಿದ್ದಾರೆ.

ಪ್ರತ್ಯಕ್ಷದರ್ಶಿ ರವಿ ಸೋಳಂಕಿ ಮಾತನಾಡಿ, ನಾನು ಕಚೇರಿಯಲ್ಲಿ ಕೆಲಸ ಮುಗಿಸಿ ಮನೆಗೆ ಹೋಗುತ್ತಿದ್ದ ವೇಳೆ ಭಾರತ ಕ್ರಿಕೆಟ್ ತಂಡದ ಆಟಗಾರರು ಸಂಜೆ 5-6 ಗಂಟೆಯೊಳಗೆ ಪಥಸಂಚಲನದಲ್ಲಿ ಪಾಲ್ಗೊಳ್ಳಲಿದ್ದಾರೆ ಎಂದು ತಿಳಿದುಬಂದಿದೆ. ಆದರೆ ಸರಿಯಾದ ಸಮಯಕ್ಕೆ ಮೆರವಣಿಗೆ ಆರಂಭವಾಗಲಿಲ್ಲ. ಜನಸಂದಣಿ ಮಾತ್ರ ಬೆಳೆಯುತ್ತಲೇ ಇತ್ತು ಹೆಚ್ಚಿನ ಸಂಖ್ಯೆಯ ಪೊಲೀಸರು ಇದ್ದರೂ ಪರಿಸ್ಥಿತಿಯನ್ನು ನಿಭಾಯಿಸಲಾಗಲಿಲ್ಲ.

# ವಿಮಾನದಲ್ಲಿ ರೀಲ್ ಹುಚ್ಚು ಪ್ರಯಾಣಿಕರಿಗೆ ಪೀಕಲಾಟ

**ಮುಂಬೈ:** ಅನೇಕ ಜನರು ಈಗ ಸಾಮಾಜಿಕ ಮಾಧ್ಯಮ ಖಾತೆಗಳನ್ನು ಹೊಂದಿದ್ದಾರೆ, ಸಾಮಾಜಿಕ ಜಾಲತಾಣಗಳಲ್ಲಿ ಜನಪ್ರಿಯತೆಗಳಿಸಲು ಕೆಲವರು ವಿಚಿತ್ರ ಪ್ರಯತ್ನಗಳನ್ನು ಮಾಡುತ್ತಲೇ ಇರುತ್ತಾರೆ.. ಅವರು ಎಲ್ಲಿ ಬಿದ್ದರೂ, ಎಲ್ಲಿ ಎದ್ದರೂ ಅವರು ಫೋಟೋಗಳು ಮತ್ತು ರೀಲ್‌ಗಳನ್ನು ರಚಿಸುತ್ತಾರೆ ಮತ್ತು ಅವುಗಳನ್ನು ಸಾಮಾಜಿಕ ಮಾಧ್ಯಮ ವೇದಿಕೆಗಳಲ್ಲಿ ಹಂಚಿಕೊಳ್ಳುತ್ತಾರೆ. ವೀಕ್ಷಣೆಗಳು ಮತ್ತು ಇಷ್ಟಗಳನ್ನು ಪಡೆಯುವ ಈ ಪ್ರಯತ್ನದಲ್ಲಿ, ಇತರರು ಅನುಭವಿಸುವ ತೊಂದರೆಗಳ ಬಗ್ಗೆ ಅವರು ಗಮನ ವಹಿಸುವುದಿಲ್ಲ. ಇದೀಗ ಇಂಡಿಗೋ ವಿಮಾನದಲ್ಲಿ ಮಹಿಳೆಯೊಬ್ಬರು ಡ್ಯಾನ್ಸ್ ಮಾಡುವ ಮೂಲಕ ಸಹ ಪ್ರಯಾಣಿಕರಿಗೆ ತೊಂದರೆ ಕೊಟ್ಟಿದ್ದಾರೆ. ಈ ವಿಡಿಯೋ ವೈರಲ್ ಆಗಿದೆ. ಇದರಿಂದ ಸಾಮಾಜಿಕ ಜಾಲತಾಣ ಬಳಕೆದಾರರು ಮಹಿಳೆಯ ಮೇಲೆ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ವಯಸ್ಸು ಸಾಧನೆಗೂಅಡ್ಡಿಯಿಲ್ಲ ಎಂಬಗಾದೆ ರೀಲುಗಳಿಗೂ ಅನ್ವಯಿಸುತ್ತದೆ. ಎಂಭತ್ತು



ಸಾವಿರಕ್ಕೂ ಹೆಚ್ಚು ಫಾಲೋವರ್ಸ್ ಹೊಂದಿರುವ ಸಲ್ಮಾ ಶೇಖ್ ಎಂಬ ಮಹಿಳೆ ಶೇರ್ ಮಾಡಿರುವ ರೀಲ್‌ನ ವಿಡಿಯೋ ಇದೀಗ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗಿದೆ.

**ಭಾರತೀಯ ಸಂಸ್ಕೃತಿಗೆ ಅವಮಾನ**

ಇದರಲ್ಲಿ, ಮಹಿಳೆ ಕಪ್ಪು ಸೀರೆಯನ್ನು ಧರಿಸಿ 1995 ರ ತಮಿಳು ಆಕ್ಷನ್ ಚಿತ್ರ ಬಾಷಾ ಮೂವಿ ಯ ಜನಪ್ರಿಯ ಹಾಡಿನ ಸ್ಟೈಲ್ ಸ್ಟೈಲ್ ಗೆ ವಿಮಾನದ ಸೀಟ್‌ಗಳ ಮಧ್ಯದಲ್ಲಿ ನೃತ್ಯ ಮಾಡುತ್ತಿರುವುದು ಕಂಡುಬರುತ್ತದೆ. ಆಕೆಯ ಶೂಟಿಂಗ್‌ನ ವಿಡಿಯೋ ಸಾಮಾಜಿಕ ಮಾಧ್ಯಮದಲ್ಲಿ ವೈರಲ್ ಆಗಿದೆ, ನೆಟಿಜನ್‌ಗಳು ಆಕೆಯ ವರ್ತನೆಗೆ ಟೀಕೆ ಮತ್ತು ಆಶ್ಚರ್ಯವನ್ನು ವ್ಯಕ್ತಪಡಿಸಿದ್ದಾರೆ. ಇದು ನೆಟಿಜನ್‌ಗಳಲ್ಲಿ ಮಿಶ್ರ ಪ್ರತಿಕ್ರಿಯೆಗಳಿಗೆ ಕಾರಣವಾಗಿದೆ, ಕೆಲವರು ಅವರ ನೃತ್ಯವನ್ನು ಮೆಚ್ಚಿದ್ದಾರೆ ಮತ್ತು ಅವರ ಧೈರ್ಯವನ್ನು ಶ್ಲಾಘಿಸಿದ್ದಾರೆ. ಇತರರು ವಿಮಾನದಲ್ಲಿ ಇಂತಹ ವರ್ತನೆಯು ಸೂಕ್ತವಲ್ಲ ಮತ್ತು ಇತರ ಪ್ರಯಾಣಿಕರಿಗೆ ತೊಂದರೆ ಉಂಟುಮಾಡುತ್ತದೆ ಎಂದು ಟೀಕಿಸಿದ್ದಾರೆ. ಈ ವಿಡಿಯೋವನ್ನು ಈಗಾಗಲೇ 20 ಲಕ್ಷಕ್ಕೂ ಹೆಚ್ಚು ಮಂದಿ ವೀಕ್ಷಿಸಿದ್ದಾರೆ.

ಸಲ್ಮಾಳ ಈ ಅವಾಂತರದಿಂದ ಪ್ರಯಾಣಿಕರು ತುಂಬಾ ಮುಜುಗರ ಅನುಭವಿಸಿದ್ದಾರೆ ಮತ್ತು ಇಂತಹ ಮೂರ್ಖತನವನ್ನು ಮಾಡುವುದು ಅವರ ಖಾಸಗಿ ಪ್ರಯಾಣವಲ್ಲಎಂದು ಒಬ್ಬ ವೀಕ್ಷಕ ಬರೆದಿದ್ದಾರೆ. ಈ ವಿಡಿಯೋ ಒಂದು ಸಣ್ಣ ವಿವಾದವನ್ನು ಹುಟ್ಟುಹಾಕಿತು, ಈ ನೃತ್ಯವು ಭಾರತೀಯ ಸಂಸ್ಕೃತಿಗೆ ಅವಮಾನವಾಗಿದೆ ಎಂದು ಕೆಲವರು ವಾದಿಸಿದ್ದಾರೆ.

# ಅಮೆರಿಕದಲ್ಲಿ ನಾಲ್ವರ ಮೇಲೆ ಶಾರ್ಕ್ ದಾಳಿ

**ಟೆಕ್ಸಾಸ್:** ನಾಲ್ಕು ಪ್ರತ್ಯೇಕ ಪ್ರಕರಣಗಳಲ್ಲಿ ಶಾರ್ಕ್ ದಾಳಿಯಿಂದಾಗಿ ನಾಲ್ವರು ಗಾಯಗೊಂಡ ಘಟನೆ ಅಮೆರಿಕ ದೇಶದ ಟೆಕ್ಸಾಸ್ ರಾಜ್ಯದ ದಕ್ಷಿಣ ಪಡ್ರೆ ದ್ವೀಪದಲ್ಲಿ ನಡೆದಿದೆ. ಜುಲೈ 4 ರಂದು ಅಮೆರಿಕದಲ್ಲಿ ಸ್ವಾತಂತ್ರ್ಯ ದಿನಾಚರಣೆ ಇದ್ದ ಕಾರಣ ರಜೆ ಇತ್ತು. ಈ ಹಿನ್ನೆಲೆಯಲ್ಲಿ ಪ್ರವಾಸದಲ್ಲಿದ್ದ ಜನರು ಅಪಾಯಕ್ಕೆ ಸಿಲುಕಿದ್ದಾರೆ.

ನಾಲ್ಕು ಪ್ರತ್ಯೇಕ ಘಟನೆಗಳಲ್ಲಿ ಶಾರ್ಕ್ ದಾಳಿ ವೇಳೆ ನಾಲ್ವರು ಗಾಯಗೊಂಡಿದ್ದು, ಈ ಪೈಕಿ ಇಬ್ಬರ ಸ್ಥಿತಿ ಗಂಭೀರವಾಗಿದೆ. ಇನ್ನುಳಿದ ಇಬ್ಬರಿಗೆ ಸ್ವಲ್ಪ ಗಾಯಗಳಾಗಿವೆ. ರಕ್ಷಣಾ ಪಡೆಗಳು ತುರ್ತಾಗಿ ಸ್ಪಂದಿಸಿದ ಹಿನ್ನೆಲೆಯಲ್ಲಿ ಸಾವಿನ ಸಾಧ್ಯತೆ ಕಡಿಮೆ ಆಗಿದೆ ಎಂದು ಟೆಕ್ಸಾಸ್ ರಾಜ್ಯದ ಸರ್ಕಾರಿ ಅಧಿಕಾರಿಗಳು ಮಾಹಿತಿ ನೀಡಿದ್ದಾರೆ. ಈ ಕುರಿತಾಗಿ ಅಮೆರಿಕದ ಪ್ರತಿಷ್ಠಿತ ಫಾಕ್ಸ್ ನ್ಯೂಸ್ ಸಮಗ್ರ ವರದಿ ಪ್ರಕಟಿಸಿದೆ. ವನ್ನಾ




ವನ್ನಾ ಬೀಚ್ ಬಾರ್ ಹಾಗೂ ಗ್ರಿಲ್ ಎಂಬ ಪ್ರದೇದಲ್ಲಿ ಸ್ಥಳೀಯ ಕಾಲಮಾನ ಬೆಳಗ್ಗೆ 11 ಗಂಟೆಗೆ ಈ ಘಟನೆ ನಡೆದಿದೆ ಎಂದು ಪೊಲೀಸರು ತಿಳಿಸಿದ್ದು, ಸ್ಥಳಕ್ಕೆ ಧಾವಿಸಿ ಘಟನೆ ಕುರಿತಾಗಿ ಕೂಲಂಕಷ ತನಿಖೆ ನಡೆಸಿದ್ದಾರೆ. ಈ ಕುರಿತಾಗಿ ಟೆಕ್ಸಾಸ್ ರಾಜ್ಯದ ಉದ್ಯಾನ ಹಾಗೂ ವನ್ಯ ಜೀವಿ ಇಲಾಖೆ ಕೂಡಾ ಪ್ರತಿಕ್ರಿಯೆ ನೀಡಿದ್ದು, ಶಾರ್ಕ್ ದಾಳಿಯಿಂದ ಇಬ್ಬರು ಗಂಭೀವಾಗಿ ಗಾಯಗೊಂಡಿದ್ದಾರೆ ಅವರನ್ನು ಬ್ರೌನ್ಸ್‌ವಿಲ್ಲೆಯಲ್ಲಿ ಇರುವ ಆರೋಗ್ಯ ಕೇಂದ್ರಕ್ಕೆ ದಾಖಲಿಸಲಾಗಿದ್ದು, ಚಿಕಿತ್ಸೆ ನಡೆಯುತ್ತಿದೆ. ಕಣಿವೆ ಪ್ರಾಂತ್ಯದಲ್ಲಿ ಇರುವ ಆಸ್ಪತ್ರೆಯಲ್ಲಿ ಚಿಕಿತ್ಸೆ ಮುಂದುವರೆದಿದೆ. ಇನ್ನಿಬ್ಬರು ಗಾಯಾಳುಗಳನ್ನು ಹೆಚ್ಚುವರಿ ಚಿಕಿತ್ಸೆಗಾಗಿ ಮತ್ತೊಂದು ಸ್ಥಳಕ್ಕೆ ರವಾನೆ ಮಾಡಲಾಗಿದೆ ಎಂದು ಮಾಹಿತಿ ನೀಡಿದ್ದಾರೆ.

ಈ ಘಟನೆಯಲ್ಲಿ ಗಾಯಗೊಂಡ ಮೂರನೇ ವ್ಯಕ್ತಿಯು ಶಾರ್ಕ್ ದಾಳಿಗೆ ಸಿಲುಕಿದ್ದ ಒಬ್ಬರನ್ನು ರಕ್ಷಣೆ ಮಾಡಲು ಹೋಗಿದ್ದ ವೇಳೆ ತಾನೂ ಗಾಯಗೊಂಡಿದ್ದ ಎಂದು ಪೊಲೀಸರು ಸಿಎನ್‌ಎನ್ ಸುದ್ದಿ ಸಂಸ್ಥೆಗೆ ಮಾಹಿತಿ ನೀಡಿದ್ದಾರೆ. ಶಾರ್ಕ್ ದಾಳಿಯಿಂದ ಗಾಯಗೊಂಡವರ ಯಾವೆಲ್ಲಾ ದೇಹದ ಭಾಗಗಳು ಹಾನಿಗೀಡಾಗಿವೆ ಅನ್ನೋದ್ರ ಕುರಿತಾಗಿ ಇನ್ನಷ್ಟೇ ಮಾಹಿತಿ ಹೊರ ಬೀಳಬೇಕಿದೆ.

# ಅಯೋಧ್ಯೆಯ ರಾಮ ಮಂದಿರ ಅರ್ಚಕರಿಗೆ ಹೊಸ ಡ್ರೆಸ್ ಕೋಡ್: ಕೇಸರಿ ಔಟ್, ಹಳದಿ ಇನ್

**ಲಖನೌ:** ಶ್ರೀ ರಾಮ ಜನ್ಮಭೂಮಿ ತೀರ್ಥ ಕ್ಷೇತ್ರ ಟ್ರಸ್ಟ್ ಅಯೋಧ್ಯೆಯ ರಾಮಮಂದಿರದ ಅರ್ಚಕರಿಗೆ ಹೊಸ ಡ್ರೆಸ್ ಕೋಡ್ ಜಾರಿ ಮಾಡಿದ್ದು, ಗರ್ಭಗುಡಿಯಲ್ಲಿ ಭಗವಾನ್ ರಾಮನಿಗೆ ಸೇವೆ ಸಲ್ಲಿಸುತ್ತಿರುವ ಪುರೋಹಿತರು ಇನ್ನು ಮುಂದೆ ಕೇಸರಿ ಬದಲಿಗೆ ಸಾಂಪ್ರದಾಯಿಕ ಹಳದಿಬಟ್ಟೆಗಳನ್ನು ಧರಿಸುತ್ತಾರೆ.

ಗಮನಾರ್ಹವೆಂದರೆ, ಶ್ರೀ ರಾಮ ಜನ್ಮಭೂಮಿ ತೀರ್ಥ ಕ್ಷೇತ್ರ ಟ್ರಸ್ಟ್ ಅರ್ಚಕರಿಗೆ ಹೊಸ ಡ್ರೆಸ್ ಕೋಡ್ ಅನ್ನು ಬಿಡುಗಡೆ ಮಾಡಿದ್ದು, ಅದರ ಪ್ರಕಾರ ಅವರು ಈಗ ಧೋತಿ, ಚೌಬಂದಿ ಮತ್ತು ಪೇಟವನ್ನು ಧರಿಸುತ್ತಾರೆ. ಇವೆಲ್ಲವೂ



ಹಳದಿ ಬಣ್ಣದ್ದಾಗಿದೆ.

ಈ ಮೊದಲು ಅರ್ಚಕರು ಕೇಸರಿ ಕುರ್ತಾ, ಪೇಟ, ಧೋತಿ ಧರಿಸುತ್ತಿದ್ದರು. ಪೇಟವನ್ನು ಅಚ್ಚುಕಟ್ಟಾಗಿ ಧರಿಸಲು ಅವರಿಗೆ ಸೂಕ್ತ ತರಬೇತಿ ನೀಡಲಾಗಿದೆ ಎಂದು ದೇವಸ್ಥಾನದ ಟ್ರಸ್ಟ್ ಮೂಲಗಳು ತಿಳಿಸಿವೆ.

# ನನಗೆ ಹೆಚ್ಚು ನಿದ್ರೆ ಬೇಕು, ರಾತ್ರಿ 8ರ ಬಳಿಕ ಮೀಟಿಂಗ್ ಬೇಡ: ಬೈಡನ್


## • ಅಮೆರಿಕ ಅಧ್ಯಕ್ಷರ ಇತಿಹಾಸದಲ್ಲೇ ಇದೇ ಮೊದಲ ಬಾರಿಗೆ ಅಧ್ಯಕ್ಷರೊಬ್ಬರು ಈ ರೀತಿ ಹೇಳುತ್ತಿದ್ದಾರೆ

**ವಾಷಿಂಗ್ಟನ್:** ವಿಶ್ವದ ದೊಡ್ಡಣ್ಣ ಅಮೆರಿಕದ ಅಧ್ಯಕ್ಷ ಜೋ ಬೈಡನ್ ಅವರ ದೈಹಿಕ ಹಾಗೂ ಮಾನಸಿಕ ಸ್ಥಿರತೆ ಕುರಿತು ಹಲವು ಪ್ರಶ್ನೆಗಳು ಎದ್ದಿರುವ ಬೆನ್ನಲ್ಲೇ, ತಮಗೆ ಹೆಚ್ಚು ನಿದ್ರೆ ಬೇಕು ಎಂದು ಹೇಳಿರುವ ಜೋ ಬೈಡನ್, ರಾತ್ರಿ 8 ಗಂಟೆ ನಂತರ ಯಾವುದೇ ಮೀಟಿಂಗ್ ಆಯೋಜಿಸಬೇಡಿ ಎಂದು ಡೆಮಾಕ್ರಟಿಕ್ ಪಕ್ಷದ ಸಹೋದ್ಯೋಗಿಗಳಿಗೆ ಮನವಿ ಮಾಡಿಕೊಂಡಿದ್ದಾರೆ.

2024ರ ಅಮೆರಿಕ ಅಧ್ಯಕ್ಷೀಯ ಚುನಾವಣೆಯ ಅಧ್ಯಕ್ಷೀಯ ಅಭ್ಯರ್ಥಿಗಳ ಸಂವಾದದ ವೇಳೆ ರಿಪಬ್ಲಿಕನ್ ಅಭ್ಯರ್ಥಿ ಡೊನಾಲ್ಡ್ ಟ್ರಂಪ್ ಎಂದು ಭಾರೀ ಹಿನ್ನಡೆ ಅನುಭವಿಸಿದ ಬಳಿಕ ಜೋ ಬೈಡನ್ ಅವರನ್ನು ಡೆಮಾಕ್ರೆಟಿಕ್ ಪಕ್ಷದ ಅಭ್ಯರ್ಥಿ ಸ್ಥಾನದಿಂದ ಕೆಳಗಿಳಿಸಬೇಕು ಅನ್ನೋ ಆಗ್ರಹಗಳು ಕೇಳಿ ಬರುತ್ತಿರುವ ಹೊತ್ತಲ್ಲೇ ಜೋ ಬೈಡನ್ ಈ ರೀತಿಯ ಮನವಿ ಮಾಡಿದ್ದಾರೆ. ನ್ಯೂಯಾರ್ಕ್ ಟೈಮ್ಸ್‌ನಲ್ಲಿ ಈ ಕುರಿತಾಗಿ ಸಮಗ್ರ ವರದಿ ಪ್ರಕಟವಾಗಿದ್ದು, ಅಮೆರಿಕದ

- ವೈಟ್ ಹೌಸ್‌ನಲ್ಲಿ ಸಭೆ ನಡೆಸಬೇಕೆಂದರೆ ರಾತ್ರಿ 8 ಗಂಟೆ ಒಳಗೆ ಮುಗಿಸಬೇಕು
- ರಾತ್ರಿ 8 ರ ಬಳಿಕ ನಿದ್ರೆಗೆ ಜಾರಬೇಕಿದೆ, ನನಗೆ ಹೆಚ್ಚು ನಿದ್ರೆ ಬೇಕಿದೆ
- ಜೊತೆಯಲ್ಲೇ ಕಾರ್ಯಾವಧಿಯನ್ನು ಕಡಿಮೆ ಮಾಡಬೇಕಿದೆ ಎಂದಿದ್ದಾರೆ ಬೈಡನ್

ಹಲವು ರಾಜ್ಯಗಳಲ್ಲಿ ಆಡಳಿತದಲ್ಲಿ ಇರುವ ಡೆಮಾಕ್ರಟಿಕ್ ಪಕ್ಷದ ಗವರ್ನರ್‌ಗಳು ತಮ್ಮ ಜೊತೆ ವೈಟ್ ಹೌಸ್‌ನಲ್ಲಿ ಸಭೆ ನಡೆಸಬೇಕೆಂದರೆ ರಾತ್ರಿ 8 ಗಂಟೆ ಒಳಗೆ ಮುಗಿಸಬೇಕು ಎಂದು 81 ವರ್ಷ ವಯಸ್ಸಿನ ಜೋ ಬೈಡನ್ ತಾಕೀತು ಮಾಡಿದ್ದಾರೆ. ರಾತ್ರಿ 8ರ ಬಳಿಕ ತಾವು ನಿದ್ರೆಗೆ ಜಾರಬೇಕಿದೆ, ತಮಗೆ ಹೆಚ್ಚು ನಿದ್ರೆ ಬೇಕಿದೆ, ಜೊತೆಯಲ್ಲೇ ತಾವು ತಮ್ಮ ಕಾರ್ಯಾವಧಿಯನ್ನು ಕಡಿಮೆ ಮಾಡಬೇಕಿದೆ ಎಂದು ಬೈಡನ್ ಹೇಳಿದ್ದಾರೆ ಎಂದು ವರದಿಯಾಗಿದೆ.



ಈಗಾಗಲೇ ಡೆಮಾಕ್ರೆಟಿಕ್ ಪಕ್ಷದ ಹಲವು ಗವರ್ನರ್‌ಗಳು ಎರಡನೇ ಅವಧಿಗೆ ಜೋ ಬೈಡನ್ ಮರು ಆಯ್ಕೆ ಬಯಸಿರೋದನ್ನ ಪ್ರಶ್ನಿಸಿದ್ದಾರೆ. ಡೆಮಾಕ್ರೆಟಿಕ್ ಪಕ್ಷದ ಅಧ್ಯಕ್ಷೀಯ ಅಭ್ಯರ್ಥಿ ಬದಲಾಗಬೇಕು ಎಂದು ತಮ್ಮ ಭಾವನೆ ವ್ಯಕ್ತಪಡಿಸಿದ್ದಾರೆ. ಆದರೆ, ಈ ಕುರಿತು ಇತ್ತೀಚೆಗೆ ಅಧಿಕೃತ ಪ್ರಕಟಣೆ ಹೊರಡಿಸಿದ್ದ ಅಮೆರಿಕ ಅಧ್ಯಕ್ಷರ ಕಚೇರಿ ವೈಟ್ ಹೌಸ್, ಡೆಮಾಕ್ರೆಟಿಕ್ ಪಕ್ಷದ ಅಭ್ಯರ್ಥಿ ಬದಲಾವಣೆ ಇಲ್ಲ, ಎರಡನೇ ಅವಧಿಗೆ ಜೋ ಬೈಡನ್ ಅವರೇ ಅಭ್ಯರ್ಥಿಯಾಗಿ ಸ್ಪರ್ಧೆ ಮಾಡಲಿದ್ದಾರೆ. ಅವರು ನಾಮಪತ್ರ ವಾಪಸ್ ಪಡೆಯುವ ಪ್ರಶ್ನೆಯೇ ಇಲ್ಲ ಎಂದು ಪ್ರಕಟಣೆ ಹೊರಡಿಸಿತ್ತು.

### ಗವರ್ನರ್‌ಗಳ ಜೊತೆಗೆ ನಡೆದ ಸಭೆಯಲ್ಲಿ ಏನಾಯ್ತು?

ಜೋ ಬೈಡನ್ ಅವರು ಅಮೆರಿಕ ಇತಿಹಾಸದಲ್ಲೇ ಅತ್ಯಂತ ವಯಸ್ಕ ಅಧ್ಯಕ್ಷರು. ಈ ಹಿನ್ನೆಲೆಯಲ್ಲಿ ಅಮೆರಿಕ ಅಧ್ಯಕ್ಷರ ಜೊತೆ ಡೆಮಾಕ್ರೆಟಿಕ್ ಪಕ್ಷದ ಗವರ್ನರ್‌ಗಳು ನಡೆಸಿದ ಸಭೆಯಲ್ಲಿ ಅಧ್ಯಕ್ಷರ ಆರೋಗ್ಯ ಸ್ಥಿತಿ ಕುರಿತಾಗಿಯೇ ಪ್ರಮುಖವಾಗಿ ಪ್ರಸ್ತಾಪವಾಯ್ತು ಎಂದು ನ್ಯೂಯಾರ್ಕ್ ಟೈಮ್ಸ್ ವರದಿ ಮಾಡಿದೆ. ಸಭೆ ವೇಳೆ ತಮ್ಮ ಸಹಾಯಕ ಸಿಬ್ಬಂದಿಗೆ ಸೂಚನೆ ನೀಡಿದ ಜೋ ಬೈಡನ್, ತಮಗೆ ಹೆಚ್ಚಿನ ನಿದ್ರೆಯ ಅಗತ್ಯತೆ ಇರುವ ಕಾರಣ ಸಭೆಗಳನ್ನ ಸುದೀರ್ಘವಾಗಿ ಎಳೆಯಬೇಡಿ ಎಂದು ಹೇಳಿದರು ಎನ್ನಲಾಗಿದೆ.


### ಟ್ರಂಪ್‌ಗೆ ಅನುಕೂಲಕರ ವಾತಾವರಣ

ಜೋ ಬೈಡನ್ ಅವರನ್ನ ವೃದ್ಧ ಎಂದು ಬಹಿರಂಗವಾಗಿಯೇ ತೆಗಳುವ ರಿಪಬ್ಲಿಕನ್ ಪಕ್ಷದ ಅಭ್ಯರ್ಥಿ ಡೊನಾಲ್ಡ್ ಟ್ರಂಪ್ ಅವರಿಗೆ ಜೋ ಬೈಡನ್ ಅವರ ಆರೋಗ್ಯ ಸ್ಥಿತಿಗತಿ ಕುರಿತಾದ ಮಾಹಿತಿಗಳು ಲಾಭದಾಯಕವಾಗಿ ಪರಿಣಮಿಸುತ್ತಿದೆ. ಅಧ್ಯಕ್ಷೀಯ ಸಂವಾದದಿಂದ ಹಿಡಿದು ಈವರೆಗಿನ ಎಲ್ಲಾ ಬೆಳವಣಿಗೆಗಳೂ ಟ್ರಂಪ್ ಅವರಿಗೆ ಪೂರಕವಾಗಿದೆ. ಒಂದು ವೇಳೆ ವಯಸ್ಸಿನ ಕಾರಣವೊಡ್ಡಿ ಬೈಡನ್ ಅವರನ್ನ ಅಧ್ಯಕ್ಷೀಯ ಚುನಾವಣಾ ರೇಸ್‌ನಿಂದ ಕೆಳಗಿಳಿಸಿ ಕಮಲಾ ಹ್ಯಾರಿಸ್ ಅವರನ್ನ ಅಭ್ಯರ್ಥಿಯನ್ನಾಗಿ ಮಾಡಿದರೆ ಟ್ರಂಪ್‌ಗೆ ಗೆಲುವು ಕಷ್ಟವಾಗಲಿದೆ.

# ಮಿನಿ ನ್ಯೂಸ್

## ಅಡ್ವಾಣಿಯವರಿಗೆ ಐಸಿಯುನಲ್ಲಿ ಮುಂದುವರಿದ ಚಿಕಿತ್ಸೆ

**ನವದೆಹಲಿ:** ಬಿಜೆಪಿ ಹಿರಿಯ ನಾಯಕ ಮತ್ತು ಮಾಜಿ ಉಪಪ್ರಧಾನಿ ಲಾಲಕೃಷ್ಣ ಅಡ್ವಾಣಿ ಅವರ ಆರೋಗ್ಯ ಸ್ಥಿತಿ ಸ್ಥಿರವಾಗಿದ್ದು, ಪ್ರಸ್ತುತ ಅವರಿಗೆ ತುರ್ತು ಚಿಕಿತ್ಸಾ ಘಟಕದಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ.



96 ವರ್ಷದ ಅಡ್ವಾಣಿ ಅವರಿಗೆ ಕಳೆದ ರಾತ್ರಿ ಆರೋಗ್ಯದಲ್ಲಿ ಏರುಪೇರು ಆಗಿದ್ದರಿಂದ ಅವರನ್ನು ದೆಹಲಿಯ ಏಮ್ಸ್ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಪ್ರಸ್ತುತ ಅಡ್ವಾಣಿಯವರು ಚಿಕಿತ್ಸೆಗೆ ಸ್ಪಂದಿಸುತ್ತಿದ್ದು, ಆರೋಗ್ಯ ಸ್ಥಿತಿ ಸ್ಥಿರವಾಗಿದೆ. ಅವರು ಪ್ರಸ್ತುತ ನರವಿಜ್ಞಾನ ವಿಭಾಗದ ವೈದ್ಯರ ತಂಡದಿಂದ ನಿಗಾದಲ್ಲಿದ್ದಾರೆ ಎಂದು ಏಮ್ಸ್ ಬಿಡುಗಡೆ ಮಾಡಿರುವ ಹೆಲ್ತ್ ಬುಲೆಟಿನ್ನಲ್ಲಿ ತಿಳಿಸಲಾಗಿದೆ.

ನಿನ್ನೆ ರಾತ್ರಿ 9 ಗಂಟೆ ಸುಮಾರಿಗೆ ಅಡ್ವಾಣಿ ಅವರನ್ನು ಆಸ್ಪತ್ರೆಗೆ ಕರೆತರಲಾಗಿದೆ. ಅವರ ಜೊತೆ ಪ್ರತಿಭಾ ಅಡ್ವಾಣಿಯವರು ಆಸ್ಪತ್ರೆಗೆ ಬಂದಿದ್ದರು. ಅಡ್ವಾಣಿ ಅವರನ್ನು ನರರೋಗ ವಿಭಾಗದ ಹಿರಿಯ ಸಲಹೆಗಾರ ಡಾ.ವಿನಿತ್ ಸೂರಿ ನೇತೃತ್ವದಲ್ಲಿ ದಾಖಲಿಸಲಾಗಿದೆ ಎಂದು ಆಸ್ಪತ್ರೆಯ ಮೂಲಗಳು ತಿಳಿಸಿವೆ.

## ಹತ್ರಾಸ್ ದುರ್ಘಟನೆಗೆ ಯೋಗಿ ಸರ್ಕಾರವನ್ನೂ ದೂರಿದ ರಾಹುಲ್



**ಹತ್ರಾಸ್:** ಸುಮಾರು ನೂರಕ್ಕೂ ಹೆಚ್ಚು ಜನರ ಸಾವಿಗೆ ಕಾರಣವಾದ ಹತ್ರಾಸ್ ಕಾಲ್ತುಳಿತ ಘಟನೆಯಲ್ಲಿ ರಾಜ್ಯಾಡಳಿತದ ಕಡೆಯಿಂದ ಲೋಪವಾಗಿದೆ ಎಂದು ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಹೇಳಿದ್ದಾರೆ.

ಇಂದು ಬೆಳಗ್ಗೆ ಹತ್ರಾಸ್‌ನಲ್ಲಿ ಸಂಭವಿಸಿದ ಕಾಲ್ತುಳಿತದಲ್ಲಿ ತಮವರನ್ನು ಕಳೆದುಕೊಂಡ ಸಂತ್ರಸ್ತ ಕುಟುಂಬವನ್ನು ಭೇಟಿ ಮಾಡಿದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಹಲವಾರು ಕುಟುಂಬಗಳು ಸಂಕಷ್ಟಕ್ಕೆ ಸಿಲುಕಿವೆ. ಹಲವಾರು ಜನರು ಪ್ರಾಣ ಕಳೆದುಕೊಂಡಿರುವುದು ದುಃಖದ ಸಂಗತಿಯಾಗಿದೆ ಎಂದರು.

ನಾನು ರಾಜಕೀಯ ದೃಷ್ಟಿಕೋನದಿಂದ ಮಾತನಾಡಲು ಬಯಸುವುದಿಲ್ಲ. ಆದರೆ ಆಡಳಿತದ ಕಡೆಯಿಂದ ಕೆಲವು ಲೋಪಗಳಾಗಿವೆ ಎಂದು ಹೇಳಿದರು. ರಾಜ್ಯ ಕಾಂಗ್ರೆಸ್ ಮುಖ್ಯಸ್ಥ ಅಜಯ್ ರೈ, ಉಸ್ತುವಾರಿ ಅವಿನಾಶ್ ಪಾಂಡೆ, ಪಕ್ಷದ ವಕ್ತಾರ ಸುಪ್ರಿಯಾ ಶ್ರೀನಾಟೆ ಮತ್ತಿತರ ಪದಾಧಿಕಾರಿಗಳು ಜತೆಯಲ್ಲಿದ್ದರು.

## ನೀಟ್-ಪಿಜಿ ಪರೀಕ್ಷೆಯ ದಿನಾಂಕ ಪ್ರಕಟ

**ನವದೆಹಲಿ:** ರಾಷ್ಟ್ರೀಯ ವೈದ್ಯಕೀಯ ವಿಜ್ಞಾನ ಪರೀಕ್ಷಾ ಮಂಡಳಿ (ಎನ್‌ಬಿಇಎಂಎಸ್) ರಾಷ್ಟ್ರೀಯ ಅರ್ಹತೆ ಮತ್ತು ಪ್ರವೇಶ ಪರೀಕ್ಷೆ, ಸ್ನಾತಕೋತ್ತರ(ನೀಟ್-ಪಿಜಿ) ಪರೀಕ್ಷೆಯ ಹೊಸ ದಿನಾಂಕವನ್ನು ಶುಕ್ರವಾರ ಪ್ರಕಟಿಸಿದ್ದು, ಆಗಸ್ಟ್ 11 ರಂದು ಎರಡು ಪಾಳಿಗಳಲ್ಲಿ ಪರೀಕ್ಷೆ ನಡೆಸಲಾಗುವುದು ಎಂದು ತಿಳಿಸಿದೆ.

ಮೇ 5ರಂದು ನಡೆದಿದ್ದ ನೀಟ್-ಯುಜಿ ಪರೀಕ್ಷೆಯಲ್ಲಿ ಪ್ರಶ್ನೆಪತ್ರಿಕೆ ಸೋರಿಕೆ ಮತ್ತು ಅಕ್ರಮ ಬೆಳಕಿಗೆ ಬಂದಿತ್ತು. ಈ ವಿವಾದದ ಬೆನ್ನಲ್ಲೇ ಮುನ್ನೆಚ್ಚರಿಕಾ ಕ್ರಮವಾಗಿ ಜೂನ್ 23ರಂದು ನಡೆಯಬೇಕಿದ್ದ ನೀಟ್-ಪಿಜಿ ಪರೀಕ್ಷೆಯನ್ನು ಕೇಂದ್ರ ಆರೋಗ್ಯ ಸಚಿವಾಲಯ ಮುಂದೂಡಿತ್ತು. ಇದೀಗ ನೀಟ್ ಪಿಜಿಗೆ ಹೊಸ ದಿನಾಂಕ ಘೋಷಿಸಿದ್ದು, ಆಗಸ್ಟ್ 11 ರಂದು ಎರಡು ಪಾಳಿಯಲ್ಲಿ ನಡೆಯಲಿದೆ. ದೇಶಾದ್ಯಂತ ಸುಮಾರು 52,000 ಸ್ನಾತಕೋತ್ತರ ಸೀಟುಗಳಿಗೆ ಪ್ರತಿ ವರ್ಷ ಸುಮಾರು ಎರಡು ಲಕ್ಷ ಎಂಬಿಬಿಎಸ್ ಪದವೀಧರರು ನೀಟ್ ಪಿಜಿ ಪರೀಕ್ಷೆ ಬರೆಯುತ್ತಾರೆ.

## ಒಳನುಸುಳುವಿಕೆ ತಡೆಯಲು 960 ಹೊಸ ಪಡೆ ನಿಯೋಜಿಸಿದ ಪೊಲೀಸರು

**ಶ್ರೀನಗರ:** ಜಮ್ಮು ಪ್ರದೇಶದಲ್ಲಿ ಇತ್ತೀಚೆಗೆ ಉಗ್ರ ದಾಳಿಗಳು ಮತ್ತು ಒಳನುಸುಳುವಿಕೆ ಹೆಚ್ಚುತ್ತಿದ್ದು, ಇದನ್ನು ತಡೆಯಲು ಜಮ್ಮು ಮತ್ತು ಕಾಶ್ಮೀರ ಪೊಲೀಸರು ಕೇಂದ್ರಾಡಳಿತ ಪ್ರದೇಶದ ಗಡಿ ಗ್ರಾಮಗಳಿಂದ 960 ಯುವ ನೇಮಕಾತಿಗಳ ಹೊಸ ಪಡೆಯನ್ನು ರಚಿಸಿದ್ದಾರೆ ಮತ್ತು ಅಂತಹ ಘಟನೆಗಳನ್ನು ಪರಿಶೀಲಿಸಲು ಅವರನ್ನು ಗಡಿಗಳಲ್ಲಿ ನಿಯೋಜಿಸಿದ್ದಾರೆ. ಹೊಸದಾಗಿ ನೇಮಕಗೊಂಡ 960 ಪೊಲೀಸರಲ್ಲಿ 560 ಮಂದಿಯನ್ನು ಜಮ್ಮುವಿನ ಗಡಿ ಪ್ರದೇಶಗಳಲ್ಲಿ ಮತ್ತು ಉಳಿದವರನ್ನು ಕಣಿವೆಯ ಗಡಿ ಪ್ರದೇಶಗಳಲ್ಲಿ ನಿಯೋಜಿಸಲಾಗಿದೆ. ಈ ಯುವಕರು ಇತ್ತೀಚೆಗೆ ಪೊಲೀಸ್ ತರಬೇತಿ ಕೇಂದ್ರಗಳಿಂದ ಉತ್ತೀರ್ಣರಾಗಿದ್ದಾರೆ. ಅವರು ಗಡಿ ಗ್ರಾಮಗಳ ನಿವಾಸಿಗಳಾಗಿದ್ದು, ನಿರ್ದಿಷ್ಟ ಸ್ಥಳಕ್ಕೆ ಅನುಗುಣವಾಗಿ ಅವರ ನೇಮಕಾತಿಯನ್ನು ಮಾಡಲಾಗಿದೆ ಎಂದು ಪೊಲೀಸ್ ಮಹಾನಿರ್ದೇಶಕ(ಡಿಜಿಪಿ) ಆರ್ ಆರ್ ಸ್ವೈನ್ ಅವರು ತಿಳಿಸಿದ್ದಾರೆ.

## ತ್ರಿಶ್ಯೂರ್‌ನಲ್ಲಿ ಆಫ್ರಿಕನ್ ಹಂದಿಜ್ವರ ಪತ್ತೆ

**ತ್ರಿಶ್ಯೂರ್:** ಸೋಂಕಿತ ಹಂದಿಯಿಂದ ನೇರ ಸಂಪರ್ಕದ ಮೂಲಕ ಹಂದಿ ಜ್ವರವು ಒಂದು ಹಂದಿಯಿಂದ ಮತ್ತೊಂದು ಹಂದಿಗೆ ಸುಲಭವಾಗಿ ಹರಡುವ ಕಾರಣ, ತ್ರಿಶೂರ್ ಜಿಲ್ಲೆಯ ಮಡಕ್ಕತಾರಾ ಪಂಚಾಯತ್‌ನ ಖಾಸಗಿ ಜಮೀನಿನಲ್ಲಿ 310 ಹಂದಿಗಳನ್ನು ಕೊಲ್ಲಲು ತ್ರಿಶೂರ್ ಜಿಲ್ಲಾಧಿಕಾರಿ ಆದೇಶಿಸಿದ್ದಾರೆ. ಸೋಂಕಿತ ಹಂದಿಯಿಂದ ನೇರ ಸಂಪರ್ಕದ ಮೂಲಕ ಹಂದಿ ಜ್ವರವು ಒಂದು ಹಂದಿಯಿಂದ ಮತ್ತೊಂದು ಹಂದಿಗೆ ಸುಲಭವಾಗಿ ಹರಡುವ ಕಾರಣ, ತ್ರಿಶೂರ್ ಜಿಲ್ಲೆಯ ಮಡಕ್ಕತಾರಾ ಪಂಚಾಯತ್‌ನ ಖಾಸಗಿ ಜಮೀನಿನಲ್ಲಿ 310 ಹಂದಿಗಳನ್ನು ಕೊಲ್ಲಲು ತ್ರಿಶೂರ್ ಜಿಲ್ಲಾಧಿಕಾರಿ ಆದೇಶಿಸಿದ್ದಾರೆ. 14ನೇ ವಾರ್ಡ್‌ನ ವೆಲಿಯಂತರ ಕುಟ್ಟಲಪುಳಬಾಬು ಎಂಬುವವರ ಮಾಲೀಕತ್ವದ ಹಂದಿಗಳಲ್ಲಿ ರೋಗ ದೃಢಪಟ್ಟಿದ್ದು, ಹಂದಿಗಳನ್ನು ಕೊಂದು ಹೂಳಲು ಜಿಲ್ಲಾಧಿಕಾರಿಗಳು ಜಿಲ್ಲಾ ಪಶುಸಂಗೋಪನಾ ಅಧಿಕಾರಿಗೆ ಸೂಚಿಸಿದ್ದಾರೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

ವೈದ್ಯರು, ಜಾನುವಾರು ನಿರೀಕ್ಷಕರು ಮತ್ತು ಪರಿಚಾರಕರನ್ನು ಒಳಗೊಂಡ ತಂಡವು ಕೊಲ್ಲುವ ಪ್ರಕ್ರಿಯೆಗೆ ಮುಂದಾಗಿದೆ. ಮುಂದಿನ ಪ್ರಾಥಮಿಕ ಮುನ್ನೆಚ್ಚರಿಕೆ ಕ್ರಮಗಳನ್ನು ತೆಗೆದುಕೊಳ್ಳಲಾಗುವುದು ಎಂದು ಅದು ಹೇಳಿದೆ. ಹಾನಿಗೊಳಗಾದ ಜಮೀನಿನ ಒಂದು ಕಿಲೋಮೀಟರ್ ವ್ಯಾಪ್ತಿಯ ಪ್ರದೇಶವನ್ನು ರೋಗ ಪೀಡಿತ ಪ್ರದೇಶವೆಂದು ಘೋಷಿಸಲಾಗಿದೆ.

# ಭಾರತ- ಜಿಂಬಾಬ್ವೆ ಟಿ20 ಸರಣಿ ಆರಂಭ

● ಮೊದಲೆರಡು ಪಂದ್ಯಗಳಿಗೆ ಟೀಂ ಇಂಡಿಯಾದಲ್ಲಿ 3 ಬದಲಾವಣೆ ● 5 ಆಟಗಾರರು ಪ್ರವಾಸಕ್ಕೆ ತಂಡ ಸೇರಲು ಸಾಧ್ಯವಾಗಿಲ್ಲ

2024 ರ ಟಿ20 ವಿಶ್ವಕಪ್ ಗೆದ್ದ ನಂತರ, ಟೀಂ ಇಂಡಿಯಾ ಕೆಟ್ಟ ಹವಾಮಾನದಿಂದಾಗಿ ಬಾರ್ಬಡೋಸ್‌ನಲ್ಲಿ ಸಿಲುಕಿಕೊಂಡಿತ್ತು. ಇದರಿಂದಾಗಿ ಒಟ್ಟು 5 ಆಟಗಾರರು ಜಿಂಬಾಬ್ವೆ ಪ್ರವಾಸಕ್ಕೆ ತಂಡ ಸೇರಲು ಸಾಧ್ಯವಾಗಿಲ್ಲ. ಅವರ ಸ್ಥಾನಕ್ಕೆ ಬಿಸಿಸಿಐ ಸಾಯಿ ಸುದರ್ಶನ್, ಜಿತೇಶ್ ಶರ್ಮಾ ಮತ್ತು ಹರ್ಷಿತ್ ರಾಣಾ ಅವರನ್ನು ಮೊದಲ ಎರಡು ಟಿ20 ಅಂತಾರಾಷ್ಟ್ರೀಯ ಪಂದ್ಯಗಳಿಗೆ ತಂಡಕ್ಕೆ ಸೇರಿಸಿಕೊಂಡಿದೆ.

2024 ರ ಟಿ20 ವಿಶ್ವಕಪ್ ಗೆದ್ದಿರುವ ಟೀಂ ಇಂಡಿಯಾ ಇದೀಗ ಜಿಂಬಾಬ್ವೆಯನ್ನು ಎದುರಿಸಲು ಸಜ್ಜಾಗಿದೆ. ಜಿಂಬಾಬ್ವೆ ವಿರುದ್ಧ ಭಾರತ 5 ಟಿ20 ಪಂದ್ಯಗಳ ಸರಣಿಯನ್ನು ಆಡಬೇಕಿದೆ. ಈ ಸರಣಿಯಲ್ಲಿ ಶುಭ್‌ಮನ್ ಗಿಲ್ ಟೀಂ ಇಂಡಿಯಾವನ್ನು ಮುನ್ನಡೆಸಲಿದ್ದಾರೆ. ಈ ಸರಣಿಯಲ್ಲಿ ಟೀಂ ಇಂಡಿಯಾ ತನ್ನ ಹಿರಿಯ ಆಟಗಾರರಿಗೆ ವಿಶ್ರಾಂತಿ ನೀಡಿದ್ದು, ಯುವ ಆಟಗಾರರಿಗೆ ಆದ್ಯತೆ ನೀಡಿದೆ. ಅಲ್ಲದೆ ಇದೇ ಮೊದಲ ಬಾರಿಗೆ ಕೆಲವು ಯುವ ಆಟಗಾರರು ಟೀಂ ಇಂಡಿಯಾ ಪರ ಕಣಕ್ಕಿಳಿಯಲ್ಲಿದ್ದಾರೆ. ಹೀಗಾಗಿ ಈ ಸರಣಿ ಯುವ ಪಡೆಗೆ ಅತ್ಯವಶ್ಯಕವಾಗಿದೆ.

ಏಕೆಂದರೆ ಭಾರತ ಟಿ20 ತಂಡದಲ್ಲಿ ಹಿರಿಯರ ನಿರ್ಗಮನದೊಂದಿಗೆ ಹಲವು ಸ್ಥಾನಗಳು ಖಾಲಿಯಾಗಿವೆ. ಹೀಗಾಗಿ ಯುವ ಆಟಗಾರರು ಈ ಸರಣಿಯಲ್ಲಿ ಮಿಂಚಿದರೆ, ಅವರಿಗೆ ತಂಡದಲ್ಲಿ ಖಾಯಂ ಸ್ಥಾನ ಸಿಗುವ ಸಾಧ್ಯತೆಗಳಿವೆ.



## ಗಿಲ್ ತಂಡದ ನಾಯಕ

### ಮೊದಲೆರಡು ಪಂದ್ಯಗಳಿಗೆ ಟೀಂ ಇಂಡಿಯಾದಲ್ಲಿ ಬದಲಾವಣೆ

**2024 ರ ಟಿ20 ವಿಶ್ವಕಪ್ ಗೆದ್ದ ನಂತರ, ಟೀಂ ಇಂಡಿಯಾ ಕೆಟ್ಟ ಹವಾಮಾನದಿಂದಾಗಿ ಬಾರ್ಬಡೋಸ್‌ನಲ್ಲಿ ಸಿಲುಕಿಕೊಂಡಿತ್ತು. ಇದರಿಂದಾಗಿ ಒಟ್ಟು 5 ಆಟಗಾರರು ಜಿಂಬಾಬ್ವೆ ಪ್ರವಾಸಕ್ಕೆ ತಂಡ ಸೇರಲು ಸಾಧ್ಯವಾಗಿಲ್ಲ. ಅವರ ಸ್ಥಾನಕ್ಕೆ ಬಿಸಿಸಿಐ ಸಾಯಿ ಸುದರ್ಶನ್, ಜಿತೇಶ್ ಶರ್ಮಾ ಮತ್ತು ಹರ್ಷಿತ್ ರಾಣಾ ಅವರನ್ನು ಮೊದಲ ಎರಡು ಟಿ20 ಅಂತಾರಾಷ್ಟ್ರೀಯ ಪಂದ್ಯಗಳಿಗೆ ತಂಡಕ್ಕೆ ಸೇರಿಸಿಕೊಂಡಿದೆ. ಸಂಜು ಸ್ಯಾಮ್ಸನ್, ಶಿವಂ ದುಬೆ ಮತ್ತು ಯಶಸ್ವಿ ಜೈಸ್ವಾಲ್ ಬದಲಿಗೆ ಈ ಆಟಗಾರರಿಗೆ ಅವಕಾಶ ಸಿಕ್ಕಿದೆ. ರಾಹುಲ್ ದ್ರಾವಿಡ್ ಅವರ ಅಧಿಕಾರಾವಧಿ ಮುಗಿದಿರುವುದರಿಂದ ಈ ಸರಣಿಯಲ್ಲಿ ವಿವಿಎಸ್ ಲಕ್ಷ್ಮಣ್ ಟೀಂ ಇಂಡಿಯಾ ಕೋಚ್ ಆಗಲಿದ್ದಾರೆ. ಇದರ ಹೊರತಾಗಿ ಬಿಸಿಸಿಐ ಇನ್ನೂ ತಂಡದ ನೂತನ ಕೋಚ್ ಅನ್ನು ಪ್ರಕಟಿಸಿಲ್ಲ.**

**ಜುಲೈ 6 ರಂದು ಮೊದಲ ಪಂದ್ಯ:** ಭಾರತ ಮತ್ತು ಜಿಂಬಾಬ್ವೆ ನಡುವಿನ ಐದು ಪಂದ್ಯಗಳ ಟಿ20 ಸರಣಿಯ ಮೊದಲ ಪಂದ್ಯ ಜುಲೈ 6 ರಂದು ನಡೆಯಲಿದೆ. ಮುಂದಿನ ಪಂದ್ಯ ಭಾನುವಾರ ನಡೆಯಲಿದೆ. ಎಲ್ಲಾ ಪಂದ್ಯಗಳು ಭಾರತದಲ್ಲಿ ಸಂಜೆ 4:30 ಕ್ಕೆ ಪ್ರಾರಂಭವಾಗುತ್ತವೆ.


4 ಗಂಟೆಗೆ ಟಾಸ್ ನಡೆಯಲಿದೆ. ಈ ಪಂದ್ಯವು 8 ರಿಂದ 8:30 ರ ನಡುವೆ ಕೊನೆಗೊಳ್ಳುತ್ತದೆ.

**ಮೊದಲೆರಡು ಪಂದ್ಯಗಳಿಗೆ ಭಾರತ ತಂಡ:** ಶುಭ್‌ಮನ್ ಗಿಲ್ (ನಾಯಕ), ರುತುರಾಜ್ ಗಾಯಕ್ವಾಡ್, ಅಭಿಷೇಕ್ ಶರ್ಮಾ, ರಿಂಕು ಸಿಂಗ್, ಧ್ರುವ್ ಜುರೆಲ್ (ವಿಕೆಟ್ ಕೀಪರ್), ರಿಯಾನ್ ಪರಾಗ್, ವಾಷಿಂಗ್ಟನ್ ಸುಂದರ್, ರವಿ ಬಿಷ್ಣೋಯ್, ಅವೇಶ್ ಖಾನ್, ಖಲೀಲ್ ಅಹ್ಮದ್, ಮುಖೇಶ್ ಕುಮಾರ್, ತುಷಾರ್ ದೇಶಪಾಂಡೆ, ಸಾಯಿ ಸುದರ್ಶನ್, ಜಿತೇಶ್ ಶರ್ಮಾ (ವಿಕೆಟ್ ಕೀಪರ್), ಹರ್ಷಿತ್ ರಾಣಾ.

**ಇನ್ನುಳಿದ ಪಂದ್ಯಗಳಿಗೆ ಟೀಂ ಇಂಡಿಯಾ ತಂಡ:** ಶುಭ್‌ಮನ್ ಗಿಲ್ (ನಾಯಕ), ಯಶಸ್ವಿ ಜೈಸ್ವಾಲ್, ರಿಂಕು ಸಿಂಗ್, ರುತುರಾಜ್ ಗಾಯಕ್ವಾಡ್, ಅಭಿಷೇಕ್ ಶರ್ಮಾ, ಸಂಜು ಸ್ಯಾಮ್ಸನ್ (ವಿಕೆಟ್ ಕೀಪರ್), ಧ್ರುವ್ ಜುರೆಲ್ (ವಿಕೆಟ್ ಕೀಪರ್), ಶಿವಂ ದುಬೆ, ರಿಯಾನ್ ಪರಾಗ್, ವಾಷಿಂಗ್ಟನ್ ಸುಂದರ್, ಅವೇಶ್ ಖಾನ್, ಖಲೀಲ್ ಅಹ್ಮದ್, ಮುಖೇಶ್ ಕುಮಾರ್ ರವಿ ಬಿಷ್ಣೋಯ್, ತುಷಾರ್ ದೇಶಪಾಂಡೆ.

# ವಿಜಯೋತ್ಸವ ಆಚರಿಸಿ ರಾತ್ರೋರಾತ್ರಿ ಲಂಡನ್‌ಗೆ ಹಾರಿದ ವಿರಾಟ್ ಕೊಹ್ಲಿ

ವಾಂಖೆಡೆ ಸ್ಟೇಡಿಯಂನಲ್ಲಿ ಟೀಂ ಇಂಡಿಯಾ ವಿಜಯೋತ್ಸವದ ಮೆರವಣಿಗೆ ನಡೆಸಿತು. ಇದರಲ್ಲಿ ವಿರಾಟ್ ಕೊಹ್ಲಿ ವಂದೇ ಮಾತರಂ ಹಾಡುತ್ತಾ ಅಭಿಮಾನಿಗಳು ಹುಚ್ಚೆದ್ದು ಕುಣಿಯುವಂತೆ ಮಾಡಿದರು. ಆದರೆ ಈ ವಿಜಯೋತ್ಸವ ಮುಗಿದ ಕೂಡಲೇ ವಿರಾಟ್ ಕೊಹ್ಲಿ ರಾತ್ರೋರಾತ್ರಿ ಲಂಡನ್‌ಗೆ ಪ್ರಯಾಣ ಬೆಳೆಸಿದ್ದಾರೆ. ಜುಲೈ 4 ರಂದು ಮುಂಬೈನಲ್ಲಿ ಟೀಂ ಇಂಡಿಯಾ ಟಿ20 ವಿಶ್ವಕಪ್ 2024 ರ ವಿಜಯವನ್ನು ಸಂಭ್ರಮದಿಂದ ಆಚರಿಸಿತು. ಮುಂಬೈನ ಬೀದಿಗಳಲ್ಲಿ ಅಭಿಮಾನಿಗಳು ಟೀಂ ಇಂಡಿಯಾದ ವಿಜಯೋತ್ಸವದಲ್ಲಿ ಭಾಗಿಯಾಗಿದ್ದರು. ವಾಂಖೆಡೆ ಸ್ಟೇಡಿಯಂ ತನಕ ಟೀಂ ಇಂಡಿಯಾ ಮೆಗಾ ರೋಡ್ ಶೋ ನಡೆಸಿತು. ಟೀಂ ಇಂಡಿಯಾದ ಎಲ್ಲಾ ಆಟಗಾರರು ಬಸ್‌ನ ಮೇಲ್ಭಾವಣಿಯಲ್ಲಿ ಹಾಜರಿದ್ದು ಅಭಿಮಾನಿಗಳ ಬೆಂಬಲಕ್ಕೆ ಸಂತಸ ವ್ಯಕ್ತಪಡಿಸಿದರು.



**ಕೊಹ್ಲಿ ಲಂಡನ್‌ಗೆ ತೆರಳಿದ್ದು ಯಾಕೆ:** ಮುಂಬೈನಲ್ಲಿ ವಿಜಯೋತ್ಸವ ಪರೇಡ್ ಮುಗಿಸಿದ ಬಳಿಕ ವಿಮಾನ ನಿಲ್ದಾಣದಲ್ಲಿ ಕಾಣಿಸಿಕೊಂಡ ಕಿಂಗ್ ಕೊಹ್ಲಿ ಲಂಡನ್‌ಗೆ ತೆರಳಿದರು. ವಾಸ್ತವವಾಗಿ ಅನುಷ್ಕಾ ಶರ್ಮಾ, ವಾಮಿಕ್ ಮತ್ತು ಅಕಾಯ್ ಲಂಡನ್ ನಲ್ಲಿದ್ದಾರೆ, ಆದ್ದರಿಂದ ವಿರಾಟ್ ಕೊಹ್ಲಿ ತಮ್ಮ ಕುಟುಂಬವನ್ನು ಭೇಟಿ ಮಾಡಲು ಲಂಡನ್‌ಗೆ ತೆರಳಿದ್ದಾರೆ. ಇದಕ್ಕೂ ಮುನ್ನ ವಿರಾಟ್ ದೆಹಲಿಯಲ್ಲಿ ತನ್ನ ಸಹೋದರ ಮತ್ತು ಸಹೋದರಿಯನ್ನು ಭೇಟಿ ಮಾಡಿದರು.

## ಫೈನಲ್‌ನಲ್ಲಿ ಮಿಂಚಿದ ಕೊಹ್ಲಿ

ಈ ವೇಳೆ ವಿರಾಟ್ ಕೊಹ್ಲಿ ಕೂಡ ತಂಡದೊಂದಿಗೆ ಹಾಜರಿದ್ದು ಅಭಿಮಾನಿಗಳಲ್ಲಿ ಉತ್ಸಾಹ ತುಂಬಿದರು. ಆ ಬಳಿಕ ವಾಂಖೆಡೆ ಸ್ಟೇಡಿಯಂನಲ್ಲಿ ಟೀಂ ಇಂಡಿಯಾ ವಿಜಯೋತ್ಸವದ ಮೆರವಣಿಗೆ ನಡೆಸಿತು. ಇದರಲ್ಲಿ ವಿರಾಟ್ ಕೊಹ್ಲಿ ವಂದೇ ಮಾತರಂ ಹಾಡುತ್ತಾ ಅಭಿಮಾನಿಗಳು ಹುಚ್ಚೆದ್ದು ಕುಣಿಯುವಂತೆ ಮಾಡಿದರು. ಆದರೆ ಈ ವಿಜಯೋತ್ಸವ ಮುಗಿದ ಕೂಡಲೇ ವಿರಾಟ್ ಕೊಹ್ಲಿ ರಾತ್ರೋರಾತ್ರಿ ಲಂಡನ್‌ಗೆ ಪ್ರಯಾಣ ಬೆಳೆಸಿದ್ದಾರೆ.

**ಒಟ್ಟಿಗೆ ಡಾನ್ಸ್:** ಲಂಡನ್‌ಗೆ ತೆರಳುವ ಮುನ್ನ ವಿರಾಟ್ ಕೊಹ್ಲಿ ಮರೈನ್ ಡ್ರೈವ್‌ನಲ್ಲಿ ನಡೆದ ವಿಜಯೋತ್ಸವದ ಮೆರವಣಿಗೆಯಲ್ಲಿ ಅವರು ಲಕ್ಷಾಂತರ ಅಭಿಮಾನಿಗಳ ನಡುವೆ ವಂದ್ ಮಾತರಂ ಘೋಷಣೆಗಳನ್ನು ಕೂಗಿದರು. ವಿರಾಟ್ ಮತ್ತು ರೋಹಿತ್ ಒಟ್ಟಿಗೆ ಟ್ರೋಫಿ ಎತ್ತಿ ಅಭಿಮಾನಿಗಳತ್ತ ನೋಡಿ ಜೋರಾಗಿ ಕೂಗಿದರು. ಇದಾದ ಬಳಿಕ ವಿಶ್ವಚಾಂಪಿಯನ್ ತಂಡ ಮುಂಬೈನ ವಾಂಖೆಡೆ ಸ್ಟೇಡಿಯಂ ತಲುಪಿದಾಗ ಸಾವಿರಾರು ಅಭಿಮಾನಿಗಳು ಇಬ್ಬರಿಗೂ ಜೈಕಾರ ಹಾಕಿದರು. ಈ ವೇಳೆ ಇಬ್ಬರೂ ಆಟಗಾರರು ಒಟ್ಟಿಗೆ ಡ್ಯಾನ್ಸ್ ಮಾಡಿದ್ದು ಕಂಡುಬಂತು.

# ವಿಜಯೋತ್ಸವ ಸಂಪನ್ನ: ಭಾರತ ತಂಡಕ್ಕೆ ಸಿಕ್ತು 125 ಕೋಟಿ ರೂ. ಗಿಫ್ಟ್

## ಟಿ20 ವಿಶ್ವಕಪ್ ಗೆಲ್ಲುವುದು ಹೇಗೆ ಎಂದು ಜಗತ್ತಿಗೆ ತೋರಿಸಿದ್ದೇವೆ, ನಾನು ಅಭಿಮಾನಿಗಳಿಗೆ ಧನ್ಯವಾದ ಹೇಳಲು ಬಯಸುತ್ತೇನೆ

ಐಸಿಸಿ ಟಿ20 ವಿಶ್ವಕಪ್ ಗೆದ್ದ ಭಾರತೀಯ ಕ್ರಿಕೆಟ್ ತಂಡದ ಅಭಿನಂದನಾ ಸಮಾರಂಭ ಅದ್ದೂರಿಯಾಗಿ ನಡೆದಿದೆ. ನಾರಿಮನ್ ಪಾಯಿಂಟ್‌ನಿಂದ ವಾಂಖೆಡೆ ಕ್ರೀಡಾಂಗಣದವರೆಗೆ ನಡೆದ ಓಪನ್ ಬಸ್ ಪರೇಡ್‌ನಲ್ಲಿ ಭಾರತದ ಆಟಗಾರರ ಜೊತೆ ಸಾವಿರಾರು ಅಭಿಮಾನಿಗಳು ಬೀದಿ ಬೀದಿಯಲ್ಲಿ ನೆರೆದಿದ್ದರು. ವಾಂಖೆಡೆ ಸ್ಟೇಡಿಯಂನಲ್ಲಿ ಭಾರತ ತಂಡಕ್ಕೆ ಬಿಸಿಸಿಐ 125 ಕೋಟಿ ಬಹುಮಾನ ಕೂಡ ನೀಡಿದೆ.




ಐಸಿಸಿ ಟಿ20 ವಿಶ್ವಕಪ್ 2024 ಗೆದ್ದ ಭಾರತ ಕ್ರಿಕೆಟ್ ತಂಡ ಗುರುವಾರ ವಿಶೇಷ ವಿಮಾನದ ಮೂಲಕ ತವರಿಗೆ ಮರಳಿತು. ಸತತ ತುಂತುರು ಮಳೆ ಮತ್ತು ಬಿಗಿ ಭದ್ರತಾ ವ್ಯವಸ್ಥೆಗಳ ನಡುವೆ ವಿಮಾನ ನಿಲ್ದಾಣದಲ್ಲಿ ಆಟಗಾರರನ್ನು ಅಭಿಮಾನಿಗಳು ಅದ್ದೂರಿಯಾಗಿ ಸ್ವಾಗತಿಸಿದರು. ಬಳಿಕ ಕೆಲ ಗಂಟೆಗಳ ವಿಶ್ರಾಂತಿ ತೆಗೆದುಕೊಂಡು ಪ್ರಧಾನಿ ನಿವಾಸದಲ್ಲಿ ನರೇಂದ್ರ ಮೋದಿ ಅವರನ್ನು ಭೇಟಿ ಮಾಡಿದರು. ನಂತರ ಮುಂಬೈ ತಲುಪಿದ್ದು, ತೆರೆದ ಬಸ್‌ನಲ್ಲಿ ವಿಜಯೋತ್ಸವ ಮೆರವಣಿಗೆ ನಡೆದಿದೆ. ನಾರಿಮನ್ ಪಾಯಿಂಟ್‌ನಿಂದ ವಾಂಖೆಡೆ ಕ್ರೀಡಾಂಗಣದವರೆಗೆ ನಡೆದ ಈ ಪರೇಡ್‌ನಲ್ಲಿ ಭಾರತದ ಆಟಗಾರರ ಜೊತೆ ಸಾವಿರಾರು ಅಭಿಮಾನಿಗಳು ಬೀದಿ ಬೀದಿಯಲ್ಲಿ ನೆರೆದಿದ್ದರು.

ಮರೈನ್ ಡ್ರೈವ್‌ನಲ್ಲಿ ತುಂಬಿ ತುಳುಕುತ್ತಿದ್ದ ಅಭಿಮಾನಿಗಳ ನಡುವೆ ಭಾರತ ಕ್ರಿಕೆಟ್ ತಂಡದ ವಿಜಯೋತ್ಸವ ಪರೇಡ್ ಅದ್ದೂರಿಯಾಗಿ ನಡೆಯಿತು. ವಿಕ್ಟರಿ ಪರೇಡ್ ವೀಕ್ಷಿಸಲು ಮರೈನ್ ಡ್ರೈವ್‌ನಲ್ಲಿ ಅಭಿಮಾನಿಗಳ ದಂಡೇ ಸೇರಿದ್ದರಿಂದ ಇಡೀ ರಸ್ತೆ ಜಾಮ್ ಆಗಿತ್ತು. ಸತತ ಮಳೆಯ ನಡುವೆಯೂ ಅಭಿಮಾನಿಗಳು ತಮ್ಮ ನಾಯಕನನ್ನು ಕಣ್ತುಂಬಿಕೊಂಡರು. ಅಭಿಮಾನಿಗಳ ಎದುರು ವಿರಾಟ್ ಕೊಹ್ಲಿ ಭಾರತದ ಧ್ವಜ ಹಾರಿಸಿ, ರೋಹಿತ್ ಶರ್ಮಾ ಅವರನ್ನು ಕರೆದು ಜೊತೆಯಾಗಿ ಟ್ರೋಫಿ ಎತ್ತಿ ತೋರಿಸಿದರು.

ವಾಂಖೆಡೆ ತಲುಪಿದಾದ ಹೌಸ್‌ಫುಲ್ ಆಗಿದ್ದ ಸ್ಟೇಡಿಯಂನಲ್ಲಿ ರೋಹಿತ್, ಕೊಹ್ಲಿ, ಹಾರ್ದಿಕ್ ಕೂಗು ಜೋರಾಗಿತ್ತು. ಇಡೀ ಸ್ಟೇಡಿಯಂ ರಾಷ್ಟ್ರಗೀತೆಗೆ ಗೌರವ ಸಲ್ಲಿಸಿತು. ಬಳಿಕ ಆಯೋಜಿಸಿದ್ದ ಸನ್ಮಾನ ಸಮಾರಂಭದಲ್ಲಿ ಮಾತನಾಡಿದ ನಾಯಕ ರೋಹಿತ್ ಶರ್ಮಾ, ''ಈ ಟ್ರೋಫಿ ನಮ್ಮ ದೇಶಕ್ಕಾಗಿ. ಕಳೆದ 11 ವರ್ಷಗಳಿಂದ ಅಭಿಮಾನಿಗಳು ಭಾರತಕ್ಕೆ ಟ್ರೋಫಿಯನ್ನು ಮರಳಿ ತರಲು ಬಯಸಿದ್ದರು. ನನ್ನ ತಂಡ ಮತ್ತು ಬಿಸಿಸಿಐ ಪರವಾಗಿ, ನಾನು ಅಭಿಮಾನಿಗಳಿಗೆ ಧನ್ಯವಾದ ಹೇಳಲು ಬಯಸುತ್ತೇನೆ. ಪ್ರತಿಯೊಂದು ವಿಶ್ವಕಪ್ ಗೆಲುವು ವಿಶೇಷವಾಗಿರುತ್ತದೆ. ಟಿ20 ವಿಶ್ವಕಪ್ ಗೆಲ್ಲುವುದು ಹೇಗೆ ಎಂದು ಜಗತ್ತಿಗೆ ತೋರಿಸಿದ್ದೇವೆ,'' ಎಂದು ಹೇಳಿದರು. ಇದೇವೇಳೆ ಸೂರ್ಯಕುಮಾರ್ ಯಾದವ್ ಹಿಡಿದ ಕ್ಯಾಚ್ ಅನ್ನು ಪ್ರಶಂಸಿಸಿದರು.

ನಂತರ ಮಾತನಾಡಿದ ಕೊಹ್ಲಿ, ''ಫೈನಲ್ ಪಂದ್ಯದ ಕೊನೆಯ ಐದು ಓವರ್‌ಗಳಲ್ಲಿ ನಡೆದದ್ದು ವಿಶೇಷ. ನಮ್ಮನ್ನು ಮತ್ತೆ ಪಂದ್ಯಕ್ಕೆ ಕಮ್‌ಬ್ಯಾಕ್ ಮಾಡಿದ ವ್ಯಕ್ತಿಯನ್ನು ಎಲ್ಲಾರೂ ಶ್ಲಾಘಿಸಬೇಕೆಂದು ನಾನು ಬಯಸುತ್ತೇನೆ. ದಯವಿಟ್ಟು ಜಸ್ಪ್ರೀತ್ ಬುಮ್ರಾಗೆ ಚಪ್ಪಾಳೆ ಬರಲಿ. ಕೊನೆಯ ಐದು ಓವರ್‌ಗಳಲ್ಲಿ ಅವರು ಮಾಡಿದ್ದು ಅದ್ಭುತವಾಗಿದೆ.

ಬುಮ್ರಾ ಒಂದು ಪೀಳಿಗೆಯ ಆಟಗಾರ. ನಾವು 2011 ರಲ್ಲಿ ವಿಶ್ವಕಪ್ ಗೆದ್ದಾಗ ಕಣ್ಣೀರು ಇತ್ತು. ಆಗ ನಾನು ಚಿಕ್ಕವನಾಗಿದ್ದೆ. ಆದರೆ, ಈಗ ಹಿರಿಯ ಆಟಗಾರನಾಗಿ ರೋಹಿತ್ ಜೊತೆಗೆ, ಇಷ್ಟು ದಿನ ಆಡಿದ್ದು ವಿಶೇಷವಾಗಿತ್ತು. ಮೈದಾನದಲ್ಲಿ ರೋಹಿತ್ ಅಷ್ಟೊಂದು ಭಾವುಕತೆಯನ್ನು ತೋರಿಸಿದ್ದು ಇದೇ ಮೊದಲು. ಆ ಘಳಿಗೆಯಲ್ಲಿ ನಾನು ಅಳುತ್ತಿದ್ದೆ, ರೋಹಿತ್ ಕೂಡ ಅಳುತ್ತಿದ್ದ. ಅದೊಂದು ವಿಶೇಷ ಕ್ಷಣ,'' ಎಂದು ನೆನಪಿಸಿಕೊಂಡರು.

# ರಾಜ್ ಬಿ ಶೆಟ್ಟಿ ಜೊತೆ ಕೈಜೋಡಿಸಿದ ಚೈತ್ರಾ

## ರೂಪಾಂತರ ಆಚಾರ್ ಆಟ

ಚಿಟಿ ಚಿಟಿ ಜಿನುಗುವ ಮಳೆಯಲ್ಲಿ ಹಾಡೊಂದನ್ನು ಕೇಳುವುದು ಯಾರಿಗೆ ತಾನೆ ಇಷ್ಟವಿಲ್ಲ. ಇದನ್ನು ಚೆನ್ನಾಗಿ ಅರಿತಂತಿದೆ 'ರೂಪಾಂತರ' ಚಿತ್ರತಂಡ. ಹೌದು 'ಒಂದು ಮೊಟ್ಟೆಯ ಕಥೆ'ಯ ಮೂಲಕ ಚಿತ್ರರಂಗಕ್ಕೆ ಬಂದು ಜನರ ಮೆಚ್ಚುಗೆ ಗಳಿಸಿದ ಅದೇ ಚಿತ್ರತಂಡ 'ರೂಪಾಂತರ' ಎನ್ನುವ ಸಿನಿಮಾ ಮಾಡಿ ಬಿಡುಗಡೆಗೆ ಸಿದ್ಧವಾಗಿದ್ದು, ಅದರ 'ಕಿತ್ತಾಳೆ' ಎನ್ನುವ ಹಾಡನ್ನು ಬಿಡುಗಡೆಗೊಳಿಸುವ ಮೂಲಕ ಸಿನಿರಸಿಕರ, ಸಂಗೀತ ಆಸ್ವಾದಕರ ಮನವನ್ನು ತಣಿಸಿದೆ.

'ಒಂದು ಮೊಟ್ಟೆಯ ಕಥೆ'ಯ ಮೂಲಕ ಚಿತ್ರರಂಗಕ್ಕೆ ಕಾಲಿಟ್ಟ ರಾಜ್ ಬಿ ಶೆಟ್ಟಿ ಮತ್ತು ಮಿಥುನ್ ಮುಕುಂದನ್ ಯಶಸ್ವಿ ಜೋಡಿಯಾಗಿ ಅನೇಕ ಹಿಟ್ ಹಾಡುಗಳನ್ನು ಕೊಡುತ್ತಾ ಬಂದಿದ್ದು, ಈಗ 'ರೂಪಾಂತರ' ಚಿತ್ರದ ಕಿತ್ತಾಳೆ ಹಾಡನ್ನು ಬಿಡುಗಡೆಗೊಳಿಸುವ ಮೂಲಕ ಮತ್ತೊಮ್ಮೆ ಎಲ್ಲಾರ ಗಮನವನ್ನು ಸೆಳೆದಿದ್ದಾರೆ. ಈ ಹಿಂದೆ ಅನೇಕ ಚಿತ್ರಗಳಿಗೆ ರಾಜ್ ಸಾಹಿತ್ಯ ಬರೆದು ಮಿಥುನ್ ಸಂಗೀತ ನೀಡಿದ್ದರು. ಈ ಹಾಡು ಇಬ್ಬರಿಗೂ ಚಿತ್ರರಂಗದಲ್ಲಿ ಹೊಸ ಗುರುತನ್ನು ನೀಡಲಿದೆ. ಮಿಥುನ್ ಅವರ ಸಂಗೀತಕ್ಕೆ ರಾಜ್ ಅವರ ರಸಭರಿತ ಸಾಹಿತ್ಯ ಸಿಹಿಯಾದ ಕಿತ್ತಾಳೆ ಹಣ್ಣನ್ನು ಸವಿದಂತ ಅನುಭವವನ್ನು ನೀಡುತ್ತಿದೆ ಎಂದು ಅನೇಕ ಅಭಿಮಾನಿಗಳು ಕಾಮೆಂಟ್ ಮಾಡಿದ್ದಾರೆ. ಗರುಡ ಗಮನ ವೃಷಭ ವಾಹನ, ಮಾದೇವ ಖ್ಯಾತಿಯ ಗಾಯಕಿ ಚೈತ್ರ ಜೆ ಆಚಾರ್ ಅವರು ಈ ಹಾಡಿಗೆ ಧ್ವನಿ ನೀಡಿದ್ದು ಇನ್ನೊಂದು ಹೈಲೈಟ್.

ಮೊನ್ನೆಯಷ್ಟೆ ಫಸ್ಟ್ ಲುಕ್ ಪೋಸ್ಟರ್‌ನ ಮೂಲಕ ಗಮನ ಸೆಳೆದ ಮಿಥಿಲೇಶ್ ಎಡವಲತ್ ಅವರ ಚೊಚ್ಚಲ ಚಿತ್ರ ಇದಾಗಿದ್ದು, ಕನ್ನಡ ಚಿತ್ರರಂಗದಲ್ಲೊಂದು ಹೊಸ ಅಲೆಯನ್ನು ಸೃಷ್ಟಿ ಮಾಡುವ ಎಲ್ಲಾ ಲಕ್ಷಣ ಕಾಣಿಸುತ್ತಿದೆ. ರಾಜ್ ಬಿ ಶೆಟ್ಟಿಯವರು ಈ ಚಿತ್ರದಲ್ಲಿ ಪ್ರಮುಖ ಪಾತ್ರವೊಂದರಲ್ಲಿ ನಟಿಸಿದ್ದಾರೆ.

ಅಲ್ಲದೆ, ಸಂಭಾಷಣೆಯನ್ನು ಬರೆದಿದ್ದಾರೆ. ಜೊತೆಗೆ ತಮ್ಮ ನಿರ್ಮಾಣ ಸಂಸ್ಥೆಯಾದ ಲೈಟರ್ ಬುದ್ಧ ಫಿಲ್ಮ್ ಮೂಲಕ ತೆರೆಗೂ ತರುತ್ತಿದ್ದಾರೆ. 'ಒಂದು ಮೊಟ್ಟೆಯ ಕಥೆ'ಯ ನಿರ್ಮಾಪಕರಾದ ಸುಹಾನ್ ಪ್ರಸಾದ್ ಈ ಚಿತ್ರದ ನಿರ್ಮಾಣವನ್ನು ಮಾಡಿದ್ದಾರೆ. ಪ್ರವೀಣ್ ಶ್ರೀಯಾನ್ ಛಾಯಾಗ್ರಹಣ, ಮಿಥುನ್ ಮುಕುಂದನ್ ಸಂಗೀತವನ್ನೂ ನೀಡುವ ಮೂಲಕ ಈ ಜೋಡಿ ಮತ್ತೊಮ್ಮೆ ಪ್ರೇಕ್ಷಕರನ್ನು ರಂಜಿಸಲು ಹೊರಟಿದೆ.

ಉಳಿದಂತೆ ಸೋಮಶೇಖರ್ ಬೋಲೇಗಾಂವ್, ಲೇಖಾ ನಾಯ್ಡು, ಹನುಮಕ್ಕ, ಭರತ್ ಜಿ.ಬಿ, ಅಂಜನ್ ಭಾರಧ್ವಾಜ್ ಮತ್ತಿರರ ತಾರಗಣ ಚಿತ್ರಕ್ಕಿದೆ. ಸಂಕಲನ ಭುವನೇಶ್ ಮಣಿವಣ್ಣನ್, ನಿರ್ಮಾಣ ವಿನ್ಯಾಸ ಪ್ರವೀಣ್ ಮತ್ತು ಅರ್ಷದ್ ನಾಕ್ಕೋತ್ ಅವರದ್ದಾಗಿದೆ.

ಹಾಡು ಲೈಟರ್ ಬುದ್ಧ ಸಂಸ್ಥೆಯ ಯೂಟ್ಯೂಬ್ ಚಾನೆಲ್‌ನಲ್ಲಿ ಲಭ್ಯವಿದ್ದು, ಈ ಹೊಸ ಪ್ರಯತ್ನವನ್ನು ಕನ್ನಡಿಗರು ಸ್ವಾಗತಿಸುತ್ತಾರೆ ಎಂಬುದು ಸಂಸ್ಥೆಯ ಕಾರ್ಯಕಾರಿ ನಿರ್ದೇಶಕರಾದ ಬಾಲಕೃಷ್ಣ ಅರ್ವಾಂಕರ್ ಅವರ ಅಭಿಪ್ರಾಯ.



# ದರ್ಶನ್ ಘಟನೆ ಕೇಳಿದ್ಮೇಲೆ ಶಾಕ್ ಆಯ್ತು



'ತಾರಕ್' ನಟಿ ಶಾನ್ವಿ ಶ್ರೀವಾತ್ಸವ್

ಚಿತ್ರದುರ್ಗದ ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ಸ್ಯಾಂಡಲ್‌ವುಡ್ ಖ್ಯಾತ ನಟ ದರ್ಶನ್ ಅರೆಸ್ಟ್ ಆಗಿದ್ದಾರೆ. ಈಗ ದರ್ಶನ್ ಪ್ರಕರಣದ ಬಗ್ಗೆ ತಾರಕ್ ನಟಿ ಶಾನ್ವಿ ರಿಯಾಕ್ಟ್ ಮಾಡಿದ್ದಾರೆ. ದರ್ಶನ್ ಘಟನೆ ಕೇಳಿದ್ಮೇಲೆ ಶಾಕ್ ಆಯ್ತು ಎಂದು ನಟಿ ಮಾತನಾಡಿದ್ದಾರೆ. ಅವರ ಜೊತೆ 'ತಾರಕ್' ಸಿನಿಮಾದಲ್ಲಿ ಅಭಿನಯಿಸಿದ ಅನುಭವ ಚೆನ್ನಾಗಿತ್ತು. ಅಷ್ಟು ದೊಡ್ಡ ಸ್ಟಾರ್ ಅವರ ಜೊತೆ ನಟಿಸಿದ್ದು, ಖುಷಿಯಿದೆ. ನನಗೆ ತುಂಬಾ ಗೌರವ ಕೊಡ್ತಾ ಇದ್ದರು. ಅದು ಬಿಟ್ಟು ವೈಯಕ್ತಿಕ ವಿಚಾರ ನನಗೆ ಗೊತ್ತಿಲ್ಲ. ದರ್ಶನ್ ಈ ಘಟನೆ ಕೇಳಿ ಶಾಕ್ ಆಯ್ತು. ಈ ಪ್ರಕರಣದ ಕುರಿತು ನಾನು ಕಾಮೆಂಟ್ ಮಾಡೋದು ಸರಿಯಲ್ಲ. ನನಗೆ ಸಂಬಂಧಿಸಿಲ್ಲದ ಪ್ರಕರಣದ ಮಾತನಾಡಲ್ಲ ಎಂದು ನಟಿ ಮಾತನಾಡಿದ್ದಾರೆ.

ನಾನು ಸೋಶಿಯಲ್ ಮೀಡಿಯಾ ಯೂಸ್ ಮಾಡೋವಾಗ ಕೆಟ್ಟ ಕಾಮೆಂಟ್ ಒಳ್ಳೆಯ ಕಾಮೆಂಟ್ ಬರುತ್ತದೆ. ಆದರೆ ಒಳ್ಳೆಯ ಕಾಮೆಂಟ್ ಜಾಸ್ತಿ ಇರುತ್ತಲ್ಲ ಅದರ ಬಗ್ಗೆ ಗಮನ ಕೊಡ್ತೀನಿ. ಕೆಟ್ಟ ಕಾಮೆಂಟ್‌ಗಳಿಗೆ ಜಾಸ್ತಿ ತಲೆ ಕೆಡಿಸಿಕೊಂಡರೆ ಸಮಯ ವ್ಯರ್ಥವಾಗುತ್ತದೆ. ದರ್ಶನ್ ಅವರು ಆದಷ್ಟು ಬೇಗ ಈ ಪ್ರಕರಣದಿಂದ ಹೊರ ಬರಲಿ ಅಂತ ಆಶಿಸುತ್ತೇನೆ ಎಂದು ಶಾನ್ವಿ ಮಾತನಾಡಿದ್ದಾರೆ.

ಅಂದಹಾಗೆ, 2017ರಲ್ಲಿ ದರ್ಶನ್ ನಟನೆಯ 'ತಾರಕ್' ಸಿನಿಮಾದಲ್ಲಿ ಶಾನ್ವಿ ನಾಯಕಿಯಾಗಿ ನಟಿಸಿದ್ದರು. ಇಬ್ಬರ ಕಾಂಬಿನೇಷನ್ ಸಿನಿಮಾ ಪ್ರೇಕ್ಷಕರಿಗೆ ಇಷ್ಟವಾಗಿತ್ತು.

# ಹೊಸ ಚಿತ್ರಕ್ಕೆ ಟೈಟಲ್ ಫಿಕ್ಸ್



ಡಾ. ವೈಶಾಖ್ ಜೆ ಗೌಡ ಅವರ ವಿಜೆಎಫ್ ಪ್ರೊಡಕ್ಷನ್ ಹೌಸ್ ಅಡಿಯಲ್ಲಿ ನಿರ್ಮಾಣಗೊಳ್ಳುತ್ತಿರುವ 'ಭೈರವನ ಕೊನೆ ಪಾಠ' ಚಿತ್ರಕ್ಕೆ ಹೇಮಂತ್ ರಾವ್ ನಿರ್ದೇಶನ ಮಾಡುತ್ತಿದ್ದು, ಡಾ.ಶಿವರಾಜ್ ಕುಮಾರ್ ನಾಯಕ ನಟರಾಗಿ ಬಣ್ಣ ಹಚ್ಚಲಿದ್ದಾರೆ. ಹೇಮಂತ್ ಎಂ ರಾವ್ ಅವರ ಸಿನಿಮಾಗಳ ಶೀರ್ಷಿಕೆಗಳು ಯಾವಾಗಲೂ ವಿಶಿಷ್ಟವಾಗಿರುತ್ತವೆ. ಇದರ ಬಗ್ಗೆ ಪ್ರಶ್ನಿಸಿದಾಗ ಅವರು, ನಮ್ಮ ಆಡುಭಾಷೆಗೆ ಹತ್ತಿರವಾದ ಶೀರ್ಷಿಕೆಗಳು ನನಗೆ ಇಷ್ಟವಾಗುತ್ತವೆ. ಈ ಹಿಂದೆ ಕನ್ನಡ ಸಿನಿಮಾ ಶೀರ್ಷಿಕೆಗಳು ಕೇಳಲಿಕ್ಕೂ ಮಧುರವಾಗಿದ್ದು ಕುತೂಹಲ ಕೆರಳಿಸುವಂತೆ ಇರುತ್ತಿದ್ದವು. ನನ್ನ ನಿರ್ದೇಶನದ 'ಗೋಧಿ ಬಣ್ಣ ಸಾಧಾರಣ ಮೈಕಟ್ಟು', 'ಕವಲುದಾರಿ', ಸಪ್ತ ಸಾಗರದಾಚೆ ಎಲ್ಲೋ' ಸಿನಿಮಾ ಶೀರ್ಷಿಕೆಗಳು ಸಾಕಷ್ಟು ಜನ ಮೆಚ್ಚುಗೆಗೆ ಪಾತ್ರವಾದವು. 'ಭೈರವನ ಕೊನೆ ಪಾಠ' ಕೂಡ ಆ ಸಾಲಿಗೆ ಸೇರಲಿದೆ. ಕನ್ನಡ ಸಿನಿಮಾ ಜಗತ್ತಿನ ವಿಶಿಷ್ಟ ಶೀರ್ಷಿಕೆಗಳ ಪರಂಪರೆಯನ್ನು ಮುಂದಿನ ತಲೆಮಾರುಗಳಿಗೂ ತಲುಪಿಸುವ ಉದ್ದೇಶ ನಮ್ಮದು. ಅದರಲ್ಲೂ ನಾನು ಬಹಳವಾಗಿ ಇಷ್ಟಪಡುವ ಶಿವಣ್ಣ ಅವರ ಸಿನಿಮಾ ಶೀರ್ಷಿಕೆಗಳ ಸೌಂದರ್ಯವನ್ನು ಸದಾ ಕಾಲ ನೆನಪಿರುವಂತೆ ಮಾಡುವುದು ನನ್ನ ಬಯಕೆ. ಈ ಚಿತ್ರದಲ್ಲಿ ಭೈರವನೇ ಕೇಂದ್ರ ಪಾತ್ರವಾಗಿದ್ದು, ನಮ್ಮ ಶೀರ್ಷಿಕೆ ಅಚ್ಚುಕಟ್ಟಾಗಿ ಹೊಂದುತ್ತದೆ. ಅವನು ಮಾಡುವ ಪಾಠ ಯಾವುದು? ಅದನ್ನು ಕೊನೆ ಪಾಠ ಅಂದಿರೋದು ಯಾಕೆ ಅನ್ನುವುದೇ ಇದರ ಮುಖ್ಯ ತಿರುಳು.



# ಮಾಫಿಯಾ ಟೀಸರ್ ಔಟ್

ಕುಮಾರ್ ಫಿಲಂಸ್ ಲಾಂಛನದಲ್ಲಿ ಕುಮಾರ್ ಬಿ ನಿರ್ಮಿಸಿರುವ, ಲೋಹಿತ್ ಹೆಚ್ ನಿರ್ದೇಶನದ ಮಾಫಿಯಾ ಸಿನಿಮಾದಲ್ಲಿ ಡೈನಾಮಿಕ್ ಪ್ರಿನ್ಸ್ ಪ್ರಜ್ವಲ್ ದೇವರಾಜ್ ನಾಯಕರಾಗಿ ನಟಿಸಿದ್ದಾರೆ. ಇದೀಗ 'ಮಾಫಿಯಾ' ಚಿತ್ರತಂಡದಿಂದ ಟೀಸರ್ ಬಿಡುಗಡೆಯಾಗಿದೆ. ಪ್ರಜ್ವಲ್ ಹುಟ್ಟುಹಬ್ಬಕ್ಕೆ (ಜು.4) ಚಿತ್ರದ ಟೀಸರ್ ರಿಲೀಸ್ ಮಾಡಿ ವಿಶೇಷವಾಗಿ ಚಿತ್ರತಂಡ ಶುಭಕೋರಿದೆ. 'ಮಾಫಿಯಾ' ಸಿನಿಮಾ ಟೀಸರ್‌ಗೆ ಅಭಿಮಾನಿಗಳಿಂದ ಮೆಚ್ಚುಗೆ ವ್ಯಕ್ತವಾಗಿದೆ. ಎಂದೂ ಕಾಣಿಸಿಕೊಂಡಿರದ ಡಿಫರೆಂಟ್ ರೋಲ್‌ನಲ್ಲಿ ಪ್ರಜ್ವಲ್ ನಟಿಸಿದ್ದಾರೆ. ಅಂದಹಾಗೆ, ಅಪಾರ ವೆಚ್ಚದಲ್ಲಿ ಅದ್ದೂರಿಯಾಗಿ ನಿರ್ಮಾಣವಾಗಿರುವ ಈ ಚಿತ್ರಕ್ಕೆ ಅನೂಪ್ ಸೀಳಿನ್ ಹಾಗೂ ಗಗನ್ ಬಡೇರಿಯಾ ಸಂಗೀತ ನೀಡಿದ್ದಾರೆ. ಎಸ್ ಪಾಂಡಿಕುಮಾರ್ ಛಾಯಾಗ್ರಹಣವಿರುವ ಈ ಚಿತ್ರದ ತಾರಾಬಳಗದಲ್ಲಿ ಪ್ರಜ್ವಲ್ ದೇವರಾಜ್, ಅದಿತಿ ಪ್ರಭುದೇವ ದೇವರಾಜ್, ಸಾಧುಕೋಕಿಲ, ಶೈನ್ ಶೆಟ್ಟಿ, ವಿಜಯ್ ಚೆಂಡೂರ್, ವಾಸುಕಿ ವೈಭವ್ ಸೇರಿದಂತೆ ಅನೇಕರು ನಟಿಸಿದ್ದಾರೆ.



# ಪೆನ್ ಡ್ರೈವ್ ಸಿನಿಮಾದಲ್ಲಿ ತನಿಷಾ ಕುಪ್ಪಂಡ

ಲಯನ್ ಎಸ್ ವೆಂಕಟೇಶ್ ನಿರ್ಮಾಣದ, ಸೆಬಾಸ್ಟಿನ್ ಡೇವಿಡ್ ನಿರ್ದೇಶನದ ಹಾಗೂ 'ಬಿಗ್ ಬಾಸ್' ಖ್ಯಾತಿಯ ತನಿಷಾ ಕುಪ್ಪಂಡ ಅಭಿನಯದ ನೂತನ ಚಿತ್ರದ ಶೀರ್ಷಿಕೆ ಅನಾವರಣ ಸಮಾರಂಭ ಇತ್ತೀಚಿಗೆ ನಡೆಯಿತು. ಚಿತ್ರಕ್ಕೆ 'ಪೆನ್ ಡ್ರೈವ್' ಎಂದು ಹೆಸರಿಡಲಾಗಿದೆ. ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿ ಅಧ್ಯಕ್ಷರಾದ ಎನ್ ಎಂ ಸುರೇಶ್, ಕನ್ನಡ ಚಲನಚಿತ್ರ ನಿರ್ದೇಶಕರ ಸಂಘದ ಅಧ್ಯಕ್ಷರಾದ ಎನ್ನಾರ್ ಕೆ ವಿಶ್ವನಾಥ್ ಈ ಚಿತ್ರದ ಶೀರ್ಷಿಕೆ ಅನಾವರಣ ಮಾಡಿ ಶುಭ ಕೋರಿದರು. ನಿರ್ದೇಶಕ ಸೆಬಾಸ್ಟಿನ್ ಡೇವಿಡ್ ಮಾತನಾಡಿ, 'ಪೆನ್ ಡ್ರೈವ್' ಶೀರ್ಷಿಕೆ ನೀಡಿದ ವಾಣಿಜ್ಯ ಮಂಡಳಿಗೆ ಧನ್ಯವಾದ. ಪ್ರಸ್ತುತ ಚಾಲ್ತಿಯಲ್ಲಿರುವ, 'ಪೆನ್ ಡ್ರೈವ್'ಗೂ ನಮ್ಮ ಚಿತ್ರದ ಶೀರ್ಷಿಕೆಗೂ ಯಾವುದೇ ಸಂಬಂಧವಿಲ್ಲ. ಈ ಚಿತ್ರದ ಕಥೆಯೇ ಬೇರೆ. ನಮ್ಮ ಚಿತ್ರದಲ್ಲಿ, 'ಪೆನ್ ಡ್ರೈವ್' ಮುಖ್ಯಪಾತ್ರ ವಹಿಸುತ್ತದೆ. ಹಾಗಾಗಿ ಆ ಶೀರ್ಷಿಕೆ ಆಯ್ಕೆ ಮಾಡಿಕೊಳ್ಳಲಾಗಿದೆ. ಲಯನ್ ಆರ್ ವೆಂಕಟೇಶ್ ಅವರ ಸಹಕಾರದಿಂದ ಚಿತ್ರವನ್ನು ಬೇಗೆ ತೆರೆಗೆ ತರುವ ಪ್ರಯತ್ನ ಮಾಡುತ್ತೇನೆ. ಸದ್ಯದಲ್ಲೇ ಚಿತ್ರೀಕರಣ ಪ್ರಾರಂಭವಾಗಲಿದೆ. ಹೆಚ್ಚಿನ ಚಿತ್ರೀಕರಣ ಬೆಂಗಳೂರಿನಲ್ಲೇ ನಡೆಯಲಿದೆ. ತನಿಷಾ ಕುಪ್ಪಂಡ, ರಾಧಿಕಾ ರಾಮ್, ಸಂಜನಾ ನಾಯ್ಡು, ಅರ್ಚನ, ರೇಣುಕಾ, ಗೀತಾ, ಭಾಗ್ಯ, ಗೀತಪ್ರಿಯ, ಕರಿಸುಬ್ಬು ಮುಂತಾದವರು ತಾರಾಬಳಗದಲ್ಲಿದ್ದಾರೆ. ತಾರಾಬಳಗದಲ್ಲಿ ಹೆಚ್ಚಿನವರು ಮಹಿಳೆಯರೆ ಇರುತ್ತಾರೆ. ವಿ.ನಾಗೇಂದ್ರ ಪ್ರಸಾದ್ ಗೀತರಚನೆ ಹಾಗೂ ಸಂಗೀತ ನಿರ್ದೇಶನ ಈ ಚಿತ್ರಕ್ಕಿದೆ ಎಂದರು. ನಿರ್ದೇಶಕರು ಹೇಳಿದ ಕಥೆ ಇಷ್ಟವಾಯಿತು ಹಾಗಾಗಿ ಈ ಚಿತ್ರ ನಿರ್ಮಾಣಕ್ಕೆ ಮುಂದಾದೆವು ಎಂದು ಮಾಹಿತಿ ನೀಡಿದರು



Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966